ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ನವೆಂಬರ್ 22 ಶುಕ್ರವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695 ಸುದ್ದಿ
ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 215 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಬಿಪಿಎಲ್ ಕಾರ್ಡ್ ಪರಿಷ್ಕರಣೆ ಸ್ಥಗಿತ

ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಆದೇಶ





ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ

ಬೆಂಗಳೂರು, ನ.21– ಪಡಿತರ ಚೀಟಿ ಪರಿಷ್ಕರಣೆ ವಿಚಾರ ವ್ಯಾಪಕ ಸುದ್ದಿಗೆ ಗ್ರಾಸವಾಗಿರುವಂತೆಯೇ, ಅರ್ಹ ಬಿಪಿಎಲ್ ಕಾರ್ಡ್ ರದ್ದುಗೊಳಿಸುವುದಿಲ್ಲ, ಬಿಪಿಎಲ್, ಎಪಿಎಲ್ ಕಾರ್ಡ್ ಯಥಾಸ್ಥಿತಿ ಕಾಯ್ದುಕೊಳ್ಳಲು ನಿರ್ಧರಿಸಲಾಗಿದೆ ಎಂದು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದ್ದಾರೆ.


ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 'ಕೇಂದ್ರ ಮತ್ತು ರಾಜ್ಯ ಸರ್ಕಾರದ ಒಟ್ಟು 1,50,59,431 ಕಾರ್ಡ್‌ಗಳಿವೆ. ಮುಖ್ಯಮಂತ್ರಿಗಳು ಸರ್ಕಾರಿ ನೌಕರರು ಮತ್ತು ಆದಾಯ ತೆರಿಗೆ ಪಾವತಿಸುವವರನ್ನು ಹೊರತುಪಡಿಸಿ ಎಲ್ಲಾ (ಬಿಪಿಎಲ್) ಕಾರ್ಡ್‌ಗಳನ್ನು ಮರುಸ್ಥಾಪಿಸಬೇಕು ಎಂದು ನಿರ್ಧಾರ ಕೈಗೊಂಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸೂಚನೆ ಮೇರೆಗೆ ಸದ್ಯ 1,02,509 ಕಾರ್ಡ್‌ಗಳನ್ನು ಪರಿಷ್ಕರಣೆ ಮಾಡಿದ್ದೇವೆ. ಉಳಿದ ಎಲ್ಲ ಬಿಪಿಎಲ್, ಎಪಿಎಲ್ ಕಾರ್ಡ್‌ಗಳನ್ನು ಯಥಾಸ್ಥಿತಿ

● 2ನೇ ಪುಟಕ್ಕೆ

> “ ಬಿಪಿಎಲ್ ಕಾರ್ಡ್ ವಿಚಾರದಲ್ಲಿ ಬಡವರಿಗೆ ತೊಂದರೆಯಾದಲ್ಲಿ ತಹಶೀಲ್ದಾರ್ ಗಮನಕ್ಕೆ ತಂದರೆ ಒಂದು ವಾರದೊಳಗಾಗಿ ಸಮಸ್ಯೆ ಬಗೆಹರಿಸಲಾಗುವುದು. ಅರ್ಹರಿಗೆ ಬಿಪಿಎಲ್ ಕಾರ್ಡ್ ತಪ್ಪಿ ಹೋಗಬಾರದು. ಅಕಸ್ಮಾತ್ ತಪ್ಪಿ ಹೋಗಿದ್ದರೆ ವಾಪಸ್ ನೀಡಲಾಗುವುದು. ಅಂತೆಯೇ ಪಡಿತರ ಚೀಟಿ ಇಲ್ಲವೆಂದು ಆರೋಗ್ಯ ಸೌಲಭ್ಯದಲ್ಲಿ ಯಾವುದೇ ತೊಂದರೆ ಆಗುವುದಿಲ್ಲ.
> –ಕೆ.ಹೆಚ್.ಮುನಿಯಪ್ಪ

ಸರ್ಕಾರಿ ನೌಕರರು, ತೆರಿಗೆದಾರರನ್ನು ಬಿಟ್ಟು ಬೇರೆ ಯಾರನ್ನೂ ತೆಗೆಯಬೇಡಿ



ಬೆಂಗಳೂರು:ಸರ್ಕಾರಿ ನೌಕರರು, ತೆರಿಗೆದಾರರನ್ನು ಬಿಟ್ಟು ಬೇರೆ ಯಾರನ್ನೂ ಬಿಪಿಎಲ್ ಕಾರ್ಡಿನಿಂದ ತೆಗೆಯಬೇಡಿ ಎಂದು ಸೂಚಿಸಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಆಹಾರ ಪದಾರ್ಥಗಳನ್ನು ಉಚಿತವಾಗಿ ಕೊಡಬೇಕೆಂದು ಯೋಜನೆ ಜಾರಿಗೆ ತಂದಿದ್ದು ನಾವು. ಸರ್ಕಾರಿ ನೌಕರರು, ತೆರಿಗೆದಾರರಿಗೆ ಬಿಪಿಎಲ್ ಕಾರ್ಡ್ ಕೊಡಬಾರದು ಎಂದು ಹೇಳಿದ್ದೇವೆ. ಈ ಯೋಜನೆ ಮಾಡಿರುವುದು ಬಡವರಿಗಾಗಿ. ಸರ್ಕಾರಿ ನೌಕರರು ಬಿಪಿಎಲ್‌ಗೆ ಅರ್ಹರೇ? ಎಂದು ಪ್ರಶ್ನಿಸಿದ್ದಾರೆ.

ಬಿಜೆಪಿಯವರು ರಾಜಕೀಯಕ್ಕಾಗಿ ಈ ವಿಚಾರವನ್ನು ಪ್ರಸ್ತಾಪಿಸುತ್ತಿದ್ದಾರೆ. ಆಹಾರ ಭದ್ರತಾ ಕಾಯ್ದೆಯನ್ನು ಜಾರಿಗೆ ತಂದಿದ್ದು ಮಾಜಿ ಪ್ರಧಾನಿ ಮನ ಮೋಹನ್ ಸಿಂಗ್. ಇದನ್ನು ರಾಜ್ಯಸಭೆಯಲ್ಲಿ

● 6ನೇ ಪುಟಕ್ಕೆ



ಮೈಸೂರು ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್

ಈಗಿನ ರಾಜಕೀಯ ಪರಿಸ್ಥಿತಿ ಯಾವಾಗ ಏನೋ ಹೇಳಕ್ಕಾಗಲ್ಲ...

ಅಚ್ಚರಿ ಮೂಡಿಸಿದ ಗೃಹಸಚಿವ ಡಾ.ಪರಮೇಶ್ವರ್ ಅಂಜಿಕೆ ನುಡಿ

ಮೈಸೂರು, ನ.21(ಎಸ್‌ಬಿಡಿ)– ರಾಜಕೀಯ ಪರಿಸ್ಥಿತಿ ಹೇಗೆ ಬದಲಾಗುತ್ತದೋ ಹೇಳಲಾಗದು... ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೀಗೆ ಹೇಳುವ ಮೂಲಕ ರಾಜಕೀಯ ಬದಲಾವಣೆಯ ಸುಳಿವು ನೀಡಿದರೇ ಎಂಬ ಪ್ರಶ್ನೆ ಉದ್ಭವಿಸಿದೆ.

ಮೈಸೂರು ಕಾಂಗ್ರೆಸ್ ಕಚೇರಿಗೆ ಗುರುವಾರ ಭೇಟಿ ನೀಡಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿ, ಕಾಂಗ್ರೆಸ್ ಕಚೇರಿಯ ನೂತನ ಕಟ್ಟಡವನ್ನು ಆದಷ್ಟು ಬೇಗ ನಿರ್ಮಾಣ ಮಾಡಿ. ರಾಜಕೀಯ ಪರಿಸ್ಥಿತಿಗಳು ಯಾವಾಗ ಹೇಗಿರುತ್ತೋ ಹೇಳಕ್ಕಾಗಲ್ಲ ಎಂದರು. ಮುಡಾ ನಿವೇಶನ ಹಂಚಿಕೆ ಹಗರಣ ಆರೋಪ, ವಾಲ್ಮೀಕಿ ನಿಗಮ ಹಣ ದುರುಪಯೋಗ, ವಕ್ಫ್ ಆಸ್ತಿ ಗದ್ದಲ, ಬಿಪಿಎಲ್ ಕಾರ್ಡ್ ಆಪರೇಷನ್ ಸದ್ದು ಜೋರಾಗಿ, ರಾಜಕೀಯ ಮೇಲಾಟ ನಡೆದಿರುವ ಈ ಪರಿಸ್ಥಿತಿಯಲ್ಲಿ ಪರಮೇಶ್ವರ್ ಅವರ ಅಚ್ಚರಿಯ ಅಂಜಿಕೆ ಮಾತು, ಮತ್ತಷ್ಟು ಚರ್ಚೆಗೆ ಗ್ರಾಸವಾಗಿದೆ.

ಪರಮೇಶ್ವರ್ ಹೇಳಿದ್ದು: ಬಹಳ ಗೊಂದಲವಿದ್ದ ಈ ಜಾಗದ ಬಗ್ಗೆ ನಾನು ಚಂದ್ರಪ್ರಭಾ ಅರಸು ಅವರೊಂದಿಗೆ ಸುಮಾರು 10 ಸಭೆ ಮಾಡಿದ್ದೇನೆ. ಶಾಸಕ ತನ್ವೀರ್ ಸೇಠ್, ತಿವಾರಿ ಸೇರಿದಂತೆ ಹಲವರು ಆ ಸಮಿತಿಯಲ್ಲಿದ್ದರು. ನಾನು ಕೈ–ಕಾಲಿಡಿದು ಇದು ಕಾಂಗ್ರೆಸ್‌ಗೆ ಸೇರಿದ ಜಾಗ, ದಯವಿಟ್ಟು ಪಕ್ಷಕ್ಕೆ ಬಿಟ್ಟುಕೊಡಬೇಕು ಎಂದು ಮನವೊಲಿಸಿದ ನಂತರ ಅವರು ಒಪ್ಪಿದರು. ಚಂದ್ರಪ್ರಭಾ ಅರಸು ಹಾಗೂ ಸಮಿತಿಯವರ ಕೊಡುಗೆ ಇತಿಹಾಸದ ಪುಟದಲ್ಲಿ ಉಳಿದಿದೆ. ಈ ಸಂದರ್ಭದಲ್ಲಿ ಅವರಿಗೆ ವಿಶೇಷ ಧನ್ಯವಾದ ತಿಳಿಸುತ್ತೇನೆ.

● 6ನೇ ಪುಟಕ್ಕೆ

ಜಾತಿ ಗಣತಿ ಅನುಕೂಲಕರ...

ಜಾತಿ ಜನಗಣತಿ ಬಗ್ಗೆ ಚರ್ಚೆಯಾಗುತ್ತಿದೆ. ಸಮಿತಿಯ ವರದಿಯನ್ನು ಯಾರೂ ಓದಿಲ್ಲ. ಆದರೆ ಒಂದಿಷ್ಟು ವಿಚಾರ ಸಹಜವಾಗಿ ಗೊತ್ತಿರುತ್ತದೆ. ಈ ಗಣತಿಯಿಂದ ಜಾತಿ ಜನಸಂಖ್ಯೆ ಮಾತ್ರವಲ್ಲ, ಸಾಮಾಜಿಕ ಹಾಗೂ ಆರ್ಥಿಕ ಪ್ರಗತಿ ತಿಳಿಯುತ್ತದೆ. ಅದರಿಂದ ಕಾರ್ಯಕ್ರಮಗಳನ್ನು ರೂಪಿಸಲು ಅನುಕೂಲವಾಗುತ್ತದೆ. ಹಿಂದೆ ಬಿದ್ದಿರುವ ಸಮುದಾಯಗಳ ಅಭಿವೃದ್ಧಿ ಗಣತಿ ಉದ್ದೇಶ. ಸದ್ಯದಲ್ಲೇ ಪ್ರಕಟಿಸುವುದಾಗಿ ಸಿಎಂ ಹೇಳಿದ್ದಾರೆ. ಕಾಂಗ್ರೆಸ್ ಮೇಲೆ ಅಲ್ಪಸಂಖ್ಯಾತರ ಓಲೈಕೆ ಆರೋಪ ಮಾಡುತ್ತಾರೆ. ಇಲ್ಲೇ ಹುಟ್ಟಿ ಬೆಳೆದು, ಇಲ್ಲೇ ಸಾವನ್ನಪ್ಪುವವರು ಬೇರೆಯವರಾಗಲು ಹೇಗೆ ಸಾಧ್ಯ. ಹಿಂದೂ ರಾಷ್ಟ್ರ ನಿಜ. ಆದರೆ ಎಲ್ಲರಿಗೂ ಬದುಕುವ ಹಕ್ಕನ್ನು ಸಂವಿಧಾನ ನೀಡಿದೆ. ಬಿಜೆಪಿಯವರಿಗೆ ಯಾಕಿಷ್ಟು ದ್ವೇಷ? ಶೇ.18ರಷ್ಟಿರುವ ಅಲ್ಪಸಂಖ್ಯಾತರನ್ನು ದೇಶದಿಂದ ಹೊರ ಹಾಕುತ್ತೀರಾ?. ಬದುಕು ಕಟ್ಟಿಕೊಳ್ಳಲು ಅವಕಾಶ ನೀಡಬೇಕು ಎಂದು ಅವರ ಪರವಾಗಿ ನಿಂತಿದ್ದೇವೆ ಎಂದು ಹೇಳಿದರು.

ಮೈಸೂರಲ್ಲಿ ಮಧ್ಯರಾತ್ರಿ 1 ಗಂಟೆವರೆಗೆ ಹೋಟೆಲ್‌ಗಳ ವ್ಯಾಪಾರ–ವಹಿವಾಟಿಗೆ ಅವಕಾಶ; ವಾರದಲ್ಲಿ ನಿರ್ಧಾರ

ಹೋಟೆಲ್ ಮಾಲೀಕರ ಸಂಘ ಸಂಸ್ಥೆಗಳಿಂದ ಸನ್ಮಾನ ಸ್ವೀಕರಿಸಿದ ಡಾ.ಜಿ.ಪರಮೇಶ್ವರ್ ಭರವಸೆ



ಹೋಟೆಲ್ ಮಾಲೀಕರ ಸಂಘದ ಸಭಾಂಗಣದಲ್ಲಿ ಗುರುವಾರ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಸನ್ಮಾನಿಸಲಾಯಿತು.

ಮೈಸೂರು,ನ.21(ಪಿಎಂ)– ಮೈಸೂರು ನಗರದಲ್ಲಿ ರಾತ್ರಿ 1 ಗಂಟೆಯವರೆಗೆ ಹೋಟೆಲ್‌ಗಳಲ್ಲಿ ಸೇವೆ ಒದಗಿಸಲು ಅವಕಾಶ ಕಲ್ಪಿಸುವ ಸಂಬಂಧ ವಾರದಲ್ಲಿ ನಿರ್ಧಾರ ಕೈಗೊಳ್ಳುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು.

ಮೈಸೂರಿನ ಕೃಷ್ಣಮೂರ್ತಿಪುರಂನ ಹೋಟೆಲ್ ಮಾಲೀಕರ ಪತ್ತಿನ ಸಹಕಾರ ಸಂಘದ ಸಭಾಂಗಣದಲ್ಲಿ ಹೋಟೆಲು ಮಾಲೀಕರ ಪತ್ತಿನ ಸಹಕಾರ ಸಂಘ, ಹೋಟೆಲ್ ಮಾಲೀಕರ ಸಂಘ ಮತ್ತು ಹೋಟೆಲು ಮಾಲೀಕರ ಧರ್ಮದತ್ತಿ ಸಂಯುಕ್ತಾಶ್ರಯ ದಲ್ಲಿ ಸಹಕಾರ ಸಪ್ತಾಹದ ಪ್ರಯುಕ್ತ ಗುರುವಾರ ಹಮ್ಮಿಕೊಂಡಿದ್ದ ಸಂವಾದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ರಾತ್ರಿ 1 ಗಂಟೆಯವರೆಗೆ ಹೋಟೆಲ್ ವ್ಯಾಪಾರ–ವಹಿವಾಟು ನಡೆಸಲು ಅವಕಾಶ ಕಲ್ಪಿಸಬೇಕು. ಸರ್ಕಾರ ಕಳೆದ ಬಜೆಟ್‌ನಲ್ಲಿ ಇದನ್ನು ಘೋಷಿಸಿ ಈ ಸಂಬಂಧ ಸುತ್ತೋಲೆ ಸಹ ಹೊರಡಿಸಲಾಗಿದೆ. ಹಾಗಾಗಿ ಇದನ್ನು ಅನುಷ್ಠಾನಗೊಳಿಸಬೇಕೆಂಬ ಹೋಟೆಲ್ ಮಾಲೀಕರ ಸಂಘದ ಮನವಿಗೆ ಸಂಬಂಧಿಸಿದಂತೆ ಮಾತನಾಡಿದ ಗೃಹ ಸಚಿವರು, ಮಧ್ಯರಾತ್ರಿಯವರೆಗೆ ಹೋಟೆಲ್ ತೆರೆಯುವ ಅಗತ್ಯವಿದೆ. ಇದು ಪ್ರವಾಸಿಗರಿಗೆ ಅತ್ಯಂತ ಅಗತ್ಯವಿದೆ ಎಂದು ತಿಳಿಸಿದರು. ಬೆಂಗಳೂರಿನಲ್ಲಿ ಇದೇ ರೀತಿಯ ಸವಾಲು ಎದುರಾಗಿತ್ತು. ಬಾರ್ ಅಂಡ್ ರೆಸ್ಟೋರೆಂಟ್‌ಗಳನ್ನು ರಾತ್ರಿ 1ರವರೆಗೆ ತೆರೆಯಲು ಅವಕಾಶ ಕಲ್ಪಿಸಲಾಯಿತು.

● 6ನೇ ಪುಟಕ್ಕೆ

ದೆಹಲಿಯಲ್ಲಿ ನಂದಿನಿ ಉತ್ಪನ್ನ ಮಾರಾಟ

● ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ ಚಾಲನೆ ● ಹೆಮ್ಮೆಯ ಕೆಎಂಎಫ್ ಉತ್ಪನ್ನ ಮಾರಾಟ ಜಾಲ ಉತ್ತರ ಭಾರತಕ್ಕೂ ವಿಸ್ತರಣೆ ● ಈಗಾಗಲೇ ಜಾಗತಿಕ ಮಟ್ಟದಲ್ಲಿ ಸದ್ದು ಮಾಡಿರುವ 'ನಂದಿನಿ'





ನವದೆಹಲಿಯಲ್ಲಿ ಕರ್ನಾಟಕ ಹಾಲು ಒಕ್ಕೂಟದ (ಕೆಎಂಎಫ್) ನಂದಿನಿ ಬ್ರ್ಯಾಂಡ್ ಉತ್ಪನ್ನಗಳ ಅಧಿಕೃತ ಮಾರಾಟಕ್ಕೆ ಸಿಎಂ ಸಿದ್ದರಾಮಯ್ಯ ಗುರುವಾರ ಚಾಲನೆ ನೀಡಿದರು.

ನವದೆಹಲಿ, ನ.21–ಕರ್ನಾಟಕ, ಆಂಧ್ರಪ್ರದೇಶ ಸೇರಿದಂತೆ ದಕ್ಷಿಣ ಭಾರತದ ಮಾರುಕಟ್ಟೆ ಮೇಲೆ ಹಿಡಿತ ಸಾಧಿಸಿರುವ ಕರ್ನಾಟಕ ಹಾಲು ಒಕ್ಕೂಟದ (ಕೆಎಂಎಫ್)ದ ನಂದಿನಿ ಬ್ರ್ಯಾಂಡ್ ಉತ್ಪನ್ನಗಳು ಇದೀಗ ಉತ್ತರ ಭಾರತದಲ್ಲೂ ತನ್ನ ಕಬಂಧ ಬಾಹು ಚಾಚಿದೆ. ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಕರ್ನಾಟಕ ಹಾಲು ಒಕ್ಕೂಟದ (ಕೆಎಂಎಫ್) ನಂದಿನಿ ಬ್ರ್ಯಾಂಡ್ ಉತ್ಪನ್ನಗಳ ಅಧಿಕೃತ ಮಾರಾಟಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಗುರುವಾರ ಚಾಲನೆ ನೀಡಿದರು. ಈ ಮೂಲಕ ಅಮುಲ್, ಮದರ್ ಡೇರಿಯಂತಹ ಪ್ರಮುಖ ಬ್ರ್ಯಾಂಡ್‌ಗಳ ಜತೆ ಕರ್ನಾಟಕದ ನಂದಿನಿ ಕೂಡ ಪೈಪೋಟಿ ಒಡ್ಡಲಿದೆ. ದೆಹಲಿಯ ಅಶೋಕ ಹೋಟೆಲ್‌ನಲ್ಲಿ ನಂದಿನಿ ಬ್ರ್ಯಾಂಡ್ ಉತ್ಪನ್ನಗಳ ಬಿಡುಗಡೆ ಮಾಡುವ ಮೂಲಕ ಅಧಿಕೃತ ಮಾರಾಟಕ್ಕೆ ಚಾಲನೆ ನೀಡಲಾಯಿತು. ಇದಕ್ಕೂ ಮುನ್ನ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಕನ್ನಡಿಗರಿಂದ ಪೂರ್ಣಕುಂಭ ಸ್ವಾಗತ ದೊರೆಯಿತು. ಈ ವೇಳೆ ಮಾತನಾಡಿದ ಕೆಎಂಎಫ್ ಅಧ್ಯಕ್ಷ ಭೀಮಾನಾಯಕ್, ದೆಹಲಿಯಲ್ಲಿ 3 ರಿಂದ 4 ಲಕ್ಷ ಲೀಟರ್ ಹಾಲನ್ನು ಮಾರಾಟ ಮಾಡಬೇಕು ಎಂಬ ಗುರಿ ಹಾಕಿಕೊಂಡಿದ್ದೇವೆ.

● 2ನೇ ಪುಟಕ್ಕೆ

ಕೆಆರ್‌ಎಸ್‌ನಲ್ಲಿ ಡಿಸ್ನಿಲ್ಯಾಂಡ್ ಮಾದರಿ ಅಭಿವೃದ್ಧಿಗೆ ಎಳ್ಳು–ನೀರು

ಬೃಂದಾವನಕ್ಕೆ 2,615.96 ಕೋಟಿ ವೆಚ್ಚದಲ್ಲಿ ನವರೂಪ

ವಿಶ್ವ ದರ್ಜೆ ಅಭಿವೃದ್ಧಿ ನಂತರ 30 ವರ್ಷ ಪಿಪಿಪಿ ಮಾದರಿಯಲ್ಲಿ ನಿರ್ವಹಣೆಗೆ ಕಾವೇರಿ ನೀರಾವರಿ ನಿಗಮದಿಂದ ಟೆಂಡರ್ ಆಹ್ವಾನ

● 4 ವರ್ಷದೊಳಗೆ ಕಾಮಗಾರಿ ಪೂರ್ಣಗೊಳಿಸಬೇಕು ● ಸರ್ಕಾರ ನಿಗದಿಪಡಿಸಿದ ಪ್ರವೇಶ ದರವನ್ನೇ ಜಾರಿ ಮಾಡಬೇಕು; ಲಾಭದ ಹಣದಲ್ಲೂ ಪಾಲು ನೀಡಬೇಕು ● ಸೆ.9ರಂದೇ ಟೆಂಡರ್ ಪ್ರಕಟ; ಟೆಂಡರ್ ಹಾಕಲು ನ.27 ಕಡೇ ದಿನ ● ಭಾರತದಲ್ಲೇ ಹೊಸ ಮಾದರಿಯ ಆಕರ್ಷಣೀಯ ಸುಂದರ ಬೃಂದಾವನ ಗಾರ್ಡನ್ ಅಭಿವೃದ್ಧಿ; ವಿಶ್ವದಾದ್ಯಂತ ಪ್ರವಾಸಿಗರ ಸೆಳೆಯಲು ರಾಜ್ಯ ಸರ್ಕಾರದ ಮಹತ್ವದ ಹೆಜ್ಜೆ


ಎಸ್.ಟಿ.ರವಿಕುಮಾರ್

ಮೈಸೂರು, ನ.21– ವಿಶ್ವ ಪ್ರಸಿದ್ಧ ಪ್ರವಾಸಿತಾಣವಾಗಿರುವ ಕೃಷ್ಣರಾಜ ಸಾಗರ(ಕೆಆರ್‌ಎಸ್)ವನ್ನು ಡಿಸ್ನಿಲ್ಯಾಂಡ್ ಮಾದರಿ ಅಭಿವೃದ್ಧಿಪಡಿಸಲುದ್ದೇಶಿಸಲಾಗಿದ್ದ ಈ ಹಿಂದಿನ ಮೈತ್ರಿ ಸರ್ಕಾರದ ಯೋಜನೆಗೆ ಪ್ರಸಕ್ತ ಕಾಂಗ್ರೆಸ್ ಸರ್ಕಾರ ಎಳ್ಳು ನೀರು ಬಿಟ್ಟಿದೆ.

ಹೆಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿಗಳಾಗಿದ್ದ, ಜೆಡಿಎಸ್–ಕಾಂಗ್ರೆಸ್ ಮೈತ್ರಿ ಸರ್ಕಾರದಲ್ಲಿ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲೂಕು ಕೆಆರ್‌ಎಸ್ ಅಣೆಕಟ್ಟೆಯ ಬೃಂದಾವನ ಉದ್ಯಾನವನವನ್ನು ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಡಿಪಿಆರ್(ಸಮಗ್ರ ಯೋಜನಾ ವರದಿ) ತಯಾರಿಸಲು ನೀರಾವರಿ ಇಲಾಖೆ ಕೋಟ್ಯಾಂತರ ರೂ ಖರ್ಚು ಮಾಡಿತ್ತು. ಅಂದು ನೀರಾವರಿ ಮತ್ತು ಜಲಸಂಪನ್ಮೂಲ ಸಚಿವರೂ ಆಗಿದ್ದ ಇಂದಿನ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಪ್ರವಾಸೋದ್ಯಮ ಸಚಿವರಾಗಿದ್ದ ಸಾರಾ ಮಹೇಶ್, ಶ್ರೀರಂಗಪಟ್ಟಣದ ಅಂದಿನ ಶಾಸಕ ರವೀಂದ್ರ ಶ್ರೀಕಂಠಯ್ಯರೊಂದಿಗೆ ಹಲವು ಬಾರಿ ಕೆಆರ್‌ಎಸ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕಾವೇರಿ ನೀರಾವರಿ ನಿಗಮ, ಜಿಲ್ಲಾಡಳಿತ, ಕಂದಾಯ ಇಲಾಖೆ, ಪ್ರವಾಸೋದ್ಯಮ ಇಲಾಖೆ ಹಾಗೂ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಅಧಿಕಾರಿಗಳೊಂದಿಗೆ ಸರಣಿ ಸಭೆ ನಡೆಸಿದ್ದರು.

ಡಿಸ್ನಿಲ್ಯಾಂಡ್ ಮಾದರಿ ಕೆಆರ್‌ಎಸ್ ಅಭಿವೃದ್ಧಿಪಡಿಸಲು ಅಗತ್ಯವಿದ್ದ ಭೂಮಿ ಸ್ವಾಧೀನಪಡಿಸಿಕೊಳ್ಳಲು ಜಿಲ್ಲಾಧಿಕಾರಿಗಳ ಮೂಲಕ ಅಧಿಸೂಚನೆ ಹೊರಡಿಸಲು ಸಿದ್ಧತೆ ನಡೆಸುತ್ತಿದ್ದಾಗಲೇ, ರೈತ ಮುಖಂಡರು ಕೆಲ ಪರಿಸರವಾದಿಗಳು ಈ ಯೋಜನೆಗೆ ತೀವ್ರ ವಿರೋಧ

● 2ನೇ ಪುಟಕ್ಕೆ



ಮೈಸೂರು ವಿವಿ ಅಂತರ ಕಾಲೇಜು ಕುಸ್ತಿ ಪಂದ್ಯಾವಳಿಯಲ್ಲಿ ದಕ್ಷ ಕಾಲೇಜು ವಿದ್ಯಾರ್ಥಿಗಳಿಗೆ ದ್ವಿತೀಯ, ತೃತೀಯ ಸ್ಥಾನ



ಮೈಸೂರು ವಿಶ್ವವಿದ್ಯಾನಿಲಯ ಮಟ್ಟದ ಅಂತರ ಕಾಲೇಜು ಕುಸ್ತಿ ಪಂದ್ಯಾವಳಿಯಲ್ಲಿ ದ್ವಿತೀಯ ಹಾಗೂ ತೃತೀಯ ಸ್ಥಾನಗಳಿಸಿದ ದಕ್ಷ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳಾದ ಮೊಹಮ್ಮದ್ ಜಶೀರ್ ಮತ್ತು ಪವನ್ ಎಸ್. ಅವರನ್ನು ಗ್ಲೋಬಲ್ ಎಜುಕೇಷನ್ ಟ್ರಸ್ಟ್ ಮತ್ತು ದಕ್ಷ ಕಾಲೇಜಿನ ಅಧ್ಯಕ್ಷ ಜಯಚಂದ್ರರಾಜು ಪಿ. ಅವರು ಅಭಿನಂದಿಸಿದರು. ದಕ್ಷ ಉನ್ನತ ಶಿಕ್ಷಣ ವಿಭಾಗದ ನಿರ್ದೇಶಕರಾದ ಹರೀಶ್ ಪಿ. ಮತ್ತು ದಕ್ಷ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಮಹೇಶ ಎಂ.ಬಿ. ಚಿತ್ರದಲ್ಲಿದ್ದಾರೆ.

ಮೈಸೂರು, ನ.21– ಮೈಸೂರು ವಿಶ್ವವಿದ್ಯಾನಿಲಯದ ವತಿಯಿಂದ ಆಯೋಜಿಸಿದ್ದ ಅಂತರ ಕಾಲೇಜು ಕುಸ್ತಿ ಪಂದ್ಯಾವಳಿಯಲ್ಲಿ ದ್ವಿತೀಯ ಮತ್ತು ತೃತೀಯ ಸ್ಥಾನ ಗಳಿಸಿದ ದಕ್ಷ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳಾದ ಮೊಹಮ್ಮದ್ ಜಶೀರ್ ಹಾಗೂ ಪವನ್ ಎಸ್. ಅವರನ್ನು ಗ್ಲೋಬಲ್ ಎಜುಕೇಷನ್ ಟ್ರಸ್ಟ್ ಮತ್ತು ದಕ್ಷ ಕಾಲೇಜಿನ ಅಧ್ಯಕ್ಷರಾದ ಜಯಚಂದ್ರರಾಜು ಅಭಿನಂದಿಸಿದರು.

ಬಳಿಕ ಮಾತನಾಡಿದ ಅವರು, ವಿದ್ಯಾರ್ಥಿ ಜೀವನದಲ್ಲಿ ಪಠ್ಯೇತರ ಚಟುವಟಿಕೆ ಮತ್ತು ಕ್ರೀಡೆಗಳು ಅವರ ದೈಹಿಕ ಬೆಳವಣಿಗೆಯೊಂದಿಗೆ ಅವರು ಮಾನಸಿಕವಾಗಿಯು ಸದೃಢಗೊಳ್ಳಲು ಕಾರಣವಾಗುತ್ತವೆ. ಈ ನಿಟ್ಟಿನಲ್ಲಿ ನಮ್ಮ ಕಾಲೇಜು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯೊಂದಿಗೆ ಕ್ರೀಡೆಗಳಿಗೂ ಉತ್ತೇಜನ ನೀಡುತ್ತಾ ಬಂದಿದೆ ಎಂದು ಹೇಳಿದರು. ಕ್ರೀಡೆಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಒಂದೊಂದೇ ಮೆಟ್ಟಿಲನ್ನು ಏರುತ್ತಾ ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳಬೇಕು. ಆ ಮೂಲಕ ಕಾಲೇಜಿಗೆ ಮತ್ತು ಪೋಷಕರಿಗೆ ಹೆಸರು ತರಬೇಕು ಎಂದು ಅವರನ್ನು ಹುರಿದುಂಬಿಸಿದರು. ಈ ಸಂದರ್ಭದಲ್ಲಿ ದಕ್ಷ ಉನ್ನತ ಶಿಕ್ಷಣ ವಿಭಾಗದ ನಿರ್ದೇಶಕರಾದ ಹರೀಶ್ ಪಿ. ಮತ್ತು ದಕ್ಷ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಮಹೇಶ ಎಂ.ಬಿ. ಹಾಜರಿದ್ದರು.

ಚಿಪ್ಪುಹಂದಿ ಬೇಟೆಯಾಡಿ ಚಿಪ್ಪು ಮಾರಾಟ ಯತ್ನ: ಸರ್ಕಾರಿ ಶಾಲಾ ಶಿಕ್ಷಕನ ಬಂಧನ

● ಓರ್ವ ಪರಾರಿ, ಬಂಧಿತನಿಂದ 1.05 ಕೆಜಿ ಚಿಪ್ಪು, ಬೈಕ್ ವಶ ● ಅರಣ್ಯ ಸಂಚಾರಿ ದಳದ ಸಿಬ್ಬಂದಿ ಕಾರ್ಯಾಚರಣೆ

ಮೈಸೂರು, ನ.21(ಎಂಟಿವೈ)– ಅಳಿವಿನಂಚಿನಲ್ಲಿರುವ ಚಿಪ್ಪುಹಂದಿಯೊಂದನ್ನು ಕೊಂದು ಅದರ ಚಿಪ್ಪನ್ನು ಮಾರಾಟ ಮಾಡಲು ಯತ್ನಿಸುತ್ತಿದ್ದ ಸರ್ಕಾರಿ ಶಾಲಾ ಶಿಕ್ಷಕರೊಬ್ಬರನ್ನು ಅರಣ್ಯ ಸಂಚಾರಿ ದಳದ ಸಿಬ್ಬಂದಿ ಬಂಧಿಸಿದ್ದಾರೆ.

ಚಿಪ್ಪುಹಂದಿಯ ಚಿಪ್ಪು ಮಾರಾಟದ ಬಗ್ಗೆ ಖಚಿತ ಮಾಹಿತಿ ಪಡೆದ ಅರಣ್ಯ ಸಂಚಾರಿ ದಳದ ಸಿಬ್ಬಂದಿಗಳ ತಂಡ ಕಾರ್ಯಾಚರಣೆ ನಡೆಸಿ, ತಲಕಾಡು ಹೋಬಳಿಯ ಮೇದಿನ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯ ಕನ್ನಡದ ಶಿಕ್ಷಕ, ತಿ.ನರಸೀಪುರ ತಾಲೂಕಿನ ತಲಕಾಡು ಹೋಬಳಿಯ ಕಾಳಬಸವನ ಹುಂಡಿ ಗ್ರಾಮದ ನಿವಾಸಿ ಎಂ.ಮಲ್ಲಿಕಾರ್ಜುನಗೌಡ(50) ಎಂಬುವವರನ್ನು ಬಂಧಿಸಿದ್ದಾರೆ. ತಲೆಮರೆಸಿಕೊಂಡಿರುವ ಪ್ರಕರಣದ ಪ್ರಮುಖ ಆರೋಪಿ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಎಂ.ಜಿ.ದೊಡ್ಡಿ ಗ್ರಾಮದ ತಮಿಳು ಕಾಲೋನಿ ನಿವಾಸಿ ಅಲಿಮುತ್ತು(55) ಬಂಧನಕ್ಕೆ ಬಲೆ ಬೀಸಿದ್ದಾರೆ.

ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ಅಲಿಮುತ್ತು ಎಂಬಾತನನ್ನು ಪರಿಚಯ ಮಾಡಿಕೊಂಡಿದ್ದ ಶಿಕ್ಷಕ ಎಂ.ಮಲ್ಲಿಕಾರ್ಜುನಗೌಡ ಹಣದ ಆಸೆಗಾಗಿ ಅರಣ್ಯ ಅಪರಾಧ ಕೃತ್ಯವಾದ ಪ್ರಾಣಿ ಬೇಟೆ ಪ್ರಕರಣದಲ್ಲಿ ಸಿಕ್ಕಿಬಿದ್ದು ಜೈಲು ಪಾಲಾಗಿದ್ದಾರೆ. ಅಲಿಮುತ್ತು ಚಿಪ್ಪುಹಂದಿಯೊಂದನ್ನು ಕೌದಳ್ಳಿ ಅರಣ್ಯ ಪ್ರದೇಶದಲ್ಲಿ ಬೇಟೆಯಾಡಿ, ಅದರ ಮಾಂಸವನ್ನು ಭಕ್ಷಿಸಿದ್ದಾನೆ. ಬಳಿಕ ಒಡಕೆಹಳ್ಳ ಸಮೀಪದಲ್ಲಿ ಅದರ ಚಿಪ್ಪುಗಳನ್ನು ಮಾರಾಟ ಮಾಡುವಂತೆ ಶಿಕ್ಷಕ ಮಲ್ಲಿಕಾರ್ಜುನಗೌಡ ಅವರಿಗೆ ನೀಡಿದ್ದಾನೆ. ಪ್ರಮುಖ ಆರೋಪಿಯಿಂದ ಚಿಪ್ಪುಹಂದಿಯ ಚಿಪ್ಪು ಪಡೆದ ಶಿಕ್ಷಕ ಕೇರಳ ಮೂಲದ ವ್ಯಕ್ತಿಯೊಬ್ಬನನ್ನು ಸಂಪರ್ಕಿಸಿ 50 ಲಕ್ಷ ರೂ.ಗೆ ಚಿಪ್ಪು ಮಾರಾಟ ಮಾಡಲು ಡೀಲ್ ಕುದುರಿಸಿದ್ದಾನೆ. ಖಚಿತ ಮಾಹಿತಿ ಮೇರೆಗೆ ಚಿಪ್ಪು ಮಾರಾಟ ಮಾಡುವುದಕ್ಕಾಗಿ ಮಳವಳ್ಳಿ ತಾಲೂಕಿನ ಬೊಪ್ಪೇಗೌಡನಪುರ ಹೋಬಳಿಯ ನಂಜನಾಯನಪುರದ ಜಮೀನೊಂದರ ಬಳಿ ನಿಂತಿದ್ದ ಶಿಕ್ಷಕ ಮಲ್ಲಿಕಾರ್ಜುನಗೌಡನನ್ನು ಅರಣ್ಯ ಸಿಬ್ಬಂದಿ ಬಂಧಿಸಿದ್ದಾರೆ.

ಬಂಧಿತರಿಂದ 1.05 ಕೆಜಿ ಚಿಪ್ಪುಹಂದಿಯ ಚಿಪ್ಪು, ಹಳದಿ ಬಣ್ಣದ ಒಂದು ಚೀಲ, ಬಜಾಜ್ ಡಿಸ್ಕವರ್ ಬೈಕ್(ಕೆಎ.12, ಕೆ.3755), ಒಂದು ಎಲೆಕ್ಟ್ರಿಕ್ ತೂಕದ ಯಂತ್ರ, ಒಂದು ಮೊಬೈಲ್ ವಶಕ್ಕೆ ಪಡೆದಿದ್ದಾರೆ. ಪ್ರಮುಖ ಆರೋಪಿ ಬಂಧನದ ಬಳಿಕ ಮತ್ತಷ್ಟು ಪ್ರಕರಣ ಬೆಳಕಿಗೆ ಬರಬಹುದೆಂಬ ಶಂಕೆ ಇದೆ. ಅರಣ್ಯ ಸಂಚಾರಿ ದಳದ ಡಿಸಿಎಫ್ ಡಾ.ಚಂದ್ರಶೇಖರ್ ಸಿ.ಪಾಟೀಲ್ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಆರ್‌ಎಫ್‌ಓ ಕೆ.ಸುರೇಂದ್ರ, ಡಿಆರ್‌ಎಫ್‌ಓ ಸಿ.ಎಸ್.ಮೋಹನ್, ವಿ.ಮುತ್ತುರಾಜ್, ಸಿಬ್ಬಂದಿಗಳಾದ ದೇವರಾಜ ಬಂಡಿವಡ್ಡರ್, ಕುಮಾರ್, ತಿರುಪತಿ ಮಜಾರ, ಇಮಾಮ್ ಸಾಬ್ ಇನ್ನಿತರರು ಪಾಲ್ಗೊಂಡಿದ್ದರು.



ಚಿಪ್ಪುಹಂದಿ ಬೇಟೆಯಾಡಿ, ಚಿಪ್ಪು ಮಾರಾಟ ಮಾಡಲು ಯತ್ನಿಸಿ ಬಂಧನಕ್ಕೊಳಗಾದ ಶಿಕ್ಷಕ ಮಲ್ಲಿಕಾರ್ಜುನಗೌಡ ಅವರೊಂದಿಗೆ ಡಿಸಿಎಫ್ ಡಾ.ಚಂದ್ರಶೇಖರ್ ಪಾಟೀಲ್ ನೇತೃತ್ವದ ಅರಣ್ಯ ಸಂಚಾರಿ ದಳದ ಸಿಬ್ಬಂದಿಯನ್ನು ಕಾಣಬಹುದು.

'ತಾಯಿನಾಡು' ಪ್ರಾದೇಶಿಕ ಹೊಸ ಪಕ್ಷ ಅಸ್ತಿತ್ವಕ್ಕೆ

ಯುವಜನರು, ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲು ರಚನೆಯಾದ ಪಕ್ಷ

ಮೈಸೂರು, ನ.21(ಜಿಎ)–ರಾಜ್ಯಕ್ಕೆ ಪ್ರಾದೇಶಿಕ ಪಕ್ಷ ಅಗತ್ಯವಿರುವ ಹಿನ್ನೆಲೆ ಮತ್ತು ಯುವಜನರು ಹಾಗೂ ವಿದ್ಯಾರ್ಥಿಗಳಿಗೆ ಅವಕಾಶ ದೊರಕಿಸಿಕೊಡುವುದರೊಂದಿಗೆ ರಾಜ್ಯದ ವಿವಿಧ ವಿಷಯಗಳಲ್ಲಿ ಹೋರಾಡಲು 'ತಾಯಿನಾಡು' ಎಂಬ ಹೊಸ ಪ್ರಾದೇಶಿಕ ಪಕ್ಷ ಅಸ್ತಿತ್ವಕ್ಕೆ ತರಲಾಗಿದೆ ಎಂದು ಪಕ್ಷದ ಸಂಚಾಲಕಿ ಪಡಿಕ್ಕಲ್ ಕುಸುಮಾವತಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಲ್ಲಾ ವಿಧದ ಪ್ರಾಣಿ ಪಕ್ಷಿಗಳಿಗೆ ಸಮತೋಲನದಲ್ಲಿ ಬದುಕಲು ಪರಿಸರ ಸಮತೋಲನ ಕಾಪಾಡಿ, ಈಗಿರುವ 14ನೇ ವಯಸ್ಸಿನವರೆಗಿನ ಮಕ್ಕಳಿಗೆ ಕಡ್ಡಾಯ ಶಿಕ್ಷಣವನ್ನು 21ನೇ ವಯಸ್ಸಿನವರೆಗೆ ವಿಸ್ತರಿಸುವುದು. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಮಹಿಳಾ ಸಿಎಂ ಅಧಿಕಾರಕ್ಕೆ ಬರುವಂತೆ ಶ್ರಮಿಸುವ ಉದ್ದೇಶದಿಂದ ನೂತನ ಪ್ರಾದೇಶಿಕ ಪಕ್ಷ ಆರಂಭಗೊಂಡಿದೆ ಎಂದರು. ನಿರುದ್ಯೋಗವನ್ನು ಆಳವಾಗಿ ಅಧ್ಯಯನ ಮಾಡಿ ನಿವಾರಿಸಲು ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಹೋರಾಟಗಳು ಪಕ್ಷದ ಮುಖ್ಯ ಧ್ಯೇಯಗಳಾಗಿವೆ. ಹೀಗಾಗಿ ಸಾಮಾಜಿಕ ಮಾಧ್ಯಮ ಮೊದಲಾದವುಗಳ ಮೂಲಕ ಪ್ರಚಾರ ಕೈಗೊಂಡು ಸದಸ್ಯರನ್ನಾಗಿಸಿಕೊಳ್ಳುವ ಯತ್ನ ನಡೆದಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಪ್ರಧಾನ ಸಂಚಾಲಕಿ ಹೆಚ್.ಎಲ್. ಯಮುನಾ, ಸತ್ಯವತಿ, ಪದ್ಮಾವತಿ ನಾಗರಾಜ್, ಮಂಜುಳಾ ಉಪಸ್ಥಿತರಿದ್ದರು.

ಒಂದನೇ ಪುಟದಿಂದ

ಬಿಪಿಎಲ್ ಕಾರ್ಡ್ ಪರಿಷ್ಕರಣೆ ಸ್ಥಗಿತ

ಕಾಯ್ದುಕೊಳ್ಳಲು ನಿರ್ಧರಿಸಲಾಗಿದೆ ಎಂದು ಹೇಳಿದರು. ಅಂತೆಯೇ ಮಾನದಂಡಗಳ ಅನ್ವಯ ಪರಿಶೀಲನೆ ಮಾಡಿ ಪರಿಷ್ಕರಣೆ ಮಾಡಲಾಗಿದೆ. ಕೇಂದ್ರ ಸರ್ಕಾರದ ನಿಯಮಗಳ ಅನ್ವಯ ಪರಿಷ್ಕರಿಸಲಾಗಿದೆ. ಅನರ್ಹ ಎಂಬ ಕಾರ್ಡ್‌ಗಳನ್ನು ತಾತ್ಕಾಲಿಕವಾಗಿ ಅಮಾನತ್ತಿನಲ್ಲಿ ಇಡಲಾಗಿದೆ. ಬಿಪಿಎಲ್‌ಗೆ ಅನರ್ಹರು ಎಂದು ಕಂಡು ಬಂದಿರುವ ಕಾರ್ಡ್‌ಗಳನ್ನು ಎಪಿಎಲ್‌ಗೆ ಸೇರಿಸಲಾಗಿದೆ. ಬಿಪಿಎಲ್‌ಗೆ ಅರ್ಹರಿದ್ದೂ ಎಪಿಎಲ್‌ಗೆ ಸೇರಿಸಿದ್ದರೆ ಅಂಥವರಿಗೆ ಮರು ಹಂಚಿಕೆ ಮಾಡುತ್ತೇವೆ. ಬಿಪಿಎಲ್‌ಗೆ ಅರ್ಹರಿದ್ದವರ ಕಾರ್ಡ್ ರದ್ದಾಗಿದ್ದರೆ ಒಂದು ವಾರ ಕಾಲಾವಕಾಶ ನೀಡಿ, ಮರು ನೋಂದಣಿ ಮಾಡಿಕೊಂಡು ಕಾರ್ಡ್ ಮರುಹಂಚಿಕೆ ಮಾಡುತ್ತೇವೆ ಎಂದರು.

ಅಧಿಕಾರಿಗಳ ತಪ್ಪಿಲ್ಲ: ಬಿಪಿಎಲ್ ಕಾರ್ಡ್‌ದಾರರನ್ನು ಎಪಿಎಲ್‌ಗೆ ಸೇರ್ಪಡೆ ಮಾಡಿರುವ ವಿಚಾರವಾಗಿ ಮಾತನಾಡಿದ ಅವರು, ಇದರಲ್ಲಿ ಅಧಿಕಾರಿಗಳ ತಪ್ಪಿಲ್ಲ, ಎಲ್ಲ ಗೊಂದಲದ ಹೊಣೆ ನಾನೇ ಹೊರುವೆ. ಅಧಿಕಾರಿಗಳ ಜೊತೆ ಸಭೆ ನಡೆಸಿ ಸೂಕ್ತ ಸಲಹೆ–ಸೂಚನೆ ನೀಡುವೆ. ಯಾವುದೇ ಅರ್ಹ ಬಿಪಿಎಲ್ ಕಾರ್ಡ್ ರದ್ದುಪಡಿಸುವುದಿಲ್ಲ. ಮಾನದಂಡಗಳ ಅನ್ವಯ ಪರಿಶೀಲನೆ ಮಾಡಿ ಪರಿಷ್ಕರಣೆ ಮಾಡಲಾಗಿದೆ. ಕೇಂದ್ರ ಸರ್ಕಾರದ ನಿಯಮಗಳ ಅನ್ವಯ ಪರಿಷ್ಕರಿಸಲಾಗಿದೆ.

ಡಿಬಿಟಿ (ನೇರ ಬ್ಯಾಂಕ್ ವರ್ಗಾವಣೆ)ಗಾಗಿ ವಿತರಿಸಲು ನಮಗೆ ಸಾಕಷ್ಟು ಹಣ ಸಿಕ್ಕಿದೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆ ಇಲ್ಲ. ನಾವು ಇದನ್ನು ಮಾಡುತ್ತಿರುವಾಗ ಒಂದು ಅಥವಾ ಎರಡು ಪ್ರತಿಶತದಷ್ಟು ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್‌ಗೆ (ಬಡತನ ರೇಖೆಯ ಮೇಲೆ) ಪರಿವರ್ತಿಸಲಾಗಿದೆ. ಬಿಪಿಎಲ್ ಕಾರ್ಡ್‌ಗಳಲ್ಲಿ ಶೇಕಡ ಒಂದು ಅಥವಾ ಎರಡರಷ್ಟು ಮಾತ್ರ ಬಡತನ ರೇಖೆಗಿಂತ ಮೇಲಿನ (ಎಪಿಎಲ್) ಕಾರ್ಡ್‌ಗಳಾಗಿ ಪರಿವರ್ತನೆಯಾಗಿದೆ ಎಂದರು.

ರಾಜೀನಾಮೆ ಕೇಳುವುದು ಅವರ ಕರ್ತವ್ಯ: ಬಿಜೆಪಿ ವಿರೋಧ ಪಕ್ಷವಾಗಿದ್ದು, ಪಡಿತರ ಚೀಟಿ ಪರಿಷ್ಕರಣೆ ವಿಚಾರವಾಗಿ ರಾಜೀನಾಮೆ ಕೇಳುವುದು ಅವರ ಕರ್ತವ್ಯ. ಆದರೆ ಅದರ ಅಗತ್ಯವಿಲ್ಲ. ನಾವು ಯಾರ ಅನ್ನವನ್ನೂ ಕಸಿದುಕೊಳ್ಳುತ್ತಿಲ್ಲ, ರಾಜಕೀಯ ಮಾಡುವುದನ್ನು ಬಿಟ್ಟು ಬಿಜೆಪಿಗೆ ಬೇರೇನೂ ಕೆಲಸವಿಲ್ಲ, ಹಲವು ಕ್ಷೇತ್ರಗಳಲ್ಲಿ ಶೇ.90ರಷ್ಟು ಬಿಪಿಎಲ್ ಕಾರ್ಡ್‌ದಾರರಿದ್ದಾರೆ. ನನ್ನ ಕ್ಷೇತ್ರದಲ್ಲಿ ಶೇ.90, ಹೊಳೆನರಸೀಪುರದಲ್ಲಿ ಶೇ.92ರಷ್ಟು ಬಿಪಿಎಲ್ ಕಾರ್ಡ್ ಇದೆ. ಆದ್ದರಿಂದ, ನಿಜವಾದ ಮತ್ತು ಅಗತ್ಯವಿರುವ ಜನರು ಬಿಪಿಎಲ್ ಕಾರ್ಡ್‌ಗಳನ್ನು ಪರಿಶೀಲಿಸಿದ ನಂತರ ರದ್ದುಗೊಳಿಸಲಾಗಿದೆ.

ದೆಹಲಿಯಲ್ಲಿ ನಂದಿನಿ ಉತ್ಪನ್ನ ಮಾರಾಟ

ಇನ್ನು ಮುಂದೆ ದೆಹಲಿಯಲ್ಲಿ ಶೇ 100ರಷ್ಟು ಪರಿಶುದ್ಧ ಹಸುವಿನ ಹಾಲು ಸಿಗಲಿದೆ ಎಂದರು ಕರ್ನಾಟಕ ಹಾಲು ಒಕ್ಕೂಟ (ಕೆಎಂಎಫ್) ಈಗ 50 ವರ್ಷದ ಮೈಲಿಗಲ್ಲು ಸಾಧಿಸಿದ್ದು, ಈ ಸಂದರ್ಭದಲ್ಲೇ ಸಂಸ್ಥೆಯ ಉತ್ಪನ್ನಗಳು ದೇಶ ವಿದೇಶಗಳಲ್ಲಿ ಸದ್ದು ಮಾಡುತ್ತಿವೆ. ಕೆಲವು ತಿಂಗಳ ಹಿಂದೆ ಅಮೆರಿಕ ಹಾಗೂ ವೆಸ್ಟ್ ಇಂಡೀಸ್‌ನಲ್ಲಿ ನಡೆದಿದ್ದ ಟಿ–20 ವಿಶ್ವಕಪ್ ವೇಳೆ ಸ್ಕಾಟ್ಲೆಂಡ್ ಮತ್ತು ಐರ್ಲೆಂಡ್ ತಂಡಗಳ ಪ್ರಾಯೋಜಕತ್ವವನ್ನು ಕೆಎಂಎಫ್ ವಹಿಸಿತ್ತು. ಸ್ಕಾಟ್ಲೆಂಡ್ ಮತ್ತು ಐರ್ಲೆಂಡ್ ತಂಡ ಗಳ ಜೆರ್ಸಿ ಮೇಲೆ ಪ್ರಾಯೋಜಕರಾಗಿ 'ನಂದಿನಿ' ಬ್ರ್ಯಾಂಡ್ ಹೆಸರು ನಮೂದಿಸಲಾಗಿತ್ತು. ಅಲ್ಲದೆ, ವಿಶ್ವಕಪ್ ವೇಳೆ ನಂದಿನಿ ಉತ್ಪನ್ನಗಳನ್ನೂ ಪೂರೈಸಲಾಗಿತ್ತು. ಆ ಮೂಲಕ ವಿಶ್ವ ಮಟ್ಟದಲ್ಲಿ ನಂದಿನಿ ಬ್ರ್ಯಾಂಡ್ ಉತ್ಪನ್ನಗಳು ಗಮನ ಸೆಳೆದಿದ್ದವು. ವಿಶ್ವಕಪ್ ವೇಳೆ ನಂದಿನಿ ಬ್ರ್ಯಾಂಡ್‌ನ ಫ್ರೋಝನ್ ಸಿಹಿತಿಂಡಿಗಳು, ಹಾಲಿನಿಂದ ಕೂಡಿದ ಎನರ್ಜಿ ಡ್ರಿಂಕ್ ನಂದಿನಿ ಸ್ಟ್ಲಾಶ್ ಅನ್ನು ಕೆಎಂಎಫ್ ಅಮೆರಿಕಕ್ಕೆ ಪೂರೈಕೆ ಮಾಡಿತ್ತು. ಇದೀಗ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿಯೂ ಉತ್ಪನ್ನಗಳ ಅಧಿಕೃತ ಮಾರಾಟ ಆರಂಭವಾಗಿದೆ.

2,615.96 ಕೋಟಿ ವೆಚ್ಚದಲ್ಲಿ ನವರೂಪ

ವ್ಯಕ್ತಪಡಿಸಿದ ಕಾರಣ ಪ್ರಕ್ರಿಯೆ ನಿಧಾನವಾಗಿತ್ತಾದರೂ ಯೋಜನೆ ಮಾತ್ರ ಜೀವಂತವಾಗಿತ್ತು. ಈ ಮಧ್ಯೆ ಮೈತ್ರಿ ಸರ್ಕಾರ ಪತನವಾಗಿ ಬಿಜೆಪಿ ಸರ್ಕಾರ ಅಸ್ತಿತ್ವಕ್ಕೆ ಬಂದರೂ ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಕೆಆರ್‌ಎಸ್ ಅಭಿವೃದ್ಧಿಪಡಿಸುವ ಯೋಜನೆಗೆ ಚಾಲನೆ ದೊರೆಯಲಿಲ್ಲ. ಇದೀಗ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದು ಒಂದೂವರೆ ವರ್ಷದ ಬಳಿಕ ನವೀನ ಮಾದರಿ ಅಭಿವೃದ್ಧಿಪಡಿಸಿ, ಉನ್ನತೀಕರಣಕ್ಕೆ ಮುಂದಾಗಿದ್ದು, ಈ ಮೂಲಕ ಹಳೇ ಯೋಜನೆಗೆ ಎಳ್ಳು–ನೀರು ಬಿಟ್ಟಂತಾಗಿದೆ.

ವಿಶ್ವ ದರ್ಜೆ ಅಭಿವೃದ್ಧಿ: ಪ್ರಸ್ತುತ ಇರುವ ಪ್ರಸಿದ್ಧ ಕೆಆರ್‌ಎಸ್ ಬೃಂದಾವನ ಗಾರ್ಡನ್ ಅನ್ನು ಅಂತರರಾಷ್ಟ್ರೀಯ ಗುಣಮಟ್ಟದಲ್ಲಿ ಉನ್ನತೀಕರಿಸಲು 2024ರ ಸೆ.9ರಂದು ಕಾವೇರಿ ನೀರಾವರಿ ನಿಗಮ(ಸಿಎನ್‌ಎನ್)ದ ಎಕ್ಸಿಕ್ಯೂಟಿವ್ ಇಂಜಿನಿಯರ್ ವಿ. ಜಯಂತ, ಟೆಂಡರ್ ಆಹ್ವಾನಿಸಿದ್ದಾರೆ.

2,615.96 ಕೋಟಿ ರೂ: ಪಿಪಿಪಿ ಮಾದರಿಯಲ್ಲಿ ಬೃಂದಾವನ ಗಾರ್ಡನ್ ಅನ್ನು ಅಭಿವೃದ್ಧಿಪಡಿಸಲು ಇಚ್ಛಿಸುವ ಸಂಸ್ಥೆ ಅಥವಾ ಕಂಪನಿಯು 2615.96 ಕೋಟಿ ರೂ. ವೆಚ್ಚದಲ್ಲಿ ಉನ್ನತೀಕರಿಸ ಬೇಕು. ಅಲ್ಲದೆ ಟೆಂಡರ್‌ನಲ್ಲಿ ಭಾಗವಹಿ ಸಲು 14 ಕೋಟಿ ರೂ.ಗಳ ಇಎಂಡಿ (ಅರ್ನೆಸ್ಟ್ ಮನಿ ಡಿಪೋಸಿಟ್) ರೂಪದಲ್ಲಿ ಸರ್ಕಾರಕ್ಕೆ ಪಾವತಿಸಬೇಕೆಂದು ತಿಳಿಸಲಾಗಿದೆ.

30 ವರ್ಷ ನಿರ್ವಹಣೆ: ಟೆಂಡರ್ ಷರತ್ತಿನ ಪ್ರಕಾರ ಯೋಜನೆ ಜಾರಿಗೊಳಿಸಲು ಮುಂದೆ ಬರುವ ಕಂಪನಿಯು ಅಂತರರಾಷ್ಟ್ರೀಯ ದರ್ಜೆಯಲ್ಲಿ ನಾಲ್ಕೂವರೆ ವರ್ಷದೊಳಗಾಗಿ ಕೆಆರ್‌ಎಸ್ ಬೃಂದಾವನವನ್ನು ಅಭಿವೃದ್ಧಿಪಡಿಸಿ 30 ವರ್ಷಗಳ ಕಾಲ ನಿರ್ವಹಣೆ ಮಾಡಲು ಸರ್ಕಾರ ಜಾಗ ಒದಗಿಸುವುದನ್ನು ಹೊರತುಪಡಿಸಿ ಬೇರೆ ಯಾವುದೇ ಖರ್ಚು ಮಾಡುವುದಿಲ್ಲ.

ಸರ್ಕಾರ ನಿಗಧಿಸಿದ ಪ್ರವೇಶ ದರ: ಸರ್ಕಾರ ನಿಗದಿಪಡಿಸಿದ ದರದಂತೆಯೇ ಪ್ರವೇಶ ಶುಲ್ಕದಲ್ಲಿ ಬೃಂದಾವನ ಗಾರ್ಡನ್ ಪ್ರವೇಶ ನೀಡಬೇಕು ಹಾಗೂ ವಾರ್ಷಿಕ ಲಾಭದಲ್ಲೂ ಸರ್ಕಾರಕ್ಕೆ ಭಾಗಶ: ಹಣವನ್ನು ಸರ್ಕಾರಕ್ಕೆ ನೀಡಬೇಕೆಂಬ ಷರತ್ತು ವಿಧಿಸಲಾಗಿದೆ.

ಏನೇನು ಸೌಲಭ್ಯ: ಭಾರತದ ಎಲ್ಲೂ ಇರದ ಹಾಗೆ ಕೆಆರ್‌ಎಸ್ ಅಭಿವೃದ್ಧಿಪಡಿಸಬೇಕೆಂಬುದು ಸರ್ಕಾರದ ಉದ್ದೇಶವಾಗಿದೆ. ಪ್ರಸ್ತುತ ಇರುವ ಗಾರ್ಡನ್ ತೆರವುಗೊಳಿಸಿ, ಮತ್ತಷ್ಟು ವಿಸ್ತೀರ್ಣವಾದ ಗಾರ್ಡನ್ ನಿರ್ಮಾಣ, ಸಂಗೀತ ಕಾರಂಜಿ, ವ್ಯಾಕ್ಸ್ ಮ್ಯೂಸಿಯಂ, ರೋಲರ್ ಕೋಸ್ಟರ್ ರೈಡ್, ಪೆಂಗ್ವಿನ್‌ಗಳು, ಸ್ಕೈ ಬ್ರಿಡ್ಜ್, ಡಾಲ್ ಮ್ಯೂಸಿಯಂ, ಬೋಟಿಂಗ್, ಟ್ರೀ ವಾಕ್, ಅರೋರ ಗಾರ್ಡನ್ ಸೇರಿದಂತೆ 50ಕ್ಕೂ ಹೆಚ್ಚು ಬಗೆಯ ವಿನೂತನ ಸೌಲಭ್ಯದೊಂದಿಗೆ ಕೆಆರ್‌ಎಸ್ ಬೃಂದಾವನ ಅಭಿವೃದ್ಧಿಗೊಳಿಸಲು ಉದ್ದೇಶಿಸಲಾಗಿದೆ. ಜೊತೆಗೆ ಪ್ರವಾಸಿಗರಿಗಾಗಿ ವಾಹನ ನಿಲುಗಡೆ, ರಸ್ತೆ ಸುರಕ್ಷತೆ, ಊಟ–ವಸತಿ, ವಿವಿಧ ಮನರಂಜನೆ ಸೌಲಭ್ಯಗಳನ್ನು ಒದಗಿಸುವ ಮೂಲಕ ರಾಜ್ಯ, ದೇಶ ಹಾಗೂ ವಿಶ್ವದಾದ್ಯಂತ ವಿವಿಧ ದೇಶಗಳಿಂದ ಲಕ್ಷಾಂತರ ಪ್ರವಾಸಿಗರನ್ನು ಕೆಆರ್‌ಎಸ್‌ಗೆ ಆಕರ್ಷಿಸಲು ಸರ್ಕಾರವು ಬೃಂದಾವನವನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ ಉನ್ನತೀಕರಿಸಲು ಮುಂದಾಗಿದೆ.

ಕಾವೇರಿ ವಿದ್ಯಾಸಂಸ್ಥೆಯಲ್ಲಿ ಕಾವೇರಿ ಕನ್ನಡ ಸಂಭ್ರಮ



ಮೈಸೂರು, ನ. 21– ಮೈಸೂರಿನ ಕುವೆಂಪುನಗರದ ಕಾವೇರಿ ವಿದ್ಯಾಸಂಸ್ಥೆ ಮತ್ತು ಶ್ರೀ ಕಾವೇರಿ ಪ್ರಥಮ ದರ್ಜೆ ಕಾಲೇಜು ಆಶ್ರಯದಲ್ಲಿ ಕನ್ನಡ ರಾಜ್ಯೋತ್ಸವ ಪ್ರಯುಕ್ತ ಕಾವೇರಿ ಕನ್ನಡ ಸಂಭ್ರಮ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಮುಖ್ಯ ಅತಿಥಿಗಳಾಗಿ ಜಾನಪದ ವಿದ್ವಾಂಸರು, ನಿರ್ದೇಶಕರು, ಪ್ರಸಾರಂಗದ ನಿರ್ದೇಶಕರಾದ ಡಾ. ನಂಜಯ್ಯ ಹೊಂಗನೂರು ಆಗಮಿಸಿದ್ದರು. ಕಾವೇರಿ ಕನ್ನಡ ಸಂಭ್ರಮದ ಉದ್ಘಾಟನೆಯ ನಂತರ ಎಲ್ಲಾ ಅತಿಥಿಗಳು ಮಾತನಾಡಿ, ಕನ್ನಡ ಭಾಷೆಯ ಪ್ರಾಮುಖ್ಯತೆ, ಭಾಷೆಯ ಅವಶ್ಯಕತೆ, ಭಾಷೆಯ ಬೆಳವಣಿಗೆಗಳ ಬಗ್ಗೆ ವಿವರಿಸಿದರು. ಎಲ್ಲರೂ ಆಂಗ್ಲ ಮಾಧ್ಯಮದ ಕಡೆ ಹೋಗುತ್ತಿರುವ ಇಂದಿನ ಪೀಳಿಗೆಗೆ ಕನ್ನಡದ ಪ್ರಾಮುಖ್ಯತೆಯನ್ನು ತಿಳಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಸಂಸ್ಥೆಯ ಆಡಳಿತಾಧಿ ಕಾರಿ ಡಾ.ಸಿ.ಈ. ಸುಬ್ರಮಣ್ಯ ಮಾತ ನಾಡಿ, ಕನ್ನಡ ಭಾಷೆಯ ಬೆಳವಣಿಗೆ ಮತ್ತು ಉಪಭಾಷೆಗಳ ಅವಶ್ಯಕತೆಗಳ ಬಗ್ಗೆ ಮಾಹಿತಿ ನೀಡಿದರು.

ಕಾವೇರಿ ಕನ್ನಡ ಸಂಭ್ರಮದ ಪ್ರಯುಕ್ತ ಪಂಪ ಪ್ರಶಸ್ತಿ ವಿಜೇತರು, ಕನ್ನಡದ ಕವಿಗಳು, ಕನ್ನಡದ ಕಾದಂಬರಿಗಳು, ಕನ್ನಡ ಚಿತ್ರಕಲೆ ಇತ್ಯಾದಿಗಳ ಬಗ್ಗೆ ವಸ್ತು ಪ್ರದರ್ಶನವನ್ನು ಏರ್ಪಡಿಸಲಾಗಿತ್ತು. ವೇದಿಕೆಯಲ್ಲಿ ಪದವಿ ಕಾಲೇಜಿನ ಪ್ರಾಂಶುಪಾಲೆ ಶ್ರೀಮತಿ ಪದ್ಮಾವತಿ ಕೆ.ಎಂ ಮತ್ತು ಕಾವೇರಿ ವಿದ್ಯಾಸಂಸ್ಥೆ ಪ್ರಾಂಶುಪಾಲ ಎನ್.ಸಿ.ನವೀನ ಉಪಸಿತರಿದ್ದರು.


ಇಂದಿನಿಂದ ಮೈಸೂರಲ್ಲಿ ರಂಗ ರಾಜ್ಯೋತ್ಸವ ನಾಟಕ ಪ್ರದರ್ಶನ

ಮೈಸೂರು, ನ.21(ಜಿಎ)–ಎಸ್‌ಬಿಎಂ ಮಂಜು ಸ್ನೇಹ ಬಳಗ, ಕನಸು ರಂಗ ತಂಡದಿಂದ ನ.22 ರಿಂದ 24 ರವರೆಗೆ ನಗರದ ಗೋಕುಲಂ ಮೂರನೇ ಹಂತ ಮೈಸೂರು ಒನ್ ಪಕ್ಕದಲ್ಲಿರುವ ಸಾಂಸ್ಕೃತಿಕ ಭವನದಲ್ಲಿ ರಂಗ ರಾಜ್ಯೋತ್ಸವ ನಾಟಕ ಪ್ರದರ್ಶನ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಪಾಲಿಕೆ ಮಾಜಿ ಸದಸ್ಯ ಎಸ್.ಬಿ.ಎಂ.ಮಂಜು ಈ ವಿಷಯ ತಿಳಿಸಿ, ನ.22ರಂದು ಸಂಜೆ 6 ಗಂಟೆಗೆ ಮುಡಾ ಆಯುಕ್ತರಾದ ಎ.ಎಸ್. ರಘುನಂದನ್ ನಾಟಕ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಈ ವೇಳೆ ಪೌರ ಕಾರ್ಮಿಕರನ್ನು ಸನ್ಮಾನಿಸಲಾಗುವುದು. ಮುಖ್ಯ ಅತಿಥಿಗಳಾಗಿ ಪಾಲಿಕೆ ಅಧೀಕ್ಷಕ ಇಂಜಿನಿಯರ್ ಕೆ.ಜೆ.ಸಿಂಧು, ವಿದ್ಯಾವರ್ಧಕ ಸಂಸ್ಥೆಯ ಕಾರ್ಯದರ್ಶಿ ವಿಶ್ವಾಥ್, ಕೆ.ವಿ. ಚಿನ್ನಯ್ಯ ಆಗಮಿಸಲಿದ್ದಾರೆ ಎಂದರು.

ನಂತರ ಡಾ. ಚಂದ್ರಶೇಖರ ಕಂಬಾರರ 'ಬೆಪ್ತಕ್ಕಡಿ ಬೋಳೇಶಂಕರ' ನಾಟಕವನ್ನು ದೇಜಿ ಕ್ರಿಯೇಷನ್ಸ್ ಪ್ರಸ್ತುತಪಡಿಸಲಿದೆ. 23 ರಂದು ಸಂಜೆ 6 ಗಂಟೆಗೆ ರಂಗ ಸಾಗರ ತಂಡವು 'ಮಿಸ್ ಸೇವಂತಿ' ಹಾಗೂ ನ.24 ರಂದು ಸಂಜೆ 6 ಗಂಟೆಗೆ ದೇಜಿ ಕ್ರಿಯೇಷನ್ಸ್ ವತಿಯಿಂದ 'ಕೃಷ್ಣೇಗೌಡನ ಆನೆ' ನಾಟಕ ಪ್ರದರ್ಶನ ನಡೆಯಲಿದೆ. ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ವೀರು ಅಣ್ಣಗೇರಿ, ಪ್ರೊ.ದೇವರಾಜ್ ಪಿ.ಚಿಕ್ಕಹಳ್ಳಿ, ಪಿ.ಶ್ರೇಯಸ್, ಮಲ್ಲಿಕ್ ಅರಸ್, ಯೋಗೇಶ್ವರಿ ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

22.11.2024 ಶುಕ್ರವಾರ, ಮಳೆ ನಕ್ಷತ್ರ: ಅನೂರಾಧ, 19.11.2024 ರಿಂದ 01.12.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಕೃಷ್ಣ ಪಕ್ಷ,
ತಿಥಿ: ಸಪ್ತಮಿ, ನಕ್ಷತ್ರ: ಆಶ್ಲೇಷ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಶ್ರವಣ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ಗಂಟೆಗೆ.

■ **ಸದ್ವಿದ್ಯಾ ಶಿಕ್ಷಣ ಸಂಸ್ಥೆಗಳು :** ಮೈಸೂರು ನಗರ ಮಟ್ಟದ ಅಂತರ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢಶಾಲಾ 15ನೇ ವರ್ಷದ ಶ್ರೀಮದ್ಭಗವದ್ಗೀತಾ ಕಂಠಪಾಠ ಸ್ಪರ್ಧೆ, ಅಧ್ಯಕ್ಷತೆ : ಸದ್ವಿದ್ಯಾ ಶಿಕ್ಷಣ ಸಂಸ್ಥೆ ಅಧ್ಯಕ್ಷ ಪ್ರೊ. ಎಂ.ಎಸ್.ಕೆ. ನರಹರಿಬಾಬು, ಉದ್ಘಾಟನೆ : ಹಿರಿಯ ಸಂಸ್ಕೃತ ವಿದ್ವಾನ್ ಡಾ. ಎಚ್.ವಿ. ನಾಗರಾಜರಾವ್, ಮುಖ್ಯ ಅತಿಥಿಗಳು : ಸದ್ವಿದ್ಯಾ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಎಂ.ಡಿ. ಗೋಪಿನಾಥ್, ಸ್ಥಳ: ವಿವೇಕಾನಂದ ಸಭಾಂಗಣ, ಬೆಳಗ್ಗೆ 9.30ಕ್ಕೆ.

■ **ನವ ಕರ್ನಾಟಕ ಪಬ್ಲಿಕೇಷನ್ ಪ್ರೈವೇಟ್ ಲಿಮಿಟೆಡ್ :** ಕನ್ನಡ ರಾಜ್ಯೋತ್ಸವದ ಪ್ರಯುಕ್ತ ವಿಶೇಷ ರಿಯಾಯಿತಿ ಪುಸ್ತಕ ಮಾರಾಟ, ಸ್ಥಳ: ಚಾಮರಾಜ ಜೋಡಿ ರಸ್ತೆ ರಾಮಸ್ವಾಮಿ ಸರ್ಕಲ್ ಬೆಳಗ್ಗೆ 9.30 ರಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ ದಸರೆಯ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ಗಂಟೆಯಿಂದ.

■ **ಶ್ರೀ ನಟರಾಜ ಮಹಿಳಾ ಪದವಿಪೂರ್ವ ಕಾಲೇಜು :** ಪ್ರತಿಭಾನ್ವೇಷಣೆ, ಸಾನ್ನಿಧ್ಯ : ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ : ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಅಧ್ಯಕ್ಷರಾದ ಪ್ರೊ. ಎಂ.ಎಸ್. ಸ್ವಪ್ನ, ಅಧ್ಯಕ್ಷತೆ : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಉಪಸ್ಥಿತರು : ಪ್ರಾಂಶುಪಾಲರಾದ ಶ್ರೀಮತಿ ವಿ.ಡಿ. ಸುನೀತಾರಾಣಿ, ಸಾಂಸ್ಕೃತಿಕ ವೇದಿಕೆ ಸಂಚಾಲಕರಾದ ಶ್ರೀಮತಿ ಬಿ. ರಾಧ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 10.30ಕ್ಕೆ.

■ **ಮಾಲಗತ್ತಿ ದಶಬಲ ಟ್ರಸ್ಟ್, ರೈಟರ್ಸ್ ಅಕಾಡೆಮಿ :** ಕೃತಿಗಳ ಬಿಡುಗಡೆ ಸಮಾರಂಭ, ಟ್ರಸ್ಟ್ ಮತ್ತು ಅಕಾಡೆಮಿ ಉದ್ಘಾಟನೆ : ಹಿರಿಯ ಸಾಹಿತಿ ಪ್ರೊ. ಸಿಪಿಕೆ, ಅಧ್ಯಕ್ಷತೆ : ಮಾಲಗತ್ತಿ ದಶಬಲ ಟ್ರಸ್ಟ್ ಉಪಾಧ್ಯಕ್ಷ ಪ್ರೊ. ಡಿ.ಕೆ.ರಾಜೇಂದ್ರ, ಉಪಸ್ಥಿತರು : ಖಜಾಂಚಿ ಡಾ. ಮೈಲಹಳ್ಳಿ ರೇವಣ್ಣ, ಕಾರ್ಯದರ್ಶಿ ಡಾ. ಯಶವಂತ ರೈ, ಎರಡು ಸಂಪುಟಗಳ ಬಿಡುಗಡೆ : ಸಾಹಿತಿ ಬಸವರಾಜ ಮಾಲಗತ್ತಿ, ಎರಡು ಕೃತಿಗಳ ಬಿಡುಗಡೆ : ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕರಾದ ಪ್ರೊ. ಡಾ. ಎನ್.ಕೆ. ಲೋಲಾಕ್ಷಿ, ಎರಡು ಕೃತಿಗಳ ಕುರಿತು : ಡಾ. ಎಸ್. ಚಂದ್ರಕಿರಣ್, ಎರಡು ಸಂಪುಟಗಳ ಕುರಿತು : ಡಾ. ಸಂತೋಷ ಚೊಕ್ಕಾಡಿ, ಸ್ಥಳ: ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಬಿ.ಎಂ.ಶ್ರೀ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 11ಕ್ಕೆ.

■ **ಜಗದ್ಗುರು ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ (ಶ್ರೀ ಸುತ್ತೂರು ಕ್ಷೇತ್ರ, ಮೈಸೂರು ಜಿಲ್ಲೆ) :** ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ಕರ್ತೃ ಗದ್ದುಗೆ, ಶ್ರೀ ಮಹದೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ಸೋಮೇಶ್ವರ ದೇವಸ್ಥಾನಗಳು, ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಸ್ಥಳ: ಮಠದ ಆವರಣ, ಸಂಜೆ.

■ **ವಸುಂಧರ ಪ್ರದರ್ಶಕ ಕಲೆಗಳ ಕೇಂದ್ರ, ಮೈಸೂರು :** ವಸುಂಧರೋತ್ಸವ–2024, ನೃತ್ಯ ಕಾರ್ಯಕ್ರಮ, ಸಂಜೆ 6 ರಿಂದ ವಿದುಷಿ ತಾರಿಕಾ ಕೌಶಿಕ್, ಭಾರತಿ ನಂದೀಶ್, ವೆನ್ನೆಲಾ ಸಿ. ಮತ್ತು ಮಾನ್ಯ ವಿ.ಆರ್. (ವಿದುಷಿ ಶ್ರೀ ಲಕ್ಷ್ಮಿ ಕುಮಾರರವರ ಶಿಷ್ಯರು); ಸಂಜೆ 6.45 ರಿಂದ ವಿದುಷಿ ಸೋನಲ್ ಝುವೇರಿ (ಡಾ. ವಸುಂಧರಾ ದೊರೆಸ್ವಾಮಿಯವರ ಶಿಷ್ಯರು); ಸಂಜೆ 7.30 ರಿಂದ ಪ್ರೊ. ಕೆ. ಕುಮಾರ್ ಮತ್ತು ಶಿಷ್ಯೆಯರಾದ ನಿಧಿ ಕೆ.ಎಂ. ಹಾಗೂ ಲೇಖ ಕೆ.ಎಂ.; ಗೌರವ ಅತಿಥಿಗಳು : ನೃತ್ಯಾಲಯ ಟ್ರಸ್ಟ್ ನಿರ್ದೇಶಕ ಡಾ. ತುಳಸಿ ರಾಮಚಂದ್ರ, ಸ್ಥಳ: ವಸುಂಧರ ಭವನ, ಕಲಾಂಧಿಕ ಅಕಾಡೆಮಿ ಆಫ್ ಆರ್ಟ್ಸ್, ಸರಸ್ವತಿಪುರಂ.


■ **ಮರಿಮಲ್ಲಪ್ಪನವರ ಪದವಿಪೂರ್ವ ಕಾಲೇಜು :** ಅಂತರ ಕಾಲೇಜು ಸ್ಪರ್ಧೆಗಳು, ಬೆಳಗ್ಗೆ 9ಕ್ಕೆ ಅಂತರ ಕಾಲೇಜು ಕನ್ನಡ ಚರ್ಚಾ ಸ್ಪರ್ಧೆ ಮತ್ತು ಭಾವಗೀತೆ ಸ್ಪರ್ಧೆ, ಅಧ್ಯಕ್ಷತೆ : ಮರಿಮಲ್ಲಪ್ಪ ವಿದ್ಯಾಸಂಸ್ಥೆ ಕಾರ್ಯದರ್ಶಿ ಪ್ರೊ. ಕೆ.ಎನ್. ಪಂಚಾಕ್ಷರಸ್ವಾಮಿ, ಉದ್ಘಾಟನೆ : ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಎಸ್. ಬಾಲಸುಬ್ರಮಣ್ಯ, ಉಪಸ್ಥಿತರು : ಮರಿಮಲ್ಲಪ್ಪನವರ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಡಾ. ಎಸ್.ಕೆ. ಅನಿಲ್, ಶೈಕ್ಷಣಾಧಿಕಾರಿ ಶ್ರೀಮತಿ ಮಂಗಳ ಮುದ್ದುಮಾದಪ್ಪ; ಬೆಳಗ್ಗೆ 9.30ಕ್ಕೆ ಅಂತರ ಕಾಲೇಜು ಬಾಲಕಿಯರ ಥ್ರೋಬಾಲ್ ಮತ್ತು ಬಾಲಕರ ಖೋ ಖೋ ಪಂದ್ಯಾವಳಿ, ಅಧ್ಯಕ್ಷತೆ : ಮರಿಮಲ್ಲಪ್ಪ ವಿದ್ಯಾಸಂಸ್ಥೆ ಕಾರ್ಯದರ್ಶಿ ಪ್ರೊ. ಕೆ.ಎನ್. ಪಂಚಾಕ್ಷರಸ್ವಾಮಿ, ಉದ್ಘಾಟನೆ : ಅಂತೋನಿ ಬ್ಯಾಪ್ಟಿಸ್ಟ್, ಉಪಸ್ಥಿತರು : ಪ್ರಿನ್ಸಿಪಾಲ್ ಡಾ. ಎಸ್.ಕೆ. ಅನಿಲ್, ಶೈಕ್ಷಣಾಧಿಕಾರಿ ಶ್ರೀಮತಿ ಮಂಗಳ ಮುದ್ದುಮಾದಪ್ಪ, ಮಾಜಿ ಮೇಯರ್ ಎನ್. ಪ್ರಕಾಶ್, ನಿವೃತ್ತ ಅಧ್ಯಾಪಕ ಆರ್. ಚಂದ್ರಶೇಖರ್, ಸ್ಥಳ: ಕಾಲೇಜು ಆವರಣ.

■ **ಜೆಎಸ್‌ಎಸ್ ರಂಗೋತ್ಸವ :** ಸಮಾರೋಪ ಸಮಾರಂಭ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ : ವೃತ್ತಿರಂಗ ಕಲಾವಿದರಾದ ಶ್ರೀಮತಿ ಸರಸ್ವತಿ ಜುಲೇಖಾ ಬೇಗಂ, ಸಮಾರೋಪ ಭಾಷಣ : ರಂಗ ನಿರ್ದೇಶಕ ಪ್ರಸಾದ್ ಕುಂದೂರು, ಮುಖ್ಯ ಅತಿಥಿಗಳು : ವನ್ಯಜೀವಿ ಛಾಯಾಗ್ರಾಹಕ ಡಾ. ಲೋಕೇಶ್ ಮೊಸಳೆ, ಸ್ಥಳ: ಜೆಎಸ್‌ಎಸ್ ಕಾಲೇಜು ಆವರಣ, ಸಂಜೆ 5ಕ್ಕೆ.

■ **ಮೈಸೂರು ಜಿಲ್ಲಾ ಕನಕ ಜಯಂತ್ಯುತ್ಸವ ಆಚರಣಾ ಸಮಿತಿ :** ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿವಿಧ ಸಾಧಕರಿಗೆ ಸನ್ಮಾನ ಕಾರ್ಯಕ್ರಮ, ಉದ್ಘಾಟನೆ : ಮುಖ್ಯಮಂತ್ರಿ ಸಿದ್ದ ರಾಮಯ್ಯ, ಸಾನ್ನಿಧ್ಯ : ಶ್ರೀ ಶಿವಾನಂದಪುರಿ ಸ್ವಾಮೀಜಿ, ಮುಖ್ಯ ಅತಿಥಿಗಳು : ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಶಾಸಕರಾದ ಡಾ.ಯತೀಂದ್ರ, ಜಿ.ಟಿ.ದೇವೇಗೌಡ, ಸಂಸದ ಸುನಿಲ್ ಬೋಸ್, ಸ್ಥಳ: ಕನಕ ಭವನ, ಸಿದ್ಧಾರ್ಥ ಬಡಾವಣೆ, ಸಂಜೆ 6ಕ್ಕೆ.

■ **ರಂಗಾಯಣ :** ರಂಗಾಯಣದ ಭಾರತೀಯ ರಂಗ ಶಿಕ್ಷಣ ಕೇಂದ್ರದ ವಿದ್ಯಾರ್ಥಿಗಳಿಂದ 'ಅಗ್ನಿ ಮತ್ತು ಮಳೆ' ನಾಟಕ ಪ್ರದರ್ಶನ, ರಚನೆ : ಗಿರೀಶ್ ಕಾರ್ನಾಡ್, ನಿರ್ದೇಶನ : ಸಾಲಿಯಾನ ಉಮೇಶ್ ನಾರಾಯಣ, ಸಂಗೀತ : ದಿಗ್ವಿಜಯ ಹೆಗ್ಗೋಡು, ಸ್ಥಳ: ವನರಂಗ, ರಂಗಾಯಣ, ಸಂಜೆ 7ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಬಣ್ಣದ ಬಾನಾಡಿಗಳು–ಬಾನುಲಿ ಸರಣಿ, ರಚನೆ : ಡಾ. ಕಲೀಂವುಲ್ಲಾ, ಪ್ರಸ್ತುತಿ: ಜಿ. ಶಾಂತಕುಮಾರ್, 6.40 ಮತ್ತು ಸಂಜೆ 5.45 ಕರಾಮುವಿವಿ ಮುಕ್ತವಾಣಿ–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅಧ್ಯಯನ ಅವಕಾಶಗಳನ್ನು ಕುರಿತ ಪ್ರಾಯೋಜಿತ ಬಾನುಲಿ ಸರಣಿ. ಭಾಗವಹಿಸುತ್ತಾರೆ: ಡಾ. ಕೆ. ಪ್ರಕಾಶ್, ಗ್ರಂಥಪಾಲಕರು, ಗ್ರಂಥಾಲಯ ವಿಭಾಗ, ಪ್ರಾಯೋಜಕರು : ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು. ಪ್ರಸ್ತುತಿ: ಎನ್. ಕೇಶವಮೂರ್ತಿ, 6.50 ರೈತರಿಗೆ ಸಲಹೆ, 7.15 KABHI- ಕರ್ನಾಟಕ ಮೆದುಳು ಆರೋಗ್ಯ ಕುರಿತ ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ನಿಮ್ಹಾನ್ಸ್ ಸಂಸ್ಥೆ, ಬೆಂಗಳೂರು, 8.30 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ– ಆಂಟಿ ಬಯಾಟಿಕ್ ಜಾಗೃತಿ ಸಪ್ತಾಹದ ಸಂದರ್ಭದಲ್ಲಿ 'ಆ್ಯಂಟಿ ಬಯಾಟಿಕ್ ಬಳಕೆ' ಕುರಿತು ಡಾ.ಎಂ.ಎನ್. ಸುಮನಾ ಅವರೊಂದಿಗೆ ಮಾತುಕತೆ ಮತ್ತು 'ಮಕ್ಕಳಿಗೆ ಪೌಷ್ಟಿಕ ಆಹಾರ' ಕುರಿತು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಹಾಗೂ ಚೆಲುವಾಂಬ ಆಸ್ಪತ್ರೆಯ ಮಕ್ಕಳ ವಿಭಾಗದ ಪ್ರೊಫೆಸರ್ ಮತ್ತು ಮುಖ್ಯಸ್ಥರಾದ ಡಾ. ಸವಿತಾ. ಎಂ. ಆರ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 9.30 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಎಸ್.ವಿ. ಸಹನಾ–ವೀಣಾವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ 'ಸಂಗೀತ ಸಂಭ್ರಮ ನಾದಲಯ ಸಂಗಮ', ಪ್ರಸ್ತುತಿ : ಹೆಚ್. ಎಲ್. ಶಿವಶಂಕರಸ್ವಾಮಿ

ಮಧ್ಯಾಹ್ನ: 12.35 ದೇವರನಾಮ, 12.45 ಕಾದಂಬರಿ ವಿಹಾರ–ಎಂ.ಆರ್. ಶ್ರೀನಿವಾಸಮೂರ್ತಿಯವರ 'ರಂಗಣ್ಣನ ಕನಸಿನ ದಿನಗಳು', ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್.ಎಸ್., 1.00 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖಕರು ಹಾಗೂ ಪ್ರಸ್ತುತಿ : ಶಭಾನ ಮತ್ತು ಕೀರ್ತಿ. ಎಸ್. ಬೈಂದೂರು, ಪರಿಕಲ್ಪನೆ : ಅಬ್ದುಲ್ ರಶೀದ್, 1.20 ಕೋಮು ಏಕತಾ ಸಪ್ತಾಹ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ನಿಲಯ ಕಲಾವಿದರಿಂದ, 4.00 ಮಹಿಳಾರಂಗ–ಜೀವನ್ಮುಖಿ: ಮಹಿಳೆಯರಿಗಾಗಿ ನೈಸರ್ಗಿಕ ಸೌಂದರ್ಯ ವರ್ಧಕಗಳ ಬಳಕೆ, ಪ್ರಸ್ತುತಿ : ಕೀರ್ತನ, 4.30 ವೃತ್ತಿ ಮಾರ್ಗದರ್ಶನ 'ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ಸೇವಾ ಅವಕಾಶಗಳು' ಕುರಿತು ಅತ್ಯುತ್ತಮ ಎನ್.ಎಸ್.ಎಸ್ ಅಧಿಕಾರಿ ರಾಷ್ಟ್ರಪ್ರಶಸ್ತಿ ಪುರಸ್ಕೃತರು ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರಾಗಿರುವ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲೂಕು ಬಾಬುರಾಯನಕೊಪ್ಪಲಿನ ಡಾ. ರಾಘವೇಂದ್ರ. ಆರ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 6.50 ಕೃಷಿರಂಗ : ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ಮೌಲ್ಯವರ್ಧನೆ ಕುರಿತ ನೇರ ಫೋನ್ ಇನ್ ಕಾರ್ಯಕ್ರಮ, ಭಾಗವಹಿಸುತ್ತಾರೆ : ಕೆಪೆಕ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಎಂ. ಹೆಚ್. ಬಂಥನಾಳ, 7.45 ಕನ್ನಡದಲ್ಲಿ ಭಾಷಣ– ಯಾರೂ ಕಾಣದ ಪ್ರವಾಸಿ ತಾಣಗಳು ನಂಜನಗೂಡು ತಾಲೂಕು ಚಿಕ್ಕಟಿಯ ಗಂಗರ ಕಾಲದ ಸ್ಮಾರಕವನ್ನು ಪರಿಚಯಿಸುತ್ತಾರೆ, ಸಿರಿ ಮೈಸೂರು, 8.00 ಲೈಬ್ರರಿ ಸೈನ್ಸ್ ಸಪ್ತಾಹದ ಸಂದರ್ಭದಲ್ಲಿ ಹಿರಿಯ ಲೈಬ್ರರಿಯನ್ ಆಗಿ ನಿವೃತ್ತರಾದ ಡಾ. ಬಿ.ಎ. ಶಾರದಾ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಜಿ. ಶಾಂತಕುಮಾರ್, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ : ಲಯ ವಿನ್ಯಾಸ, 10.00 ತತ್ವ ಸಂಚಾರ–ಜನಪದ ಗಾಯಕರ ತತ್ವಗಾಯನ, ಪ್ರಸ್ತುತಿ–ಡಾ. ಮೈಸೂರು ಉಮೇಶ್, 10.30 ಸವಿನೆನಪು

ಜಯನಗರದಲ್ಲಿ ಮನೆ ಮನೆಯಲ್ಲಿ ಶಾಸಕ ಶ್ರೀವತ್ಸ ಅಹವಾಲು ಆಲಿಕೆ



ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಜಯನಗರದಲ್ಲಿ ಪಾದಯಾತ್ರೆ ನಡೆಸಿ, ಅಹವಾಲು ಆಲಿಸಿದರು.

ಮೈಸೂರು, ನ.21(ಎಸ್‌ಬಿಡಿ)– ಮೈಸೂರಿನ 48ನೇ ವಾರ್ಡ್ ಜಯನಗರದಲ್ಲಿ ಶಾಸಕ ಶ್ರೀವತ್ಸ ಅವರು ಮನೆ ಮನೆಗೆ ತೆರಳಿ ಸಾರ್ವಜನಿಕರ ಸಮಸ್ಯೆ ಆಲಿಸಿದರು.

ಜಯನಗರದ ರಾಮಮಂದಿರದಲ್ಲಿ ಪೂಜೆ ಸಲ್ಲಿಸಿ ಪಾದಯಾತ್ರೆ ಆರಂಭಿಸಿದ ಅವರು, ಮನೆ ಮನೆಗೆ ತೆರಳಿ ಅಹವಾಲು ಸ್ವೀಕರಿಸಿದರು. ಕುಡಿಯುವ ನೀರು, ಚರಂಡಿ, ಬೀದಿದೀಪ, ಸ್ವಚ್ಛತೆ ನಿರ್ವಹಣೆ ಬಗ್ಗೆ ನಿವಾಸಿಗಳಿಂದ ಮಾಹಿತಿ ಪಡೆದರು.

ಈ ವೇಳೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ನಿರಂತರವಾಗಿ ಕ್ಷೇತ್ರದ ಪ್ರತಿ ವಾರ್ಡಿನ ಮನೆ ಮನೆಗೆ ಭೇಟಿ ನೀಡಿ ಸಮಸ್ಯೆಗಳನ್ನು ಆಲಿಸಿ, ಕೆಲ ವಿಚಾರಗಳ ಸಂಬಂಧ ಸ್ಥಳದಲ್ಲೇ ಪರಿಹಾರ ಸೂಚಿಸಲಾಗಿದೆ. ಇಂದು ಜಯನಗರದಲ್ಲಿ ಪಾದಯಾತ್ರೆ ನಡೆಸಿದ್ದು, ರಸ್ತೆ ಬದಿ ಮರಗಳ ಟ್ರಿಮ್, ಚರಂಡಿ ಹೂಳು ತೆಗೆಸುವುದು, ಕನ್ಸರ್ವೇಷನ್ ಗಲ್ಲಿಗಳ ಸ್ವಚ್ಛತೆ ಸೇರಿದಂತೆ ಹಲವು ಸಮಸ್ಯೆಗಳನ್ನು ತಿಳಿಸಿದ್ದಾರೆ. ಈ ಸಂಬಂಧ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು. ಈ ವೇಳೆ ನಗರ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ರಾಕೇಶ್ ಗೌಡ, ಮುಖಂಡರಾದ ಪ್ರದೀಪ್, ಜೋಗಿ ಮಂಜು, ಕೆ.ಜೆ.ರಮೇಶ್, ಸುಜಾತಾ, ರಾಮ್ ಪ್ರಸಾದ್, ಪ್ರದೀಪ್ ಕುಮಾರ್, ಭಾನುಪ್ರಕಾಶ್, ಕಿಶೋರ್, ಶಶಿ, ಕೀರ್ತಿ, ಆಪ್ತ ಸಹಾಯಕ ಆದಿತ್ಯ, ವಲಯ ಕಚೇರಿ 2ರ ಸಹಾಯಕ ಆಯುಕ್ತ ನಾಗರಾಜ್, ಅಭಿವೃದ್ಧಿ ಅಧಿಕಾರಿ ಚೇತನ್ ಬಾಬು, ಇಂಜಿನಿಯರ್ ಧನುಷ್ ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

ಬಿಪಿಎಲ್ ಅರ್ಹರಿಗೆ ಅನ್ಯಾಯವಾಗಲು ಬಿಡುವುದಿಲ್ಲ



ಬೆಂಗಳೂರು, ನ.21(ಕೆಎಂಶಿ)– ಯಾವುದೇ ಕಾರಣಕ್ಕೂ ಬಿಪಿಎಲ್ ಅರ್ಹರಿಗೆ ಅನ್ಯಾಯವಾಗಲು ಬಿಡುವುದಿಲ್ಲ, ಅರ್ಹರ ಕಾರ್ಡ್‌ಗಳು ರದ್ದಾಗಿದ್ದರೆ ಈ ಬಗ್ಗೆ ಪಟ್ಟಿ ಕೊಡಲು ಸಂಬಂಧಪಟ್ಟ ಸಚಿವರಿಗೆ ಸೂಚನೆ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ವಂಚಿತರಿಗೆ ಮರು ಅರ್ಜಿಗೆ ಅವಕಾಶ ಕಲ್ಪಿಸಿ ಕೊಡಬೇಕು ಎಂಬ ಸೂಚನೆ ನೀಡಿದ್ದೇವೆ. ರಾಜ್ಯ, ತಾಲೂಕು, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಗಳು ಈ ಬಗ್ಗೆ ಪರಿಶೀಲಿಸಲಿವೆ, ಒಬ್ಬ ಬಡವನಿಗೂ ತೊಂದರೆ ಆಗಲು ಬಿಡುವುದಿಲ್ಲ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ಪ್ರತಿನಿಧಿಯಾಗಿ, ಪಕ್ಷದ ಅಧ್ಯಕ್ಷನಾಗಿ ನಾನು ಭರವಸೆ ನೀಡುತ್ತೇನೆ. ಯಾರೂ ಭಯ ಪಡುವ ಅಗತ್ಯವಿಲ್ಲ, ವಿರೋಧ ಪಕ್ಷಗಳು ಸುಮ್ಮನೆ ಮಾತನಾಡುತ್ತಿವೆ ಎಂದರು.

ರಾಜ್ಯದಲ್ಲಿ ನಕ್ಸಲ್ ಎನ್ ಕೌಂಟರ್, ನಕ್ಸಲರ ಶರಣಾಗತಿ ಪೊಲೀಸ್ ಇಲಾಖೆ ಹಾಗೂ ಗೃಹ ಸಚಿವರಿಗೆ ಸಂಬಂಧಪಟ್ಟ ವಿಚಾರ. ನಬಾರ್ಡ್ ಸಾಲ ಕಡಿತ ವಿಚಾರ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ದೆಹಲಿಯಲ್ಲಿ ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ. ಮುಂದಿನ ಮೂರೂವರೆ ವರ್ಷ ಗ್ಯಾರಂಟಿಗಳು ಇರುತ್ತವೆ. ನಂತರವೂ ನಾವೇ ಅಧಿಕಾರಕ್ಕೆ ಬಂದು ಮತ್ತೆ ಐದು ವರ್ಷ ಮುಂದುವರೆಸುತ್ತೇವೆ ಎಂದರು.

ರಾಜ್ಯ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ನಮ್ಮ ಪ್ರಯತ್ನ ಮಾಡಿದ್ದೇವೆ. ಫಲಾಫಲ ಭಗವಂತನದ್ದು, "ಕರ್ಮಣ್ಯೇವಾಧಿಕಾರಸ್ತೇ ಮಾ ಫಲೇಶು ಕದಾಚನ. ಎಲ್ಲಾ ಕಡೆಯೂ ದೇವರು ನಮಗೆ ಒಳ್ಳೆಯದು ಮಾಡುತ್ತಾನೆ ಎನ್ನುವ ಭರವಸೆ ಇಟ್ಟಿದ್ದೇವೆ ರಾಜ್ಯದಲ್ಲಿ ಮೂರೂ ರಾಜಕೀಯ ಪಕ್ಷಗಳು ತಲಾ ಒಂದೊಂದು ಸ್ಥಾನ ಗೆಲ್ಲುತ್ತವೆಂಬ ಸಮೀಕ್ಷೆಗಳ ಮೇಲೆ ನಂಬಿಕೆಯಿಲ್ಲ. ಸಮೀಕ್ಷೆ ಇಟ್ಟುಕೊಂಡು ರಾಜಕೀಯ ಮಾಡಲು ಆಗುವುದಿಲ್ಲ. ಜನ ಗೌಪ್ಯ ಮತದಾನದ ಮೂಲಕ ಬೆಂಬಲ ನೀಡುತ್ತಾರೆ. ಯಾರು ಜನರ ಹೃದಯ ಹಾಗೂ ವಿಶ್ವಾಸ ಪಡೆಯುತ್ತಾರೋ ಅವರಿಗೆ ಜಯ ಎಂದರು.

ಸುಳ್ವಾಡಿ ವಿಷ ಪ್ರಸಾದ ಪ್ರಕರಣ: ಪ್ರಮುಖ ಆರೋಪಿ ಇಮ್ಮಡಿ ಮಹದೇವಸ್ವಾಮಿ ಜಾಮೀನು ಅರ್ಜಿ ಮತ್ತೆ ವಜಾ



ಮಹದೇವಸ್ವಾಮಿ

ಚಾಮರಾಜನಗರ, ನ.21– ಇಡೀ ದೇಶವನ್ನೇ ಬೆಚ್ಚಿ ಬೀಳಿಸಿದ್ದ ಸುಳ್ವಾಡಿ ವಿಷ ಪ್ರಸಾದ ಪ್ರಕರಣದ ಪ್ರಮುಖ ಆರೋಪಿ ಇಮ್ಮಡಿ ಮಹದೇವಸ್ವಾಮಿ ಜಾಮೀನು ಅರ್ಜಿ ಮತ್ತೆ ವಜಾ ಆಗಿದೆ. ಜಾಮೀನು ಅರ್ಜಿ ವಜಾಗೊಳಿಸಿ ಚಾಮರಾಜನಗರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಬಿ.ಎಸ್. ಭಾರತಿ ಆದೇಶ ಹೊರಡಿಸಿದ್ದಾರೆ. ಜಿಲ್ಲಾ ನ್ಯಾಯಾಲಯ, ಹೈಕೋರ್ಟ್, ಸುಪ್ರೀಂಕೋರ್ಟ್‌ಗಳಲ್ಲೂ ಜಾಮೀನು ಅರ್ಜಿ ವಜಾ ಆಗಿತ್ತು. ಅನಾರೋಗ್ಯದ ಕಾರಣ ನೀಡಿ ಆರೋಪಿ ಇಮ್ಮಡಿ ಮಹದೇವಸ್ವಾಮಿ ಮತ್ತೆ ಜಿಲ್ಲಾ ನ್ಯಾಯಾಲಯಕ್ಕೆ ಜಾಮೀನು ಅರ್ಜಿ ಸಲ್ಲಿಸಿದ್ದರು. ಇದೀಗ ಮತ್ತೆ ಜಾಮೀನು ಅರ್ಜಿಯನ್ನು ಚಾಮರಾಜನಗರ ಜಿಲ್ಲಾ ನ್ಯಾಯಾಲಯವು ವಜಾ ಮಾಡಿದೆ. ಕಳೆದ 5 ವರ್ಷ 11 ತಿಂಗಳಿಂದ ಇಮ್ಮಡಿ ಮಹದೇವಸ್ವಾಮಿ ಜೈಲಿನಲ್ಲಿದ್ದಾರೆ. ಮಹದೇಶ್ವರ ಬೆಟ್ಟ ಸಾಲೂರು ಮಠದ ಕಿರಿಯ ಸ್ವಾಮೀಜಿ ಆಗಿದ್ದ ಇಮ್ಮಡಿ ಮಹದೇವಸ್ವಾಮಿ, ಸುಳ್ವಾಡಿ ಕಿಚ್‌ಗುತ್ ಮಾರಮ್ಮ ದೇವಸ್ಥಾನದ ಆಡಳಿತದಲ್ಲಿ ಅಧಿಪತ್ಯ ಸ್ಥಾಪಿಸಲು ಪಿತೂರಿ ನಡೆಸಿದ್ದರು. ಮತ್ತೊಂದು ಗುಂಪಿಗೆ ಕೆಟ್ಟ ಹೆಸರು ತರಲು ಪ್ರಸಾದಕ್ಕೆ ವಿಷ ಬೆರೆಸಿದ್ದ ಆರೋಪವಿದೆ. 2018ರ ಡಿ.14 ರಲ್ಲಿ ನಡೆದ ಘಟನೆಯಲ್ಲಿ 17 ಮಂದಿ ಭಕ್ತರು ಮೃತಪಟ್ಟಿದ್ದರು. 127 ಮಂದಿ ಅಸ್ವಸ್ಥಗೊಂಡಿದ್ದರು. ಸದ್ಯ ಮೊದಲ ಆರೋಪಿ ಇಮ್ಮಡಿ ಮಹದೇವಸ್ವಾಮಿ, ಎರಡನೇ ಆರೋಪಿ ಅಂಬಿಕಾ, ಮೂರನೇ ಆರೋಪಿ ದೇವಸ್ಥಾನದ ವ್ಯವಸ್ಥಾಪಕ ಮಾದೇಶ್, ನಾಲ್ಕನೇ ಆರೋಪಿ ತಂಬಡಿ ದೊಡ್ಡಯ್ಯ ಮೈಸೂರು ಜೈಲಿನಲ್ಲಿದ್ದಾರೆ.

ಮಾಜಿ ಶಾಸಕರಿಂದ ಕಾರ್ಯಕ್ರಮದ ವೇದಿಕೆ ಸಿದ್ಧತೆ ವೀಕ್ಷಣೆ



ಸಂತಶ್ರೇಷ್ಠ ಭಕ್ತ ಕನಕದಾಸ ಜಯಂತ್ಯೋತ್ಸವ ಸಮಿತಿಯಿಂದ ಮೈಸೂರಿನ ಸಿದ್ಧಾರ್ಥ ಬಡಾವಣೆಯ ಕನಕ ಭವನದ ಆವರಣದಲ್ಲಿ ಶುಕ್ರವಾರ ಸಂಜೆ ನಡೆಯುವ ಪ್ರತಿಭಾ ಪುರಸ್ಕಾರ ಸಮಾರಂಭದ ವೇದಿಕೆ ಸಿದ್ಧತೆಯನ್ನು ಸಮಿತಿ ಅಧ್ಯಕ್ಷರೂ, ಮಾಜಿ ಶಾಸಕ ಎಂ.ಕೆ. ಸೋಮಶೇಖರ್ ವೀಕ್ಷಿಸಿದರು. ಈ ವೇಳೆ ಸಂಚಾಲಕ ಎಂ.ಶಿವಣ್ಣ, ಪ್ರಧಾನ ಕಾರ್ಯದರ್ಶಿ ಮಹದೇವೇಗೌಡ, ನಜರಾಬಾದ್ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಮಹದೇವಸ್ವಾಮಿ, ಚೆಸ್ಕಾಂ ಜೂನಿಯರ್ ಇಂಜಿನಿಯರ್ ಜಯರಾಂ, ಸಹ ಕಾರ್ಯದರ್ಶಿ ಅಪ್ಪುಗೌಡ, ಸಂಘಟನಾ ಕಾರ್ಯದರ್ಶಿ ವಿಶ್ವ ನಾಥ್(ವಿಶ್ವ), ನಿರ್ದೇಶಕರಾದ ಬಸವರಾಜು, ರಮೇಶ್ ರಾಮಪ್ಪ, ಈರುಳ್ಳಿ ಕುಮಾರ್, ಜಿ.ಸೋಮಶೇಖರ್, ರವಿಶಂಕರ್, ಗುಣಶೇಖರ್, ಎಸ್‌ಐಗಳಾದ ಶ್ರೀನಿವಾಸ್ ಪಾಟೀಲ್, ನಟರಾಜ್ ಉಪಸ್ಥಿತರಿದ್ದರು.

ಅಧಿವೇಶನ ಆರಂಭಕ್ಕೆ ಮುನ್ನ ಬಿಪಿಎಲ್ ಕಾರ್ಡ್ ವಾಪಸ್ ಕೊಡದಿದ್ದರೆ ತೀವ್ರ ಹೋರಾಟ

ವಿಪಕ್ಷ ನಾಯಕ ಆರ್.ಅಶೋಕ್ ಎಚ್ಚರಿಕೆ



ಬೆಂಗಳೂರು, ನ.21– ರಾಜ್ಯದಲ್ಲಿ ಸದನ ಆರಂಭವಾಗುವ ಮುನ್ನವೇ ರಾಜ್ಯ ಸರ್ಕಾರ ಜನರಿಗೆ ಬಿಪಿಎಲ್ ಕಾರ್ಡ್ ವಾಪಸ್ ನೀಡಬೇಕು. ಇಲ್ಲವಾದರೆ ತೀವ್ರವಾದ ಹೋರಾಟ ಮಾಡಿ ಸರ್ಕಾರಿ ಕಚೇರಿಗಳಿಗೆ ಹಾಗೂ ವಿಧಾನಸೌಧಕ್ಕೆ ಬೀಗ ಹಾಕುತ್ತೇವೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಎಚ್ಚರಿಕೆ ನೀಡಿದರು.


ಬಿಪಿಎಲ್ ಕಾರ್ಡ್ ರದ್ದುಗೊಂಡ ಕುಟುಂಬಗಳನ್ನು ಭೇಟಿ ಮಾಡಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅನ್ನಭಾಗ್ಯ ಎಂದು ಹೇಳಿ ಕನ್ನಭಾಗ್ಯ ಕೊಟ್ಟಿದ್ದಾರೆ. ಅನ್ನವನ್ನು ಕದ್ದು ಲಕ್ಷಾಂತರ ಜನರಿಗೆ ಅನ್ಯಾಯ ಮಾಡಿದ್ದಾರೆ. 45 ವರ್ಷದಿಂದ ಬಿಪಿಎಲ್ ಕಾರ್ಡ್ ಹೊಂದಿದ್ದ ವೃದ್ಧೆ, ಈಗ ಅರ್ಹತೆ ಕಳೆದುಕೊಂಡಿದ್ದಾರೆ. ಅಂಕಿ ಅಂಶದ ಪ್ರಕಾರ 250 ಸರ್ಕಾರಿ ನೌಕರರ ಬಳಿ ರೇಷನ್ ಕಾರ್ಡ್ ಇದ್ದರೂ, 12 ಲಕ್ಷ ಜನರ ಕಾರ್ಡ್ ರದ್ದು ಮಾಡಲು ಸರ್ಕಾರ ಮುಂದಾಗಿದೆ. ಏನೂ ಭಯ ಬೇಡವೆಂದು ಸಿಎಂ ಸಿದ್ದರಾಮಯ್ಯ ಹೇಳಿದರೆ, ಆಹಾರ ಸಚಿವರು ಮತ್ತೆ ಅರ್ಜಿ ಹಾಕಿ ಎಂದು ಹೇಳುತ್ತಾರೆ. ಕಾಂಗ್ರೆಸ್ ನಾಯಕರು ತಪ್ಪು ಮಾಡಿದ ಮೇಲೆ ಜನರು ಯಾಕೆ ಮರಳಿ ಅರ್ಜಿ ಹಾಕಬೇಕು ಎಂದು ಪ್ರಶ್ನೆ ಮಾಡಿದರು.

ಮರಳಿ ಬಿಪಿಎಲ್ ಕಾರ್ಡ್‌ಗೆ ಅರ್ಜಿ ಸಲ್ಲಿಸಿದರೆ ಒಂದು ಕಾರ್ಡ್‌ಗೆ 10–15 ಸಾವಿರ ರೂ. ಲಂಚ ನೀಡಬೇಕಾಗುತ್ತದೆ. ಯಾರೂ ಅರ್ಜಿ ಹಾಕಬಾರದು, ಸರ್ಕಾರವೇ ಮರಳಿ ಬಿಪಿಎಲ್ ಕಾರ್ಡ್ ಕೊಡಬೇಕು. ದೇವಸ್ಥಾನದ ಮುಂದೆ ಹೂ ಮಾರುವವರು, ಸೊಪ್ಪು ಮಾರುವವರ ಬಿಪಿಎಲ್ ಕಾರ್ಡ್ ರದ್ದುಪಡಿಸಲಾಗಿದೆ. ಇದರ ವಿರುದ್ಧ ಸದನದಲ್ಲಿ ಹಾಗೂ ಹೊರಗೆ ಪ್ರತಿಭಟಿಸಲಾಗುವುದು. ಏಕಾಏಕಿ ಬಿಪಿಎಲ್ ಕಾರ್ಡ್ ರದ್ದು ಮಾಡಲು ಸರ್ಕಾರಕ್ಕೆ ಅಧಿಕಾರವಿಲ್ಲ. ಸರ್ಕಾರದ ಖಜಾನೆಯಲ್ಲಿ ಹಣ ಖಾಲಿಯಾಗಿದ್ದು, ರಸ್ತೆ ಗುಂಡಿ ಮುಚ್ಚಲು ಕೂಡ ಹಣವಿಲ್ಲ. 20–30 ಸಾವಿರ ಕೋಟಿ ರೂ. ಉಳಿಸಿ, ಶಾಸಕರ ಬಂಡಾಯ ಶಮನಕ್ಕೆ ಬಳಸಲಾಗುತ್ತದೆ. ಸಚಿವರ ಮನೆ ಆಧುನೀಕರಣಕ್ಕೆ 40–50 ಕೋಟಿ ರೂ., ಸಿಎಂ ಮನೆ ನವೀಕರಣಕ್ಕೆ 2 ಕೋಟಿ ರೂ. ಖರ್ಚು ಮಾಡಲಾಗಿದೆ. ಆದರೆ ಬಡ ಜನರಿಗೆ ಅಕ್ಕಿ ಕೊಡಲು ಸರ್ಕಾರದ ಬಳಿ ಹಣವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಾಳೆ ಎಂಜಿಐ ಸಮ್ಮೇಳನ

ಮೈಸೂರು, ನ.21– ಮೂವರ್ಸ್ ಗಿಲ್ಡ್ ಆಫ್ ಇಂಡಿಯಾ(ಎಂಜಿಐ) ಅಸೋಸಿಯೇಷನ್‌ನ 4ನೇ ವಾರ್ಷಿಕ ಸಮ್ಮೇಳನ ನ.23ರಂದು ಬೆಳಗ್ಗೆ 10ಕ್ಕೆ ಮೈಸೂರಿನ ಪ್ರೆಸಿಡೆಂಟ್ ಹೋಟೆಲ್ ಸಭಾಂಗಣದಲ್ಲಿ ನಡೆಯಲಿದೆ. ಡಿಸ್ಟ್ರಿಕ್ಟ್ ಗೌರ್ನರ್(Dist 317 G) ಲಯನ್ ಎನ್.ಸುಬ್ರಮಣ್ಯ ಸಮ್ಮೇಳನವನ್ನು ಉದ್ಘಾಟಿಸಲಿದ್ದು, ಅಸೋಸಿಯೇಷನ್ ಸಂಸ್ಥಾಪಕ ಪಿ.ಕೆ.ಶರ್ಮ ಅಧ್ಯಕ್ಷತೆ ವಹಿಸಲಿದ್ದಾರೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

Attained Acharyan Tiruvadi



A.S.Padma

AIR Veena Vidushi

04.11.1929 to 20.11.2024

Grieving Family members

ಚಿರಸ್ಮರಣೆ



ಡಿ.ರಾಜಮ್ಮ (W/o ಡಿ.ದೊಡ್ಡಯ್ಯ, ಎಲೆಕ್ಟ್ರಿಕಲ್ಸ್)

ಅಮ್ಮ ನೀವು ನಮ್ಮನ್ನಗಲಿ ಇಂದಿಗೆ 20 ವರ್ಷಗಳಾದರೂ, ನಮ್ಮ ಮನದಂಗಳದಲ್ಲಿ ನಿಮ್ಮ ನೆನಪು ಸದಾ ಹಸಿರು. ನಿಮ್ಮ ಆಶೀರ್ವಾದ ನಮ್ಮನ್ನು ಎಂದೆಂದಿಗೂ ಕಾಯಲೆಂದು ಶ್ರದ್ಧೆ ಭಕ್ತಿಯಿಂದ ಬೇಡುವೆವು.

ಡಿ.ದೊಡ್ಡಯ್ಯ, ಲಕ್ಷ್ಮಿ, ಕುನ್ನೇಗೌಡ, ಸುಂದರಮ್ಮ, ಗೋವಿಂದರಾಜು, ಸರೋಜ, ಜೈಕುಮಾರ್, ಲತಾ, ಕೃಷ್ಣಮೂರ್ತಿ, ಅಶಾಧರ್ಮಪ್ಪ, ಮೀನಾ, ಮಂಜುನಾಥ್, ಭಾರತಿ, ಸೋಮಶೇಖರ್, ಮೊಮ್ಮಕ್ಕಳಾದ ರೂಪ, ರವಿ, ದೀಪಿಕಮಾಲಾ, ಬೆನಕಾ, ಪ್ರಿಯ, ಅನಿಲ್, ಅಂಬಿಕ, ದಿನೇಶ್, ಸುಕನ್ಯ, ಮಾಲವಿಕ, ಮನೀಷ್, ಕೌಶಿಕ್, ಪ್ರಜ್ಞಾ, ವಿಜಯ್‌ಕಿರಣ್, ತನೀಷ್, ಅಪೂರ್ವ, ಮುಮ್ಮೊಕ್ಕಳಾದ ರವೀಂದ್ರ, ಪೂರ್ವಿಕ, ಕ್ಷಿತಿಜ್, ತನೀಷಾ, ಪೂರ್ವಿ

ಭಾವಪೂರ್ಣ ಶ್ರದ್ಧಾಂಜಲಿ



ಶ್ರೀ ಕೃಷ್ಣಮೂರ್ತಿ ನವರು

ಕಿಟ್ಟ ಎಂದು ಪ್ರೀತಿಯಿಂದ ಕರೆಯುತ್ತಿದ್ದ ನಮ್ಮ ಪ್ರೀತಿಯ ತಂದೆ ಶ್ರೀ ಕೃಷ್ಣಮೂರ್ತಿ ಅವರು ದಿನಾಂಕ: 21-11-2024 ರಂದು ಮೈಸೂರಿನಲ್ಲಿ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ಸರಳ, ಸಜ್ಜನಿಕೆ ಮತ್ತು ಜ್ಞಾನ ಸಂಪನ್ನರಾದ ಇವರು ತಮ್ಮ ಪ್ರೀತಿಪಾತ್ರರ ಜೊತೆ ಕಳೆದ ಪ್ರತಿ ಕ್ಷಣವನ್ನು ಪ್ರೀತಿಸುತ್ತಿದ್ದರು. ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 22-11-2024 ಶುಕ್ರವಾರ ನೆರವೇರಿಸಲಾಗುವುದು.

ದುಃಖತಪ್ತರು: ಸುನಿಲ್ ಮತ್ತು ಸುಧೀರ್ ಕೃಷ್ಣಮೂರ್ತಿ

PUBLIC NOTICE

The general public is hereby informed that my client intends to acquire the property described in the schedule below (Schedule Property) owned by Primesouth Infratech Projects Private Limited having its registered office at # 596, Irrigation Layout, Bogadhi Main Road, Mysuru, Karnataka, 570026 (Owner). The Owner had represented that it is the sole and absolute owner of the Schedule Property and has unrestricted rights of alienation over the same.

Any person including any individuals, corporate bodies, partnership firms, banks, financial institutions, other lenders and government bodies having any manner of right, title, interest, claim, benefit or demand in the schedule property or any portion thereof by way of sale, lease, mortgage, charge, lien, possession, assignment, attachment, exchange, gift or in any other manner is hereby called upon to intimate their objections and/or claim in writing along with documentary proof to the undersigned at the address mentioned below within **fifteen (15) days** from the date of this notice, if no such objection or claim is received, it would be deemed that no person except the owner has any right or interest or claim in or in relation to the schedule property and all rights, interest and claims if any which are not notified as stated above shall be treated as waived and the title of the owner to the schedule property shall be treated as clear and marketable,

Schedule


All that piece and parcel of the immovable property duly converted to residential purpose and undeveloped situated at Basthipura village, Belogola Hobli, Srirangapatna Taluk, Mandya Distirct

1. Undeveloped residentially converted usage property under Survey No.48/2 measuring to an extent of 1 Acres 21.08 Guntas bounded on East by Land bearing Sy,No.48/1, West by Land bearing Sy,Nos.42,30, North by Land bearing Sy.No. 43,44,and South by Road; **2.** Undeveloped residentially converted usage properties under Survey No.40/1 measuring to an extent of 1 Acres, 40/2 measuring 3 Acre 13 Guntas totally 4 Acre 7 Guntas and the property bearing Sy.no. 40/1 is bounded on East by Land bearing Sy. No.60, West by Land bearing Sy.Nos.38 , North by Land bearing Sy.No. 60 and South by Land bearing Sy.No. 40/2. Likewise, property bearing Sy.No. 40/2 bounded on East by Land bearing Sy.No, 41, West by Land bearing Sy.No. 38, North by Land bearing Sy. No.40/1 and South by Land bearing Sy.No.36.; **3.** Undeveloped residentially converted usage properties under Survey No.41/1 measuring to an extent of 2 Acres 3 Guntas, under Survey No 41/2 measuring 1 Acre 3 Guntas, under Survey No.41/3 measuring to an extent of 2 Acre 12 Guntas totally 5 Acre 6 Guntas and the property bearing survey No. 41/1 is bounded on East by Land bearing Sy.No.44, West by Land bearing Sy.No.60, North by Land bearing : Sy.No. 60 and South by Land bearing Sy.No. 41/2. Likewise, property bearing Sy.No. 41/2 bounded on East by Land bearing Sy.No, 44, West by Land bearing Sy.No. 60, North by Land bearing Sy.No.41/1 and South by Land bearing Sy.No. 41/3 and the property bearing sy.no. 41/3 is bounded on East by Land bearing Sy.No.44, West by Land bearing Sy.No.40, North by Land bearing Sy. No. 42. and South by Land bearing Sy. No. 31.; **4**. Undeveloped residentially converted usage properties under Survey No.60/1 measuring to an extent of 3 Acres 19 Guntas, Survey No. 60/2 measuring 1 Acre where the property bearing Sy.No. 60/1 is bounded on East by Land bearing Sy.No.44,41, West by Land bearing Sy.No.68, North by Land bearing Sy.No. 35 and South by Land bearing Sy.No. 60/2. Likewise, property bearing Sy.No. 60/2 bounded on East by Land bearing Sy.No, 41, West by Land bearing Sy.No. 40, North by Land bearing Sy.No.60/1 and South by Land bearing Sy.No.40. ; **5.** Undeveloped residentially converted usage properties under Survey No.68 measuring to an extent of 2 Acres bounded on East by Land bearing Sy.No.39,60 West by Land bearing Sy.No.34, North by Averahalli village, and South by Land bearing Sy.No. 40.

04-11-2024

Signed/-
L SRINIVASALU,
Advocate & Notary
No.4/1110, 1st Floor, Mogappair West,
Chennai – 600 037 Ph: 94452 72753
email id: gjjerin@gmail.com

2ನೇ ವರ್ಷದ ಪುಣ್ಯಸ್ಮರಣೆ



ಶ್ರೀ ಸಿ.ಎಸ್.ನಾಗರಾಜು

ನಿಧನ : 22-11-2022

ದುಃಖತಪ್ತರು : ಲೇ|| ಕೆಂಪಮ್ಮ ಮತ್ತು ಲೇ||ಪಟೇಲ್ ಶ್ರೀನಿವಾಸಯ್ಯನವರು, ಶ್ರೀಮತಿ ಕೆಂಪಮ್ಮ ಮತ್ತು ಮಕ್ಕಳು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಕುಟುಂಬವರ್ಗದವರು, ಚಂದಗಾಲು.

ಜಿ.ಪಂ–ಮೈಸೂರು | ಕರ್ನಾಟಕ ಸರ್ಕಾರ | ತಾ.ಪಂ–ಹುಣಸೂರು

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ

ಗ್ರಾಮ ಪಂಚಾಯತ್ ಕಛೇರಿ ಕರಿಮುದ್ದನಹಳ್ಳಿ

ಹುಣಸೂರು ತಾಲೂಕು, ಮೈಸೂರು ಜಿಲ್ಲೆ 571189

ಮೊ: 9480873548 karimuddanaha.hun.mys@gmail.com

ಸಂಖ್ಯೆ: ಕಗ್ರಾಪಂ/ನರೇಗಾ /2024–25

ಟೆಂಡರ್ ಪ್ರಕಟಣೆ

(ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಮಾತ್ರ)

ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕು ಕರಿಮುದ್ದನಹಳ್ಳಿ ಗ್ರಾಮ ಪಂಚಾಯಿತಿಯ 2024–25ನೇ ಸಾಲಿನ ನರೇಗಾ ಲೆಕ್ಕ ಶೀರ್ಷಿಕೆಯಡಿ ?ಹನುಮಂತಪುರ ಗ್ರಾಮದ ಫಾದರ್ ಕಟ್ಟೆ ಅಭಿವೃದ್ಧಿ ಕಾಮಗಾರಿ" ಕಾಮಗಾರಿಯ ಸಾಮಗ್ರಿ ಮೊತ್ತ ರೂ. 7,19,380 (ಏಳು ಲಕ್ಷದ ಹತ್ತೊಂಭತ್ತು ಸಾವಿರದ ಮೂರು ನೂರ ಎಂಭತ್ತು ರೂಗಳು)/–ಗಳಿಗೆ ಸಾಮಗ್ರಿ ಪೂರೈಸುವ ಸಂಬಂಧ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಟೆಂಡರ್ ಆಹ್ವಾನಿಸಲಾಗಿದ್ದು ಆಸಕ್ತ ನೋಂದಾಯಿತ ಅರ್ಹ ಸಾಮಗ್ರಿ ಸರಬರಾಜುದಾರರು ಟೆಂಡರ್ ಸಲ್ಲಿಸಬಹುದಾಗಿದೆ. ನಿಯಮ/ಷರತ್ತುಗಳು: ಮೇಲಿನ ಕಾಮಗಾರಿಗೆ :–20–11–2024 ರಿಂದ 30–11–2024 ಸಂಜೆ 5 ಗಂಟೆಯೊಳಗೆ ಟೆಂಡರ್ ಸಲ್ಲಿಸಬಹುದಾಗಿರುತ್ತದೆ. ಸದರಿ ಟೆಂಡರ್‌ನ ತಾಂತ್ರಿಕ ಬಿಡ್ ಅನ್ನು 02–12–2024ರ ದಿನದಂದು ಬೆಳಿಗ್ಗೆ 11.00 ಕ್ಕೆ ತೆರೆಯಲಾಗುವುದು. ಸದರಿ ಟೆಂಡರ್‌ನಲ್ಲಿ ತಾಂತ್ರಿಕವಾಗಿ ಅರ್ಹರಾದ ಬಿಡ್‌ದಾರರ ಆರ್ಥಿಕ ಬಿಡ್ ಅನ್ನು 02–12–2024ರ ದಿನದಂದು ಬೆಳಿಗ್ಗೆ 11.00 ಗಂಟೆಗೆ ತೆರೆಯಲಾಗುವುದು. ಸದರಿ ದಿನಾಂಕಗಳಲ್ಲಿ ಆಕಸ್ಮಿಕ ರಜೆಗಳು ಬಂದಲ್ಲಿ ಮರುದಿನವನ್ನು ಪರಿಗಣಿಸಲಾಗುವುದು. ಟೆಂಡರ್ ದಾಖಲಾತಿಗಳಿಗಾಗಿ ಮತ್ತು ಷರತ್ತುಗಳಿಗಾಗಿ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ (ಕೆಪಿಪಿಪಿ) ಮೂಲಕ ನೋಡಬಹುದಾಗಿರುತ್ತದೆ. http://kppp.karnataka.gov.in ನಲ್ಲಿ ಲಾಗಿನ್ ಆಗಿ ಟೆಂಡರ್ ಭರ್ತಿ ಮಾಡುವುದು. ಕಛೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. ಹೆಚ್ಚಿನ ಮಾಹಿತಿಗೆ ಮೇಲ್ಕಂಡ ಮೊಬೈಲ್ ಅಥವಾ ಕಛೇರಿಯನ್ನು ಕೆಲಸದ ವೇಳೆಯಲ್ಲಿ ಸಂಪರ್ಕಿಸುವುದು.

ಸಹಿ/– ಅಧ್ಯಕ್ಷರು, ಕರಿಮುದ್ದನಹಳ್ಳಿ ಗ್ರಾ.ಪಂ.

ಸಹಿ/– ಪಂಚಾಯತ್ ಅಭಿವೃದ್ಧಿ ಅಧಿಕಾರಿ ಕರಿಮುದ್ದನಹಳ್ಳಿ ಗ್ರಾ.ಪಂ.



ಹಸಿರು ನಮ್ಮ ಉಸಿರು

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ

ಕಾರ್ಯಪಾಲಕ ಅಭಿಯಂತರರ ಕಛೇರಿ

ಕನನೀಸ ಮತ್ತು ಒಚ ಮಂಡಳಿ, ವಿಭಾಗ, ಬಂದೀಗೌಡ ಬಡಾವಣೆ, ಮಂಡ್ಯ.

ದೂರವಾಣಿ : ಫ್ಯಾಕ್ಸ್ 08232–224816. e mail- kwbeemnd@gmail.com

ಸಂಖ್ಯೆ:–ಕಜಮ/ಕಾಅ–ಮಂಡ್ಯ/ತಾಂ.ಶಾ/ತಾಂ.ಸ/ಸ.ಅ/1055/2024–25 ದಿನಾಂಕ:20.11.2024

ಟೆಂಡರ್ ಪ್ರಕಟಣೆ

ಕೆಳಕಂಡ ಕಾಮಗಾರಿಗೆ ಅರ್ಹ ಏಜೆನ್ಸಿ/ಗುತ್ತಿಗೆದಾರರಿಂದ ಐಟಂ ದರದ ಟೆಂಡರ್‌ಗಳನ್ನು ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಆಹ್ವಾನಿಸಲಾಗಿದೆ.

ಕ್ರ.ಸಂ : 01. ಕಾಮಗಾರಿ ಹೆಸರು ಮತ್ತು ವಿವರ : ಸಂಖ್ಯೆ: KUWSDB/2024-25/WS/WORK_INDENT250 CALL-3. ಕೆ.ಆರ್.ಪೇಟೆ ಪಟ್ಟಣದಲ್ಲಿ ಸ್ಕೂಲ್ ಆಫ್ ಇಂಡಿಯಾ ಹತ್ತಿರ ಬಿಟ್ಟು ಹೋಗಿರುವ ಒಳಚರಂಡಿ ಕೊಳವೆ ಮಾರ್ಗಗಳನ್ನು 2021–22 ನೇ ಸಾಲಿನ 15ನೇ ಹಣಕಾಸು ನಾನ್ ಮಿಲಿಯನ್ ಪ್ಲಸ್ ಸಿಟಿ ಅನುದಾನದಡಿ ಕೈಗೊಳ್ಳುವ ಕಾಮಗಾರಿ. ಟೆಂಡರ್‌ಗಿಟ್ಟ ಮೊಬಲಗು ರೂ.12,62,583/– (ಜಿ.ಎಸ್.ಟಿ ಹೊರತುಪಡಿಸಿ). ಇ.ಎಂ.ಡಿ ಮೊತ್ತ ರೂ.31,600/–.

ಹೆಚ್ಚಿನ ವಿವರಗಳಿಗೆ ಕಾರ್ಯಪಾಲಕ ಅಭಿಯಂತರವರು, ಮಂಡ್ಯ ವಿಭಾಗ ಮಂಡ್ಯ ರವರನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಬಹುದು.

ಸಹಿ/–ಕಾರ್ಯಪಾಲಕ ಅಭಿಯಂತರರು, ಕನನೀಸ ಮತ್ತು ಒಚ ಮಂಡಳಿ, ವಿಭಾಗ, ಮಂಡ್ಯ.

ವಾಸಾಸಂಇ/ಸನಿ–ಮಂ/ಕೆಎಸ್‌ಎಂಸಿ&ಎ/454/2024–25

ನಕ್ಕರೆ ಅದೇ ಸ್ವರ್ಗ

ಸರ್ದಾರ್ಜೀಯೊಬ್ಬ: ಐಸ್ ಗೆಡ್ಡೆ ಕೈಯಲ್ಲಿ ಹಿಡ್ಕೊಂಡು ಅದನ್ನೇ ನೋಡ್ತಾ ಇದ್ದ. ಅದನ್ನು ನೋಡಿದ ಗುಂಡ ಕೇಳಿದ. ಅವಾಗ್ಲಿಂದ ಏನ್ ನೋಡ್ತಿದಿಯಾ?

ಸರ್ದಾರ್ಜೀ : ಮಗ ಇದರಲ್ಲಿ ಎಲ್ಲೋ ವಾಟಾರ್ ಲೀಕ್ ಆಗ್ತಿದೆ. ಎಲ್ಲಿ ಅಂತ ಗೊತ್ತಾಗ್ತಿಲ್ಲ.

ಮೈಸೂರು ಮಿತ್ರ

ಶುಕ್ರವಾರ, 22 ನವೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ಭರವಸೆ ಎನ್ನುವುದು, ಕತ್ತಲು ಕವಿದ ವೇಳೆಯಲ್ಲೂ ಬೆಳಕಿನ ಅನುಭವ ಪಡೆದು ಹಾಡು ಹಾಡುವ ಹಕ್ಕಿಯಿದ್ದಂತೆ. –ರವೀಂದ್ರನಾಥ್ ಠಾಗೋರ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮಂತ್ರಕ್ಕಿಂತ ಉಗುಳೇ ಹೆಚ್ಚು.

ನಿಮ್ಮ ಪತ್ರಗಳು

ವಸ್ತುಗಳ ಅಪಾಯಕಾರಿ ಸಾಗಾಟ ನಿಲ್ಲಲಿ



ಮಾನ್ಯರೆ,

ಮೈಸೂರು ನಗರ ಮತ್ತು ಹೊರವಲಯದ ಅನೇಕ ಕಡೆಗಳಲ್ಲಿ ತೆರೆದ ವಾಹನಗಳಲ್ಲಿ ಅಪಾಯಕಾರಿ ರೀತಿಯಲ್ಲಿ ವಸ್ತುಗಳನ್ನು ಸಾಗಿಸುತ್ತಿರುವುದು ನಿತ್ಯವೂ ಕಾಣಸಿಗುತ್ತದೆ. ಕಟ್ಟಡ ನಿರ್ಮಾಣಕ್ಕೆ ಕಂಬಿ, ಕಬ್ಬಿಣದ ದೊಡ್ಡ ದೊಡ್ಡ ಸಾಮಗ್ರಿಗಳನ್ನು ಯಾವ ಸುರಕ್ಷಾ ಕ್ರಮಗಳನ್ನೂ ಕೈಗೊಳ್ಳದೆ ತೆಗೆದುಕೊಂಡು ಹೋಗಲಾಗುತ್ತದೆ. ಕಂಬಿಗಳು ವಾಹನಗಳಿಂದ ಹೊರಗೆ ಚಾಚಿಕೊಂಡಿರುತ್ತವೆ. ಅಪಾಯದ ಸೂಚಕವಾಗಿ ಅದಕ್ಕೊಂದು ಕೆಂಪು ಬಟ್ಟೆ ಕಟ್ಟುವ ಗೋಜಿಗೂ ಕೆಲವರು ಹೋಗುವುದಿಲ್ಲ. ಅನೇಕ ವೃತ್ತಗಳಲ್ಲಿ ಪೊಲೀಸರ ಎದುರಲ್ಲೇ ಇಂಥ ವಾಹನಗಳು ಸಾಗುತ್ತವೆ. ಆದರೆ ಅವರು ಯಾವ ಕ್ರಮಕ್ಕೂ ಮುಂದಾಗುವುದಿಲ್ಲ. ಎಚ್ಚರಿಕೆಯನ್ನು ಕೊಡುವ ಗೋಜಿಗೂ ಹೋಗುವುದಿಲ್ಲ. ಕಲ್ಲು–ಮಣ್ಣು ಕೂಡ ತೆರೆದ ವಾಹನಗಳಲ್ಲಿ ತೆಗೆದುಕೊಂಡು ಹೋಗುವುದು ಕಂಡುಬರುತ್ತದೆ. ಇಂಥ ವಾಹನಗಳ ಹಿಂದೆ ಅಥವಾ ಬದಿಯಲ್ಲಿ ಹೋಗುವ ಇತರ ವಾಹನಗಳ ಸವಾರರು ಅಪಾಯಕ್ಕೆ ಸಿಲುಕುವ ಸಾಧ್ಯತೆ ಇರುತ್ತದೆ. ಆದ್ದರಿಂದ ಆದಷ್ಟು ಬೇಗ ಇದನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕಾಗಿ ಮನವಿ.

–ಗಗನ್ ದೀಪ್, ಸಮಾಜ ಸೇವಕರು, ಮೈಸೂರು.

ಕನ್ನಡ ರಾಜ್ಯೋತ್ಸವ ನಿತ್ಯೋತ್ಸವವಾಗಿ ಮೊಳಗಲಿ!

ಮಾನ್ಯರೇ,

ಕನ್ನಡ ಮಾತೃಭಾಷೆ, ಆಡುಭಾಷೆ, ಹೃದಯದ ಭಾಷೆ, ಆಡಳಿತ ಭಾಷೆಯೂ ಹೌದು, ಸಿರಿಗನ್ನಡಂ ಗೆಲ್ಗೆ, ಸಿರಿಗನ್ನಡಂ ಬಾಳ್ಗೆ ಎನ್ನುವಂತೆ ಕನ್ನಡ ನಮ್ಮೆಲ್ಲರ ಪ್ರೀತಿಯ ಭಾಷೆ ಎಂದರೆ ತಪ್ಪಾಗಲಾರದು. ಆದರೆ ಇತ್ತೀಚಿನ ದಿನಗಳಲ್ಲಿ ಕನ್ನಡಮ್ಮನ ಪ್ರೀತಿ ನವೆಂಬರ್ ತಿಂಗಳಿಗೆ ಮಾತ್ರ ಮೀಸಲಾಗುತ್ತಿರುವುದು ತುಂಬಾ ಬೇಸರದ ಸಂಗತಿ. ಏಕೆಂದರೆ, ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ, ಕನ್ನಡವೇ ಮೊದಲ ಪ್ರೀತಿಯೂ ಹೌದು, ಎರಡನೇ ಪ್ರೀತಿಯೂ ಹೌದು. ಇಂತಹ ಸಂದರ್ಭದಲ್ಲಿ ನಾವು ಪ್ರತಿನಿತ್ಯವೂ ಕನ್ನಡವನ್ನು ಓದದೇ, ಬರೆಯದೇ ನಮ್ಮ ಮಕ್ಕಳನ್ನು ಪ್ರಾಥಮಿಕ ಶಾಲೆಗಳಲ್ಲಿ ಕಡ್ಡಾಯ ಕನ್ನಡವನ್ನು ಕಲಿಸದೇ ತೋರಿಕೆಗಾಗಿ ನಾವು ಕನ್ನಡ ರಾಜ್ಯೋತ್ಸವವನ್ನು ನವೆಂಬರ್‌ಗೆ ಮಾತ್ರ ಮೀಸಲಿರಿಸಿ, ಅಬ್ಬರ ಆಡಂಬರಗಳೊಂದಿಗೆ ಸಮಾರಂಭಗಳನ್ನು ಆಚರಿಸುತ್ತಿರುವುದು ಎಷ್ಟು ಸರಿ ಅಲ್ಲವೇ? ಇದರ ಬದಲು ಪ್ರತಿ ತಿಂಗಳೂ ಕನ್ನಡಕ್ಕಾಗಿಯೇ ಒಂದೆರಡು ಉಪನ್ಯಾಸಗಳು, ವಿಶೇಷ ಕಾರ್ಯಾಗಾರಗಳು, ಕನ್ನಡದಲ್ಲಿ ಸೇವೆಗೈದ ಮಹನೀಯರಿಗೆ ಗೌರವ, ಕನ್ನಡ ರಸಪ್ರಶ್ನೆ, ಸನ್ಮಾನ ಹೀಗೆ ಹತ್ತು ಹಲವು ಕಾರ್ಯಕ್ರಮಗಳನ್ನು ಪ್ರತೀ ತಿಂಗಳು ಆಚರಿಸಿದರೆ ಕನ್ನಡ ಭಾಷೆ ನಿಂತ ನೀರಾಗದೇ, ನವೆಂಬರ್‌ಗೆ ಸೀಮಿತವಾಗದೇ ನಿತ್ಯೋತ್ಸವವಾಗುವುದಿಲ್ಲವೇ? ಆದ್ದರಿಂದ ಇನ್ನು ಮುಂದಾದರೂ ಸರ್ಕಾರವಾಗಲೀ, ಸಂಘ ಸಂಸ್ಥೆಗಳಾಗಲಿ ಕನ್ನಡಮ್ಮನ ರಥವನ್ನು, ಕನ್ನಡಮ್ಮನ ಸೇವೆಯನ್ನು ನವೆಂಬರ್‌ಗೆ ಮಾತ್ರ ಸೀಮಿತಗೊಳಿಸದೇ ನಿತ್ಯೋತ್ಸವವಾಗಿ ಪ್ರತಿ ತಿಂಗಳು ಕನ್ನಡ ಭಾಷೆಯನ್ನು ಬಳಸುವುದರ ಮೂಲಕ ಕನ್ನಡತನವನ್ನು, ಅಭಿಮಾನವನ್ನು ಮೆರೆದರೆ ಸಾರ್ಥಕ ಎನಿಸುವುದಿಲ್ಲವೇ? ಕನ್ನಡಿಗರು ಮೊದಲು ಕನ್ನಡದವರಾಗಬೇಕು. ಕನ್ನಡ ರಾಜ್ಯೋತ್ಸವ ನಿತ್ಯೋತ್ಸವವಾಗಲಿ.

–ವಿ.ಹೇಮಲತಾ, ಕನ್ನಡದ ಅಭಿಮಾನಿ, ದೂರ ಗ್ರಾಮ

ಸಾರಿಗೆ ವ್ಯವಸ್ಥೆಯನ್ನೇ ಮುಗಿಸಿದ ಶಕ್ತಿ

ಮಾನ್ಯರೆ,

ಪ್ರಸ್ತುತ ಕರ್ನಾಟಕ ಕಾಂಗ್ರೆಸ್ ಸರ್ಕಾರ ಉಚಿತ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಮಹಿಳೆಯರಿಗೆ ಉಚಿತ ಪ್ರಯಾಣ ಶಕ್ತಿ ಯೋಜನೆಯಿಂದ ಸಂಜೆ ವೇಳೆ ಸರಿಯಾಗಿ ಬಸ್ ಸಂಚಾರವೇ ಇಲ್ಲದಂತಾಗಿದೆ. ಒಂದೋ ಎರಡೋ ಬಸ್‌ಗಳಲ್ಲಿ ಕಿಕ್ಕಿರಿದು ಉಸಿರಾಡಲು ಆಗದ ಸ್ಥಿತಿ ನಿರ್ಮಾಣವಾಗಿದೆ. ಕೆಲವು ಮಹಿಳೆಯರು ನಮಗೆ ಉಚಿತ ಪ್ರಯಾಣವೇ ಬೇಡ ಎನ್ನುತ್ತಿದ್ದಾರೆ. ಇನ್ನು ವಯಸ್ಸಾದವರಿಗೆ, ಅಶಕ್ತರಿಗೆ, ವೃದ್ಧರಿಗೆ ಕುಳಿತುಕೊಳ್ಳುವ ಆಸನದಲ್ಲಿ ಮಹಿಳೆಯರೇ ಕುಳಿತಿರುತ್ತಾರೆ. ಈ ರೀತಿ ಬಿಟ್ಟಿ ಭಾಗ್ಯಗಳನ್ನು ಕೊಡುವ ಬದಲು ಬಡ ಮಕ್ಕಳ ಶಿಕ್ಷಣ, ಬಡವರ ಮಧ್ಯಮ ವರ್ಗದವರಿಗೆ ಆರೋಗ್ಯ ಸೌಲಭ್ಯ ಒದಗಿಸಿಕೊಡಬಹುದಿತ್ತು.

–ಜಿ.ಪಿ. ರಾಜೇಶ್ ಮತ್ತು ಸ್ನೇಹಿತರು, ವಿ.ವಿ.ಪುರಂ, ಮೈಸೂರು.

'ಕನ್ನಡ ಸಂಸ್ಕೃತ ಸಂಬಂಧ'

ಮಾನ್ಯರೆ,

ಡಾ. ಎಚ್.ವಿ. ನಾಗರಾಜರಾಯರ ಸ್ತುತ್ಯ ಅಂಕಣ ಬರಹ (ಸಂಸ್ಕೃತಿ ಚಿಂತನಾ, ಅ. 30) ಕುರಿತು ಇದೇ ಹೆಸರಿನ (ಕನ್ನಡ ಸಂಸ್ಕೃತ ಸಂಬಂಧ) ನನ್ನದೊಂದು ಪುಸ್ತಕವೇ ಇದೆ! ಒಂದು ಸಣ್ಣ ತಿದ್ದುಪಡಿ; ಜನ್ನನ 'ಯಶೋಧರ ಚರಿತೆ'ಗೆ ಆಕರ 'ಯಶಸ್ತಿಲಕಚಂಪೂ' ಅಲ್ಲ, ವಾದಿರಾಜನ 'ಯಶೋಧರ ಚರಿತ'.

ಕೂಪಾರ : "ಕರ್ನಾಟಕ ಭ್ರಷ್ಟಾಚಾರದ ಕೂಪವಾ...?" (ಭೂಮಂತ್ರ, ಅ. 31) ಎಂಬ ಕೆಬಿಜಿಯವರ ಮಾರ್ಮಿಕ ಪ್ರಶ್ನೆಗೆ ಹೌದೆಂದೆ ಉತ್ತರಿಸದೆ ವಿಧಿಯಿಲ್ಲ. ಕೂಪ ಮಾತ್ರವಲ್ಲ, ಕೂಪಾರ (=ಸಮುದ್ರ) ! ಒಟ್ಟಿನಲ್ಲಿ ಅಸಹ್ಯ ವ್ಯಾಪಾರ.

ವಲಯ–ಮಲಯ

ಕುವೆಂಪು ನನಗೊಮ್ಮೆ ಹೇಳಿದರು :
"ನೀವು ನನ್ನ ಚಿದ್ವಲಯಕ್ಕೆ ಸೇರಿದವರು"
ಹೌದೆ? ಅವರಂತೂ ಮಲಯಪರ್ವತ:
ಶ್ರೀಗಂಧ ಶ್ರೀಮಂತ!

– ಸಿಪಿಕೆ, ಹಿರಿಯ ಸಾಹಿತಿಗಳು, ಮೈಸೂರು.

ಚಿಂತನೆ



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ಶ್ರಮಕ್ಕೆ ತಕ್ಕ ವಿರಾಮ ಸಾಕಲ್ಲವೇ...



"ಯಾವುದೇ ಕಾರಣಕ್ಕೂ ಕೆಲಸದ ಸಮಯದಲ್ಲಿ ವಿಶ್ರಾಂತಿ ಪಡೆಯಬಾರದು. ನಾನು ಹಾಗೆ ನನ್ನ ಮೇಲಧಿಕಾರಿಗಳಿಗೆ ಅರಿವಿಲ್ಲದಂತೆ ವಿಶ್ರಾಂತಿ ಪಡೆಯುತ್ತೇನೆ. ಅಷ್ಟರಲ್ಲಿ ಸಣ್ಣದಾಗಿ ನಿದ್ರೆಯನ್ನೂ ಮಾಡಿಬಿಡುತ್ತೇನೆ ಎಂದು ಕೆಲವರು ಅದು ತಮ್ಮ ಬುದ್ಧಿವಂತಿಕೆ ಎಂಬಂತೆ ಹೇಳಿಕೊಳ್ಳುತ್ತಾರೆ. ಆದರೆ ನಿಜವಾಗಿ ಅದು ನಮಗೆ ನಾವೇ ಮೋಸ ಮಾಡಿಕೊಂಡಂತೆ. ಕೆಲಸದ ಸಮಯದಲ್ಲಿ ನಮ್ಮ ಗಮನ ಕೆಲಸದ ಮೇಲೆ ಮಾತ್ರವೇ ಇರಬೇಕಾಗುತ್ತದೆ. ನಾವು ಮನೆಗೆ ಮರಳಿದ ನಂತರ ವಿಶ್ರಾಂತಿಯನ್ನು ಎಷ್ಟು ಪಡೆಯಬೇಕು, ಹೇಗೆ ಪಡೆಯಬೇಕು ಎಂಬುದು ನಮಗೆ ಬಿಟ್ಟ ವಿಚಾರ.

ನಮ್ಮದು ಒಂದು ರೀತಿ ಆಲಸಿ ಜೀವನ. ನಮ್ಮಲ್ಲಿ ಹಲವರು ತಾವು ಕೆಲಸ ಮಾಡಿದ್ದಕ್ಕಿಂತ ಹೆಚ್ಚು ವಿಶ್ರಾಂತಿ ಪಡೆಯಲು ಬಯಸುತ್ತಾರೆ. ದಿನಕ್ಕೆ ಎಂಟತ್ತು ಗಂಟೆಗಿಂತ ಹೆಚ್ಚು ನಿದ್ರೆ ಮಾಡುವವರು ಇದ್ದಾರೆ. ಮಲಗಿ ಮಲಗಿಯೇ ಸುಸ್ತಾಗುವವರೂ ಇದ್ದಾರೆ ಎಂಬುದು ವಿಪರ್ಯಾಸ. ದೇಹ ಚಟುವಟಿಕೆಯಿಂದ ಇರಬೇಕು. ಅದಕ್ಕೆ ಎಷ್ಟು ಬೇಕೋ ಅಷ್ಟು ಮಾತ್ರ ವಿಶ್ರಾಂತಿ ಕೊಡಬೇಕು. ಇಲ್ಲದಿದ್ದರೆ ಆಲಸ್ಯಕ್ಕೆ ಕಾರಣವಾಗುತ್ತದೆ. ಅದರಲ್ಲೂ ನಾವು ಕೆಲಸ ಮಾಡುವಾಗ ವಿಶ್ರಾಂತಿ ಬಯಸಬಾರದು. ಕೆಲಸದ ವೇಳೆ ವಿಶ್ರಾಂತಿ ಬಯಸಿದರೆ ಮಾನಸಿಕ ಒತ್ತಡಕ್ಕೆ ಒಳಗಾಗಬೇಕಾಗುತ್ತದೆ. ನಾವು ಎಷ್ಟೇ ಆಲಸಿಗಳಾದರೂ ಮಾಡುವ ಕೆಲಸದ ಬಗ್ಗೆ ನಾವು ಗಮನಹರಿಸಲೇಬೇಕು. ಮಾಡುವ ಕೆಲಸ ಯಾವುದಾದರೇನು? ಅದು ನಮಗೆ ಅನ್ನವನ್ನು ನೀಡುವಂತಹುದು. ಹಾಗಾಗಿ ಕೆಲಸದ ವೇಳೆಯಲ್ಲಿ ವಿಶ್ರಾಂತಿ ಬಯಸಿದರೆ ಕೆಲಸ ಪೂರ್ಣವಾಗದಿರುವ ಬಗ್ಗೆ ಮನಸ್ಸಿನ ಯಾವುದೋ ಮೂಲೆಯಲ್ಲಿ ಅಳುಕು ಮೂಡುತ್ತದೆ. ಅದು ಒಳ್ಳೆಯದಲ್ಲ. ಹಾಗಾಗಿ ಕೆಲಸದ ವೇಳೆಯಲ್ಲಿ ಕೆಲಸದ ಬಗ್ಗೆ ಮಾತ್ರ ಆಲೋಚಿಸಬೇಕು.

ನಾವು ದಿನಕ್ಕೆ ಎಷ್ಟು ಹೊತ್ತು ಕೆಲಸ ಮಾಡಬೇಕು ಎಂಬ ಬಗ್ಗೆ ಈ ಹಿಂದೆ ವೈಜ್ಞಾನಿಕವಾಗಿ ವಿಶ್ಲೇಷಣೆ ಮಾಡಿ ದಿನಕ್ಕೆ 8 ಗಂಟೆ ಎಂದು ಹೇಳಲಾಗುತ್ತಿತ್ತು. ಹಾಗಾಗೇ ಸರ್ಕಾರಿ ಕಚೇರಿಗಳು ಬೆಳಿಗ್ಗೆ 10 ರಿಂದ ಸಂಜೆ 6 ರವರೆಗೆ ಕೆಲಸ ನಿರ್ವಹಿಸಬೇಕು ಎಂದು ತೀರ್ಮಾನಿಸಲಾಗಿತ್ತು. ಅದೇ ರೀತಿ ಕೈಗಾರಿಕೆಗಳಲ್ಲಿ ಕೆಲಸದ ಅವಧಿ ಇಷ್ಟು ಎಂದು ತಿಳಿಸಲಾಗಿತ್ತು. ಶಾಲೆಗಳಲ್ಲಿ ಪಾಠ ಮಾಡುವವರು ಎಷ್ಟು ಅವಧಿ ಬೋಧನೆ ಮಾಡಬಹುದು ಎಂಬುದನ್ನು, ವಿದ್ಯಾರ್ಥಿ ಎಷ್ಟು ಹೊತ್ತು ಕೇಳಬಹುದು ಎಂಬುದರ ಆಧಾರದ ಮೇಲೆ ನಿಗದಿಪಡಿಸಲಾಗಿದೆ. ಹಾಗೆ ನೋಡಿದರೆ ಪೂರ್ವ ಪ್ರಾಥಮಿಕ ಶಾಲೆಗಿಂತ ಪ್ರಾಥಮಿಕ ಶಾಲೆ, ಪ್ರಾಥಮಿಕ ಶಾಲೆಗಿಂತ ಪ್ರೌಢಶಾಲೆ, ಅಲ್ಲಿಗಿಂತ ಪದವಿ ಕಾಲೇಜು, ಸ್ನಾತಕೋತ್ತರ ಕಾಲೇಜುಗಳಲ್ಲಿ ಪಾಠಕ್ಕೆ, ಅಂದರೆ ಕೆಲಸ ಮಾಡುವುದಕ್ಕೆ ಪ್ರತ್ಯೇಕ ಸಮಯ ನಿಗದಿಯಾಗಿರುತ್ತದೆ. ಒಂದು ರೀತಿಯಲ್ಲಿ ಕೆಳಹಂತದಲ್ಲಿನ ಕೆಲಸದ ಅವಧಿ ಜಾಸ್ತಿ, ಮೇಲಿನ ಹಂತಗಳಲ್ಲಿ ಕಡಿಮೆ ಎಂಬಂತೆ ಕಂಡುಬರುತ್ತದೆ. ಇದು ಬಹುಶಃ ಮೇಲಿನ ಸ್ತರದಲ್ಲಿ ಕೆಲಸ ಮಾಡುವವರು ತಮ್ಮ ಕೆಲಸದ ಬಗ್ಗೆ ಹೆಚ್ಚು ಅಧ್ಯಯನ ನಡೆಸಿ ಮರುದಿನಕ್ಕೆ ತಯಾರಾಗಲಿ ಎಂಬ ಉದ್ದೇಶ ಹೊಂದಿರಬಹುದು. ಆದರೆ ಇಂದು ಅಧ್ಯಾಪಕರಲ್ಲಿ ಅಂತಹ ಅಧ್ಯಯನಶೀಲತೆ ಕಡಿಮೆಯಾಗುತ್ತಿದೆ ಎಂಬ ಆರೋಪ ಎಲ್ಲೆಡೆ ಕೇಳಿಬರುತ್ತಿದೆ. ಹೆಚ್ಚು ಅವಧಿ ಕೆಲಸ ಮಾಡುವವರಿಗಿಂತ ಕಡಿಮೆ ಅವಧಿಗೆ ಕೆಲಸ ಮಾಡುವವರಿಗೆ ಹೆಚ್ಚು ವೇತನ ದೊರಕುವುದು ಗಮನಿಸಬೇಕಾದ ಅಂಶ.

ಹೀಗೆ ಕೆಲಸದ ಅವಧಿಯನ್ನು ಒಬ್ಬ ವ್ಯಕ್ತಿ ಮಾಡಬಹುದಾದ ಕೆಲಸ ಹಾಗೂ ಶ್ರಮವನ್ನು ಗಮನದಲ್ಲಿರಿಸಿಕೊಂಡು ನಿರ್ಧಾರ ಮಾಡಲಾಗಿದೆ. ಆದರೆ ಇಂದು ಎಲ್ಲೆಡೆ ಅತ್ಯಾಧುನಿಕ ಸಲಕರಣೆಗಳು ಬಂದಿವೆ. ಮಾಡುವ ಕೆಲಸದಲ್ಲಿ ಶ್ರಮ ಕಡಿಮೆಯಾಗುತ್ತಿದೆ. ಇದರಿಂದಾಗಿ ಕೆಲಸದ ಅವಧಿಯಲ್ಲಿ ವ್ಯತ್ಯಯವಾಗುತ್ತಿದೆ. ಬ್ಯಾಂಕುಗಳಲ್ಲಿ ಕಂಪ್ಯೂಟರ್ ಅಳವಡಿಕೆಯಾದ ನಂತರ ಸಿಬ್ಬಂದಿಯ ಶ್ರಮದ ಕೆಲಸ ಕಡಿಮೆಯಾಗಿದೆ. ಹಿಂದೆ ಬ್ಯಾಂಕುಗಳಲ್ಲಿ ದೊಡ್ಡದಾದ, ಭಾರಿ ಲೆಡ್ಜರ್‌ಗಳನ್ನು ಅತ್ತಿತ್ತ ಸರಿಸುತ್ತಾ ದೈಹಿಕ ಶ್ರಮವಾಗುತ್ತಿತ್ತು. ಆದರೆ ಇಂದು ಹಾಗಿಲ್ಲ. ಕೂತಲ್ಲೇ ಕಂಪ್ಯೂಟರ್‌ನಲ್ಲಿ ಎಲ್ಲ ದಾಖಲೆಗಳನ್ನೂ ನೋಡಬಹುದು. ಹಾಗಾಗಿ ಸಿಬ್ಬಂದಿ ಇಡೀ ದಿನ ಖುರ್ಚಿಗೆ ಅಂಟಿಕೊಂಡು ಕೂರುವಂತಾಗಿದೆ. ಇದರಿಂದ ಅವರಲ್ಲಿ ದೈಹಿಕ ಚಟುವಟಿಕೆ ಕಡಿಮೆಯಾಗಿದ್ದು, ಅನಾರೋಗ್ಯ ಜಾಸ್ತಿಯಾಗುತ್ತಿದೆ. ಇದು ಸರಿ ಎನಿಸುವುದಿಲ್ಲ. ಆರೋಗ್ಯ ಸಮರ್ಪವಾಗಿರಬೇಕಾದರೆ ದೈಹಿಕ ಶ್ರಮ ಅಗತ್ಯ. ಇದರ ಬಗ್ಗೆ ಗಮನವಿರಬೇಕು.

ದೈಹಿಕ ಶ್ರಮಕ್ಕೆ ತಕ್ಕ ಹಾಗೇ ವಿಶ್ರಾಂತಿ ಬೇಕು. ದೈಹಿಕ ಶ್ರಮ ಕಡಿಮೆಯಾದಾಗ ಹೆಚ್ಚು ವಿಶ್ರಾಂತಿಯ ಅಗತ್ಯ ಕಂಡುಬರುವುದಿಲ್ಲ. ಹಾಗಾಗಿ ಇಂತಹ ಕೆಲಸ ಮಾಡುವವರು ಮತ್ತೊಂದು ರೀತಿಯ ದೈಹಿಕ ಶ್ರಮದ ಕೆಲಸವನ್ನು ಆಯ್ದುಕೊಳ್ಳಬೇಕಾಗುತ್ತದೆ. ಶ್ರಮವೇ ಇಲ್ಲದ ವಿಶ್ರಾಂತಿ ಸರಿಯಲ್ಲ.

ಕೆಲವರು ತಾವು ಬಹಳ ಕೆಲಸ ಮಾಡಿರುವುದಾಗಿ ಭಾವಿಸಿ ಹೆಚ್ಚು ವಿಶ್ರಾಂತಿ ಪಡೆಯಲು ಬಯಸುತ್ತಾರೆ. ಆದರೆ ಅದಕ್ಕೆ ನಮ್ಮ ದೇಹ ಸ್ಪಂದಿಸುತ್ತದೆಯೇ? ಎಂಬುದರ ಗಮನವಿರಬೇಕು. ಅಗತ್ಯವಿದ್ದಷ್ಟು ಮಾತ್ರ ವಿಶ್ರಾಂತಿ ಪಡೆಯಬೇಕು. ಸರ್ಕಾರಿ ಕಚೇರಿಗಳಲ್ಲಿ ಹಾಗೂ ಇನ್ನಿತರ ಕಡೆಗಳಲ್ಲಿ ಸಾಮಾನ್ಯವಾಗಿ ಮಧ್ಯಾಹ್ನ 30 ಅಥವಾ 45 ನಿಮಿಷ ವಿಶ್ರಾಂತಿ ಸಮಯ ನಿಗದಿಯಾಗಿರುತ್ತದೆ. ಈ ಅವಧಿಯಲ್ಲಿ ಆಹಾರ ಸೇವಿಸಿ, ಕೊಂಚ ಮಟ್ಟಿಗೆ ಆಯಾಸ ದೂರ ಮಾಡಿಕೊಳ್ಳಲಿ, ಮುಂದಿನ ಅವಧಿಯಲ್ಲಿ ಕೆಲಸ ಸರಿಯಾಗಿ ನಿರ್ವಹಿಸಲಿ ಎಂಬುದು ಇದರ ಉದ್ದೇಶ. ಇದು ವೈಜ್ಞಾನಿಕವೂ ಹೌದು. ನಾಲ್ಕಾರು ಗಂಟೆಗಳ ದುಡಿಮೆಯ ನಂತರ ಅಲ್ಪ ಕಾಲ ವಿಶ್ರಾಂತಿ ಪಡೆಯಬೇಕು ಹಾಗೂ ಇಲ್ಲಿ ವಿಶ್ರಾಂತಿ ಎಂದರೆ ನಿದ್ರೆ ಮಾಡುವುದಲ್ಲ. ಮತ್ತೆ ಕೆಲಸ ಮಾಡಲು ದೈಹಿಕವಾಗಿ ಸಿದ್ಧರಾಗಬೇಕು, ಅದಕ್ಕೆ ತಕ್ಕಂತಹ ಚಟುವಟಿಕೆಗೆ ಈ ಸಮಯ ಮೀಸಲು.

ಆದರೆ ಯಾವುದೇ ಕಾರಣಕ್ಕೂ ಕೆಲಸದ ಸಮಯದಲ್ಲಿ ವಿಶ್ರಾಂತಿ ಪಡೆಯಬಾರದು. ನಾನು ಹಾಗೆ ನನ್ನ ಮೇಲಧಿಕಾರಿಗಳಿಗೆ ಅರಿವಿಲ್ಲದಂತೆ ವಿಶ್ರಾಂತಿ ಪಡೆಯುತ್ತೇನೆ. ಅಷ್ಟರಲ್ಲಿ ಸಣ್ಣದಾಗಿ ನಿದ್ರೆಯನ್ನೂ ಮಾಡಿಬಿಡುತ್ತೇನೆ ಎಂದು ಕೆಲವರು ಅದು ತಮ್ಮ ಬುದ್ಧಿವಂತಿಕೆ ಎಂಬಂತೆ ಹೇಳಿಕೊಳ್ಳುತ್ತಾರೆ. ಆದರೆ ನಿಜವಾಗಿ ಅದು ನಮಗೆ ನಾವೇ ಮೋಸ ಮಾಡಿಕೊಂಡಂತೆ. ಕೆಲಸದ ಸಮಯದಲ್ಲಿ ನಮ್ಮ ಗಮನ ಕೆಲಸದ ಮೇಲೆ ಮಾತ್ರವೇ ಇರಬೇಕಾಗುತ್ತದೆ. ನಾವು ಮನೆಗೆ ಮರಳಿದ ನಂತರ ವಿಶ್ರಾಂತಿಯನ್ನು ಎಷ್ಟು ಪಡೆಯಬೇಕು, ಹೇಗೆ ಪಡೆಯಬೇಕು ಎಂಬುದು ನಮಗೆ ಬಿಟ್ಟ ವಿಚಾರ.

ಕೆಲಸದ ಸಮಯದಲ್ಲಿ ವಿಶ್ರಾಂತಿ ಪಡೆದ ಮೊಲದ ಕಥೆ ಏನಾಯಿತು ಎಂಬುದು ನಮಗೆ ಗೊತ್ತಿದೆ. ಆಮೆಯೊಡನೆ ಓಟದ ಸ್ಪರ್ಧೆಗೆ ಇಳಿದ ಮೊಲ, ಹೇಗೂ ಆಮೆ ನಿಧಾನವಾಗಿ ಚಲಿಸುವುದರಿಂದ ತಾನು ಮೊದಲು ಒಂದಷ್ಟು ದೂರ ವೇಗವಾಗಿ ಓಡಿ, ನಂತರ ತಾನು ಮೈ ಮರೆತು ವಿಶ್ರಾಂತಿ ಪಡೆಯುತ್ತದೆ. ಆದರೆ ಆಮೆ ನಿಧಾನವಾಗಿಯಾದರೂ ನಿರಂತರವಾಗಿ ಸಾಗಿ ಮೊಲಕ್ಕಿಂತ ಮೊದಲು ಗುರಿ ತಲುಪುತ್ತದೆ. ಈ ಕಥೆಯನ್ನು ನಾವು ಬಾಲ್ಯದಲ್ಲಿ ಕೇಳಿದ್ದೇವೆ. ಅಂದರೆ ಕೆಲಸದ ಸಮಯದಲ್ಲಿ ವಿಶ್ರಾಂತಿ ಪಡೆಯಬಾರದು, ಕೆಲಸದ ವೇಳೆ ನಿರಂತರವಾಗಿ ಕೆಲಸ ಮಾಡುತ್ತಿರಬೇಕು ಎಂಬುದನ್ನು ತಿಳಿಸಲು ಈ ಕಥೆಯನ್ನು ನಮ್ಮ ಪ್ರಾಥಮಿಕ ಶಾಲೆಗಳ ಪಠ್ಯದಲ್ಲಿ ಅಳವಡಿಸಲಾಗಿತ್ತು. ಆದರೆ ಅದು ನಮಗೀಗ ಮರೆತು ಹೋಗಿದೆ. ನಮಗಂತೂ ಕೆಲಸದ ಸಮಯದಲ್ಲಿ ವಿಶ್ರಾಂತಿಯತ್ತ ಮನಸ್ಸು ಎಳೆಯುತ್ತದೆ. ಹಾಗೆ ನೋಡಿದರೆ ಕಡಿಮೆ ಕೆಲಸ ಇರುವವರೇ ಹೆಚ್ಚು ವಿಶ್ರಾಂತಿ ಪಡೆಯಲು ಬಯಸುತ್ತಾರೆ. ಹೆಚ್ಚು ಕೆಲಸವಿರುವವರಿಗೆ ಕೆಲಸದ ಒತ್ತಡದಿಂದಾಗಿ ಕೆಲಸ ಮುಗಿದರೆ ಸಾಕು, ವಿಶ್ರಾಂತಿ ಎಲ್ಲ ನಂತರ ಎನಿಸುತ್ತದೆ. ಅಂತಹವರು ಬಹು ಚಟುವಟಿಕೆಯಿಂದ ಕೂಡಿರುತ್ತಾರೆ.

ಒಂದು ಅಧ್ಯಯನದ ಪ್ರಕಾರ ವಿಶ್ರಾಂತಿಯು ಸುಸ್ತನ್ನು ಜಾಸ್ತಿ ಮಾಡುತ್ತದೆ. ನಮಗೆ ಗೊತ್ತಿದೆ, ಹೆಚ್ಚು ದೂರ ನಡೆಯಬೇಕಾದವರು ಮಧ್ಯದಲ್ಲಿ ವಿಶ್ರಾಂತಿಗೆ ಎಂದು ಕುಳಿತರೆ, ನಂತರ ಮೊದಲಿನ ವೇಗದಲ್ಲಿ ನಡೆಯಲಾಗದು. ಬೆಟ್ಟ ಹತ್ತುವವರಿಗೂ ಇದೇ ಮಾತು ಅನ್ವಯವಾಗುತ್ತದೆ. ನಿರ್ಧರಿಸಿದಂತೆ ಒಂದೇ ವೇಗದಲ್ಲಿ ಬೆಟ್ಟ ಹತ್ತಿಬಿಡಿ. ಆಯಾಸ ಎಂದು ಕೂತರೆ ಬೆಟ್ಟ ಏರಲು ಮೊದಲಿಗಿಂತ ಎರಡರಷ್ಟು ಸಮಯ ಬೇಕಾಗುತ್ತದೆ. ಅಲ್ಲದೆ ಆಯಾಸ ಜಾಸ್ತಿಯಾಗುತ್ತದೆ. ಇದು ನಮ್ಮ ಕೆಲಸಗಳಿಗೂ ಅನ್ವಯವಾಗುತ್ತದೆ. ಮಾಡುವ ಕೆಲಸದ ನಡುವೆ ವಿಶ್ರಾಂತಿ ಉಳಿದ ಕೆಲಸದ ಅವಧಿಯನ್ನು ಜಾಸ್ತಿ ಮಾಡುತ್ತದೆ, ಅಲ್ಲದೆ ಮಾಡುವ ಕೆಲಸವೂ ಸಮರ್ಪಕವಾಗಿರುವುದಿಲ್ಲ. ಕಾರ್ಖಾನೆಗಳಲ್ಲಿ ಕೆಲಸ ಮಾಡುವವರು, ಅದರಲ್ಲೂ ಯಂತ್ರಗಳೊಡನೆ ದುಡಿಯುವವರು ಈ ವಿಷಯದಲ್ಲಿ ಬಹಳ ಎಚ್ಚರಿಕೆಯಿಂದಿರಬೇಕು.

ನಾವು ಹೇಗೆ ಬದುಕಬೇಕು ಎಂಬುದನ್ನು ಗಿಳಿಗಳಿಂದ ನೋಡಿ ಕಲಿಯಬೇಕು ಎಂದು ಹೇಳಲಾಗುತ್ತದೆ. ಗಿಳಿಗಳಾಗಲೀ ಬಹುತೇಕ ಪಕ್ಷಿಗಳು ಹಗಲಿನಲ್ಲಿ ನಿದ್ರಿಸುವುದಿಲ್ಲ. ಹಾಗೇ ರಾತ್ರಿ ಸಂಚರಿಸುವುದಿಲ್ಲ. ಅವು ಸದಾ ಎಚ್ಚರದಿಂದಿರುತ್ತವೆ. ಮರಿಗಳ ಹೆಚ್ಚು ಪೋಷಿಸುವುದಿಲ್ಲ. ಮರಿಗಳ ರೆಕ್ಕೆ ಬಲಿತದೊಡನೆ, ಹಾರಿ ಹೋಗುತ್ತವೆ. ಅದರತ್ತ ತಾಯಿಗೆ ಲಕ್ಷ್ಯವೇ ಇರಲ್ಲ. ಆಹಾರ ಸೇವನೆ ವಿಚಾರದಲ್ಲೂ ಅಷ್ಟೇ. ಅವುಗಳ ಹಸಿವಿಗಷ್ಟೇ ಆಹಾರ ಸೀಮಿತ. ಸಂಜೆ ಆಗುತ್ತಿದ್ದಂತೆಯೇ ಗೂಡು ಸೇರಲು ತಡಮಾಡುವುದಿಲ್ಲ. ಮುಂಜಾನೆ ಯಥಾ ಪ್ರಕಾರ ಗೂಡು ತೊರೆಯುತ್ತವೆ. ಇದೆಲ್ಲಾ ನಮಗೆ ಆದರ್ಶವಾಗಬೇಕು. ಅದರಲ್ಲೂ ನಮ್ಮ ಹಿರಿಯರು ಹೇಳುತ್ತಿದ್ದಂತೆ, ಆಚರಿಸುತ್ತಿದ್ದಂತೆ ಬೆಳಿಗ್ಗೆ ಬೇಗ ಎದ್ದು ಏನಾದರೂ ಕೆಲಸ ಆರಂಭಿಸಬೇಕು. ರಾತ್ರಿ ಬೇಗ ಮಲಗಬೇಕು. ಆದರೆ ಈಗ ಎಲ್ಲವೂ ತಿರುವು–ಮುರುವು. ಮಲಗುವುದು ತಡ, ಏಳುವುದೂ ತಡ.

ನಮಗೆ ಸೂರ್ಯ ಆದರ್ಶವಾಗಬೇಕು. ಜೈನ ಸಂಪ್ರದಾಯದಲ್ಲಿ ಆಹಾರಕ್ಕೂ ಸೂರ್ಯನನ್ನು ಆಧಾರವಾಗಿರಿಸಿಕೊಂಡಿರುವುದನ್ನು ಗಮನಿಸಬಹುದು. ಸೂರ್ಯಾಸ್ತದ ನಂತರ ಆಹಾರ ಸೇವಿಸಬಾರದು ಎಂಬ ನಿಯಮ ಆರೋಗ್ಯದ ದೃಷ್ಟಿಯಿಂದ ಸೂಕ್ತವಾದುದು. ಇಂದು ವೈದ್ಯರೂ ಇದನ್ನೇ ಹೇಳುತ್ತಾರೆ. ಆದಷ್ಟು ನಿದ್ರೆಗೆ ಮೂರ್‍ನಾಲ್ಕು ಗಂಟೆ ಮುಂಚಿತವಾಗಿ ಆಹಾರ ಸೇವಿಸಬೇಕು. ನಂತರ ಏನನ್ನೂ ಸೇವಿಸಬಾರದು. ರಾತ್ರಿ ಆಹಾರ ಸೇವಿಸದ ಕೂಡಲೇ ಮಲಗಬಾರದು. ಆದರೆ ಇಂದು ಅನೇಕರು ರಾತ್ರಿ ಊಟದ ಬಗ್ಗೆ ಆಲೋಚಿಸುವುದೇ ರಾತ್ರಿ ಒಂಭತ್ತು ಗಂಟೆಯ ನಂತರ.

ನಮ್ಮ ಆಹಾರ ಕ್ರಮ ಸರಿಯಿದ್ದರೆ ನಾವು ನಿರಂತರವಾಗಿ ಚಟುವಟಿಕೆಯಿಂದ ಇರಬಹುದು. ದಿನಕ್ಕೆ ಕನಿಷ್ಠ ಎಂಟು ಗಂಟೆಯಾದರೂ ಶ್ರಮ ಸಹಿತವಾಗಿ ಕೆಲಸ ಮಾಡಬೇಕು. ಆ ಸಮಯದಲ್ಲಿ ವಿಶ್ರಾಂತಿಯ ಬಗ್ಗೆ ಆಲೋಚಿಸಬಾರದು ಹಾಗೂ ವಿಶ್ರಾಂತಿ ಪಡೆಯಬಾರದು. ಒಳ್ಳೆಯ ನಿದ್ರೆ ಆರೋಗ್ಯಕ್ಕೆ ಪೂರಕ. ಒಳ್ಳೆಯ ನಿದ್ರೆಗೆ ದೈಹಿಕ ಶ್ರಮ ಪೂರಕ. ಇದನ್ನು ಗಮನದಲ್ಲಿರಿಸಿಕೊಂಡು ಕೆಲಸ ಮಾಡಬೇಕು. ಒಂದಂತೂ ಸತ್ಯ, ದುಡಿಮೆಗೆ ಎಂದಿದ್ದರೂ ಬೆಲೆ ಇದೆ. ಸೋಮಾರಿತನ ಸೋಲು. ಅದು ಅನಾರೋಗ್ಯಕ್ಕೂ ಆಹ್ವಾನ ನೀಡುತ್ತದೆ. ಮಾಡುವ ಕೆಲಸವನ್ನು ನಿಷ್ಠೆಯಿಂದ, ನಿಗದಿ ವೇಳೆಗೆ ಮಾಡಬೇಕು. ವಿಶ್ರಾಂತಿಯು ನಮ್ಮ ಶ್ರಮಕ್ಕೆ ತಕ್ಕುದಾಗಿರಬೇಕು.

ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರ, ಇಲ್ಲವೇ ವಿಭಾಗ ಮಟ್ಟದಲ್ಲಿ

ಪ್ರಕೃತಿ ಚಿಕಿತ್ಸೆ–ಯೋಗ ವೈದ್ಯಕೀಯ ಕಾಲೇಜು ಆರಂಭಿಸಲು ಮುಖ್ಯಮಂತ್ರಿ ಗಮನ ಸೆಳೆಯುವೆ

ಪ್ರಕೃತಿ ಚಿಕಿತ್ಸಾ ಸಪ್ತಾಹದ ಸಮಾರೋಪದಲ್ಲಿ ಶಾಸಕ ಕೆ.ಹರೀಶ್‌ಗೌಡ ಭರವಸೆ



ಮೈಸೂರಿನ ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯದ ಪುರುಷರ ವಿದ್ಯಾರ್ಥಿನಿಲಯದ ನೂತನ ಕಟ್ಟಡವನ್ನು ಶಾಸಕ ಕೆ.ಹರೀಶ್‌ಗೌಡ ಉದ್ಘಾಟಿಸಿದರು.

ಮೈಸೂರು,ನ.21(ಪಿಎಂ)– ರಾಜ್ಯದ ಜಿಲ್ಲಾ ಕೇಂದ್ರ ಅಥವಾ ವಿಭಾಗ ಮಟ್ಟದಲ್ಲಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಕಾಲೇಜು ಆರಂಭಿಸಲು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡುವುದಾಗಿ ಶಾಸಕ ಕೆ.ಹರೀಶ್‌ಗೌಡ ಹೇಳಿದರು.

ಮೈಸೂರಿನ ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ 7ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆ ಪ್ರಯುಕ್ತದ ಪ್ರಕೃತಿ ಚಿಕಿತ್ಸಾ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ನಮ್ಮ ಪೂರ್ವಜರು ಪ್ರಾಕೃತಿಕ ಚಿಕಿತ್ಸೆಯಲ್ಲಿ ತಮ್ಮ ಜೀವನ ಶೈಲಿಯಲ್ಲಿ ರೂಪಿಸಿಕೊಂಡಿದ್ದರು. ಇಡೀ ರಾಜ್ಯದಲ್ಲಿ ಸರ್ಕಾರಿ ಪ್ರಕೃತಿ ಚಿಕಿತ್ಸಾ ಮತ್ತು ಯೋಗ ವೈದ್ಯಕೀಯ ಕಾಲೇಜು ಇರುವುದು ಮೈಸೂರಿನಲ್ಲಿ ಮಾತ್ರ. ಹಾಗಾಗಿ ರಾಜ್ಯದ ವಿವಿಧ ಭಾಗಗಳಿಂದ ವಿದ್ಯಾರ್ಥಿಗಳು ಪ್ರಕೃತಿ ಚಿಕಿತ್ಸೆಯ ವ್ಯಾಸಂಗಕ್ಕಾಗಿ ಮೈಸೂರಿಗೇ ಬರಬೇಕಿದೆ. ಎಲ್ಲಾ ಜಿಲ್ಲಾ ಕೇಂದ್ರಗಳು ಅಥವಾ ವಿಭಾಗ ಮಟ್ಟದಲ್ಲಿ ಪ್ರಕೃತಿ ಚಿಕಿತ್ಸಾ ಕಾಲೇಜು ಆರಂಭವಾದರೆ ರಾಜ್ಯದ ವಿವಿಧ ಭಾಗಗಳ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ. ಹೀಗಾಗಿ ಮುಖ್ಯಮಂತ್ರಿಯವರ ಗಮನಕ್ಕೆ ಈ ವಿಚಾರ ತರುತ್ತೇನೆ ಎಂದರು.

ಈ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡಿದವರು ವಿದೇಶದಲ್ಲಿ ಹಾಗೂ ಅನೇಕರು ಸರ್ಕಾರಿ ಉದ್ಯೋಗದಲ್ಲಿದ್ದಾರೆ. ಈ ಸಂಸ್ಥೆಯು 2006ರಲ್ಲಿ ನಾಲ್ಕು ವಿದ್ಯಾರ್ಥಿಗಳಿಂದ ಪ್ರಾರಂಭಗೊಂಡಿತು. ಇದೀಗ ಪ್ರಸಕ್ತ ಸಾಲಿನಲ್ಲಿ 50 ವಿದ್ಯಾರ್ಥಿಗಳಿಗೆ ಏರಿಕೆಯಾಗಿರುವುದು ಶ್ಲಾಘನೀಯ. ಮುಂದಿನ ದಿನಗಳಲ್ಲಿ ಮತ್ತಷ್ಟು ವಿದ್ಯಾರ್ಥಿಗಳು ಹೆಚ್ಚಾಗಲಿ ಎಂದು ಆಶಿಸಿದರು.

ಇದೇ ವೇಳೆ ಕಾಲೇಜಿನ ಪುರುಷರ ವಿದ್ಯಾರ್ಥಿನಿಲಯದ ನೂತನ ಕಟ್ಟಡವನ್ನು ಶಾಸಕರು ಉದ್ಘಾಟಿಸಿದರು. ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ.ಲಕ್ಷ್ಮಿನಾರಾಯಣ ಶೆಣೈ, ಸಂಸ್ಥೆ ಪ್ರಾಂಶುಪಾಲ ಡಾ.ಕೆ.ಎಸ್.ರಾಧಾಕೃಷ್ಣ ರಾಮರಾವ್, ಅಭಿಯಂತರ ಸಿ.ಪುಟ್ಟಸ್ವಾಮಿ, ಜಗದೀಶ್ ಮತ್ತಿತರರಿದ್ದರು.

ಇಂದು ಮಾಲಗತ್ತಿ ದಶಬಲ ಟ್ರಸ್ಟ್, ರೈಟರ್ಸ್ ಅಕಾಡೆಮಿ ಉದ್ಘಾಟನೆ

ಮೈಸೂರು, ನ.21(ಜಿಎ)–ಮಾಲಗತ್ತಿ ದಶಬಲ ಟ್ರಸ್ಟ್, ರೈಟರ್ಸ್ ಅಕಾಡೆಮಿ ಉದ್ಘಾಟನೆ ಹಾಗೂ 4 ಕೃತಿಗಳ ಬಿಡುಗಡೆ ಸಮಾರಂಭವನ್ನು ನ.22ರಂದು ಬೆಳಗ್ಗೆ 11 ಗಂಟೆಗೆ ಮಾನಸ ಗಂಗೋತ್ರಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಬಿ.ಎಂ.ಶ್ರೀ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಉಪಾಧ್ಯಕ್ಷ ಡಾ.ಡಿ.ಕೆ.ರಾಜೇಂದ್ರ ಈ ವಿಷಯ ತಿಳಿಸಿ, ಹಿರಿಯ ಸಾಹಿತಿ ಪ್ರೊ.ಸಿ.ಪಿ.ಕೆ. ಟ್ರಸ್ಟ್ ಮತ್ತು ಅಕಾಡೆಮಿ ಉದ್ಘಾಟಿಸಲಿದ್ದಾರೆ. ಡಾ. ಮೈಲಹಳ್ಳಿ ರೇವಣ್ಣ, ಡಾ. ಯಶವಂತ ರೈ ಉಪಸ್ಥಿತರಿರಲಿದ್ದಾರೆ. ಟ್ರಸ್ಟ್ ಗೌರವಾಧ್ಯಕ್ಷ ಬಸವರಾಜು ಮಾಲಗತ್ತಿ ಎರಡು ಸಂಪುಟಗಳ ಲೋಕಾರ್ಪಣೆ ಮಾಡುವರು. ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕಿ ಪ್ರೊ.ಡಾ.ಎನ್.ಕೆ. ಲೋಲಾಕ್ಷಿ ಎರಡು ಕೃತಿ ಬಿಡುಗಡೆಗೊಳಿಸುವರು, ಕೃತಿ ಹಾಗೂ ಸಂಪುಟ ಕುರಿತು ಡಾ.ಎಸ್. ಚಂದ್ರಕಿರಣ್, ಡಾ. ಸಂತೋಷ್ ಚೊಕ್ಕಾಡಿ ಮಾತನಾಡಲಿದ್ದಾರೆ ಎಂದರು.

ಕ್ಲೀನ್ ಪ್ಲೇಟ್ ಅಭಿಯಾನಕ್ಕೆ ಚಾಲನೆ



ಕ್ಲೀನ್ ಪ್ಲೇಟ್ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಮೈಸೂರು, ನ.21– ಮೈಸೂರಿನ ವಿಜಯನಗರದಲ್ಲಿರುವ ಕೇರಳ ಸಮಾಜದ ಕಲ್ಯಾಣ ಮಂಟಪದಲ್ಲಿ ಶ್ರೀ ಐಜಿ ಸೇವಾ ಸಮಿತಿ ವತಿಯಿಂದ ಕ್ಲೀನ್ ಪ್ಲೇಟ್ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಬಳಿಕ ಮಾತನಾಡಿದ ಕರ್ಮಾರಂ, ಅನ್ನದಾನ ಮಹಾದಾನ. ಆಹಾರ ಚೆಲ್ಲುವ ಮುನ್ನ ಯೋಚಿಸಿ. ಒಂದು ಅಗುಳು ಅನ್ನದ ಹಿಂದೆ ಸಾವಿರಾರು ಜನರ ಪರಿಶ್ರಮವಿದೆ. ಸಮಾಜದ ಶುಭ ಸಮಾರಂಭಗಳಲ್ಲಿ ಏರ್ಪಡಿಸುವ ಆಹಾರ ವಿತರಣೆ ವೇಳೆ ಊಟ ಮಾಡಿ ಪ್ಲೇಟ್‌ನಲ್ಲಿ ಆಹಾರಗಳನ್ನು ಬಿಟ್ಟರೆ ಅವರಿಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಅಭಿಯಾನವನ್ನು ಪ್ರಾರಂಭಿಸಿದ್ದೇವೆ. ಪ್ಲೇಟ್‌ನಲ್ಲಿ ಇರುವ ಎಲ್ಲಾ ಆಹಾರವನ್ನು ಸೇವಿಸುವಂತೆ ಉತ್ತೇಜಿಸಲಾಗುವುದು. ಇದೇ ವೇಳೆ ಆಹಾರದ ಬಗ್ಗೆ ಜಾಗೃತಿಯನ್ನು ಸಹ ಮೂಡಿಸಲಾಗುವುದು. ಮುಂದಿನ ದಿನಗಳಲ್ಲಿ ಪ್ರತಿಯೊಂದು ಕಲ್ಯಾಣ ಮಂಟಪಕ್ಕೂ ತೆರಳಿ ಜಾಗೃತಿ ಮೂಡಿಸಲಾಗುವುದು ಎಂದು ಹೇಳಿದರು. ಈ ಸಂದರ್ಭದಲ್ಲಿ ತಂಡದ ಸದಸ್ಯರಾದ ಚೆನಾರಾಮ್, ಧರ್ಮಿಚಂದ್, ಮಂಗಳಾರಮ್, ಅಮರ್, ಗೌತಮ್, ದಿನೇಶ್ ಹಾಗೂ ಇನ್ನಿತರರು ಹಾಜರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581/1980 E-mail address: mysoorumithra@gmail.com For advertisements: mysoorumithra@gmail.com

ಲಂಚ ಸ್ವೀಕಾರ; ಹೂಟಗಳ್ಳಿ ನಗರಸಭೆ ಬಿಲ್ ಕಲೆಕ್ಟರ್ ಲೋಕಾಯುಕ್ತ ಬಲೆಗೆ

ಮೈಸೂರು, ನ. 21 (ಆರ್‌ಕೆ)– ಲಂಚ ಸ್ವೀಕರಿಸುತ್ತಿದ್ದಾಗ ಮೈಸೂರಿನ ಹೂಟಗಳ್ಳಿ ನಗರಸಭೆ ಬಿಲ್ ಕಲೆಕ್ಟರ್ ದಿನೇಶ್, ಬುಧವಾರ ಸಂಜೆ ಲಂಚದ ಹಣದ ಸಮೇತ ಲೋಕಾಯುಕ್ತ ಪೊಲೀಸರಿಗೆ ಸಿಕ್ಕಿ ಬಿದ್ದಿದ್ದಾರೆ.

ಹೂಟಗಳ್ಳಿ ವ್ಯಾಪ್ತಿಯ ಬೈರಪ್ಪ ಅವರಿಂದ ಜಿಪಿಎ ಪಡೆದಿದ್ದ ಮಂಡ್ಯದ ಚೇತನ್ ಎಂಬುವರು, ಆಸ್ತಿಗೆ ಸಂಬಂಧಿಸಿದ ಖಾತೆ (ಫಾರಂ ನಂ. 3) ಹಾಗೂ ಕಂದಾಯ ನಿಗದಿಗೆಂದು 2 ವರ್ಷಗಳ ಹಿಂದೆ ಹೂಟಗಳ್ಳಿ ನಗರಸಭಾ ಕಚೇರಿಗೆ ಅರ್ಜಿ ಸಲ್ಲಿಸಿದ್ದರು. ಅಲ್ಲಿಂದಲೂ 2 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟು ಸತಾಯಿಸುತ್ತಿದ್ದ ಕಚೇರಿ ಬಿಲ್ ಕಲೆಕ್ಟರ್ ದಿನೇಶ್, ಕಡೆಗೆ 1,80,000 ರೂ.ಗೆ ಸಹಮತಿಸಿದ್ದ.

ನಿನ್ನೆ (ಬುಧವಾರ) ಸಂಜೆ 7 ಗಂಟೆ ವೇಳೆಗೆ ಕಚೇರಿ ಎದುರಿನ ಹೈಟೆನ್ಷನ್ ರಸ್ತೆಯ ಬಳಿ ಚೇತನ್‌ರಿಂದ ಮುಂಗಡ 40,000 ರೂ. ಹಣ ಸ್ವೀಕರಿಸುತ್ತಿದ್ದಾಗ ಕಾರ್ಯಾಚರಣೆಗಿಳಿದ ಮೈಸೂರು ಲೋಕಾಯುಕ್ತ ಪೊಲೀಸರು, ದಿನೇಶ್‌ನನ್ನು ನಗದು ಸಮೇತ ಬಂಧಿಸುವಲ್ಲಿ ಯಶಸ್ವಿಯಾದರು. ಅರ್ಧ ದಿನ ಕೆಲಸ ಮಾಡಿದ ಆತ, ಅನಾರೋಗ್ಯದ ಕಾರಣ ಅನುಮತಿ ಪಡೆದು ಮಧ್ಯಾಹ್ನದ ನಂತರ ಮನೆಗೆ ಹೋಗಿದ್ದ. ಡಾಕ್ಟರ್ ಬಳಿ ಹೋಗಿ ಚಿಕಿತ್ಸೆ ಪಡೆದು, ನಂತರ ಚೇತನ್ ಅವರಿಗೆ ಹಣ ತರುವಂತೆ ದೂರವಾಣಿಯಲ್ಲಿ ಪದೇ ಪದೇ ಒತ್ತಾಯಿಸುತ್ತಿದ್ದ.

ಈ ಹಿನ್ನೆಲೆಯಲ್ಲಿ ಲೋಕಾಯುಕ್ತ ಎಸ್ಪಿ ಕಚೇರಿಗೆ ದೂರು ನೀಡಿದ್ದ ಚೇತನ್, ಬುಧವಾರ ಸಂಜೆ 7 ಗಂಟೆ ಸುಮಾರಿಗೆ ದಿನೇಶ್‌ಗೆ 40,000 ರೂ. ಹಣ ನೀಡುವಾಗ ಸುತ್ತುವರಿದಿದ್ದ ಲೋಕಾಯುಕ್ತ ಮೈಸೂರು ಕಚೇರಿ ಇನ್ಸ್‌ಪೆಕ್ಟರ್ ರವಿಕುಮಾರ್ ಹಾಗೂ ಸಿಬ್ಬಂದಿ ದಿನೇಶ್‌ನನ್ನು ಬಂಧಿಸಿದರು. ನಂತರ ಕಚೇರಿಗೆ ಕರೆತಂದು ರಾತ್ರಿಯಿಡೀ ಆತನನ್ನು ವಿಚಾರಣೆಗೊಳಪಡಿಸಿ, ಇಂದು ಮುಂಜಾನೆ ಆರೋಪಿಯನ್ನು ನ್ಯಾಯಾಧೀಶರ ನಿವಾಸದಲ್ಲಿ ಹಾಜರುಪಡಿಸಿದಾಗ ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಲೋಕಾಯುಕ್ತ ಎಸ್ಪಿ ಟಿ.ಜೆ. ಉದೇಶ್ ಅವರ ಮಾರ್ಗದರ್ಶನದಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದ ಇನ್ಸ್‌ಪೆಕ್ಟರ್ ರವಿಕುಮಾರ್, ರೂಪಶ್ರೀ, ಸಿಬ್ಬಂದಿಗಳಾದ ಲೋಕೇಶ್‌ರಾಜೇ ಅರಸ್, ಮೋಹನ್ ಕುಮಾರ್, ದಿನೇಶ್, ಮೋಹನ್‌ಗೌಡ ಹಾಗೂ ಇತರರು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಕಾವೇರಿ ನೀರಾವರಿ ನಿಗಮದ ಎಂಡಿ, ಹಿರಿಯ ಭೂ ವಿಜ್ಞಾನಿಯ ಕಚೇರಿ, ಮೈಸೂರು ಮನೆಗಳ ಮೇಲೆ ಲೋಕಾಯುಕ್ತ ದಾಳಿ

ಶೋಧನೆ ವೇಳೆ ಆದಾಯಕ್ಕೂ ಮೀರಿದ ಆಸ್ತಿ ಗಳಿಕೆಯ ಮಾಹಿತಿ, ದಾಖಲೆ ವಶಕ್ಕೆ

ಮೈಸೂರು, ನ.21(ಆರ್‌ಕೆ)–ಕರ್ನಾಟಕ ಲೋಕಾಯುಕ್ತ ಪೊಲೀಸರು ರಾಜ್ಯಾದ್ಯಂತ ಕೆಲವು ಇಲಾಖೆ ಅಧಿಕಾರಿಗಳ ಮನೆ, ಕಚೇರಿಗಳ ಮೇಲೆ ವಿವಿಧೆಡೆ ಇಂದು ಮುಂಜಾನೆಯೇ ದಾಳಿ ನಡೆಸಿ ಅಪಾರ ಪ್ರಮಾಣದ ನಗದು, ಚಿನ್ನಾಭರಣ, ಸ್ಥಿರಾಸ್ತಿಗಳ ಸಂಬಂಧ ಮಾಹಿತಿ ಪಡೆದು ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ.

ಕಾವೇರಿ ನೀರಾವರಿ ನಿಗಮ (ಸಿಎನ್‌ಎನ್‌ಎಲ್)ದ ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಹಾಗೂ ಮಂಗಳೂರಿನ ಹಿರಿಯ ಭೂವಿಜ್ಞಾನಿ ಕೃಷ್ಣವೇಣಿ ಎಂಬುವರ ಮೈಸೂರು, ಮಂಡ್ಯ, ಬೆಂಗಳೂರು ಹಾಗೂ ಮಂಗಳೂರಿನ ಕಚೇರಿ ಹಾಗೂ ಮನೆಗಳ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ, ಇಡೀ ದಿನ ಶೋಧ ನಡೆಸಿದರು. ಪ್ರತಿ ತಂಡದಲ್ಲಿ 9 ಮಂದಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಒಳಗೊಂಡ ಲೋಕಾಯುಕ್ತ ಪೊಲೀಸರು, ಬೆಳಗ್ಗೆ 6 ಗಂಟೆ ವೇಳೆಗೆ ಏಕಾಏಕಿ ದಾಳಿ ನಡೆಸಿ, ಸಂಜೆ 5 ಗಂಟೆಯವರೆಗೂ ಭ್ರಷ್ಟ ಅಧಿಕಾರಿಗಳ ಮನೆ ಹಾಗೂ ಕಚೇರಿಗಳಲ್ಲಿ ದಾಖಲೆಗಳ ಶೋಧ ನಡೆಸಿ, ಅಪಾರ ಪ್ರಮಾಣದ ನಗದು, ಚಿನ್ನಾಭರಣ, ಸ್ಥಿರಾಸ್ತಿಗಳಿಗೆ ಸಂಬಂಧಿಸಿದ ದಾಖಲೆಗಳನ್ನು ವಶಪಡಿಸಿಕೊಂಡರು.


ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಅವರ ಮೈಸೂರಿನ ವಿಜಯನಗರ ಮೊದಲ ಹಂತ, ದಿವ್ಯರೂಪ ಕಲ್ಯಾಣ ಮಂಟಪದ ಎದುರಿನ ಮನೆ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದರು.

ಪ್ರಸ್ತುತ, ಮಂಗಳೂರು ಭೂವಿಜ್ಞಾನ ಇಲಾಖೆಯಲ್ಲಿ ಹಿರಿಯ ಭೂ ವಿಜ್ಞಾನಿಯಾಗಿ ಸೇವೆ ಸಲ್ಲಿಸುತ್ತಿರುವ ಕೃಷ್ಣವೇಣಿ ಎಂಬುವರ ಮೂಲತಃ ಮೈಸೂರಿನ ಗೋಕುಲಂ 3ನೇ ಹಂತದ ನಿವಾಸಿಯಾಗಿದ್ದು, ಈ ಹಿಂದೆ ಮೈಸೂರಿನ ಭೂ ವಿಜ್ಞಾನ ಇಲಾಖೆಯಲ್ಲಿ ಸೇವೆ ಸಲ್ಲಿಸಿದ್ದರು. ಪ್ರಸ್ತುತ, ಮಂಗಳೂರಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅವರ ಮೈಸೂರಿನ ಗೋಕುಲಂ 3ನೇ ಹಂತದ ಮನೆ, ವಿಜಯನಗರ 2ನೇ ಹಂತದಲ್ಲಿನ ನಿರ್ಮಾಣ ಹಂತದ ಕಟ್ಟಡ, ಬೆಂಗಳೂರಿನ ಅಪಾರ್ಟ್‌ಮೆಂಟ್‌ವೊಂದರಲ್ಲಿ ಫ್ಲಾಟ್ ಹಾಗೂ ಮಂಗಳೂರಿನ ಕಚೇರಿ ಹಾಗೂ ಮನೆಗಳ ಮೇಲೆ ಏಕಕಾಲದಲ್ಲಿ ದಾಳಿ ನಡೆಸಿ, ಶೋಧಿಸಲಾಗಿದೆ.

ಈ ವೇಳೆ ಬ್ಯಾಂಕ್ ಖಾತೆಯಲ್ಲಿ ನಗದು, ಲಾಕರ್‌ಗಳಲ್ಲಿ ಚಿನ್ನಾಭರಣ, ಸ್ಥಿರ ಹಾಗೂ ಚರ ಆಸ್ತಿಗಳ ಪತ್ತೆಯಾಗಿದ್ದು, ಈ ಸಂಬಂಧ ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡಿರುವ ಲೋಕಾಯುಕ್ತ ಪೊಲೀಸರು, ಎಷ್ಟು ಪ್ರಮಾಣದ ಆಸ್ತಿ ಪತ್ತೆಯಾಗಿದೆ ಎಂಬುದನ್ನು ಪ್ರಕಟಿಸಿಲ್ಲ. ಅದೇ ರೀತಿ ಈ ಹಿಂದೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ಸೂಪರಿಂಟೆಂಡಿಂಗ್ ಇಂಜಿನಿಯರ್ ಆಗಿ ಸೇವೆ ಸಲ್ಲಿಸಿದ್ದ ಮಹೇಶ್, ಈಗ ಕಾವೇರಿ ನೀರಾವರಿ ನಿಗಮದಲ್ಲಿ ವ್ಯವಸ್ಥಾಪಕ ನಿರ್ದೇಶಕರಾಗಿದ್ದಾರೆ. ನಿಗದಿತ ಆದಾಯ ಮೀರಿ ಅನಧಿಕೃತವಾಗಿ ಅಧಿಕ ಆಸ್ತಿ ಸಂಪಾದಿಸಿದ್ದಾರೆ ಎಂಬ ದೂರಿನ ಹಿನ್ನೆಲೆಯಲ್ಲಿ ಲೋಕಾಯುಕ್ತ ಪೊಲೀಸರು, ಇಂದು ಬೆಳಿಗ್ಗೆ 6 ಗಂಟೆಯಿಂದ ಮೈಸೂರಿನ ವಿಜಯನಗರ ಮೊದಲ ಹಂತ, ದಿವ್ಯರೂಪ ಕಲ್ಯಾಣ ಮಂಟಪದ ಎದುರಿನ ಮನೆ, ಮಂಜುನಾಥಪುರದ ಬಳಿ ಇರುವ ನಿಗಮದ ಕಚೇರಿ, ಮಂಡ್ಯದ ಮನೆ ಹಾಗೂ ಇನ್ನಿತರ ಸ್ಥಳಗಳಲ್ಲಿ ಶೋಧ ನಡೆಸಿದರು. ವಾಣಿಜ್ಯ ಕಟ್ಟಡಗಳು, ನಿವೇಶನಗಳು, ಜಮೀನು, ಐಷಾರಾಮಿ ಕಾರು, ಪಂಪ್‌ಹೌಸ್ ಬಳಿಯ ಪೆಟ್ರೋಲ್ ಬಂಕ್, ಚಿನ್ನಾಭರಣ ಹಾಗೂ ಇನ್ನಿತರ ಚರ ಹಾಗೂ ಸ್ಥಿರ ಆಸ್ತಿಗಳು ಪತ್ತೆಯಾಗಿದ್ದು, ದಾಖಲೆಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಕರ್ನಾಟಕ ರಾಜ್ಯಾದ್ಯಂತ ವಿವಿಧ ಜಿಲ್ಲೆಗಳಲ್ಲಿ ಭ್ರಷ್ಟರ ಬೇಟೆಯಾಡುತ್ತಿರುವ ಲೋಕಾಯುಕ್ತ ಪೊಲೀಸರು ಎಲ್ಲೆಡೆ ತೀವ್ರ ಶೋಧ ಮುಂದುವರೆಸಿದ್ದು, ಅವರು ಗಳಿಸಿರುವ ಆಸ್ತಿಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಜಾಲಾಡುತ್ತಿದ್ದಾರೆ. ನಾಳೆ (ಶುಕ್ರವಾರ)ಯೂ ಶೋಧ ಕಾರ್ಯ ಮುಂದುವರೆಯಲಿದ್ದು ಇನ್ನಷ್ಟು ಆಸ್ತಿ ಹಾಗೂ ದಾಖಲೆಗಳು ಪತ್ತೆಯಾಗುವ ಸಾಧ್ಯತೆ ಇದೆ ಎಂದು ಹಿರಿಯ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಟೌನ್ ಪ್ಲಾನಿಂಗ್ ನಿರ್ದೇಶಕ ತಿಪ್ಪೇಸ್ವಾಮಿ ಅವರ ಬೆಂಗಳೂರು ಬನಶಂಕರಿಯ 3ನೇ ಹಂತದ ವಿಶ್ವೇಶ್ವರಯ್ಯ ರಸ್ತೆಯಲ್ಲಿರುವ ಮನೆ ಮೇಲೆ ದಾಳಿ ಮಾಡಿದ್ದು ಅಲ್ಲಿ ಕಂಡುಬಂದ ಅಪಾರ ಮೌಲ್ಯದ ಆಸ್ತಿ ದಾಖಲೆಗಳು, ಚಿನ್ನಾಭರಣ ನೋಡಿ ಅಧಿಕಾರಿಗಳೇ ಶಾಕ್ ಆಗಿದ್ದಾರೆ. 23ಕ್ಕೂ ಹೆಚ್ಚು ಚಿನ್ನದ ಸರ, 28ಕ್ಕೂ ಹೆಚ್ಚು ಜೊತೆ ಓಲೆ, ಮುತ್ತಿನ ಹಾರ ಪತ್ತೆಯಾಗಿದೆ. ಇದು ಅಷ್ಟೇ ಅಲ್ಲದೆ ಕೋಟಿ ರೂಪಾಯಿ ಮೌಲ್ಯದ ಚಿನ್ನದ ನೆಕ್ಲೆಸ್, ಚಿನ್ನದ ಉಂಗುರಗಳು, 8 ಲಕ್ಷ ರೂಪಾಯಿ ನಗದು ಪತ್ತೆಯಾಗಿದ್ದು ಜೊತೆಗೆ ದುಬಾರಿ ಬೆಲೆಯ ಬ್ರಾಂಡೆಡ್ ವಾಚ್‌ಗಳು ಸಿಕ್ಕಿವೆ.

ಬೆಂಗಳೂರಿನ ಕನಕಪುರ ರಸ್ತೆಯಲ್ಲಿರುವ ಅಬಕಾರಿ ಇಲಾಖೆ ಎಸ್‌ಪಿ ಮನೆ ಮೇಲೂ ಲೋಕಾಯುಕ್ತ ದಾಳಿ ನಡೆದಿದೆ. ಬೆಳಗ್ಗೆ 6 ಗಂಟೆಯ ವೇಳೆ ಅಬಕಾರಿ ಇಲಾಖೆ ಎಸ್‌ಪಿ ಮೋಹನ್ ಮನೆ ಮೇಲೆ ರೇಡ್ ಮಾಡಲಾಗಿದ್ದು, ಮಹತ್ವದ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ.

ಬೆಂಗಳೂರು ನಗರದ ಅಬಕಾರಿ ಅಧೀಕ್ಷಕ ಮೋಹನ್ ಕೆ. ಸೇರಿದಂತೆ ಅಧಿಕಾರಿಗಳ ಮನೆ ಮೇಲೆ ದಾಳಿ ನಡೆಸಿದ್ದಾರೆ. ಜುಲೈನಲ್ಲಿ, ಕರ್ನಾಟಕ ಲೋಕಾಯುಕ್ತ, ರಾಜ್ಯದ 12 ಅಧಿಕಾರಿಗಳ ವಿರುದ್ಧ ದಾಳಿಗಳನ್ನು ನಡೆಸಿತ್ತು. ಬೆಂಗಳೂರು ನಗರದಲ್ಲಿ ಆರು, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಬ್ಬರು, ಶಿವಮೊಗ್ಗ ಜಿಲ್ಲೆಯಲ್ಲಿ ಇಬ್ಬರು, ಹಾಗೂ ಯಾದಗಿರಿ ಮತ್ತು ತುಮಕೂರಿನಲ್ಲಿ ತಲಾ ಒಬ್ಬ ಅಧಿಕಾರಿಗಳ ನಿವಾಸಗಳ ಮೇಲೆ ಲೋಕಾಯುಕ್ತ ದಾಳಿ ನಡೆಸಿದೆ. ಅಧಿಕಾರಿಗಳಿಗೆ ಸೇರಿದ 54 ಸ್ಥಳಗಳ ಮೇಲೆ ದಾಳಿ ನಡೆಸಲಾಗಿತ್ತು.

ವಕ್ಫ್ ವಿಚಾರದಲ್ಲಿ ಅನಗತ್ಯ ಹೋರಾಟ

ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ನಂತರವೂ ಪ್ರತಿಭಟನೆ ಸರಿಯಲ್ಲ : ಡಾ.ಪರಮೇಶ್ವರ್

ಮೈಸೂರು, ನ.21(ಎಸ್‌ಬಿಡಿ)– ವಕ್ಫ್ ಮಂಡಳಿ ನೋಟಿಸ್ ಸಂಬಂಧ ಮುಖ್ಯಮಂತ್ರಿಗಳು ಈಗಾಗಲೇ ಸ್ಪಷ್ಟನೆ ನೀಡಿದ್ದರೂ ಪ್ರತಿಪಕ್ಷದವರು ರಾಜಕೀಯ ಕಾರಣಕ್ಕೆ ಪ್ರತಿಭಟನೆ ಮಾಡುತ್ತಿದ್ದಾರೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು.



ಮೈಸೂರಿನ ಕಾಂಗ್ರೆಸ್ ಭವನದ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ವಕ್ಫ್ ಮಂಡಳಿ ನೀಡಿದ್ದ ನೋಟಿಸ್ ವಾಪಸ್ ಪಡೆಯಬೇಕು. ನಂತರ ಎಲ್ಲವನ್ನೂ ಪರಿಶೀಲನೆ ಮಾಡುತ್ತೇವೆ ಎಂದು ಈಗಾಗಲೇ ಮುಖ್ಯಮಂತ್ರಿಗಳು ಹೇಳಿಕೆ ನೀಡಿದ್ದಾರೆ. ಆದರೂ ವಿರೋಧ ಪಕ್ಷದವರು ರಾಜಕೀಯ ಕಾರಣಕ್ಕಾಗಿ ಎಲ್ಲಾ ಜಿಲ್ಲೆಗಳನ್ನೂ ಪ್ರತಿಭಟನೆ ಮಾಡುತ್ತಿದ್ದಾರೆ ಎಂದರು.

ಸಹಕಾರ ಇಲಾಖೆ ಕಾರ್ಯಕ್ರಮ ನಿಮಿತ್ತ ಮುಖ್ಯಮಂತ್ರಿಗಳು ದೆಹಲಿಗೆ ಭೇಟಿ ನೀಡಿದ್ದಾರೆ. ಅದರ ಹೊರತು ಬೇರೆ ಯಾವ ಬೆಳವಣಿಗೆಯೂ ಇರಲು ಸಾಧ್ಯವಿಲ್ಲ. ಸಚಿವ ಸಂಪುಟ ಪುನರ್‌ರಚನೆ ಬಗ್ಗೆ ನನಗೆ ಗೊತ್ತಿಲ್ಲ. ಅದು ನಮಗೆಲ್ಲಾ ಹೇಳಿ ಮಾಡುವಂತದ್ದಲ್ಲ. ಮುಖ್ಯಮಂತ್ರಿಗಳು ಹಾಗೂ ಹೈಕಮಾಂಡ್‌ನವರು ಚರ್ಚಿಸಿ, ಸಂದರ್ಭಾನುಸಾರ ತೀರ್ಮಾನ ಮಾಡುತ್ತಾರೆ. ಸಚಿವ ಜಮೀರ್ ಅಹಮ್ಮದ್ ಖಾನ್ ಬದಲಾವಣೆ ಕುರಿತ ಯಾವುದೇ ವಿಚಾರವು ನನಗೆ ಗೊತ್ತಿಲ್ಲ ಎಂದು ತಿಳಿಸಿದರು.

ಗೆಲುವಿನ ವಿಶ್ವಾಸವಿದೆ: ಚುನಾವಣೋತ್ತರ ಸಮೀಕ್ಷೆಗಳೆಲ್ಲವೂ ಎಲ್ಲಾ ಸಂದರ್ಭದಲ್ಲೂ ನಿಜ ಆಗೋದಿಲ್ಲ. ನಾನು ಮಹಾರಾಷ್ಟ್ರ ಉಸ್ತುವಾರಿಯಾಗಿದ್ದೆ. ಅಲ್ಲಿ ಬೇರೆಯದೇ ವಾತಾವರಣ ಇದೆ. ಕೆಲ ಸರ್ವೆಗಳು ಎನ್‌ಡಿಎ ಪರ, ಕೆಲ ಸರ್ವೆಗಳು ಐಎನ್‌ಡಿಐಎ ಪರ ಫಲಿತಾಂಶ ಅಂದಾಜಿಸಿವೆ. ಆದರೆ ಮಹಾರಾಷ್ಟ್ರದಲ್ಲಿ ಐಎನ್‌ಡಿಐಎ ಮೈತ್ರಿಕೂಟ ಗೆಲ್ಲುವ ವಿಶ್ವಾಸವಿದೆ. ಹಾಗೆಯೇ ರಾಜ್ಯದಲ್ಲಿ ಮೂರು ಕ್ಷೇತ್ರದ ಉಪಚುನಾವಣೆಯಲ್ಲೂ ಕಾಂಗ್ರೆಸ್ ಗೆಲ್ಲುವ ಭರವಸೆ ಇದೆ ಎಂದರು.

ಕೇಂದ್ರ ಸರ್ಕಾರವನ್ನು ಪ್ರಶ್ನಿಸಲಿ: ಬಿಪಿಎಲ್ ಕಾರ್ಡ್ ರದ್ದು ಸಂಬಂಧ ಪ್ರತಿಕ್ರಿಯಿಸಿ, ಬಿಜೆಪಿಯವರು ರಾಜ್ಯದಲ್ಲಿ ನಮ್ಮನ್ನು ಕೇಳುವ ಮೊದಲು ಕೇಂದ್ರ ಸರ್ಕಾರವನ್ನು ಪ್ರಶ್ನೆ ಮಾಡಲಿ. ಕೇಂದ್ರದವರು 5.8 ಕೋಟಿ ಬಿಪಿಎಲ್ ಕಾರ್ಡ್ ರದ್ದು ಮಾಡಿದ್ದಾರೆ. ಅವರನ್ನು ಮೊದಲು ಕೇಳಲಿ ಆಮೇಲೆ ನಮ್ಮನ್ನು ಪ್ರಶ್ನಿಸಲಿ ಎಂದು ಪರಮೇಶ್ವರ್ ತಿರುಗೇಟು ನೀಡಿದರು.

ನಟ ದರ್ಶನ್ ಚಿಕಿತ್ಸೆಪಡೆಯುವ ಸಲುವಾಗಿ ಆರು ವಾರ ಬೇಲ್ ತೆಗೆದುಕೊಂಡಿದ್ದಾರೆ ಚಿಕಿತ್ಸೆ ಪಡೆದು ಮತ್ತೆ ವಾಪಸ್ ಹೋಗಬೇಕಾಗುತ್ತೆ ದರ್ಶನ್ ಮತ್ತೆ ಮುಂದುವರಿದು ಬೇಲ್ ಕೇಳುವ ವಿಚಾರ ನಮಗೆ ಗೊತ್ತಿಲ್ಲ ಮತ್ತೆ ಬೇಲ್ ಕೊಡಬಾರದು ಎಂದು ಸುಪ್ರೀಂ ಕೋರ್ಟ್‌ಗೆ ಮನವಿ ಮಾಡುವ ಪ್ರಕ್ರಿಯೆ ನಮ್ಮಿಂದ ನಡೆಯುತ್ತಿದೆ. ಹೆಚ್ಚುವರಿ ಚಾರ್ಜ್‌ಶೀಟ್ ಸಲ್ಲಿಸಲು ಮತ್ತಷ್ಟು ಸಾಕ್ಷ್ಯಾಧಾರ ಸಂಗ್ರಹಿಸಲಾಗುತ್ತಿದೆ ಎಂದು ಇದೇ ವೇಳೆ ತಿಳಿಸಿದರು.

ರೈತರ ಸಾಲಕ್ಕೆ ಕುತ್ತು; ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮನವರಿಕೆ

ನಬಾರ್ಡ್ ಆರ್ಥಿಕ ನೆರವು ಕಡಿತ ಹಿನ್ನೆಲೆ

ಬೆಂಗಳೂರು, ನ.21(ಕೆಎಂಶಿ)–ಆರ್‌ಬಿಐ ಮತ್ತು ನಬಾರ್ಡ್ ಸಂಸ್ಥೆಗಳಿಗೆ ಸೂಚನೆ ನೀಡಿ ಕರ್ನಾಟಕದ ರೈತರಿಗೆ ಆಗಿರುವ ಸಾಲದ ಹೊರೆ ಸರಿಪಡಿಸಿ, ಅನ್ಯಾಯ ಸರಿದೂಗಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಲ್ಲಿ ಮನವಿ ಮಾಡಿಕೊಂಡಿದ್ದಾರೆ.


ಸಿಎಂ ಸಿದ್ದರಾಮಯ್ಯ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ನವದೆಹಲಿಯ ಕಚೇರಿಯಲ್ಲಿ ಭೇಟಿ ಮಾಡಿದರು.

ರೈತರಿಗೆ ಸಹಕಾರ ಬ್ಯಾಂಕ್‌ಗಳ ಮೂಲಕ ಸಾಲ ನೀಡಲು ನಬಾರ್ಡ್ ನೀಡುತ್ತಿದ್ದ ಆರ್ಥಿಕ ನೆರವಿನ ಪ್ರಮಾಣ ಕಡಿಮೆ ಮಾಡಿದ್ದು, ಇದರಿಂದ ರಾಜ್ಯದ ರೈತರು ಸಂಕಷ್ಟಕ್ಕೆ ಸಿಲುಕಲಿದ್ದಾರೆ.

ಕಳೆದ ವರ್ಷ ನಬಾರ್ಡ್ ಕರ್ನಾಟಕಕ್ಕೆ 5,600 ಕೋಟಿ ರೂ. ಆರ್ಥಿಕ ನೆರವು ನೀಡಿತ್ತು, ಈ ಬಾರಿ ಅದನ್ನು 2340 ಕೋಟಿ ರೂ.ಗಳಿಗೆ ಇಳಿಕೆ ಮಾಡಿದೆ. ಇದರಿಂದ ರಾಜ್ಯಕ್ಕೆ ದೊಡ್ಡ ಅನ್ಯಾಯವಾಗಿದೆ ಎಂದು ತಿಳಿಸಿದರು.

2024–25ನೇ ಸಾಲಿನಲ್ಲಿ 9162 ಕೋಟಿ ರೂ ರಿಯಾಯಿತಿ ಸಾಲ ಮಿತಿಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ, ನಬಾರ್ಡ್ 2340 ಕೋಟಿ ರೂ.ಗಳಿಗೆ ಮಾತ್ರ ಅನುಮೋದನೆ ನೀಡಿದೆ, ಇದು ಕಳೆದ ವರ್ಷಕ್ಕಿಂತಲೂ ಶೇ.58 ರಷ್ಟು ಕಡಿಮೆಯಾಗಿದೆ.

ಆರ್‌ಬಿಐ ಸಾಮಾನ್ಯ ಸಾಲ ನೀತಿ ಕಡಿಮೆ ಮಾಡಿರುವುದರಿಂದಾಗಿ ಪ್ರಸಕ್ತ ವರ್ಷದ ರಿಯಾಯಿತಿ ದರ ಸಾಲ ಮಿತಿಯನ್ನೂ ಕಡಿತ ಮಾಡಬೇಕಿದೆ ಎಂಬುದಾಗಿ ನಬಾರ್ಡ್ ತಿಳಿಸಿದೆ. ಕರ್ನಾಟಕದಲ್ಲಿ ಈ ಬಾರಿ ಉತ್ತಮ ಮಳೆಯಾಗಿದ್ದು, ಮುಂಗಾರು ಚಟುವಟಿಕೆಗಳು ಚುರುಕುಗೊಂಡಿವೆ. ಹೀಗಾಗಿ ಅಲ್ಪಾವಧಿ ಕೃಷಿ ಸಾಲ ಬೇಡಿಕೆ ಹೆಚ್ಚಿದೆ ಎಂದು ವಿವರಿಸಿದ್ದಾರೆ.

2019–20ನೇ ಸಾಲಿನಲ್ಲಿ 4200 ಕೋಟಿ ರೂ. ಕೃಷಿ ಸಾಲ ಮಂಜೂರಾಗಿತ್ತು ನಂತರ ಹೆಚ್ಚುವರಿಯಾಗಿ 700 ಕೋಟಿ ರೂ.ಗಳಿಗೆ ಅನುಮೋದನೆ ನೀಡಿದ್ದು, ಶೇ.15ರಷ್ಟು ಹೆಚ್ಚಿಸಲಾಗಿತ್ತು, 2020–21ರಲ್ಲಿ 5,500 ಕೋಟಿ ರೂ.ಗೆ ಅನುಮೋದನೆ ನೀಡಿ 1,300 ಕೋಟಿ ರೂಗಳ ಹೆಚ್ಚುವರಿಯೊಂದಿಗೆ ಶೇ.27ರಷ್ಟು, 2022–23ರಲ್ಲಿ 5,550 ಕೋಟಿ ರೂ. ಜೊತೆಗೆ 66 ಕೋಟಿ ರೂ.ಗಳ ಹೆಚ್ಚುವರಿಯೊಂದಿಗೆ ಶೇ.1ರಷ್ಟು, 2023–24ರಲ್ಲಿ 5,600 ಕೋಟಿ ರೂ. ಜೊತೆಗೆ 55 ಕೋಟಿ ರೂ. ಹೆಚ್ಚುವರಿಯೊಂದಿಗೆ ಶೇ.1ರಷ್ಟು ಸಾಲ ಪ್ರಮಾಣ ಹೆಚ್ಚಿಸಲಾಗಿತ್ತು.

2021–22ನೇ ಸಾಲಿನಲ್ಲಿ 5483 ಕೋಟಿ ರೂ.ಗಳ ಮಂಜೂರಾತಿ ನೀಡಿದ್ದು, 16 ಕೋಟಿ ರೂ.ಗಳನ್ನು ಕಡಿತ ಮಾಡಿ ಶೇ.1 ರಷ್ಟು ತಗ್ಗಿಸಲಾಗಿತ್ತು. ಈ ವರ್ಷ 2340 ಕೋಟಿ ರೂ.ಗಳಿಗೆ ಮಾತ್ರ ಮಂಜೂರಾತಿ ನೀಡಿ 3260 ಕೋಟಿ ರೂ.ಗಳನ್ನು ಕಡಿತ ಮಾಡುವ ಮೂಲಕ ಶೇ.58 ರಷ್ಟು ಸಾಲದ ಮೊತ್ತವನ್ನು ಕಡಿಮೆ ಮಾಡಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರೇಣುಕಾಸ್ವಾಮಿ ಹತ್ಯೆ ಪ್ರಕರಣ

ದರ್ಶನ್ ಜಾಮೀನು ಅರ್ಜಿ ವಿಚಾರಣೆ ನ.26ಕ್ಕೆ ಮುಂದೂಡಿಕೆ

ದರ್ಶನ್ ವಿರುದ್ಧ ಹೆಚ್ಚುವರಿ ಚಾರ್ಜ್‌ಶೀಟ್ ಸಲ್ಲಿಸಿದ ಪೊಲೀಸರು

ಬೆಂಗಳೂರು, ನ.21–ರೇಣುಕಾಸ್ವಾಮಿ ಹತ್ಯೆ ಪ್ರಕರಣ ಆರೋಪಿ ನಟ ದರ್ಶನ್ ಜಾಮೀನು ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ನ.26ಕ್ಕೆ ಮುಂದೂಡಿದೆ. ನಟ ದರ್ಶನ್, ಪವಿತ್ರಾ ಗೌಡ ಸೇರಿ ಆರು ಮಂದಿ ಆರೋಪಿಗಳ ಜಾಮೀನು ಅರ್ಜಿ ವಿಚಾರಣೆ ಹೈಕೋರ್ಟ್ ಏಕಸದಸ್ಯ ಪೀಠದಲ್ಲಿ ಗುರುವಾರ ನಡೆಯಿತು. ಇದೀಗ ನ್ಯಾಯಮೂರ್ತಿ ವಿಶ್ವಜೀತ್ ಶೆಟ್ಟಿ ಅವರು ವಿಚಾರಣೆಯನ್ನು ನ.26ಕ್ಕೆ ಮುಂದೂಡಿದ್ದಾರೆ.



ಸ್ಪೆಷಲ್ ಪಬ್ಲಿಕ್ ಪ್ರಾಸಿಕ್ಯೂಟರ್ ಪ್ರಸನ್ನ ಕುಮಾರ್ ಅವರು ಇಂದಿನ ವಿಚಾರಣೆ ವೇಳೆ ದರ್ಶನ್ ಮಧ್ಯಂತರ ಜಾಮೀನಿನ ವೇಳೆ ಸೂಚಿಸಲಾಗಿದ್ದ ಕೆಲ ನಿಯಮಗಳನ್ನು ಪಾಲಿಸಿಲ್ಲ ಎಂದು ಹೇಳಿದರು. ಇದೇ ವೇಳೆ ದರ್ಶನ್ ಪರ ವಕೀಲ ಸಿ.ವಿ. ನಾಗೇಶ್ ಹೊಸ ವೈದ್ಯಕೀಯ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದರು.

ಈ ವೇಳೆ ವೈದ್ಯಕೀಯ ವರದಿ ಪ್ರತಿಯನ್ನು ನೀಡಿಲ್ಲವೆಂದು ಪ್ರಸನ್ನ ಕುಮಾರ್ ಆಕ್ಷೇಪಣೆ ಸಲ್ಲಿಸಿದರು. ಷರತ್ತಿನ ಮೇಲೆ 6 ವಾರಗಳ ಅವಧಿಗೆ ಮಧ್ಯಂತರ ಜಾಮೀನು ನೀಡಲಾಗಿದೆ. ಆದರೆ ಇನ್ನೂ ಸರ್ಜರಿಯ ದಿನಾಂಕ ತಿಳಿಸಿಲ್ಲ ಎಂದು ಪ್ರಸನ್ನ ಕುಮಾರ್ ವಾದಿಸಿದರು. ವೈದ್ಯಕೀಯ ವರದಿಯ ಪ್ರತಿಯನ್ನು ಪ್ರಸನ್ನ ಕುಮಾರ್ ಅವರಿಗೆ ಈ ವೇಳೆ ನೀಡಲಾಯಿತು. ವರದಿ ಪರಿಶೀಲಿಸಿ ಪ್ರತಿಕ್ರಿಯಿಸಲು ನ್ಯಾಯಮೂರ್ತಿಗಳು ಸೂಚಿಸಿದರು.

ರೇಣುಕಾಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ವಿರುದ್ಧ ನ್ಯಾಯಾಲಯಕ್ಕೆ ಪೊಲೀಸರು ಸಲ್ಲಿಸಿದ ಹೆಚ್ಚುವರಿ ಚಾರ್ಜ್‌ಶೀಟ್‌ನಲ್ಲಿ ಸಾವಿರಕ್ಕೂ ಅಧಿಕ ಪುಟಗಳಿವೆ. ಇದರಲ್ಲಿ 20ಕ್ಕೂ ಅಧಿಕ ಸಾಕ್ಷಿಗಳು ಹಾಗೂ ಹಲವು ಎಫ್‌ಎಸ್‌ಎಲ್ ವರದಿಗಳು ಇವೆ ಎನ್ನಲಾಗಿದೆ. ಸದ್ಯ ಘಟನೆ ನಡೆದ ಶೆಡ್‌ನಲ್ಲಿ ಕ್ಲಿಕ್ ಮಾಡಿರುವಂತಹ ಎರಡು ಫೋಟೋಗಳನ್ನು ಪೊಲೀಸರು ರಿಟ್ರೀವ್ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ ಇದರಲ್ಲಿ ದರ್ಶನ್ ನೀಲಿ ಬಣ್ಣದ ಟೀ–ಶರ್ಟ್ ಹಾಗೂ ಕಪ್ಪು ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿಕೊಂಡು ಶೆಡ್‌ನಲ್ಲಿ ಎಲ್ಲರ ಜೊತೆ ನಿಂತಿರುವ ಫೋಟೋ ಲಭಿಸಿದೆ ಎಂದು ಹೇಳಲಾಗುತ್ತಿದೆ.

ಪ್ರತ್ಯಕ್ಷದರ್ಶಿ ಪುನೀತ್ ಭಯದಿಂದ ಮೊಬೈಲ್‌ನಲ್ಲಿದ್ದ ಎರಡು ಫೋಟೋಗಳನ್ನು ಡಿಲೀಟ್ ಮಾಡಿದ್ದರು. ಆದರೆ ಈ ಫೋಟೋಗಳನ್ನು ಪೊಲೀಸರು ರಿಟ್ರೀವ್ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಭಾರತದ ಸಿಎಜಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಕೆ.ಸಂಜಯ್ ಮೂರ್ತಿ

ನವದೆಹಲಿ, ನ.21– ಉನ್ನತ ಶಿಕ್ಷಣ ಇಲಾಖೆಯ ಮಾಜಿ ಕಾರ್ಯದರ್ಶಿ ಕೆ.ಸಂಜಯ್ ಮೂರ್ತಿ, ಗುರುವಾರ ಭಾರತದ ನೂತನ ಕಂಟ್ರೋಲರ್ ಮತ್ತು ಆಡಿಟರ್ ಜನರಲ್(ಸಿಎಜಿ) ಆಗಿ ಪ್ರಮಾಣ ವಚನ ಸ್ವೀಕರಿಸಿದರು.



ರಾಷ್ಟ್ರಪತಿ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಂಜಯ್ ಮೂರ್ತಿ ಅವರಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಸಿಎಜಿ ಗಿರೀಶ್ ಚಂದ್ರ ಮುರ್ಮು ಅವರು ಬುಧವಾರ ನಿವೃತ್ತಿಯಾಗಿದ್ದು, ಅವರಿಂದ ತೆರವಾದ ಸ್ಥಾನಕ್ಕೆ ಹಿಮಾಚಲ ಪ್ರದೇಶ ಕೇಡರ್‌ನ 1989 ಬ್ಯಾಚ್‌ನ ಐಎಎಸ್ ಅಧಿಕಾರಿ ಸಂಜಯ್ ಮೂರ್ತಿ ಅವರನ್ನು ಸೋಮವಾರ ಕೇಂದ್ರ ಸರ್ಕಾರ ನೇಮಕ ಮಾಡಿತ್ತು.

ಇಂದು ಬೆಳಗ್ಗೆ 10 ಗಂಟೆಗೆ ರಾಷ್ಟ್ರಪತಿ ಭವನದ ಗಣತಂತ್ರ ಮಂಟಪದಲ್ಲಿ ನಡೆದ ಸಮಾರಂಭದಲ್ಲಿ ಭಾರತದ ಕಂಟ್ರೋಲರ್ ಮತ್ತು ಆಡಿಟರ್ ಜನರಲ್ ಆಗಿ ಕೆ.ಸಂಜಯ್ ಮೂರ್ತಿ ಅವರು ಪ್ರಮಾಣ ವಚನ ಸ್ವೀಕರಿಸಿದರು ಎಂದು ರಾಷ್ಟ್ರಪತಿ ಭವನ ಪ್ರಕಟಣೆಯಲ್ಲಿ ತಿಳಿಸಿದೆ.

ಉಪರಾಷ್ಟ್ರಪತಿ ಜಗದೀಪ್ ಧನಖರ್, ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಸೇರಿದಂತೆ ಇತರ ಗಣ್ಯರು ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಭಾರತದ ಶ್ರೀಮಂತ ಉದ್ಯಮಿ ಅದಾನಿ ವಿರುದ್ಧ ಅಮೆರಿಕಾದಲ್ಲಿ ಲಂಚ, ವಂಚನೆ ಪ್ರಕರಣ ದಾಖಲು

ಅರೆಸ್ಟ್ ವಾರೆಂಟ್ ಹೊರಡಿಸಿದ ನ್ಯೂಯಾರ್ಕ್ ಕೋರ್ಟ್



ನ್ಯೂಯಾರ್ಕ್, ನ.21– ಭಾರತದ ಎರಡನೇ ಸಿರಿವಂತ, ಅದಾನಿ ಗ್ರೂಪ್‌ನ ಗೌತಮ್ ಅದಾನಿಗೆ ಸಂಕಷ್ಟ ಎದುರಾಗಿದೆ. ಸೌರ ವಿದ್ಯುತ್ ಗುತ್ತಿಗೆಗೆ ಸಂಬಂಧಿಸಿದಂತೆ ಗೌತಮ್ ಅದಾನಿ ವಿರುದ್ಧ ಅಮೆರಿಕದಲ್ಲಿ ಶತಕೋಟಿ ಡಾಲರ್ ಲಂಚ ಹಾಗೂ ವಂಚನೆ ಪ್ರಕರಣ ದಾಖಲಾಗಿದ್ದು, ನ್ಯೂಯಾರ್ಕ್ ನ್ಯಾಯಾಲಯ ಅದಾನಿ ವಿರುದ್ಧ ಅರೆಸ್ಟ್ ವಾರೆಂಟ್ ಜಾರಿಗೊಳಿಸಿದೆ.

ಅಮೆರಿಕದ ನ್ಯೂಯಾರ್ಕ್ ಕೋರ್ಟ್‌ನಲ್ಲಿ ಗೌತಮ್ ಅದಾನಿ ಹಾಗೂ ಅವರ ಸೋದರಳಿಯ ಸಾಗರ್ ಅದಾನಿ ಸೇರಿ ಏಳು ಮಂದಿ ವಿರುದ್ಧ ಲಂಚ ಹಾಗೂ ವಂಚನೆ ಪ್ರಕರಣ ದಾಖಲಾಗಿದೆ. ಮುಂದಿನ 20 ವರ್ಷಗಳಲ್ಲಿ 2 ಶತಕೋಟಿ ಡಾಲರ್ ಲಾಭದ ನಿರೀಕ್ಷೆಯೊಂದಿಗೆ ಸೌರ ವಿದ್ಯುತ್ ಉತ್ಪಾದನಾ ಘಟಕ ಸ್ಥಾಪಿಸಲು ಭಾರತೀಯ ಸರ್ಕಾರಿ ಅಧಿಕಾರಿಗಳಿಗೆ ಸುಮಾರು 265 ಮಿಲಿಯನ್ ಡಾಲರ್ ಲಂಚ ನೀಡಿದ ಆರೋಪ ಗೌತಮ್ ಅದಾನಿ ಮೇಲೆ ಕೇಳಿಬಂದಿದೆ. ಇದು ಭಾರತೀಯ ರೂಪಾಯಿಯಂತೆ ಬರೋಬ್ಬರಿ 2,237 ಕೋಟಿ ಆಗಲಿದೆ. ಜೊತೆಗೆ ವಿದೇಶಿ ಹೂಡಿಕೆದಾರರಿಗೆ ತಪ್ಪು ಮಾಹಿತಿ ನೀಡಿದ ಆರೋಪ ಕೂಡ ಅದಾನಿ ಮೇಲಿದೆ. 2023ರಲ್ಲಿ ಅಮೆರಿಕದ ಹಿಂಡೆನ್‌ಬರ್ಗ್ ರಿಸರ್ಚ್ ಅದಾನಿ ಗ್ರೂಪ್ ಬಗ್ಗೆ ವರದಿ ಬಿಡುಗಡೆ ಮಾಡಿದ ಸಂದರ್ಭದಲ್ಲಿ ಲಂಚ ಪಾವತಿಯಾಗಿದೆ ಎಂದು ಹೇಳಲಾಗುತ್ತಿದೆ.

ಅಮೆರಿಕದ ಕೋರ್ಟ್‌ನಲ್ಲಿ ದಾಖಲಾಗಿರುವ ಪ್ರಕರಣದಲ್ಲಿ, ಗೌತಮ್ ಅದಾನಿಯನ್ನು ನ್ಯೂಮೆರೊ ಯುನೋ ಮತ್ತು ದಿ ಬಿಗ್ ಮ್ಯಾನ್ ಎಂದು ಕೋಡ್‌ಗಳಿಂದ ಕರೆಯಲಾಗುತ್ತಿತ್ತು ಎಂದು ಉಲ್ಲೇಖಿಸಲಾಗಿದೆ. ಅದಲ್ಲದೇ ಗೌತಮ್ ಅದಾನಿ, ಸಾಗರ್ ಅದಾನಿ ಮತ್ತು ಅದಾನಿ ಗ್ರೀನ್ ಎನರ್ಜಿ ಕಂಪನಿಯ ಉನ್ನತ ಅಧಿಕಾರಿ ವಿನೀತ್ ಜೈನ್ ಸಾಲದಾತರು, ಹೂಡಿಕೆದಾರರಿಂದ ಸುಮಾರು 300 ಕೋಟಿ ಡಾಲರ್ ಮೌಲ್ಯದ ಸಾಲ ಹಾಗೂ ಬಾಂಡ್‌ಗಳನ್ನು ಸಂಗ್ರಹಿಸಿದ್ದಾರೆ ಎಂದು ಪ್ರಾಸಿಕ್ಯೂಟರ್‌ಗಳು ತಮ್ಮ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಿದ್ದಾರೆ ಅದರ ಜೊತೆಗೆ ಅಮೆರಿಕದ ಲಂಚ ವಿರೋಧಿ ಕಾನೂನಾದ ವಿದೇಶಿ ಭ್ರಷ್ಟ ಆಚರಣೆಗಳ ಕಾಯಿದೆಯನ್ನು ಉಲ್ಲಂಘಿಸಲಾಗಿದೆ ಎಂದು ಪ್ರಕರಣವನ್ನು ದಾಖಲಿಸಲಾಗಿದೆ.

ಪ್ರಕರಣವನ್ನು ಡಿಕೋಡ್ ಮಾಡುತ್ತಾ ಹೋದರೆ ಒಂದಿಷ್ಟು ರೋಚಕ ಮಾಹಿತಿಗಳು ಬಯಲಿಗೆ ಬಂದಿವೆ ಚಾರ್ಜ್‌ಶೀಟ್ ಪ್ರಕಾರ, ಗೌತಮ್ ಅದಾನಿಯನ್ನು ಇಂಡಿಯನ್ ಎನರ್ಜಿ ಕಂಪನಿಯ ಸ್ಥಾಪಕ ಮತ್ತು ಚೇರ್‌ಮನ್ ಎಂದು ಉಲ್ಲೇಖಿಸಲಾಗಿದ್ದು, ಸಾಗರ್ ಅದಾನಿಯನ್ನು ಅದರ ಎಕ್ಸಿಕ್ಯೂಟಿವ್ ಡೈರೆಕ್ಟರ್ ಎಂದು ಹೇಳಲಾಗಿದೆ. ಭಾರತದ ಸರ್ಕಾರಿ ಸ್ವಾಮ್ಯದ ಸೋಲಾರ್ ಎನರ್ಜಿ ಕಾರ್ಪೊರೇಷನ್ ಆಫ್ ಇಂಡಿಯಾಗೆ 12 ಗಿಗಾ ವ್ಯಾಟ್‌ಗಳ ಸೌರಶಕ್ತಿ ಪೂರೈಸುವ ಒಪ್ಪಂದವನ್ನು ಇಂಡಿಯನ್ ಎನರ್ಜಿ ಕಂಪನಿ ಮತ್ತು ಯುಎಸ್ ಇಸ್ಯೂವರ್ ಕಂಪನಿಗಳು ಪಡೆದುಕೊಂಡಿವೆ. ಆದರೆ, ಮುಂದೆ ಭಾರತದಲ್ಲಿ ಸೌರಶಕ್ತಿ ಖರೀದಿಗೆ ಯಾರೂ ಮುಂದೆ ಬರದ ಕಾರಣಕ್ಕೆ ಸೆಸಿ ಮಾಡಿಕೊಂಡಿದ್ದ ಒಪ್ಪಂದ ಅಲ್ಲಿಂದೇ ನಿಂತಿತ್ತು ಎಂದು ಚಾರ್ಜ್‌ಶೀಟ್‌ನಲ್ಲಿ ಹೇಳಲಾಗಿದೆ.

ಸೆಸಿ ಜೊತೆ ಮಾಡಿಕೊಂಡಿದ್ದ ಒಪ್ಪಂದ ಮಧ್ಯದಲ್ಲಿಯೇ ನಿಂತಿದ್ದರಿಂದ ಎರಡು ಕಂಪನಿಗಳಿಗೆ ನಷ್ಟ ಆಗುತ್ತದೆ ಎಂದು ಅದಾನಿ ಗ್ರೂಪ್ ಮತ್ತು ಅಜುರೆ ಪವರ್ ಕಂಪನಿಗಳು ಭಾರತದ ಸರ್ಕಾರಿ ಅಧಿಕಾರಿಗಳಿಗೆ ಲಂಚ ನೀಡುವ ಯೋಜನೆ ರೂಪಿಸಿದರು. ಇದಕ್ಕಾಗಿ 265 ಮಿಲಿಯನ್ ಡಾಲರ್ ಲಂಚದ ಆಫರ್ ಅನ್ನು ನೀಡಿದ್ದು, ಆಂಧ್ರ ಪ್ರದೇಶದ ಅಧಿಕಾರಿಗಳಿಗೆ ಹೆಚ್ಚಿನ ಪಾಲನ್ನು ನೀಡಲು ಮುಂದಾಗಿದ್ದಾರೆ. ಇದರ ಬೆನ್ನಲ್ಲೇ ಸರ್ಕಾರಿ ಅಧಿಕಾರಿಗಳು ರಾಜ್ಯ ವಿದ್ಯುತ್ ವಿತರಣಾ ಕಂಪನಿಗಳನ್ನು ಸೆಸಿಯೊಂದಿಗೆ ವಿದ್ಯುತ್ ಸರಬರಾಜು ಒಪ್ಪಂದ ಮಾಡಿಕೊಳ್ಳುವಂತೆ ಒತ್ತಡ ಹಾಕುತ್ತಾರೆ. ಇದಾದ ನಂತರ ಕೆಲವು ರಾಜ್ಯಗಳ ವಿದ್ಯುತ್ ಕಂಪನಿಗಳು ಎರಡು ಕಂಪನಿಗಳಿಂದ ಸೌರ ವಿದ್ಯುತ್ ಖರೀದಿಸಲು ಸೆಸಿಯೊಂದಿಗೆ ಒಪ್ಪಂದ ಮಾಡಿಕೊಂಡಿವೆ ಎಂದು ಚಾರ್ಜ್‌ಶೀಟ್‌ನಲ್ಲಿ ವಿವರಿಸಲಾಗಿದೆ.

ಇದಾದ ಬಳಿಕ ಯುಎಸ್ ಇಸ್ಯೂವರ್ ಕಂಪನಿಯಲ್ಲಿ ನಾಯಕತ್ವ ಬದಲಾವಣೆಯಾಗಿದ್ದು, ಈ ಪ್ರಕರಣ ಹೊರಗೆ ಬರಲು ಕಾರಣವಾಯಿತು. ಭರವಸೆ ನೀಡಿದಂತೆ ಲಂಚವನ್ನು ಹೇಗೆ ಪಾವತಿಸುವುದು ಎಂಬುದರ ಬಗ್ಗೆ ಸಭೆ ಮೇಲೆ ಸಭೆಗಳು ನಡೆದಿದ್ದು, ಈ ವೇಳೆ ಯೋಜನೆಯ ಭಾಗಗಳ ವರ್ಗಾವಣೆ ಸೇರಿ, ಲಂಚವನ್ನು ಶುಲ್ಕವಾಗಿ ಪಾವತಿಸುವ ಬಗ್ಗೆ ನಿರ್ಧಾರವಾಗಿದೆ. ಅದಾದ ಬಳಿಕ ಅಜುರೆ ಪವರ್ ಕಂಪನಿ ವ್ಯಾಜ್ಯ ಮತ್ತು ದಿವಾಳಿತನದ ಕಾರಣ ನೀಡಿ ಯೋಜನೆಯನ್ನು ಇಂಡಿಯನ್ ಎನರ್ಜಿ ಕಂಪನಿಗೆ ವರ್ಗಾಯಿಸಲಾಗಿದೆ ಇದನ್ನು ಯುಎಸ್ ಇಸ್ಯೂವರ್ ಡೈರೆಕ್ಟರ್ ಬೋರ್ಡ್‌ಗೆ ತಿಳಿಸಿಲ್ಲ ಎಂದು ಹೇಳಲಾಗಿದ್ದು, ಈ ವರ್ಗಾವಣೆಯನ್ನು ಅನುಮೋದಿಸಲು ಸೆಸಿ ಮೇಲೆ ಪ್ರಭಾವವನ್ನು ಗೌತಮ್ ಅದಾನಿ ಬೀರಿದ್ದಾರೆ ಎಂದು ಚಾರ್ಜ್‌ಶೀಟ್‌ನಲ್ಲಿ ಹೇಳಲಾಗಿದೆ.

ಅದಾನಿ ಗ್ರೂಪ್‌ನೊಂದಿಗಿನ ಒಪ್ಪಂದ ರದ್ದುಗೊಳಿಸಿದ ಕೀನ್ಯಾ

ಕೀನ್ಯಾ, ನ.21– ಅಮೆರಿಕ ಜಿಲ್ಲಾ ನ್ಯಾಯಾಲಯ ಲಂಚ ವಂಚನೆ ಆರೋಪದಡಿ ಗೌತಮ್ ಅದಾನಿ ವಿರುದ್ಧ ಅರೆಸ್ಟ್ ವಾರೆಂಟ್ ಹೊರಡಿಸಿದ ಬೆನ್ನಲ್ಲೇ ಕೀನ್ಯಾ ಸರ್ಕಾರ ಅದಾನಿ ಗ್ರೂಪ್ ಜೊತೆ ಕಳೆದ ತಿಂಗಳು ಮಾಡಿಕೊಂಡಿದ್ದ ವಹಿವಾಟು ಒಪ್ಪಂದವನ್ನು ರದ್ದುಗೊಳಿಸಿದೆ.

ಕಳೆದ ತಿಂಗಳು ಅದಾನಿ ಗ್ರೂಪ್ ಹಾಗೂ ಕೀನ್ಯಾ ಸರ್ಕಾರದ ಮಹತ್ವದ ಒಪಂದಕ್ಕೆ ಸಹಿ ಹಾಕಿತ್ತು. ಕೀನ್ಯಾ ಪ್ರಮುಖ ವಿಮಾನ ನಿಲ್ದಾಣ ನಿರ್ವಹಣೆಯನ್ನು ಸರ್ಕಾರಿ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ನಿರ್ವಹಣೆ ಮಾಡಲು ಒಪ್ಪಿಗೆ ಸೂಚಿಸಿತ್ತು. ಭಾರತದ ಸೇರಿದಂತೆ ಹಲವು ದೇಶಗಳಲ್ಲಿ ಅದಾನಿ ಗ್ರೂಪ್ ವಿಮಾನ ನಿಲ್ದಾಣ ಹಾಗೂ ಬಂದರನ್ನು ನಿರ್ವಹಣೆ ಮಾಡುವ ಹೊಣೆ ಹೊತ್ತುಕೊಂಡಿದೆ. ಇದೇ ವಹಿವಾಟನ್ನು ಕೀನ್ಯಾಗೂ ವಿಸ್ತರಿಸಿತ್ತು. 30 ವರ್ಷಗಳ ಒಪ್ಪಂದವನ್ನು ಅದಾನಿ ಗ್ರೂಪ್ ಜೊತೆ ಕೀನ್ಯಾ ಮಾಡಿಕೊಂಡಿತ್ತು. ಬರೋಬ್ಬರಿ 735 ಮಿಲಿಯನ್ ಅಮೆರಿಕನ್ ಡಾಲರ್ ಮೊತ್ತದ ಒಪ್ಪಂದ ಈಗ ದಿಢೀರ್ ರದ್ದಾಗಿದೆ.

ಈ ಕುರಿತು ಮಾಹಿತಿಯನ್ನು ಕೀನ್ಯಾ ಅಧ್ಯಕ್ಷ ವಿಲಿಯಂ ರುಟೋ ನೀಡಿದ್ದಾರೆ. ಅಮೆರಿಕ ಸೌರಶಕ್ತಿ ಗುತ್ತಿಗೆ ಪಡೆಯಲು 2,500 ಕೋಟಿ ರೂಪಾಯಿ ಲಂಚವನ್ನು ಅಧಿಕಾರಿಗಳಿಗೆ ನೀಡಿದ್ದಾರೆ ಎಂಬ ಗಂಭೀರ ಆರೋಪ ಅದಾನಿ ಮೇಲೆ ಕೇಳಿಬಂದಿದೆ. ಅಮೆರಿಕ ನ್ಯಾಯಾಲಯ ಅದಾನಿ ವಿರುದ್ಧ ಅರೆಸ್ಟ್ ವಾರೆಂಟ್ ಹೊರಡಿಸಿದೆ. ಗುರುತರ ಆರೋಪ ಹಾಗೂ ಅರೆಸ್ಟ್ ವಾರೆಂಟ್ ಕಾರಣ, ಅದಾನಿ ಗ್ರೂಪ್ ಜೊತೆ ಮಾಡಿಕೊಂಡಿರುವ ವಿಮಾನ ನಿಲ್ದಾಣ ನಿರ್ವಹಣೆ ಒಪ್ಪಂದ ಈ ತಕ್ಷಣ ರದ್ದುಗೊಳಿಸುವಂತೆ ಸೂಚಿಸಲಾಗಿದೆ ಎಂದು ರುಟೋ ಹೇಳಿದ್ದಾರೆ. ಕೀನ್ಯಾ ಇಂಧನ ಸಚಿವರು ಹಾಗೂ ಅದಾನಿ ಗ್ರೂಪ್ ಮಹತ್ವದ ಒಪ್ಪಂದ ಸಹಿ ಹಾಕಿತ್ತು.

ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರ

ಮೈಸೂರು, ನ. 21– ಮೈಸೂರಿನ ಅಮೃತಾಂಶು ಟ್ರಸ್ಟ್, ನಾರಾಯಣ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ, ಮೈಸೂರು ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಮೈಸೂರು ಜಿಲ್ಲಾ ಸಂಚಾರಿ ನೇತ್ರ ಚಿಕಿತ್ಸಾ ಘಟಕದ ಸಂಯುಕ್ತ ಆಶ್ರಯದಲ್ಲಿ ನ. 25 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ #2767, ಪಾಂಚಜನ್ಯ, 5ನೇ ಮೇನ್, ಮೇದರಕೇರಿ, ಚಾಮುಂಡಿಪುರಂ ಇಲ್ಲಿ ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 9945270646, 9742634110 ಸಂಪರ್ಕಿಸಬಹುದು.

ಮಾಜಿ ಸಚಿವ ಮನೋಹರ್ ತಹಶೀಲ್ದಾರ್ ವಿಧಿವಶ




ಬೆಂಗಳೂರು, ನ.21– ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ಮಾಜಿ ಸಚಿವ ಮನೋಹರ್ ತಹಶೀಲ್ದಾರ್ ನಿಧನರಾಗಿದ್ದಾರೆ. ಹಾನಗಲ್ ಕ್ಷೇತ್ರದ ಮಾಜಿ ಶಾಸಕರಾಗಿದ್ದ ಮನೋಹರ್ ತಹಶೀಲ್ದಾರ್ ಅವರು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು.

2015ರಲ್ಲಿ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಅಬಕಾರಿ ಸಚಿವರಾಗಿದ್ದರು. 2023ರ ವಿಧಾನಸಭಾ ಚುನಾವಣೆಯಲ್ಲಿ ಟಿಕೆಟ್ ಸಿಗದ ಕಾರಣ ಕಾಂಗ್ರೆಸ್ ತೊರೆದು ಜೆಡಿಎಸ್ ಸೇರಿದ್ದರು. ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ತೊರೆದು ಬಿಜೆಪಿಗೆ ಸೇರ್ಪಡೆಯಾಗಿದ್ದರು. ಇತ್ತೀಚೆಗೆ ಸಂಸದ ಬಸವರಾಜ ಬೊಮ್ಮಾಯಿ ಅವರು ಆಸ್ಪತ್ರೆಗೆ ಭೇಟಿ ನೀಡಿ ಆರೋಗ್ಯದ ಬಗ್ಗೆ ವಿಚಾರಣೆ ನಡೆಸಿದ್ದರು. ಬಲಿಜ ಸಮುದಾಯಕ್ಕೆ ಸೇರಿದ್ದ ತಹಶೀಲ್ದಾರ್ 4 ಬಾರಿ ಶಾಸಕರಾಗಿ ಆಯ್ಕೆಯಾಗಿದ್ದು ಹಿಂದೆ ಎಸ್.ಎಂ. ಕೃಷ್ಣ ಅವರು ಮುಖ್ಯಮಂತ್ರಿಗಳಾಗಿದ್ದಾಗ ವಿಧಾನಸಭೆ ಉಪಾಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದರು.

ಮೈಸೂರು ಮಿತ್ರ

ಮಳವಳ್ಳಿ ಬಳಿ ಗ್ರಾಮಸ್ಥರಿಗೆ ಉಪಟಳ ನೀಡುತ್ತಿದ್ದ ಚಿರತೆ ಬೋನಿಗೆ



ಮಳವಳ್ಳಿ: ಹಲವು ದಿನಗಳಿಂದ ಗ್ರಾಮಸ್ಥರಿಗೆ ಉಪಟಳ ನೀಡುತ್ತಿದ್ದ ಚಿರತೆಯು ಬೋನಿಗೆ ಬಿದ್ದಿರುವ ಘಟನೆ ತಾಲೂಕಿನ ಜೋಗನಹಳ್ಳಿದೊಡ್ಡಿ ಗ್ರಾಮದಲ್ಲಿ ನಡೆದಿದೆ.

ನಾಲ್ಕು ವರ್ಷದ ಗಂಡು ಚಿರತೆಯೊಂದು ಗ್ರಾಮದಲ್ಲಿ ಹಲವು ದಿನಗಳಿಂದ ಬೀಡು ಬಿಟ್ಟು ಉಪಟಳ ನೀಡುತ್ತಿದ್ದರಿಂದ ಗ್ರಾಮಸ್ಥರು ಮತ್ತು ಮಕ್ಕಳು ಓಡಾಡುವುದು ಬಹಳ ಸಮಸ್ಯೆ ಆಗಿತ್ತು ಇದರಿಂದ ಬೇಸತ್ತಿದ್ದ ಜನ ಅರಣ್ಯ ಇಲಾಖೆ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದರು. ಇದರಿಂದ ಅರಣ್ಯ ಇಲಾಖೆ ಇತ್ತೀಚೆಗೆ ಬೋನ್ ಇಟ್ಟಿತ್ತು.

ಕಳೆದ ಹಲವು ದಿನಗಳಿಂದ ಗ್ರಾಮದಲ್ಲಿ ಉಪಟಳ ನೀಡುತ್ತಿದ್ದ ಚಿರತೆ ಹಿಡಿಯಲು ಗ್ರಾಮದ ವೆಂಕಟೇಶ್ ಎಂಬುವವರ ಜಮೀನಿನಲ್ಲಿ ಬೋನು ಇಟ್ಟಿದ್ದರಿಂದ ಚಿರತೆ ಬೋನಿಗೆ ಬಿದ್ದಿದ್ದು, ಗ್ರಾಮಸ್ಥರು ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು ನಿಟ್ಟುಸಿರು ಬಿಟ್ಟಿದ್ದಾರೆ.

ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದು ಉರುಳಿದ ಮಿನಿ ಬಸ್: 24 ಮಂದಿ ಶಬರಿ ಮಲೆ ಭಕ್ತರಿಗೆ ಗಾಯ



ಮೈಸೂರು–ಬೆಂಗಳೂರು ಹೆದ್ದಾರಿಯಲ್ಲಿ ಬ್ಯಾರಿಕೇಡ್‌ಗೆ ಡಿಕ್ಕಿ ಹೊಡೆದು ನಿಂತಿರುವುದು

ಮಂಡ್ಯ: ಶಬರಿಮಲೆ ಭಕ್ತರಿದ್ದ ಮಿನಿ ಬಸ್ಸೊಂದು ಆಕ್ಸಲ್ ಕಟ್ಟಾಗಿ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದು ಬೆಂಗಳೂರು–ಮೈಸೂರು ಹೆದ್ದಾರಿಯ ಸರ್ವಿಸ್ ರಸ್ತೆಗೆ ಉರುಳಿದ ಪರಿಣಾಮ ಬಸ್‌ನಲ್ಲಿದ್ದ ಚಾಲಕನಿಗೆ ಗಂಭೀರ ಗಾಯವಾಗಿ, ಭಕ್ತರಿಗೆ ಸಣ್ಣಪುಟ್ಟ ಗಾಯಗಳಾಗಿರುವ ಘಟನೆ ನಗರದ ಹೊರವಲಯದ ಹೊಸಬೂದನೂರು ಬಳಿ ಗುರುವಾರ ಸಂಜೆ ಸಂಭವಿಸಿದೆ.

ಘಟನೆಯಲ್ಲಿ ಚಾಲಕ ರವಿ ಎಂಬಾತನಿಗೆ ಗಂಭೀರ ಗಾಯವಾಗಿದ್ದು, ಇನ್ನು ಬಸ್‌ನಲ್ಲಿದ್ದ 24 ಮಂದಿ ಭಕ್ತರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಬೆಂಗಳೂರಿನ ಕೆಂಗೇರಿಯಿಂದ ಅಯ್ಯಪ್ಪ ಭಕ್ತರು ಶಬರಿಮಲೆ ಯಾತ್ರೆಗೆ ಹೊರಟಿದ್ದರು. ಇಂದು ಸಂಜೆ 5.30ರ ಸಮಯದಲ್ಲಿ ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿ ಸಂಚರಿಸುವಾಗ ಹೊಸಬೂದನೂರು ಸಮೀಪ ಮಿನಿ ಬಸ್‌ನ ಆಕ್ಸಲ್ ಕಟ್ಟಾಗಿ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದು ಉರುಳಿದ ಪರಿಣಾಮ ಈ ಘಟನೆ ಸಂಭವಿಸಿದೆ. ಸದ್ಯ ಬಸ್‌ನಲ್ಲಿದ್ದ ಯಾರಿಗೂ ಪ್ರಾಣಾಪಾಯ ಸಂಭವಿಸಿಲ್ಲ. ಈ ಸಂಬಂಧ ಮಂಡ್ಯ ಗ್ರಾಮಾಂತರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಇಂದು ವಿದ್ಯುತ್ ವ್ಯತ್ಯಯ

ಮಂಡ್ಯ,ನ.21– ಹಂಪಾಪುರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ಕಾರ್ಯ ನಿರ್ವಹಣೆ ಕೆಲಸ ಹಮ್ಮಿಕೊಂಡಿರುವುದರಿಂದ ನ.22ರಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ಕೆರಗೋಡು, ದೊಡ್ಡಗರುಡನಹಳ್ಳಿ, ಬಿಳಿದೇಗಲು, ಮುದಗಂದೂರು, ಮಾರಗೌಡನಹಳ್ಳಿ, ಬಿ.ಹೊಸೂರು, ಹಂಪಾಪುರ, ಕಲ್ಮಂಟಿದೊಡ್ಡಿ, ಸೌದೇನಹಳ್ಳಿ, ಬೆಟ್ಟಹಳ್ಳಿ, ಬೀಚನಹಳ್ಳಿ, ಪುರದಕೊಪ್ಪಲು, ಎಂ.ಹೊನ್ನೇನಹಳ್ಳಿ, ಬಿದರಕಟ್ಟೆ, ಬೆನ್ನಹಟ್ಟಿ, ಮನುಗನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಮಂಡ್ಯ ಕಾ ಮತ್ತು ಪಾ ವಿಭಾಗದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಾಂಡವಪುರ ತಾಲೂಕಿಗೆ ಸಾಹಿತ್ಯ ಸಮ್ಮೇಳನದ ಪ್ರಚಾರ ರಥ

ಚಿನಕುರಳಿಯಲ್ಲಿ ಸ್ವಾಗತ, ಮೊಳಗಿದ ಕನ್ನಡದ ಕಹಳೆ, ಹಾರಾಡಿದ ಕನ್ನಡ ಧ್ವಜ

ಚಿನಕುರಳಿ, ನ.21– ಮಂಡ್ಯದಲ್ಲಿ ಡಿ.21ರಿಂದ ಮೂರು ದಿನಗಳ ಕಾಲ ನಡೆಯುತ್ತಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಪ್ರಚಾರ ನಡೆಸುತ್ತಿರುವ ಸಾಹಿತ್ಯ ಸಮ್ಮೇಳನದ ಪ್ರಚಾರ ರಥವು ಗುರುವಾರ ಪಾಂಡವಪುರ ತಾಲೂಕಿಗೆ ಆಗಮಿಸಿತು.

ಕೆ.ಆರ್.ಪೇಟೆ ತಾಲೂಕಿನಲ್ಲಿ ಪ್ರಚಾರ ಮುಗಿಸಿ ತಾಲೂಕಿಗೆ ಆಗಮಿಸಿದ ಪ್ರಚಾರ ರಥವನ್ನು ಚಿನಕುರಳಿಯಲ್ಲಿ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ಆತ್ಮೀಯವಾಗಿ ಬರಮಾಡಿಕೊಂಡರು. ಸಾಹಿತ್ಯ ಸಮ್ಮೇಳನದ ಪ್ರಚಾರ ರಥಕ್ಕೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿ ಕನ್ನಡ ಬಾವುಟ ಹಿಡಿದು ಕನ್ನಡದ ಪರವಾಗಿ ಘೋಷಣೆ ಮೊಳಗಿಸುವ ಮೂಲಕ ಪ್ರಚಾರ ರಥವನ್ನು ಬರಮಾಡಿಕೊಂಡರು. ಬಳಿಕ ಕೆ.ಬೆಟ್ಟಹಳ್ಳಿ, ಎಲೆಕೆರೆ ಹ್ಯಾಂಡ್‌ಪೋಸ್ಟ್ ಮೂಲಕ ಪಾಂಡವಪುರ ಪಟ್ಟಣಕ್ಕೆ ಆಗಮಿಸಿದ ರಥವನ್ನು ಪಟ್ಟಣದಲ್ಲಿ ಬಿಜಿಎಸ್ ಶಿಕ್ಷಣ ಸಂಸ್ಥೆಯ ಗೌರವ ಕಾರ್ಯದರ್ಶಿ ಡಾ.ಜೆ.ಎನ್.ರಾಮಕೃಷ್ಣೇಗೌಡ, ಜಿಪಂ ಮಾಜಿ ಸದಸ್ಯ ಎಚ್.ತ್ಯಾಗರಾಜು, ತಹಶೀಲ್ದಾರ್ ಸಂತೋಷ್ ಸ್ವಾಗತಿಸಿದರು. ಬಳಿಕ ಪ್ರಚಾರ ರಥವು ಪಟ್ಟಣದ ಪ್ರಮುಖ ಬೀದಿಗಳು, ಶಾಲೆಗಳಲ್ಲಿ ಸಂಚರಿಸಿ ಪಟ್ಟಣದ ಪ್ರವಾಸಿ ಮಂದಿರದ ಬಳಿ ಸ್ಥಗಿತಗೊಂಡಿತು. ಶುಕ್ರವಾರದಿಂದ ಚಿನಕುರಳಿ ಜಿಪಂ ವ್ಯಾಪ್ತಿಯಲ್ಲಿ ಸಂಚರಿಸಿತು.

ಬಳಿಕ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ 30 ವರ್ಷಗಳ ಬಳಿಕ ಮಂಡ್ಯ ಜಿಲ್ಲೆಯಲ್ಲಿ 87ನೇ ಸಾಹಿತ್ಯ ಸಮ್ಮೇಳನ ನಡೆಯುತ್ತಿದೆ. ಇದನ್ನು ಮಂಡ್ಯ ಜಿಲ್ಲೆಯ ಜನತೆ ಮನೆ ಹಬ್ಬದಂತೆ ಆಚರಣೆ ಮಾಡಬೇಕು, ಸಮ್ಮೇಳನಕ್ಕೆ ಪ್ರತಿಯೊಬ್ಬರು ಭಾಗವಹಿಸುವ ಮೂಲಕ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಪ್ರಚಾರ ರಥವು ನಾಡಿನ ವಿವಿಧ ಭಾಗದಲ್ಲಿ ಪ್ರಚಾರ ನಡೆಸಿ ಮಂಡ್ಯ ಜಿಲ್ಲೆಗೆ ಆಗಮಿಸಿದೆ. ಪಾಂಡವಪುರ ತಾಲೂಕಿಗೆ ಆಗಮಿಸಿದ ಪ್ರಚಾರ ರಥವನ್ನು ಚಿನಕುರಳಿ ಗ್ರಾಮದಲ್ಲಿ ಆತ್ಮೀಯವಾಗಿ ಸ್ವಾಗತಿಸಲಾಗಿದೆ. ಬಳಿಕ ಪಾಂಡವಪುರ ಪಟ್ಟಣದಲ್ಲಿ ಸಂಚರಿಸಿ ನಂತರ ಗ್ರಾಮಾಂತರ ಪ್ರದೇಶದಲ್ಲಿ ಸಂಚರಿಸಿ ಪ್ರಚಾರ ನಡೆಸಲಿದೆ, ಪ್ರಚಾರ ರಥ ಬಂದಂತಹ ಸಂದರ್ಭದಲ್ಲಿ ಸಾರ್ವಜನಿಕರು, ಕನ್ನಡಾಭಿಮಾನಿಗಳು ಭವ್ಯವಾಗಿ ರಥವನ್ನು ಸ್ವಾಗತಿಸಬೇಕೆಂದು ಮನವಿ ಮಾಡಿದರು.



ಚಿನಕುರಳಿ ಗ್ರಾಮಕ್ಕೆ ಆಗಮಿಸಿದ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಚಾರ ರಥವನ್ನು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ಭವ್ಯವಾಗಿ ಸ್ವಾಗತಿಸಿದರು.

ಸಂದರ್ಭದಲ್ಲಿ ತಾಲೂಕು ಕಸಾಪ ಅಧ್ಯಕ್ಷ ಮೇನಾಗರ ಪ್ರಕಾಶ್, ಚಿನಕುರಳಿ ಡೇರಿ ಅಧ್ಯಕ್ಷ ಶಿವಕುಮಾರ್, ಗ್ರಾಪಂ ಅಧ್ಯಕ್ಷೆ ಗಾಯಿತ್ರಿ, ಪುರಸಭೆ ಅಧ್ಯಕ್ಷೆ ಜ್ಯೋತಿ, ಉಪಾಧ್ಯಕ್ಷ ಅಶೋಕ್, ಮುಖ್ಯಾಧಿಕಾರಿ ಸತೀಶ್‌ಕುಮಾರ್ ಸೇರಿದಂತೆ ಪುರಸಭೆ ಸದಸ್ಯರು, ಕಸಾಪ ಪದಾಧಿಕಾರಿಗಳು, ಮುಖಂಡರು ಹಾಜರಿದ್ದರು.

ನ.23, 24 ರಂದು ಶ್ರೀ ಹಟ್ಟಿಮಾರಮ್ಮ ವಿಗ್ರಹ ಪ್ರತಿಷ್ಠಾಪನೆ



ಭಾರತೀನಗರ, ನ.21– ಇಲ್ಲಿಗೆ ಸಮೀಪದ ಅಣ್ಣೂರು ಗ್ರಾಮದಲ್ಲಿ ಶ್ರೀ ಹಟ್ಟಿಮಾರಮ್ಮ, ಶ್ರೀ ಸಿದ್ದೇಶ್ವರಸ್ವಾಮಿ ದೇವಸ್ಥಾನದ ನೂತನ ವಿಗ್ರಹ ಪ್ರತಿಷ್ಠಾಪನ ಮಹೋತ್ಸವ ಕಾರ್ಯಕ್ರಮ ನ.23, 24 ರಂದು ವಿಜೃಂಭಣೆಯಿಂದ ಜರುಗಲಿದೆ. ಗ್ರಾಮದಲ್ಲಿ ನೆಲೆಸಿರುವ ಶ್ರೀಹಟ್ಟಿಮಾರಮ್ಮ ಹಾಗೂ ಶ್ರೀಸಿದ್ದೇಶ್ವರ ದೇವಸ್ಥಾನದ ಜೀರ್ಣೋದ್ಧಾರದ ಕೆಲಸ ಮುಗಿದಿದ್ದು, ಹಾಗಾಗಿ ಶ್ರೀಹಟ್ಟಿಮಾರಮ್ಮ ದೇವಿಯ ನೂತನ ವಿಗ್ರಹ ಪ್ರತಿಷ್ಠಾಪನಾ ಮಹೋತ್ಸವದ ಅಂಗವಾಗಿ ನ.23ರಂದು ಸಂಜೆ 4 ಗಂಟೆಗೆ ಆಲಯದಲ್ಲಿ ಪುಣ್ಯಾಹ, ರಕ್ಷಾಬಂಧನ, ಗಣಪತಿ ಹೋಮ, ನವಗ್ರಹ ಹೋಮ, ಮೂರ್ತಿಗೆ ಹೋಮ, ಇತ್ಯಾದಿ ಪೂಜಾ ಕೈಂಕರ್ಯಗಳು ಜರುಗಲಿವೆ.

ಆನೆ ಮೆರವಣಿಗೆ: ಸಂಜೆ 5 ಗಂಟೆಗೆ ರಾಮ ಮಂದಿರದಿಂದ ಗಜ(ಆನೆ) ಮೆರವಣಿಗೆ ಸಮೇತ ಗ್ರಾಮ ಪ್ರದಕ್ಷಿಣೆ, ಶ್ರೀಅಮ್ಮನವರ ಪೂಜೆ, ಶ್ರೀ ಸಿದ್ದೇಶ್ವರಸ್ವಾಮಿ ಅವರ ಸತ್ತಿಗೆ ಸಮೇತ ಆಲಯ ಪ್ರವೇಶ ನಡೆಯಲಿದೆ.

ನ.24ರಂದು ಬೆಳಿಗ್ಗೆ ಶ್ರೀಅಮ್ಮನವರ ಪ್ರಾಣಪ್ರತಿಷ್ಠೆ, ಮಹಾಭಿಷೇಕ, ಅಲಂಕಾರ ಪೂಜೆ ಸೇರಿದಂತೆ ಇತ್ಯಾದಿ ಪೂಜಾ ಕೈಂಕರ್ಯಗಳು ನಡೆಯಲಿವೆ. ಬಂದಂತಹ ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ ಜರುಗಲಿದೆ.

ಮಂಡ್ಯ ಜಿಲ್ಲೆಯಲ್ಲಿ ಕಾವೇರಿ ನೀರಾವರಿ ನಿಗಮದ ಎಂಡಿ ನಿವಾಸ, ಪೆಟ್ರೋಲ್ ಬಂಕ್ ಮೇಲೆ ಲೋಕಾಯುಕ್ತ ದಾಳಿ



ಮಂಡ್ಯ, ನ.21– ಮಂಡ್ಯ ಜಿಲ್ಲೆ ಸೇರಿದಂತೆ ವಿವಿಧೆಡೆ ಕಾವೇರಿ ನೀರಾವರಿ ನಿಗಮದ ಎಂಡಿ ಮನೆ ಮತ್ತು ಪೆಟ್ರೋಲ್ ಬಂಕ್ ಮೇಲೆ ಲೋಕಾಯುಕ್ತ ದಾಳಿ ನಡೆಸಿದ್ದು, ಅಪಾರ ಪ್ರಮಾಣದ ಚಿನ್ನಾಭರಣ, ಬೆಳ್ಳಿ ವಸ್ತು, ಬ್ರಾಂಡೆಡ್ ವಾಚ್‌ಗಳು ಪತ್ತೆಯಾಗಿವೆ.

ಬೆಂಗಳೂರಿನ ಕಾವೇರಿ ನೀರಾವರಿ ನಿಗಮದ ಕಚೇರಿಯಲ್ಲಿ ಎಂಡಿ ಆಗಿ ಕರ್ತವ್ಯ ನಿರ್ವಹಿಸುತ್ತಿರುವ ಮಹೇಶ್ ವಿರುದ್ಧ ಹಲವು ದೂರು ಬಂದ ಹಿನ್ನೆಲೆ ಮಂಡ್ಯ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ.

ಬೆಂಗಳೂರು, ಮೈಸೂರು, ಮಂಡ್ಯ ಸೇರಿದಂತೆ 9 ಕಡೆ ಏಕಕಾಲದಲ್ಲಿ ದಾಳಿ ನಡೆಸಿದ್ದು, ಮಂಡ್ಯದ ಕೆಆರ್‌ಎಸ್ ರಸ್ತೆಯಲ್ಲಿರುವ ಪೆಟ್ರೋಲ್ ಬಂಕ್, ಮಳವಳ್ಳಿ ತಾಲೂಕಿನ ದಳವಾಯಿ ಕೋಡಿಹಳ್ಳಿ ನಿವಾಸದಲ್ಲಿ ಮಂಡ್ಯ ಲೋಕಾಯುಕ್ತ ಎಸ್ಪಿ ಸುರೇಶ್ ಬಾಬು ನೇತೃತ್ವದಲ್ಲಿ ದಾಳಿ ನಡೆಸಿ, ತಪಾಸಣೆ ಮಾಡಲಾಗಿದೆ.

ಬೆಳಗ್ಗಿನಿಂದ ಕಡತಗಳ ಪರಿಶೀಲನೆ ನಡೆಸಿದ ಲೋಕಾಯುಕ್ತ ಪೊಲೀಸರಿಗೆ ದಾಳಿ ವೇಳೆ ಅಪಾರ ಪ್ರಮಾಣದ ಚಿನ್ನಾಭರಣ, ಬೆಳ್ಳಿಯ ವಸ್ತುಗಳು, ಬ್ರಾಂಡೆಡ್ ವಾಚ್‌ಗಳು ಹಾಗೂ ನಗದು ಪತ್ತೆಯಾಗಿದೆ. ಮೈಸೂರಿನ ವಿಜಯನಗರದಲ್ಲಿರುವ ನಿವಾಸದಲ್ಲಿ ದಾಳಿ ವೇಳೆ ಅಪಾರ ಪ್ರಮಾಣದ ವಸ್ತುಗಳು ಪತ್ತೆಯಾಗಿವೆ ಬೆಳಗ್ಗೆ ಲೋಕಾಯುಕ್ತ ಎಸ್ಪಿ ಸುರೇಶ್ ಬಾಬು ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಲಾಗಿತ್ತು ಭ್ರಷ್ಟಾಚಾರ ಹಾಗೂ ಅಕ್ರಮ ಆಸ್ತಿ ಸಂಪಾದನೆ ಆರೋಪದ ಹಿನ್ನೆಲೆಯಲ್ಲಿ ದಾಳಿ ಮಾಡಲಾಗಿತ್ತು

ಅರ್ಜಿ ಆಹ್ವಾನ

ಮಂಡ್ಯ: ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ ನೇಕಾರರ ಪ್ಯಾಕೇಜ್ ಯೋಜನೆಯಡಿ ಮಂಡ್ಯ ಜಿಲ್ಲೆಗೆ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ 1 ಗುರಿಯನ್ನು ನಿಗದಿಪಡಿಸಲಾಗಿದೆ. ಅರ್ಹ ಪರಿಶಿಷ್ಟ ಜಾತಿ/ಪಂಗಡದ ಉದ್ದಿಮೆದಾರರು ಅರ್ಜಿಯನ್ನು ಡಿ.7ರೊಳಗೆ ಕೈಮಗ್ಗ ಮತ್ತು ಜವಳಿ ಇಲಾಖೆಗೆ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9972405347 ಅನ್ನು ಸಂಪರ್ಕಿಸಬಹುದು.

ಜಿಲ್ಲೆಯನ್ನು ನೆನೆಯಲು ಸಿಹಿ ಬೆಲ್ಲ

ಮಂಡ್ಯ: 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಪ್ರತಿನಿಧಿಯಾಗಿ ನೋಂದಣಿಯಾಗುವ ಸದಸ್ಯರಿಗೆ ಮಂಡ್ಯ ಜಿಲ್ಲೆಯ ಸವಿನೆನಪಿಗಾಗಿ ಬೆಲ್ಲವನ್ನು ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬೆಲ್ಲ ತಯಾರಿಕ ಎಫ್‌ಪಿಓ ಘಟಕಗಳ ಸಭೆ ನಡೆಸಿ ಮಾತನಾಡಿದರು. ಮಂಡ್ಯ ಜಿಲ್ಲೆಯಲ್ಲಿ ಪ್ರತಿನಿಧಿಗಳಿಗೆ ಬೆಲ್ಲ ನೀಡುವುದರಿಂದ ಜನರಿಗೆ ಬೆಲ್ಲದ ಬಗ್ಗೆ ಹೆಚ್ಚಿನ ಪ್ರಚಾರವಾಗುತ್ತದೆ. ಸುಮಾರು 10000 ಜನರು ನೋಂದಣಿಯಾಗುವ ನಿರೀಕ್ಷೆ ಇದೆ. ಪ್ರತಿನಿಧಿಗಳಿಗೆ ಹಾಗೂ ಗಣ್ಯರಿಗೆ ಅರ್ಧ ಕೆ.ಜಿ ಬೆಲ್ಲ ನೀಡಿದರೆ ಸುಮಾರು 6 ರಿಂದ 7ಸಾವಿರ ಕೆಜಿ ಬೆಲ್ಲ ಬೇಕಾಗುತ್ತದೆ. ಬೆಲ್ಲ ತಯಾರಿಕೆ ಘಟಕಗಳು ಉತ್ತಮವಾಗಿ ಪ್ಯಾಕ್ ಮಾಡಿ ಅದರ ಮೇಲೆ ಕನ್ನಡ ಸಾಹಿತ್ಯ ಸಮ್ಮೇಳನದ ಲೋಗೋ ಮುದ್ರಣ ಸೇರಿದಂತೆ ಒಂದೇ ರೀತಿ ಪ್ಯಾಕ್ ಮಾಡಿ ನೀಡಿ. ಒಂದು ಉತ್ತಮ ದರ ನಿಗದಿ ಮಾಡಿ ಬೆಲ್ಲ ನೀಡಲು ಮುಂದೆ ಬರುವವರು ಕೃಷಿ ಜಂಟಿ ನಿರ್ದೇಶಕರಿಗೆ ಮಾಹಿತಿ ನೀಡಬೇಕು ಎಂದು ಹೇಳಿದರು.

ಕೆ.ಆರ್.ಪೇಟೆ ತಾಲೂಕು ವಕೀಲರ ಸಂಘಕ್ಕೆ ಎಂ.ಆರ್.ನಾಗೇಗೌಡ ಅಧ್ಯಕ್ಷರಾಗಿ ಆಯ್ಕೆ



ಕೆ.ಆರ್.ಪೇಟೆ, ನ.21–ತಾಲೂಕು ವಕೀಲರ ಸಂಘದ 2024–26ನೇ ಸಾಲಿನ ನೂತನ ಕಾರ್ಯಕಾರಿ ಸಮಿತಿಯ ಎರಡು ವರ್ಷದ ಅವಧಿಗೆ ನಡೆದ ಚುನಾವಣೆಯಲ್ಲಿ ಎಂ.ಆರ್.ನಾಗೇಗೌಡ ಅಧ್ಯಕ್ಷರಾಗಿ ಗೆಲುವು ಸಾಧಿಸಿದ್ದಾರೆ.

ಉಳಿದಂತೆ ಉಪಾಧ್ಯಕ್ಷರಾಗಿ ಪುರುಷೋತ್ತಮ್, ಪ್ರಧಾನ ಕಾರ್ಯದರ್ಶಿಯಾಗಿ ಎಸ್.ಜೆ.ಮಂಜೇಗೌಡ, ಖಜಾಂಚಿಯಾಗಿ ಪ್ರಸನ್ನಕುಮಾರ್, ಜಂಟಿ ಕಾರ್ಯದರ್ಶಿಯಾಗಿ ದೊಡ್ಡಯ್ಯ ಹಾಗೂ ನೂತನ ಆಡಳಿತ ಮಂಡಳಿಯ ನಿರ್ದೇಶಕರಾಗಿ ಗಿರಿಜಾ ಗದೀಶ್, ಶಿವಕುಮಾರ್, ಅವಿನಾಶ್, ಪ್ರತಾಪ್, ಜನಾರ್ದನ ಹಾಗೂ ಪ್ರವೀಣ್ ಅವರು ಆಯ್ಕೆಯಾಗಿದ್ದಾರೆ.

ವಕೀಲರ ಸಂಘದ ನೂತನ ಅಧ್ಯಕ್ಷರಾದ ಎಂ.ಆರ್.ನಾಗೇಗೌಡ ಮಾತನಾಡಿ, ನನ್ನ ಅಭೂತಪೂರ್ವ ಗೆಲುವಿಗೆ ಕಾರಣರಾದ ಎಲ್ಲಾ ಹಿರಿಯ, ಕಿರಿಯ ವಕೀಲರು ಹಾಗೂ ನನ್ನ ಗೆಲುವಿಗೆ ಹಗಲಿರುಳು ಶ್ರಮಿಸಿದ ನನ್ನ ಹಿತೈಷಿಗಳು ಮತ್ತು ಮತದಾರ ವಕೀಲರಿಗೆ ಅನಂತ ಅನಂತ ಧನ್ಯವಾದಗಳನ್ನು ಅರ್ಪಿಸುತ್ತೇನೆ. ನನ್ನ ಮೇಲೆ ವಿಶ್ವಾಸವಿಟ್ಟು ನನಗೆ ಬಹು ದೊಡ್ಡ ಜವಾಬ್ದಾರಿ ಅಧ್ಯಕ್ಷ ಸ್ಥಾನಕ್ಕೆ ಕೂರಿಸಿದ್ದೀರಿ. ನಿಮ್ಮ ನಂಬಿಕೆಗೆ ಚ್ಯುತಿ ಬಾರದಂತೆ ಕಾರ್ಯ ನಿರ್ವಹಿಸುತ್ತೇನೆ ಎಂದು ತಿಳಿಸಿದರು.

ವಕೀಲರ ಸಂಘದ ಕಾರ್ಯಕಾರಿ ಮಂಡಳಿಯ ಚುನಾವಣೆಯಲ್ಲಿ ಚುನಾವಣಾ ಅಧಿಕಾರಿಗಳಾಗಿ ಸತೀಶ್, ಪ್ರಶಾಂತಕುಮಾರ್ ಹಾಗೂ ಗಜೇಂದ್ರ ಕಾರ್ಯನಿರ್ವಹಿಸಿದರು.

ಒಂದನೇ ಪುಟದಿಂದ

ರಾಜಕೀಯ ಪರಿಸ್ಥಿತಿ ಯಾವಾಗ ಏನೋ ಹೇಳಕ್ಕಾಗಲ್ಲ...

ಕಾಂಗ್ರೆಸ್ ಕಚೇರಿ ಕಟ್ಟಡ ವಿಚಾರವನ್ನು ಸಿದ್ದರಾಮಯ್ಯನವರು ಮೊದಲ ಬಾರಿ ಮುಖ್ಯಮಂತ್ರಿ ಯಾಗಿದ್ದಾಗ ನಾನು ಸ್ವಲ್ಪ ಕೋಪ ಮಾಡಿಕೊಂಡು ಸಲುಗೆಯಿಂದ ಹೇಳಿದ್ದೆ. ಯಾವ್ ಸೀಮೆ ಚೀಫ್ ಮಿನಿಸ್ಟರ್ ಸಾರ್ ನೀವು. ಕಾಂಗ್ರೆಸ್ ಪಕ್ಷದ ಚೀಫ್ ಮಿನಿಸ್ಟರ್ ನೀವು. ನೀವು ಮೈಸೂರಿನಲ್ಲಿ ಕಾಂಗ್ರೆಸ್ ಪಕ್ಷದ ಕಚೇರಿಯನ್ನು ಕಟ್ಟಿಸಲೇಬೇಕು. ಅದೂ ಮೈಸೂರಿನ ಪಾರಂಪರಿಕ ಶೈಲಿಯಲ್ಲೇ ಕಟ್ಟಿಸಬೇಕು. ಸುಮ್ನೆ ಮುಖ್ಯ ಮಂತ್ರಿ ಆಗ್ಬಿಟ್ರೆ ಸರಿಹೋಗೋದಿಲ್ಲ ಎಂದಿದ್ದೆ. ಅವರಿಗೆ ಹಾಗೆನ್ನಿಸಿದೆಯೋ ಇಲ್ಲವೋ ಗೊತ್ತಿಲ್ಲ. ಆದರೆ ಎರಡನೇ ಬಾರಿ ಸಿಎಂ ಆದಾಗ ಕಾಂಗ್ರೆಸ್ ಕಟ್ಟಡ ನಿರ್ಮಾಣಕ್ಕೆ ಮನಸ್ಸಾಗಿದೆ. ಅದೂ 15 ಕೋಟಿ ರೂ.ಗಳಲ್ಲಿ ಕಾಂಗ್ರೆಸ್ ಕಟ್ಟಡ ಮಾಡಲು ಹೊರಟಿರುವುದು ನಿಜಕ್ಕೂ ನಿಮಗೆ ಅಭಿನಂದನಾರ್ಹ. ಆದಷ್ಟು ಶೀಘ್ರವಾಗಿ ಅಡಿಪಾಯ ಹಾಕಿ. ಏಕೆಂದರೆ ರಾಜಕೀಯ ಪರಿಸ್ಥಿತಿ ಹೇಗೆ ಬದಲಾಗುತ್ತದೆಯೋ ಗೊತ್ತಿಲ್ಲ. ಆದ್ದರಿಂದ ನೀವು ಶೀಘ್ರವಾಗಿ ಕಟ್ಟಡದ ಶಂಕುಸ್ಥಾಪನೆ ಮಾಡಿ, ನಮ್ಮ ಸರ್ಕಾರ ಇರುವಾಗಲೇ ನಿರ್ಮಾಣ ಪೂರ್ಣಗೊಳಿಸಿದರೆ ಬಹಳ ಚೆನ್ನಾಗಿರುತ್ತದೆ. ಈ ಬಗ್ಗೆ ಮುಖ್ಯಮಂತ್ರಿಗಳಲ್ಲೂ ಮನವಿ ಮಾಡಿ ಎಂದು ಸಲಹೆ ನೀಡಿದರು.

ಸಿದ್ದರಾಮಯ್ಯ ಮೆತ್ತಗಾಗೋದಿಲ್ಲ: ರಾಜಕೀಯ ಪರಿಸ್ಥಿತಿ ಬದಲಾವಣೆ ಬಗ್ಗೆ ಹೇಳಲು ಸಾಧ್ಯವಿಲ್ಲ ಎಂಬ ಎಚ್ಚರಿಕೆ ಜೊತೆಯಲ್ಲೇ ಸಿದ್ದರಾಮಯ್ಯ ಅವರ ಗಟ್ಟಿತನದ ಬಗ್ಗೆ ಮೆಚ್ಚುಗೆ ಮಾತುಗಳನ್ನಾಡಿದರು. ಬಿಜೆಪಿ–ಜೆಡಿಎಸ್ ಒಟ್ಟಿಗೆ ಸೇರಿಕೊಂಡಿವೆ. ಇದರಿಂದ ಕಾಂಗ್ರೆಸ್‌ಗೆ ಒಳ್ಳೆಯದೂ ಇದೆ, ಕೆಟ್ಟದ್ದೂ ಇದೆ. ಆದರೆ ಅವರು ಆಡುವ ಮಾತುಗಳ ಬಗ್ಗೆ ಗಮನವಿರಬೇಕು. ರಾಜ್ಯದ ಜನ 136 ಸೀಟ್ ಗೆಲ್ಲಿಸಿ, ಕಾಂಗ್ರೆಸ್‌ಗೆ ಅಧಿಕಾರ ಕೊಟ್ಟಿದ್ದಾರೆ. ಯಾವ ಕಾರಣಕ್ಕೂ ನಮ್ಮನ್ನು ಅಸ್ಥಿರ ಮಾಡಲು ಸಾಧ್ಯವಿಲ್ಲ. ನೀವು 50–100 ಕೋಟಿ ಕೊಡಬಹುದು. ಆದರೆ ನಮ್ಮ ಶಾಸಕರೂ ಕಾಂಗ್ರೆಸ್ ತೊರೆದು ನಿಮ್ಮ ಜೊತೆ ಬರುತ್ತಾರೆ ಎಂಬ ಕನಸು ನಿಜವಾಗೋದಿಲ್ಲ ಎಂದು ನಾವು ಮಾತ್ರವಲ್ಲ ನೀವೆಲ್ಲಾ ಹೇಳಬೇಕು. ಯಾವ ಕಾರಣಕ್ಕೂ ನಮ್ಮ ಸರ್ಕಾರವನ್ನು ಅಸ್ಥಿರಗೊಳಿಸಲು ಸಾಧ್ಯವಿಲ್ಲ. ಇನ್ನೂ ನೂರು ಆಪಾದನೆ ಬಂದರೂ ಸಿದ್ದರಾಮಯ್ಯನವರು ಇನ್ನೂ ಗಟ್ಟಿಯಾಗ್ತಾರೆ ವಿನಃ ಮೆತ್ತಗಾಗೋದಿಲ್ಲ. ಸುಳ್ಳು ಆಪಾದನೆ ಎಷ್ಟೇ ಮಾಡಿದರೂ ಅವರನ್ನು ಏನೂ ಮಾಡೋಕಾಗೋದಿಲ್ಲ ಎಂದು ನಾನೂ ಕೂಡ ಮತ್ತೆ ಹೇಳಲು ಬಯಸುತ್ತೇನೆ. ಈ ವಿಚಾರದಲ್ಲಿ ಮೈಸೂರಿನವರಾದ ನೀವೆಲ್ಲಾ ಗಟ್ಟಿಯಾಗಿ ನಿಲ್ಲಬೇಕಾಗುತ್ತದೆ ಎಂದು ಕಿವಿಮಾತು ಹೇಳಿದರು.

ಮೂರು ಸವಾಲುಗಳು: ಪ್ರಸ್ತುತ ರಾಜಕೀಯ ಪರಿಸ್ಥಿತಿಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮೂರು ಸವಾಲುಗಳಿವೆ. ಸ'ಯೋಜನೆಗಳು, ಜಾತಿ ಗಣತಿ ಮಹತ್ವ ತಿಳಿಸುವುದು ಹಾಗೂ ಅಲ್ಪಸಂಖ್ಯಾತರೂ ನಮ್ಮವರು, ಅವರಿಗೂ ಬದುಕುವ ಹಕ್ಕಿದೆ ಎಂಬ ಕಾರಣದಿಂದ ಅವರ ಪರವಾಗಿ ಕಾಂಗ್ರೆಸ್ ನಿಂತಿದೆ ಎನ್ನುವುದನ್ನು ಅರ್ಥ ಮಾಡಿಸಬೇಕಿದೆ. ಈ ಸವಾಲುಗಳ ಎದುರಿಸಲು ಪ್ರತಿಯೊಬ್ಬ ಕಾರ್ಯಕರ್ತರೂ ತಯಾರಿರಬೇಕು ಎಂದು ಕರೆ ನೀಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನದ ಪ್ರತಿಯೊಂದು ಅಕ್ಷರವನ್ನೂ ಒಪ್ಪಿಕೊಂಡು ಗೌರವಿಸುವ ಕಾಂಗ್ರೆಸ್, ಕೇಂದ್ರ ಹಾಗೂ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಾಗ ಸಂವಿಧಾನ ಆಶಯ ಅನುಷ್ಠಾನಕ್ಕೆ ಬದ್ಧವಾಗಿದ್ದು, ಇದನ್ನು ಉಳಿಸಿಕೊಂಡು ಹೋಗುವ ಸವಾಲಿದೆ. 2013ರ ಚುನಾವಣೆಯಲ್ಲಿ ನಾನು ಪರಾಜಿತನಾದೆ. ಆದರೆ ನಮ್ಮ ಪಕ್ಷ ಅಧಿಕಾರಕ್ಕೆ ಬಂತು. ಆ ಅವಧಿಯಲ್ಲಿ ಸಿದ್ದರಾಮಯ್ಯನವರ ಆಡಳಿತ ಮೈಲಿಗಲ್ಲು. ಬಡವರನ್ನು ಮೇಲೆತ್ತುವ ಕಾರ್ಯಕ್ರಮಗಳನ್ನು ನೀಡಿದರು. ಪ್ರತಿಯೊಂದು ಕಾರ್ಯಕ್ರಮವೂ ಇಂದಿಗೂ ಹಸಿರಾಗಿವೆ. 2023ರ ಚುನಾವಣೆಯಲ್ಲಿ ಪ್ರಣಾಳಿಕೆ ಸಿದ್ಧಪಡಿಸುವ ಜವಾಬ್ದಾರಿಯನ್ನು ನನಗೆ ನೀಡಿದರು. ಎಲ್ಲರೊಂದಿಗೆ ಚರ್ಚೆ ಮಾಡಿ, ಸಲಹೆಯಂತೆ ಮಹಿಳಾ ಸಬಲೀಕರಣಕ್ಕೆ ಆದ್ಯತೆ ನೀಡಲಾಯಿತು. ಶಕ್ತಿ ಯೋಜನೆಗೆ ಮಧ್ಯರಾತ್ರಿ 2ರ ಹೊತ್ತಿಗೆ ಹೈಕಮಾಂಡ್‌ನಿಂದ ಅನುಮತಿ ಪಡೆದು ಪ್ರಣಾಳಿಕೆಯಲ್ಲಿ ಸೇರಿಸಲಾಯಿತು ಎಂದು ತಿಳಿಸಿದರು. ಆರ್ಥಿಕ ಪರಿಸ್ಥಿತಿ ನೆಲೆಗಟ್ಟಿನಲ್ಲಿ ಚರ್ಚೆ ನಡೆಸಿದ ನಂತರವೇ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿದ್ದು. ಸಿದ್ದರಾಮಯ್ಯನವರು ಆರ್ಥಿಕ ತಜ್ಞ, ಆರ್ಥಿಕ ಸಚಿವರಾಗಿ ಎಲ್ಲಾ ರೀತಿಯ ಲೆಕ್ಕಾಚಾರದೊಂದಿಗೆ ಬಜೆಟ್‌ನಲ್ಲಿ ಸೇರಿಸಿದರು. ಬಜೆಟ್ ಹೊರಗಿನ ಕಾರ್ಯಕ್ರಮಗಳನ್ನು ಬದಲಾವಣೆ ಮಾಡಬಹುದು. ಆದರೆ ಬಜೆಟ್‌ಗೆ ಸೇರಿದ ಮೇಲೆ ಅದಕ್ಕೆ ಬದ್ಧವಾಗಿರಬೇಕು. ಕಾಂಗ್ರೆಸ್ ಪಕ್ಷದ ಈ ಬದ್ಧತೆಯನ್ನು ಅರ್ಥ ಮಾಡಿಕೊಳ್ಳಬೇಕು. ಆದರೆ ಪ್ರಧಾನಿ, ಕೇಂದ್ರ ಗೃಹ ಸಚಿವರು ಸೇರಿದಂತೆ ಬಿಜೆಪಿ ನಾಯಕರು ಕಾಂಗ್ರೆಸ್ ಗ್ಯಾರಂಟಿಗಳನ್ನು ಮಹಾರಾಷ್ಟ್ರದಲ್ಲಿ ಟೀಕೆ ಮಾಡಿದ್ದಾರೆ. ನಾನು ಸುದ್ದಿಗೋಷ್ಠಿಯಲ್ಲಿ ಕಠಿಣವಾಗಿ ಪ್ರತಿಕ್ರಿಯಿಸಿ, ಸತ್ಯಾಸತ್ಯತೆ ತಿಳಿಯಲು ಕರ್ನಾಟಕಕ್ಕೆ ಆಹ್ವಾನ ನೀಡಿದ ಬಳಿಕ ಅವರು ಗ್ಯಾರಂಟಿ ಘೋಷಣೆ ಮಾಡಿದರು. ಕರ್ನಾಟಕದಲ್ಲಿ ಬಡವರ ಮೇಲೆತ್ತುವಲ್ಲಿ ಗ್ಯಾರಂಟಿ ಕಾರ್ಯಕ್ರಮಗಳು ತುಂಬಾ ಸಹಕಾರಿಯಾಗಿದೆ. ಮಹಿಳೆಯರಿಗೆ ನೀಡಿದ ಹಣ ದುರುಪಯೋಗವಾಗಿಲ್ಲ ಜನಸಂಖ್ಯೆಯ ಶೇ.50ಕ್ಕಿಂತ ಹೆಚ್ಚಿರುವ ಮಹಿಳೆಯರನ್ನು ಅಭಿವೃದ್ಧಿ ಕಡೆಗೆ ಕರೆದೊಯ್ಯುವುದು ಕಾಂಗ್ರೆಸ್ ಬದ್ಧತೆಯಲ್ಲವೇ. ಇದನ್ನು ಬಿಜೆಪಿ, ಜೆಡಿಎಸ್ ಅರ್ಥ ಮಾಡಿಕೊಳ್ಳಬೇಕು ಎಂದರು.

ಶೀಘ್ರ ಪಟ್ಟಿ ಬಿಡುಗಡೆ: ಮುಖ್ಯಮಂತ್ರಿಗಳು ನಿಗಮ ಮಂಡಳಿಗಳಿಗೆ ಈಗಾಗಲೇ ಅಧ್ಯಕ್ಷರನ್ನು ನೇಮಿಸಿದ್ದಾರೆ. ಸದಸ್ಯರು, ನಿರ್ದೇಶಕರ ಆಯ್ಕೆ ಜವಾಬ್ದಾರಿಯನ್ನು ನನಗೆ ನೀಡಿದ್ದಾರೆ. ಈ ಸಂಬಂಧ ಶಾಸಕರಿಂದ ಕಡ್ಡಾಯವಾಗಿ ಓರ್ವ ಮಹಿಳೆ ಸೇರಿದಂತೆ ಮೂವರ ಹೆಸರು ಪಡೆದಿದ್ದೇವೆ. ಚುನಾವಣೆಯಲ್ಲಿ ಪರಾಜಿತರಾದವರಿಂದಲೂ ಎರಡು ಹೆಸರು, ಜಿಲ್ಲಾ ಕಾಂಗ್ರೆಸ್ ಸಮಿತಿಗಳ ಶಿಫಾರಸ್ಸನ್ನೂ ಪರಿಗಣಿಸಲಾಗಿದೆ. ಮುಖ್ಯಮಂತ್ರಿಗಳೂ ಶಿಫಾರಸ್ಸು ಮಾಡಿದ್ದಾರೆ. ಶೀಘ್ರದಲ್ಲೇ ಎರಡು ಹಂತದಲ್ಲಿ ಪಟ್ಟಿ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು. ಇದಕ್ಕೂ ಮುನ್ನ ಮಾತನಾಡಿದ ಕಾಂಗ್ರೆಸ್ ಜಿಲ್ಲಾ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ಈ ಕಾಂಗ್ರೆಸ್ ಕಚೇರಿಯನ್ನು ನೀವು ಉದ್ಘಾಟಿಸಿದಿರಿ. ಸದ್ಯ 15 ಕೋಟಿ ರೂ. ಅಂದಾಜು ಮೊತ್ತದಲ್ಲಿ ಹೊಸ ಕಟ್ಟಡ ನಿರ್ಮಿಸಲು ಮುಂದಾಗಿದ್ದು, ಈ ಬಗ್ಗೆ ಡಾ.ಯತೀಂದ್ರ ಸಿದ್ದರಾಮಯ್ಯನವರು ಆಸಕ್ತಿ ವಹಿಸಿದ್ದಾರೆ. ನೂತನ ಕಟ್ಟಡ ಶಂಕುಸ್ಥಾಪನೆಯಲ್ಲೂ ನೀವು ಭಾಗವಹಿಸಬೇಕು ಎಂದು ಡಾ.ಜಿ.ಪರಮೇಶ್ವರ್ ಅವರನ್ನು ಮನವಿ ಮಾಡಿದರು.

ಈ ವೇಳೆ ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನರೇಂದ್ರ, ವಕ್ತಾರ ಹೆಚ್.ಎ.ವೆಂಕಟೇಶ್ ಮತ್ತಿತರ ಮುಖಂಡರು ಉಪಸ್ಥಿತರಿದ್ದರು.



ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಅಭಿನಂದಿಸಲಾಯಿತು. ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಪಕ್ಷದ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ನಗರಾಧ್ಯಕ್ಷ ಆರ್.ಮೂರ್ತಿ ಮತ್ತಿತರ ಮುಖಂಡರು ಚಿತ್ರದಲ್ಲಿದ್ದಾರೆ.

ವ್ಯಾಪಾರ–ವಹಿವಾಟಿಗೆ ಅವಕಾಶ; ವಾರದಲ್ಲಿ ನಿರ್ಧಾರ

ವಾರ ಕಾಲ ಪ್ರಾಯೋಗಿಕವಾಗಿ ಅವಕಾಶ ನೀಡಿ ಸಾಧಕ–ಬಾಧಕಗಳನ್ನು ಪರಿಶೀಲಿಸಲಾಯಿತು. ಕೊನೆಗೆ ಜಾರಿ ಸಹ ಮಾಡಲಾಗಿದೆ. ಅದೇ ರೀತಿಯಲ್ಲಿ ಇಲ್ಲೂ ಮಾಡಬೇಕಾಗುತ್ತದೆ. ಈ ಸಂಬಂಧ ಆಯುಕ್ತರು, ಐಜಿಯವರೊಂದಿಗೆ ಚರ್ಚೆ ಮಾಡಿ, ವಾರದಲ್ಲೇ ನಿರ್ಧಾರ ಕೈಗೊಳ್ಳುತ್ತೇನೆ ಎಂದು ಹೇಳಿದರು.

ತಪಾಸಣೆ ಕಡಿತ ಪರಿಶೀಲನೆ: ವಾರಾಂತ್ಯ ಮತ್ತು ಸರ್ಕಾರಿ ರಜೆ ದಿನಗಳಲ್ಲಿ ಸಿಕ್ಕಸಿಕ್ಕಲ್ಲಿ ತಪಾಸಣೆ ಹೆಸರಿನಲ್ಲಿ ಕಿರಿಕಿರಿ ಉಂಟು ಮಾಡುವುದನ್ನು ತಪ್ಪಿಸಬೇಕೆಂದು ಮನವಿ ಮಾಡಿದ್ದೀರಿ. ಪೊಲೀಸರು ಉದ್ದೇಶಪೂರ್ವಕವಾಗಿ ಈ ರೀತಿ ಮಾಡುವುದಿಲ್ಲ. ನಾವು ಪೊಲೀಸರ ಪರಿಸ್ಥಿತಿಯನ್ನು ಅರ್ಥ ಮಾಡಿಕೊಳ್ಳಬೇಕಾಗುತ್ತದೆ. ಹೀಗಾಗಿ ತಪಾಸಣೆ ಕಡಿಮೆಗೊಳಿಸುವ ಸಂಬಂಧ ಪರಿಶೀಲಿಸುತ್ತೇನೆ ಎಂದರು.

ದೊಡ್ಡ ಗಡಿಯಾರ ವೃತ್ತ, ಸಯ್ಯಾಜಿರಾವ್ ರಸ್ತೆಯಲ್ಲಿ ಫುಟ್‌ಪಾತ್ ವ್ಯಾಪಾರ ತಡೆಗಟ್ಟಿ, ಪಾಲಿಕೆ ಸೂಚಿಸುವ ಸ್ಥಳದಲ್ಲಿ ವ್ಯಾಪಾರಕ್ಕೆ ಅವಕಾಶ ಕಲ್ಪಿಸಿ ಎಂಬ ತಮ್ಮ ಮನವಿ ಸಂಬಂಧ ಪೊಲೀಸ್ ಆಯುಕ್ತರೊಂದಿಗೆ ಮಾತನಾಡಿ ಯಾವ ರೀತಿಯಲ್ಲಿ ಕ್ರಮ ವಹಿಸಬೇಕೆಂದು ನಿರ್ಧಾರ ಮಾಡುತ್ತೇನೆ. ಫುಟ್‌ಪಾತ್ ವ್ಯಾಪಾರಿಗಳಿಗೂ ಕಷ್ಟ ಇರುತ್ತದೆ. ಪರಿಶೀಲಿಸಿ ಸೂಕ್ತ ಕ್ರಮ ವಹಿಸಲಾಗುವುದು ಎಂದರು.

ಡ್ರಗ್ಸ್ ವಿರುದ್ಧ ಗಂಭೀರ ಕ್ರಮ: ಡ್ರಗ್ಸ್ ಜಾಲದ ವಿರುದ್ಧ ಕ್ರಮ ವಹಿಸುವ ಸಂಬಂಧ ಸರ್ಕಾರ ಗಂಭೀರವಾಗಿ ತೆಗೆದುಕೊಂಡಿದೆ. ಗಾಂಜಾ ಸೇರಿ ಮೊದಲಾದವು ತೀವ್ರಗತಿಯಲ್ಲಿ ದುಷ್ಪರಿಣಾಮ ಉಂಟು ಮಾಡುವುದಿಲ್ಲ. ಆದರೆ ಸಿಂಥೆಟಿಕ್ ಡ್ರಗ್ಸ್ ಮೆದುಳಿನ ಮೇಲೆ ತೀವ್ರಗತಿಯಲ್ಲಿ ದುಷ್ಪರಿಣಾಮ ಉಂಟು ಮಾಡುತ್ತದೆ. ವಾರದಿಂದ 15 ದಿನ ಇದನ್ನು ಸೇವಿಸಿದರೆ ಸುಧಾರಿಸಿಕೊಳ್ಳುವುದೇ ಕಷ್ಟಸಾಧ್ಯ. ಡ್ರಗ್ಸ್ ತಡೆಗಟ್ಟುವುದರಲ್ಲಿ ಸರ್ಕಾರ ಗಂಭೀರವಾಗಿದ್ದು, ಮೈಸೂರಿನಲ್ಲಿ ಕಟ್ಟುನಿಟ್ಟಾಗಿ ತಡೆಗಟ್ಟಲು ಸೂಚನೆ ನೀಡುತ್ತೇನೆ. ಬೆಂಗಳೂರಿಗೆ ಹೋಲಿಸಿದರೆ ಮೈಸೂರಿನಲ್ಲಿ ಕಡಿಮೆಯೇ. ಅದಾಗ್ಯೂ ಸ್ವಲ್ಪ ಪ್ರಮಾಣವೂ ಆಗಕೂಡದು. ನಿಯಂತ್ರಣಕ್ಕೆ ಕ್ರಮ ವಹಿಸಲಾಗುವುದು ಎಂದು ಮನವಿಗೆ ಸ್ಪಂದಿಸಿದರು. ಹೋಟೆಲ್ ಮಾಲೀಕರು, ಸಿಬ್ಬಂದಿ ಮೇಲಿನ ದೌರ್ಜನ್ಯ ಮತ್ತು ಹಲ್ಲೆ ವಿರುದ್ಧ ಸುರಕ್ಷತಾ ಕಾನೂನು ರೂಪಿಸಲು ಮನವಿ ಮಾಡಿದ್ದೀರಿ. ಈ ವಿಚಾರದಲ್ಲಿ ಅನಗತ್ಯವಾಗಿ ಪೊಲೀಸರು ಮಧ್ಯ ಪ್ರವೇಶಿಸುತ್ತಾರೆ ಎಂದೂ ಹೇಳಿದ್ದೀರಿ. ಇದನ್ನು ಯಾವ ರೀತಿ ತಡೆಗಟ್ಟಬೇಕೆಂಬ ಬಗ್ಗೆ ಚರ್ಚೆ ಮಾಡುತ್ತೇನೆ. ಒಂದು ದಿನದ ಸಭೆ ನಡೆಸಿ ಸಂಬಂಧಿಸಿದ ಎಲ್ಲರೊಂದಿಗೆ ಚರ್ಚಿಸಿ ಮುಂದಿನ ಕ್ರಮ ಜರುಗಿಸುವುದಾಗಿ ಹೇಳಿದರು. ಸಬ್ ಅರ್ಬನ್ ಬಸ್ ನಿಲ್ದಾಣ ಸ್ಥಳಾಂತರ ಪ್ರಸ್ತಾಪ ಕೈಬಿಡಬೇಕೆಂದು ಮೌಖಿಕವಾಗಿ ಮನವಿ ಮಾಡಿದ್ದೀರಿ. ಯಾವ ಉದ್ದೇಶಕ್ಕೆ ಸ್ಥಳಾಂತರ ಮಾಡಬೇಕೆಂದು ನಿರ್ಧರಿಸಿದ್ದಾರೋ ಗೊತ್ತಿಲ್ಲ. ಸಾರಿಗೆ ಸಚಿವರೊಂದಿಗೆ ಮಾತನಾಡಿ ತೀರ್ಮಾನ ಮಾಡಲಾಗುವುದು ಎಂದರು.

ಶಕ್ತಿ ಯೋಜನೆ ಬರೆದಿದ್ದು ನಾನೇ: ನಮ್ಮ ಗ್ಯಾರಂಟಿಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದೀರಿ. ಇದು ಅತ್ಯಂತ ಸಂತಸ ತಂದಿದೆ. ಮಹಿಳೆಯರಿಗೆ ಉಚಿತ ಸಾರಿಗೆ ಸೌಲಭ್ಯದ ಶಕ್ತಿ ಯೋಜನೆ ಬರೆದಿದ್ದು ನಾನೇ. ಪ್ರಣಾಳಿಕೆ ಸಮಿತಿ ಅಧ್ಯಕ್ಷನಾಗಿ ನಮ್ಮ ಮನೆಯಲ್ಲಿ 2 ಗಂಟೆ ರಾತ್ರಿಯಲ್ಲಿ ಅದರ ರೂಪುರೇಷೆಗಳನ್ನು ಪ್ರಣಾಳಿಕೆಯಲ್ಲಿ ಸೇರ್ಪಡೆ ಮಾಡಲಾಯಿತು. ಅದು ಉಪಯೋಗ ಆಗುತ್ತಿದೆ ಎಂದು ಗುರುತಿಸಿದ್ದೀರಿ. ನಾವು ಇದನ್ನು ರಾಜಕೀಯ ಉದ್ದೇಶದಿಂದ ಮಾಡಿದ್ದಲ್ಲ. ಇದು ಸೇರಿದಂತೆ ಗೃಹ ಲಕ್ಷ್ಮಿ ಯೋಜನೆಯನ್ನೂ ಅಂಥವರಿಗೆ ಇಂಥವರಿಗೆ ಎಂದು ವರ್ಗೀಕರಿಸಿಲ್ಲ. ಸಿಎಂ ಸಿದ್ದರಾಮಯ್ಯನವರು ಈ ಜನಪರ ಕಾರ್ಯಕ್ರಗಳ ಯಶಸ್ಸಿಗೆ 56 ಸಾವಿರ ಕೋಟಿ ರೂ.ಗಳನ್ನು ಬಜೆಟ್‌ನಲ್ಲಿ ಮೀಸಲಿಟ್ಟಿದ್ದಾರೆ. ನಾವು ಅವುಗಳನ್ನು ಹಿಂಪಡೆಯಲು ಸಾಧ್ಯವಿಲ್ಲ. ರಾಜಕೀಯ ಕಾರಣಕ್ಕೆ ಗ್ಯಾರಂಟಿ ವಾಪಸ್ಸು ಮಾಡುತ್ತಾರೆ ಎಂದು ಅಪಪ್ರಚಾರ ನಡೆಯುತ್ತಿದೆ ಎಂದು ದೂರಿದರು. ಇಡೀ ವಿಶ್ವದಲ್ಲೇ ಮೈಸೂರು ಪ್ರಖ್ಯಾತಿ ಹೊಂದಿದೆ. ಇಲ್ಲಿ ಮೈಸೂರು ಸಂಸ್ಥಾನ ಇತ್ತು. ಅಂತೆಯೇ ಮೈಸೂರು ಒಡೆಯರ್, ಟಿಪ್ಪು ಸುಲ್ತಾನ್, ಹೈದರ್ ಅಲಿ ಇಲ್ಲಿ ಆಡಳಿತ ನಡೆಸಿದ್ದಾರೆ. ಹತ್ತು ಹಲವು ಕಾರಣಗಳಿಂದಾಗಿ ಇತಿಹಾಸ ಪುಟಗಳಲ್ಲಿ ಮೈಸೂರು ಸೇರಿ ಹೋಗಿದೆ. ಆದರೆ ಆಧುನಿಕ ಕಾಲಘಟ್ಟದಲ್ಲಿ ಮೈಸೂರು ಸ್ಥಾನಮಾನ ಯಾವ ರೀತಿ ಇದೆ ಎಂಬ ಬಗ್ಗೆ ನಾವು ಚಿಂತಿಸಬೇಕಿದೆ. ಮೈಸೂರಿನ ಪ್ರಖ್ಯಾತಿ ಉಳಿಸಿ ಬೆಳೆಸುವ ಸಂಬಂಧ ದೂರವಾಗುತ್ತಿದ್ದೇವೆ ಎಂಬಂತಾಗಿದೆ. ಆ ರೀತಿಯಲ್ಲಿ ಆಗಬಾರದು ಎಂದು ಸಲಹೆ ನೀಡಿದರು.

> **ವಿಶೇಷ ಪೊಲೀಸ್ ವಿಂಗ್ ಸೃಜನೆ**
>
> **ಪ್ರವಾಸಿ ತಾಣದಲ್ಲಿ ಕನ್ನಡೇತರ ಪ್ರವಾಸಿಗರಿಗೆ ಅಗತ್ಯ ಮಾಹಿತಿ ನೀಡಲು ಇಂಗ್ಲಿಷ್ ಮತ್ತು ಹಿಂದಿ ಭಾಷೆಗಳನ್ನು ಬಲ್ಲ ಪೊಲೀಸ್ ಸಿಬ್ಬಂದಿ ನಿಯೋಜಿಸಬೇಕೆಂದು ತಾವು ಮನವಿ ಮಾಡಿದ್ದೀರಿ. ಇಡೀ ರಾಜ್ಯದಲ್ಲಿ ಪ್ರವಾಸಿ ತಾಣಗಳಲ್ಲಿ ಕಾರ್ಯನಿರ್ವಹಿಸಲು ವಿಶೇಷ ಪೊಲೀಸ್ ವಿಂಗ್ ರಚಿಸುವ ಬಗ್ಗೆ ಚಿಂತಿಸಲಾಗುತ್ತಿದೆ. ಪ್ರವಾಸಿ ಸ್ನೇಹಿ ಪೊಲೀಸ್ ವ್ಯವಸ್ಥೆ ಇದಾಗಲಿದ್ದು, ಇದರಲ್ಲಿ ನಿಮ್ಮ ಬೇಡಿಕೆಯಂತೆ ಕೆಲ ಭಾಷೆಗಳನ್ನೂ ಪೊಲೀಸ್ ಸಿಬ್ಬಂದಿಗೆ ಕಲಿಸಬಹುದು. –ಡಾ.ಜಿ.ಪರಮೇಶ್ವರ್**

ಮೈಸೂರು ಬೇಕಿದ್ದರೆ ಬೆಳೆಯಲಿ. ಆದರೆ ನಗರದ ಹೃದಯ ಭಾಗದಲ್ಲಿ ಹೊಸ ಕಟ್ಟಡಗಳು ನಿರ್ಮಾಣವಾಗದೇ ಇದ್ದಂತೆ ಇರುವ ಮೂಲಕ ಗತಕಾಲದ ಪರಂಪರೆ ಉಳಿಸಿಕೊಳ್ಳಬೇಕು. ಅನೇಕ ರಾಷ್ಟ್ರಗಳಲ್ಲಿ ತಮ್ಮ ಪಾರಂಪರಿಕ ಕಟ್ಟಡಗಳ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. ನಮ್ಮ ಪೂರ್ವಜರು ನೀಡಿದ ಪರಂಪರೆ ಕುರುಹು ಹಾಳು ಮಾಡಿಕೊಳ್ಳಬಾರದು. ಪಾರಂಪರಿಕತೆ ವಿಚಾರದಲ್ಲಿ ನಾವು ದೂರವಾಗದೇ ಇಂದಿನ ಆಧುನಿಕತೆಗೆ ತಕ್ಕಂತೆ ಮೈಸೂರನ್ನು ಬೆಳೆಸಬೇಕಿದೆ. ಈ ಬಾರಿ ದಸರಾಗೆ ಹಿಂದಿನ ವರ್ಷಗಳಿಗಿಂತ ಒಂದೂವರೆ ಪಟ್ಟು ಹೆಚ್ಚು ಪ್ರವಾಸಿಗರು ಬರುವ ವರದಿಯಿತ್ತು. ಹೀಗಾಗಿ ಹೆಚ್ಚು ಪೊಲೀಸ್ ಭದ್ರತೆ ಕಲ್ಪಿಸಲಾಗಿತ್ತು. ದಸರಾ ಉತ್ತಮವಾಗಿ ನೆರವೇರಿದ ಬಗ್ಗೆಯೂ ವರದಿ ನನ್ನ ಕೈ ಸೇರಿದೆ ಎಂದರು. ಹೋಟೆಲ್ ಮಾಲೀಕರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ನಾರಾಯಣ ವಿ.ಹೆಗಡೆ, ಉಪಾಧ್ಯಕ್ಷ ಆನಂದ್ ಎಂ.ಶೆಟ್ಟಿ, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ಕಾರ್ಯದರ್ಶಿ ಎ.ಆರ್.ರವೀಂದ್ರ ಭಟ್, ಹೋಟೆಲ್ ಮಾಲೀಕರ ಸಂಘದ ಧರ್ಮದತ್ತಿಯ ಅಧ್ಯಕ್ಷ ರವಿಶಾಸ್ತ್ರಿ ಮತ್ತಿತರರು ಹಾಜರಿದ್ದರು.

ಬೇರೆ ಯಾರನ್ನೂ ತೆಗೆಯಬೇಡಿ

ಮಂಡಿಸಿದಾಗ ಮುರಳಿ ಮನೋ ಹರ್ ಜೋಶಿ ಅವರು ವಿರೋಧಿಸಿ ಭಾಷಣ ಮಾಡಿದ್ದಾರೆ. ಅವರ ಭಾಷಣ ದಲ್ಲಿ ಇದು ಆಹಾರ ಭದ್ರತಾ ಕಾಯ್ದೆ ಯಲ್ಲ, ಮತ ಭದ್ರತಾ ಕಾಯ್ದೆ ಎಂದು ಕರೆದಿದ್ದರು. ಅಂದರೆ ಆಹಾರ ಭದ್ರತಾ ಕಾಯ್ದೆಗೆ ಅವರು ವಿರೋಧವಾಗಿದ್ದರು. ಇಂತಹವರಿಗೆ ಮಾತನಾಡಲು ಯಾವ ನೈತಿಕ ಹಕ್ಕಿದೆ ಎಂದಿದ್ದಾರೆ. ಕರ್ನಾಟಕದಲ್ಲಿ 7 ಕೆ.ಜಿ ಅಕ್ಕಿಯನ್ನು ಉಚಿತವಾಗಿ ಕೊಟ್ಟಿದ್ದು ನಮ್ಮ ಸರ್ಕಾರ. 7 ರಿಂದ 5 ಕೆಜಿಗೆ ಇಳಿಸಿದ್ದು ಬಿ.ಎಸ್. ಯಡಿಯೂರಪ್ಪ. ಆಗ ಆರ್.ಅಶೋಕ್ ಅವರು ಸಚಿವ ಸಂಪುಟ ದಲ್ಲಿದ್ದರು. 2 ಕೆ.ಜಿಯನ್ನು ಕಡಿಮೆ ಮಾಡಿ ದಾಗ ಯಾಕೆ ಉಸಿರೆತ್ತಲಿಲ್ಲ? ಆಹಾರ ಭದ್ರತಾ ಕಾಯ್ದೆ ಯನ್ನು ವಿರೋಧಿಸಿದ ಬಿಜೆಪಿಯವರು ಬಡವರ ಬಗ್ಗೆ ಮಾತ ನಾಡುತ್ತಾರೆ. ನಾವು 5 ಗ್ಯಾರಂಟಿಗಳನ್ನು ಜಾರಿ ಮಾಡಿದ್ದೇವೆ. ಬಿಜೆಪಿ ಅಧಿಕಾರ ದಲ್ಲಿರುವ ರಾಜ್ಯಗಳಲ್ಲಿ ಮಾಡಿದ್ದಾರಾ? ಎಸ್.ಸಿ.ಎಸ್.ಪಿ/ಟಿಎಸ್.ಪಿ ಕಾಯ್ದೆಯನ್ನು ಎಲ್ಲಿ ಯಾದರೂ ಜಾರಿಗೆ ತಂದಿದ್ದಾರೆಯೇ? ರಾಜ್ಯ ಬಿಜೆಪಿ ನಾಯಕರಿಗೆ ಬಡವರ ಕುರಿತು ಯಾವ ಕಾಳಜಿಯೂ ಇಲ್ಲ. ಗ್ಯಾರಂಟಿಗಳಿಗೆ ದುಡ್ಡಿಲ್ಲ ಎಂದು ಬಿಜೆಪಿ ಬಳಿ ಸಾಲ ಕೇಳಿಲ್ಲ. ಬಿಜೆಪಿಯ ವರು ರಾಜಕೀಯವಾಗಿ ಮಾತನಾಡುತ್ತಾರೆ, ಅಷ್ಟೇ ಎಂದು ಸಿದ್ದರಾಮಯ್ಯ ಹೇಳಿದ್ದಾರೆ,

ಮೈಸೂರು ಮಿತ್ರ

ಪೈಲಟ್ ಇಲ್ಲದೇ 20 ನಿಮಿಷ ಪರದಾಡಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್



ಉಡುಪಿ, ನ.21– ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗುರುವಾರ ಉಡುಪಿಯಲ್ಲಿ ಹೆಲಿಕಾಪ್ಟರ್‌ನಲ್ಲಿ ಕುಳಿತರೂ ಪೈಲಟ್ ಇಲ್ಲದೇ 20 ನಿಮಿಷ ಪರದಾಡಿದ ಪ್ರಸಂಗ ನಡೆದಿದೆ.

ಹೆಲಿಕಾಪ್ಟರ್ ಪೈಲಟ್ ತಡವಾಗಿ ಬಂದಿದ್ದು, ನಂತರ ಡಿಸಿಎಂ ಡಿ.ಕೆ.ಶಿವಕುಮಾರ್ ಹೋಗುವ ಸ್ಥಳಕ್ಕೆ ತೆರಳಲು ಟೇಕಾಫ್ ಆಯಿತು. ಬೈಂದೂರಿನ ಅರೆಶಿರೂರು ಹೆಲಿಪ್ಯಾಡ್‌ನಲ್ಲಿ ಗುರುವಾರ ಮಧ್ಯಾಹ್ನ ಈ ಘಟನೆ ನಡೆದಿದೆ.

ಇಂದು ಮಧ್ಯಾಹ್ನ 1.30ಕ್ಕೆ ಬೈಂದೂರಿನ ಹೆಲಿಪ್ಯಾಡ್‌ನಿಂದ ಡಿ.ಕೆ.ಶಿವಕುಮಾರ್ ಅವರು ಹೊರಡಬೇಕಿದ್ದ ಹೆಲಿಕಾಪ್ಟರ್ ಟೇಕ್ ಆಫ್ ಆಗಬೇಕಿತ್ತು. ಆದರೆ, ಡಿ.ಕೆ.ಶಿವಕುಮಾರ್ ಅವಧಿಗಿಂತ ಮುನ್ನವೇ ಅಂದರೆ 12.10ಕ್ಕೆ ಹೆಲಿಪ್ಯಾಡ್‌ಗೆ ಆಗಮಿಸಿದ್ದಾರೆ. ಬಳಿಕ ತರಾತುರಿಯಲ್ಲಿ ಎಲ್ಲವನ್ನೂ ಪರಿಶೀಲನೆ ಮಾಡಿಕೊಂಡು 12.30ಕ್ಕೆ ಹೆಲಿಪ್ಯಾಡ್‌ನೊಳಗೆ ಪ್ರವೇಶ ಮಾಡಿ, ಹೆಲಿಕಾಪ್ಟರ್ ಏರಿ ಕುಳಿತಿದ್ದಾರೆ. ಆದರೆ, ವಾಯುಯಾನದಲ್ಲಿ ನಿಯಮಾವಳಿ ಉಲ್ಲಂಘನೆ ಮಾಡುವಂತಿಲ್ಲ. ಹೀಗಾಗಿ, ಹೆಲಿಕಾಪ್ಟರ್ ಪೈಲಟ್ ಸರಿಯಾದ ಸಮಯಕ್ಕೆ ಹೆಲಿಕಾಪ್ಟರ್ ಟೇಕ್ ಆಫ್ ಮಾಡಲು ನಿರ್ಧರಿಸಿದ್ದರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಇಂದು ಬೆಳಗ್ಗೆ ಬೆಂಗಳೂರಿನಿಂದ ಉಡುಪಿಗೆ ಹೆಲಿಕಾಪ್ಟರ್ ಮೂಲಕ ತೆರಳಿದ್ದರು. ಅಲ್ಲಿ ಕೊಲ್ಲೂರು ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಕೆ ಮಾಡಿ ನಂತರ ಮೀನುಗಾರಿಕೆ ಇಲಾಖೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮಧ್ಯಾಹ್ನ 1.30ಕ್ಕೆ ಬೆಂಗಳೂರಿಗೆ ಬರಲು ಪ್ರವಾಸ ಕಾರ್ಯಕ್ರಮ ನಿಗದಿ ಮಾಡಿದ್ದರು. ಆದರೆ, ಅವಧಿಗಿಂತ ಮುಂಚೆ ಎಲ್ಲ ಕಾರ್ಯಕ್ರಮಗಳು ಮುಗಿದಿದ್ದರಿಂದ ಬೇಗನೆ ಹೆಲಿಪ್ಯಾಡ್‌ನಲ್ಲಿ ಬಂದು ಕುಳಿತಿದ್ದರು. ಆದರೆ, ಡಿಸಿಎಂ ಡಿ.ಕೆ. ಶಿವಕುಮಾರ್ ಹೆಲಿಪ್ಯಾಡ್‌ನಲ್ಲಿ ಕಾಯುತ್ತಿದ್ದರೂ ಅವರಿಗಿಂತ 20 ನಿಮಿಷ ತಡವಾಗಿ ಬಂದ ಪೈಲಟ್ ಸಮಯಕ್ಕೆ ಸರಿಯಾಗಿ 1.30ಕ್ಕೆ ಹೆಲಿಕಾಪ್ಟರ್ ಟೇಕ್ ಆಫ್ ಮಾಡಿಕೊಂಡು ಬೆಂಗಳೂರಿನತ್ತ ತೆರಳಿತು.

ನೈರ್ಮಲ್ಯ ಕಾಪಾಡದ ಮೈಸೂರಿನ ಪಿಜಿಗಳಿಗೆ ದಂಡ

ಆಹಾರ ಪದಾರ್ಥ ಮಾದರಿ ಸಂಗ್ರಹಿಸಿ ಪ್ರಯೋಗಾಲಯಕ್ಕೆ ರವಾನೆ



ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿರುವುದು

ಮೈಸೂರು, ನ.21(ಬಿಎಲ್‌ಯು)– ನೈರ್ಮಲ್ಯ ಕಾಪಾಡದ ಮೈಸೂರಿನ ಪಿಜಿಗಳಿಗೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ದಂಡ ವಿಧಿಸಿದೆ.

ಪಿಜಿಗಳಲ್ಲಿ ನೈರ್ಮಲ್ಯ ಕಾಪಾಡುತ್ತಿಲ್ಲ, ಕಳಪೆ ಗುಣಮಟ್ಟದ ಆಹಾರ ನೀಡಲಾಗುತ್ತಿದೆ ಎಂಬ ದೂರಿನ ಮೇರೆಗೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಧಿಕಾರಿಗಳು ಕಳೆದ ಒಂದು ವಾರದಿಂದ ಮೈಸೂರಿನ ಪಿಜಿಗಳಿಗೆ ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸುವ ಕಾರ್ಯಾಚರಣೆ ಕೈಗೊಂಡಿದ್ದಾರೆ.

ಮೈಸೂರಿನಲ್ಲಿ ಈ ಕಾರ್ಯಾಚರಣೆಗೆ ಇಲಾಖೆ ಮೂವರು ಅಧಿಕಾರಿಗಳ ತಂಡ ರಚಿಸಿದೆ. ಈಗಾಗಲೇ ಮೈಸೂರಿನ 45 ಕ್ಕೂ ಹೆಚ್ಚು ಪಿಜಿಗಳಿಗೆ ಭೇಟಿ ನೀಡಿ, ಅಲ್ಲಿನ ನೈರ್ಮಲ್ಯತೆ ಬಗ್ಗೆ ಪರಿಶೀಲನೆ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಶುಚಿತ್ವವಿಲ್ಲದ ಎರಡು ಪಿಜಿಗಳಿಗೆ ದಂಡ ವಿಧಿಸಿದ್ದಾರೆ. ಒಂದು ಪಿಜಿಗೆ ಐದು ಸಾವಿರ ಹಾಗೂ ಮತ್ತೊಂದಕ್ಕೆ ನಾಲ್ಕು ಸಾವಿರ ದಂಡ ವಿಧಿಸಲಾಗಿದೆ.

ಕಾರ್ಯಾಚರಣೆ ಸಂದರ್ಭದಲ್ಲಿ ನೈರ್ಮಲ್ಯ ಕಾಪಾಡದ ಪಿಜಿಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ. ಶುಚಿತ್ವ ಕಾಪಾಡಿಕೊಳ್ಳದಿದ್ದರೆ ಕಠಿಣ ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಲಾಗಿದೆ.

ಪಿಜಿಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಲ್ಲಿ ನೀಡುತ್ತಿರುವ ಆಹಾರ ಕಳಪೆ ಗುಣಮಟ್ಟದಿಂದ ಕೂಡಿದೆ ಎಂಬುದು ಮೇಲ್ನೋಟಕ್ಕೆ ಕಂಡು ಬಂದ ಹಿನ್ನೆಲೆಯಲ್ಲಿ ಆರು ಪಿಜಿಗಳ ಆಹಾರ ಮತ್ತು ಆಹಾರ ಪದಾರ್ಥಗಳ ಮಾದರಿಯನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ.

ಮೈಸೂರಿನ ಸರಸ್ವತಿಪುರಂ, ವಿಜಯನಗರ ಸೇರಿದಂತೆ ಇತರೆಡೆ ಹೆಚ್ಚು ಪಿಜಿಗಳಿದ್ದು, ಅಲ್ಲಿ ಕೂಡ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದೇವೆ ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಂಕಿತ ಅಧಿಕಾರಿ ಡಾ.ಎಸ್.ಎಲ್.ರವೀಂದ್ರ ತಿಳಿಸಿದ್ದಾರೆ.

ಸಮಾಜ ಕಲ್ಯಾಣ ಇಲಾಖೆ ಹಾಸ್ಟೆಲ್‌ಗಳ ಪರಿಶೀಲನೆಗೂ ಸಿದ್ಧತೆ

ಮೈಸೂರಿನ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಿಗೂ ಕೂಡ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಲು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಧಿಕಾರಿಗಳು ಸಿದ್ಧತೆ ಮಾಡಿಕೊಂಡಿದ್ದಾರೆ.

ರಾಜ್ಯ ಸರ್ಕಾರದ ಸೂಚನೆಯಂತೆ ಈ ಕಾರ್ಯಾಚರಣೆ ಕೈಗೊಂಡಿದ್ದು, ನಗರ ವ್ಯಾಪ್ತಿಯಲ್ಲಿರುವ ಎಲ್ಲಾ ಹಾಸ್ಟೆಲ್‌ಗಳಿಗೆ ಭೇಟಿ ನೀಡಲಿದ್ದಾರೆ. ನೈರ್ಮಲ್ಯ ಕಾಪಾಡದ ಹಾಸ್ಟೆಲ್‌ಗಳ ನಿಲಯ ಪಾಲಕರಿಗೆ ಈ ಸಂದರ್ಭದಲ್ಲಿ ಸಲಹೆ–ಸೂಚನೆ ನೀಡಲಿದ್ದಾರೆ. ಯಾವ ರೀತಿ ಶುಚಿತ್ವ ಇರಬೇಕು ಎಂದು ಮಾರ್ಗದರ್ಶನ ಮಾಡಲಿದ್ದಾರೆ.

ಈಗಾಗಲೇ ಹಿಂದುಳಿದ ವರ್ಗಗಳ 31 ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ತರುವಾಯ ಎಲ್ಲಾ ಹಾಸ್ಟೆಲ್‌ಗಳ ವಾರ್ಡನ್‌ಗಳನ್ನು ಒಂದೆಡೆ ಸೇರಿಸಿ ಕಾರ್ಯಾಗಾರ ನಡೆಸಿರುವ ಅಧಿಕಾರಿಗಳು ನೈರ್ಮಲ್ಯ ಕಾಪಾಡಿಕೊಳ್ಳುವ ಬಗ್ಗೆ ಮಾಹಿತಿ ನೀಡಿದ್ದಾರೆ.

17 ಸಾಧಕರಿಗೆ ಜನಚೈತನ್ಯ ಪುರಸ್ಕಾರ ಪ್ರದಾನ



ಮೈಸೂರಿನ ನಾದಬ್ರಹ್ಮ ಸಂಗೀತಸಭಾದಲ್ಲಿ ಗುರುವಾರ ವಿವಿಧ ಕ್ಷೇತ್ರಗಳ ಸಾಧಕರಿಗೆ ಜನಚೈತನ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು, ನ.21– ಜನ ಚೈತನ್ಯ ಫೌಂಡೇಷನ್ ವತಿಯಿಂದ ಕನ್ನಡ ರಾಜ್ಯೋತ್ಸವ ಪ್ರಯುಕ್ತ ನಗರದ ಜೆ.ಎಲ್.ಬಿ ರಸ್ತೆಯ ನಾದಬ್ರಹ್ಮ ಸಂಗೀತ ಸಭಾದಲ್ಲಿ 'ಕರುನಾಡ ತಾಯಿ ಸದಾ ಚಿನ್ಮಯಿ'– ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿತ್ತು. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳ 17 ಸಾಧಕರಿಗೆ ಜನಚೈತನ್ಯ ಪುರಸ್ಕಾರ ಪ್ರದಾನ ಮಾಡಲಾಯಿತು.

ಕೆ. ರಘುರಾಂ ವಾಜಪೇಯಿ– ಸಮಾಜ ಸೇವೆ, ಸಿ. ಬಸವರಾಜು– ನ್ಯಾಯಾಂಗ ಮತ್ತು ಕ್ರೀಡೆ, ಶಿವಲಿಂಗಯ್ಯ– ಶಿಕ್ಷಣ, ಡಾ.ಎಚ್.ಪಿ. ಶೋಭಾ– ವೈದ್ಯಕೀಯ, ಸಿ.ಆರ್. ಪದ್ಮಶ್ರೀ– ಚಲನಚಿತ್ರ, ವೀರೇಶ್ ರಾವ್– ಸರ್ಕಾರಿ ಸೇವೆ, ಡಾ.ಎಸ್. ಸುಮಾ– ಪ್ರಕೃತಿ ಚಿಕಿತ್ಸೆ ಮತ್ತು ಯೋಗ, ಡಾ.ಆಯೀಷ ಎಂ. ಷರೀಫ್– ಶಿಕ್ಷಣ, ನಿಂಗರಾಜು ಚಿತ್ತಣ್ಣನವರ್– ಪ್ರಕಾಶನ, ಮಂಜು ಕವಿ– ಸಂಗೀತ ಮತ್ತು ಸಾಹಿತ್ಯ, ಸೋಸಲೆ ಸಿದ್ದರಾಜು– ಕರಾಟೆ ಮತ್ತು ಸಮಾಜ ಸೇವೆ ಎಸ್.ಆರ್. ತಿರುಮಲಯ್ಯ– ಶಿಕ್ಷಣ, ಡಾ. ಬಸವರಾಜು– ಸಾಹಿತ್ಯ, ಲಕ್ಷ್ಮೀ ದಿನೇಶ್– ಗಾಯನ, ಚಿತ್ತಾರ ರಮೇಶ್– ಡಿಜಿಟಲ್ ಪೇಂಟಿಂಗ್ಸ್, ಸಿ. ಮಹೇಶ್ವರಿ– ಭರತನಾಟ್ಯ ಹಾಗೂ ಕೆ. ಅರುಣದೇವಿ– ಶಿಕ್ಷಣ ಅವರಿಗೆ ಜನಚೈತನ್ಯ ಪುರಸ್ಕಾರ ನೀಡಲಾಯಿತು.

ಈ ಕಾರ್ಯಕ್ರಮವನ್ನು ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾಧ್ಯಕ್ಷ ನಾಗರಾಜ ವಿ. ಭೈರಿ ಉದ್ಘಾಟಿಸಿದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್, ಚರ್ಮರೋಗ ತಜ್ಞ ಡಾ.ಕೆ.ಎ.ಕೆ. ಸುರೇಂದ್ರನ್, ಎಇಇ ಅಜರುದ್ದೀನ್, ಸ್ತ್ರೀರೋಗ ಮತ್ತು ಪ್ರಸೂತಿ ತಜ್ಞೆ ಡಾ. ರೇಖಾ ಅರುಣ್ ಮುಖ್ಯ ಅತಿಥಿಗಳಾಗಿದ್ದರು. ಅಧ್ಯಕ್ಷ ಆರ್. ಲಕ್ಷ್ಮಣ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸುಮಾರು 45 ಹಾಡುಗಳನ್ನು ಆರ್. ಲಕ್ಷ್ಮಣ್, ಜಾಯ್ಸ್ ವೈಶಾಖ್, ಡಾ.ಕೆಎಕೆ ಸುರೇಂದ್ರನ್, ಅಜರುದ್ದೀನ್, ಡಾ.ರೇಖಾ ಅರುಣ್, ಗುರುರಾಜ್, ವೈ.ಎಂ. ನಾಗೇಂದ್ರ, ಡಾ.ತಿರುಮಲೇಶ್, ಅಮರ್, ಡಾ.ಎಲ್. ಸುಮಾ, ವಿಜಯ್ ಆನಂದ್, ಆರಾಧನಾ ದೇವಿ, ರೂಪ್ ಕುಮಾರ್, ಶಶಿಕಾಂತ್, ರಾಜೇಶ್ ಕಲ್ಲೋರ್, ಬಬಿತಾ, ಸುಮತಿ, ಎನ್. ಶ್ರೀನಿವಾಸುಲು ಶಾಂತಕುಮಾರಿ, ವಿಜಯ್ ಕೃಷ್ಣಪ್ಪ, ಪಿ.ಗುರುಸ್ವಾಮಿ, ಚಿತ್ತಾರ ಎನ್. ರಮೇಶ್, ಪೌಲ್ ದೇವಾನಂದ್, ನಾಗರಾಜ್ ಪಾಟೀಲ್ ಹಾಡಿದರು.

ನಾಟಕದ ಭಿತ್ತಿಪತ್ರ ಬಿಡುಗಡೆ



ಕನಸು ನನಸಿನೆಡೆಗೆ ಪಯಣ ಹಾಗೂ ಎಸ್‌ಬಿಎಂ ಮಂಜು ಸ್ನೇಹ ಬಳಗ ವತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ 'ರಂಗ ರಾಜ್ಯೋತ್ಸವ' ಶೀರ್ಷಿಕೆಯಡಿ ನ.22 ರಿಂದ 24ರವರೆಗೆ ಪೌರಕಾರ್ಮಿಕರ ನಾಟಕ, ಬೆಪ್ಪಕ್ಕಡಿ ಬೋಳೆಶಂಕರ, ಮಿಸ್ ಸೇವಂತಿ, ಕೃಷ್ಣೆ ಗೌಡನ ಆನೆ ನಾಟಕಗಳನ್ನು ವಾರ್ಡ್ ನಂ. 6 ಗೋಕುಲಂ ಬೃಂದಾವನ ಬಡಾವಣೆಯ ಸಾಂಸ್ಕೃತಿಕ ಭವನದಲ್ಲಿ ಉಚಿತವಾಗಿ ಆಯೋಜಿಸಿದ್ದು, ಇದರ ಭಿತ್ತಿಪತ್ರಗಳನ್ನು ಮಾಜಿ ಕಾರ್ಪೋರೇಟರ್ ಎಸ್‌ಬಿಎಂ ಮಂಜು, ದೇವರಾಜು ಪಿ, ಚಿಕ್ಕಹಳ್ಳಿ ಶ್ರೇಯಸ್ ಪಿ, ಮಲ್ಲಿಕ್ ಅರಸ್, ಯೋಗೇಶ್ವರಿ ಬಿಡುಗಡೆಗೊಳಿಸಿದರು.

ಗ್ಯಾರಂಟಿ ಹಣಕ್ಕೆ ಪರದಾಟ; ಸಿದ್ದರಾಮಯ್ಯರ ನೋಡಿದರೆ ಅಯ್ಯೋ ಪಾಪ ಅನಿಸುತ್ತೆ!

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವ್ಯಂಗ್ಯೋಕ್ತಿ



ಹುಬ್ಬಳ್ಳಿ, ನ.21– ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ರಾಜ್ಯದ ರೈತರಿಗೆ, ಆಡಳಿತ ಪಕ್ಷದ ಶಾಸಕರಿಗೆ ನೆಮ್ಮದಿ ಇಲ್ಲ. ಆಡಳಿತ ಪಕ್ಷದ ಶಾಸಕರೇ ಸರ್ಕಾರದ ಬಗ್ಗೆ ಹೀಗೆ ಹೇಳುತ್ತಿದ್ದಾರೆ. ಸಿಎಂ ಅವರನ್ನು ನೋಡಿದರೆ ಅಯ್ಯೋಪಾಪ ಅನ್ನಿಸುತ್ತೆ ಗ್ಯಾರಂಟಿಗಳ ಹಣ ಹೊಂದಿಸಲು ಸಿಎಂ ಪರದಾಡುತ್ತಿದ್ದಾರೆ. ತಮ್ಮ ಹುಳುಕನ್ನು ಮುಚ್ಚಿಕೊಳ್ಳುವ ಉದ್ದೇಶದಿಂದ ಕೇಂದ್ರದ ಮೇಲೆ ಗೂಬೆ ಕೂರಿಸುತ್ತಿದ್ದಾರೆ. ಮುಖ್ಯಮಂತ್ರಿಗಳು ಅವರ ಸ್ಥಾನಕ್ಕೆ ಅಗೌರವ ತರುವಂತಹ ಕೆಲಸ ಮಾಡುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹರಿಹಾಯ್ದಿದ್ದಾರೆ.


ಗುರುವಾರ ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ವಕ್ಫ್ ವಿಚಾರದಲ್ಲಿ ರಾಜ್ಯ ಸರ್ಕಾರ ರೈತರಿಗೆ ಬರೆ ಎಳೆಯುತ್ತಿದೆ. ವಕ್ಫ್ ವಿಚಾರವಾಗಿ ತಮಗೆ ಮಾಹಿತಿಯೇ ಇಲ್ಲ ಎಂದು ಸಿಎಂ ಹೇಳುತ್ತಿದ್ದಾರೆ ಎಂದು ಕಿಡಿ ಕಾರಿದ್ದಾರೆ.

ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ ಅಡಿಯಲ್ಲಿ ಕೇಂದ್ರ ಸರ್ಕಾರ ಶೇ.92.50 ಸಹಾಯ ಮಾಡುತ್ತಿದೆ ಶೇ.7.50 ರಷ್ಟು ಮಾತ್ರ ರಾಜ್ಯ ಸರ್ಕಾರ ನೀಡುತ್ತಿದೆ. ಯಾವ ಮಾನದಂಡದ ಆಧಾರದ ಮೇಲೆ 11.50 ಲಕ್ಷ ಬಿಪಿಎಲ್ ಕಾರ್ಡ್ ರದ್ದು ಮಾಡಿತು, ಇದು ಸಮಂಜಸವಲ್ಲ. ಅವೈಜ್ಞಾನಿಕವಾಗಿ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡ ಲಾಗಿದೆ. ಅನರ್ಹರ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡುವುದು ಸರಿ. ಆದರೆ ಅರ್ಹರ ಕಾರ್ಡುಗಳನ್ನು ರದ್ದು ಮಾಡುವುದು ಎಷ್ಟು ಸರಿ? ಸಿಎಂ ಒಂದೇ ಕಲ್ಲಿನಿಂದ ಎರಡು ಹಕ್ಕಿಗಳನ್ನು ಹೊಡೆಯುವ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ.

ಪಾನ್ ಕಾರ್ಡ್ ಆಧಾರದ ಮೇಲೆ ಈ ರೀತಿ ಮಾಡುತ್ತಿದ್ದಾರೆ. 20 ಲಕ್ಷ ಕಾರ್ಡ್‌ಗಳನ್ನು ರದ್ದು ಮಾಡಿದರೆ ಗೃಹಲಕ್ಷ್ಮೀ ಹಣ ಉಳಿತಾಯವಾಗುತ್ತದೆ ಎಂಬುದು ಅವರ ಉದ್ದೇಶ. ಗ್ಯಾರಂಟಿಗಳ ಬಗ್ಗೆ ಇಡೀ ರಾಜ್ಯದ ಜನ ಕಣ್ಣೀರು ಹಾಕುತ್ತಿದ್ದಾರೆ. ರಾಜ್ಯದ ಮುಖ್ಯಮಂತ್ರಿಗಳು ಅಸಮರ್ಥರಿದ್ದಾರೆ ಗ್ಯಾರಂಟಿ ಯೋಜನೆಗಳಿಗೆ ಹಣ ಕ್ರೋಢೀಕರಣ ಮಾಡಲು ಆಗದೆ ಅಸಮರ್ಥರಾಗಿದ್ದಾರೆ. ಪದೇ ಪದೇ ಕೇಂದ್ರ ಸರ್ಕಾರವನ್ನು ದೂರುತ್ತಿರುವುದು ತಮ್ಮ ಹುಳುಕನ್ನು ಮುಚ್ಚಿಕೊಳ್ಳುವ ಉದ್ದೇಶದಿಂದ ಎಂದು ವಿಜಯೇಂದ್ರ ಕಿಡಿ ಕಾರಿದ್ದಾರೆ.

ನಬಾರ್ಡ್ ಯೋಜನೆಯಡಿ ಬ್ಯಾಂಕ್‌ಗಳಿಗೆ ಅನುದಾನ ಕಡಿತ ವಿಚಾರದ ಬಗ್ಗೆ ಮಾತನಾಡಿದ ವಿಜಯೇಂದ್ರ, ಕರ್ನಾಟಕ ಅಷ್ಟೆ ಅಲ್ಲ ಬೇರೆ ರಾಜ್ಯಗಳಲ್ಲೂ ಹಣ ಕಡಿತವಾಗಿದೆ. ಮಾನದಂಡದ ಆಧಾರದ ಮೇಲೆ ಕಡಿತ ಮಾಡಲಾಗಿದೆ ಎಂದರು.

ಇನ್ಫೋಸಿಸ್ ಸಂಸ್ಥೆಗೆ ಕರ್ನಾಟಕ ಐಟಿ ರತ್ನ ಪ್ರಶಸ್ತಿ



ಬೆಂಗಳೂರು, ನ.21– ಬೆಂಗಳೂರು ಟೆಕ್ ಶೃಂಗಸಭೆಯ 27 ನೇ ಆವೃತ್ತಿಯಲ್ಲಿ ಇನ್ಫೋಸಿಸ್ ಕರ್ನಾಟಕ ಐಟಿ ರತ್ನ ಪ್ರಶಸ್ತಿಗಳನ್ನು ಪಡೆದುಕೊಂಡಿದೆ. ಈ ಪ್ರಶಸ್ತಿಯನ್ನು ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ಸ್ ಆಫ್ ಇಂಡಿಯಾ (ಎಸ್‌ಟಿಪಿಐ) ವತಿಯಿಂದ ರಫ್ತುಗಳಲ್ಲಿ 10,000 ಕೋಟಿ ರೂ.ಗಿಂತ ಹೆಚ್ಚು ಕ್ಲಿಕ್ ಮಾಡಿದ ಕಂಪನಿಗಳಿಗೆ ನೀಡಲಾಗುತ್ತದೆ.

ಅತ್ಯುತ್ತಮ ಸಾಧನೆ ಮಾಡಿರುವ ಇನ್ಫೋಸಿಸ್ ಕಂಪನಿಗೆ 'ಕರ್ನಾಟಕದ ಐಟಿ ರತ್ನ', ಅತ್ಯುತ್ತಮ ಐಟಿ ರಫ್ತು ಕಂಪನಿಗಳಾದ ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್, ರಾಬರ್ಟ್ ಬಾಷ್, ಇಂಟೆಲ್ ಮುಂತಾದ ಕಂಪನಿಗಳಿಗೆ ಎಸ್‌ಟಿಪಿಐ–ಐಟಿ ಪ್ರಶಸ್ತಿಯನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಪ್ರದಾನ ಮಾಡಿದರು.

ಅಮೆಜಾನ್ ಡೆವಲಪ್ಮೆಂಟ್ ಸೆಂಟರ್, ಜೆ.ಪಿ.ಮಾರ್ಗನ್ ಸರ್ವೀಸಸ್, ಗೋಲ್ಡನ್ ಸ್ಯಾಕ್ಸ್, ಸ್ಯಾಮ್ಸಂಗ್ ಆರ್ ಆಂಡ್ ಡಿ, ಕ್ವಾಲ್ಕಾಂ ಇಂಡಿಯಾ, ಸ್ನೀಡರ್ ಎಲೆಕ್ಟ್ರಿಕ್, ಅಲ್ಟ್ರಾನ್ ಟೆಕ್ ಇಂಡಿಯಾ, ಸ್ಯಾಪ್ ಲ್ಯಾಬ್ಸ್, ವಿಎಂ ವೇರ್ ಸಾಫ್ಟ್‌ವೇರ್ಸ್, ಆಕ್ಸೆಂಚರ್ ಸಲ್ಯೂಷನ್ಸ್ ಪರವಾಗಿ ಸಂಸ್ಥೆಗಳ ಉನ್ನತಾಧಿಕಾರಿಗಳು ಪ್ರಶಸ್ತಿ ಸ್ವೀಕರಿಸಿದರು.

ಬಳಿಕ ಮಾತನಾಡಿದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್, ಉದ್ಯಮಿಗಳು ಕೇವಲ ವಾಣಿಜ್ಯ ದೃಷ್ಟಿಯ ಲಾಭವನ್ನು ಮಾತ್ರ ನೋಡುತ್ತಿರುವುದಿಲ್ಲ. ತಮ್ಮ ಪರಿಶ್ರಮ ಮತ್ತು ಬದ್ಧತೆಗಳ ಮೂಲಕ ತಂತ್ರಜ್ಞಾನದ ಭವಿಷ್ಯವನ್ನು ಕೂಡ ನಿರ್ಧರಿಸುತ್ತಾರೆ. ಇದರ ಲಾಭ ಕೊನೆಗೆ ಸಮಾಜಕ್ಕೆ ಸಿಗುತ್ತದೆ. ರಾಜ್ಯದಲ್ಲಿ ನೆಲೆಯೂರಿರುವ ಮಾಹಿತಿ ತಂತ್ರಜ್ಞಾನ ವಲಯದ ಕಂಪನಿಗಳು ಈ ನಿಟ್ಟಿನಲ್ಲಿ ಶ್ಲಾಘನೀಯ ಕೆಲಸ ಮಾಡುತ್ತಿವೆ ಎಂದು ಅಭಿಪ್ರಾಯಪಟ್ಟರು. ಎಸ್‌ಟಿಪಿಐ ಏಳು ವರ್ಷಗಳ ಹಿಂದೆಯೇ ರಾಜ್ಯ ಸರಕಾರದ ಸಹಯೋಗದೊಂದಿಗೆ ಬೆಂಗಳೂರಿನಲ್ಲಿ ಸ್ಮಾರ್ಟ್(ಸೆಮಿಕಂಡಕ್ಟರ್ ಮೆಷರ್ಮೆಂಟ್ ಅನಾಲಿಸಿಸ್ ಆಂಡ್ ರಿಲಾಯಬಿಲಿಟಿ ಟೆಸ್ಟ್) ತೆರೆದಿದೆ. ಇದರಿಂದ ದೇಶದ ಸೆಮಿಕಂಡಕ್ಟರ್ ಮತ್ತು ಇಎಸ್–ಡಿಎಂ ವಲಯಗಳ ಕಾರ್ಯ ಪರಿಸರ ಸುಧಾರಿಸಿದೆ. ಜೊತೆಗೆ ನವೋದ್ಯಮಗಳು ಮತ್ತು ಸೆಮಿಕಂಡಕ್ಟರ್ ಕಂಪನಿಗಳು ವಿನ್ಯಾಸವನ್ನು ರೂಪಿಸಲು ತೆಗೆದುಕೊಳ್ಳುತ್ತಿದ್ದ ದೀರ್ಘ ಸಮಯಕ್ಕೆ ತೆರೆ ಬಿದ್ದಿದೆ ಎಂದು ವಿವರಿಸಿದರು.

ಅಭಿನಂದನೆ



ರಾಜ್ಯ ಸರ್ಕಾರಿ ನೌಕರರ ಸಂಘದ ಮೈಸೂರು ಜಿಲ್ಲಾ ಶಾಖೆಯ ಕಾರ್ಯಕಾರಿ ಸಮಿತಿ ಸದಸ್ಯ ಸ್ಥಾನಕ್ಕೆ 2024–2029 ನೇ ಸಾಲಿಗೆ ನಡೆದ ಚುನಾವಣೆಯಲ್ಲಿ ಪಶುಪಾಲನಾ ಇಲಾಖೆಯಿಂದ ಆಯ್ಕೆಯಾದ ಮುಖ್ಯ ಪಶುವೈದ್ಯಾಧಿಕಾರಿ ಡಾ.ಸಿ.ರಾಮಚಂದ್ರ ಅವರನ್ನು ಅಪ್ಪಣ್ಣ, ವಿಕಾಸ್ ಅರಸ್, ಪಿ ಲಿಂಗೇಗೌಡ ಹಾಗೂ ಪಶುಪಾಲನಾ ಇಲಾಖೆ ಇನ್ನಿತರೆ ಸಿಬ್ಬಂದಿ ಅಭಿನಂದಿಸಿದರು.

ಕೇಂದ್ರದ ನಿರ್ದೇಶನದಂತೆ 80 ಸಾವಿರ ಬಿಪಿಎಲ್ ಕಾರ್ಡ್ ಎಪಿಎಲ್‌ಗೆ ವರ್ಗಾವಣೆ

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು

ಮೈಸೂರು, ನ.21(ಎಂಟಿವೈ)– ಆಹಾರ ಭದ್ರತಾ ಕಾಯ್ದೆಯನ್ನು ಜಾರಿಗೆ ತಂದ ಕಾಂಗ್ರೆಸ್ ಸರ್ಕಾರ ಬಡವರ ಹಿತ ಕಾಯಲು ಸದಾ ಬದ್ಧವಾಗಿದೆ. ಆದರೆ, ಕೇಂದ್ರದ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ನಿರ್ದೇಶನದ ಮೇರೆಗೆ 80 ಸಾವಿರ ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್‌ಗೆ ಬದಲಾವಣೆ ಮಾಡಲಾಗಿದೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ತಿಳಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಡವರಿಗಾಗಿ ಯುಪಿಎ ಸರ್ಕಾರದ ಅಂದಿನ ಪ್ರಧಾನಮಂತ್ರಿ ಡಾ.ಮನಮೋಹನ್ ಸಿಂಗ್ ಅವರು 2013ರಲ್ಲಿ ಆಹಾರ ಭದ್ರತೆ ಕಾಯ್ದೆ ಜಾರಿಗೆ ತಂದರು. ಇದರ ಮಾನದಂಡದಂತೆ ಗ್ರಾಮೀಣ ಪ್ರದೇಶದಲ್ಲಿ ಶೇ.76ರಷ್ಟು, ನಗರ ಪ್ರದೇಶದಲ್ಲಿ ಶೇ.49ರಷ್ಟು ಹೆಚ್ಚು ಬಿಪಿಎಲ್ ಕಾರ್ಡ್‌ದಾರರು ಇರಬಾರದು ಎಂಬ ನಿಯಮ ಇದೆ. ನಮ್ಮ ಕಾಂಗ್ರೆಸ್ ಸರ್ಕಾರ ಕೇಂದ್ರದ ಆದೇಶದಂತೆ 80 ಸಾವಿರ ಬಿಪಿಎಲ್ ಕಾರ್ಡ್‌ದಾರರನ್ನು ಎಪಿಎಲ್‌ಗೆ ಬದಲಾವಣೆ ಮಾಡಲಾಗಿದೆ.

ಬಿಪಿಎಲ್ ಕಾರ್ಡ್ ಪರಿಷ್ಕರಣೆ ನಮ್ಮ ರಾಜ್ಯ ಒಂದರಲ್ಲೇ ನಡೆದಿಲ್ಲ, ದೇಶದ ಎಲ್ಲಾ ರಾಜ್ಯಗಳಲ್ಲೂ ನಡೆದಿದೆ. ಕೇಂದ್ರ ಸರ್ಕಾರದ ನಿರ್ದೇಶನದ ಮೇರೆಗೆ ದೇಶಾದ್ಯಂತ 5.8 ಕೋಟಿ ಬಿಪಿಎಲ್ ಕಾರ್ಡ್‌ದಾರರನ್ನು ಕೈಬಿಡಲಾಗಿದೆ. ಅದನ್ನು ಏಕೆ ಬಿಜೆಪಿಯವರು ಮಾತನಾಡುತ್ತಿಲ್ಲ? ರಾಜಕೀಯ ಕಾರಣಕ್ಕೆ ರಾಜ್ಯದ ಕಾಂಗ್ರೆಸ್ ಸರ್ಕಾರದ ಮೇಲೆ ಗೂಬೆ ಕೂರಿಸಲು ಹಸಿ ಸುಳ್ಳುಗಳನ್ನು ಹೇಳುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಾಲ್ಕು ಬಿಲ್ಡಿಂಗ್, ನಾಲ್ಕಾರು ಕಾರುಗಳನ್ನು ಇಟ್ಟುಕೊಂಡವರಿಗೆ ಬಿಪಿಎಲ್ ಕೊಡಬೇಕೆ. ಅರ್ಹರಿಗೆ ಅನುಕೂಲ ಕಲ್ಪಿಸುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ನಿರ್ದೇಶನದ ಮೇರೆಗೆ ಕೆಲವು ಬದಲಾವಣೆಯನ್ನು ಮಾಡಲು ಮುಂದಾದರೆ ಬಿಜೆಪಿ ನಾಯಕರುಗಳು ಸುಳ್ಳುಗಳನ್ನು ಹೇಳಿಕೊಂಡು ತಿರುಗುತ್ತಿದ್ದಾರೆ. ವಿರೋಧ ಪಕ್ಷದ ನಾಯಕ ಆರ್.ಅಶೋಕ್‌ಗೆ ಸುಳ್ಳು ಹೇಳುವುದರಲ್ಲಿ ಪಿಹೆಚ್.ಡಿ ಕೊಡಬೇಕು ಎಂದು ವ್ಯಂಗ್ಯವಾಡಿದರು.

ಈ ಹಿಂದೆ ಬಿಜೆಪಿ ಸರ್ಕಾರದ ಐದು ವರ್ಷದ ಅವಧಿಯಲ್ಲಿ ಕೇಂದ್ರದಲ್ಲಿ ಸರ್ಕಾರದ ಮಾನದಂಡದಂತೆ ಮೈಸೂರು ಜಿಲ್ಲೆ ಒಂದರಲ್ಲೇ 9881 ಜನ ಬಿಪಿಎಲ್ ಕಾರ್ಡ್‌ದಾರರನ್ನು ಕೈಬಿಡಲಾಗಿದೆ. ಬಿಪಿಎಲ್‌ನಿಂದ ಎಪಿಎಲ್‌ಗೆ ಬದಲಾವಣೆಯಾಗಿರುವವರಿಗೆ ಅಕ್ಕಿ ಮಾತ್ರ ಸಿಗುವುದಿಲ್ಲ, ಇನ್ನುಳಿದ ಎಲ್ಲಾ ಗ್ಯಾರಂಟಿ ಯೋಜನೆಗಳು ದೊರಕುತ್ತವೆ.

ಮೈಸೂರು ಜಿಲ್ಲೆಯಲ್ಲಿ 443.37 ಎಕರೆ ವಕ್ಫ್ ಬೋರ್ಡ್‌ಗೆ ಬದಲಾವಣೆ ಮಾಡಿಕೊಳ್ಳಲಾಗಿದೆ ಎಂದು ಪ್ರತಾಪ್ ಸಿಂಹ ಹೇಳಿದ್ದಾರೆ. ಇದು ಅಪ್ಪಟ ಸುಳ್ಳು. ಅವರು ಏನು ಸರ್ವೆ ನಂಬರ್ ಕೊಟ್ಟು ಹೇಳಿದ್ದಾರೋ ಅದೆಲ್ಲವೂ ಈ ಹಿಂದೆ ಕಬರಸ್ಥಾನ್‌ಗೆ ಸೇರಿದ್ದಾಗಿತ್ತು. ಇದು ವಕ್ಫ್ ಆಸ್ತಿಯೇ, ಈಗ ಕಾರ್ಯದರ್ಶಿ ವಕ್ಫ್ ಬೋರ್ಡ್ ಎಂದು ಆರ್‌ಟಿಸಿಯಲ್ಲಿ ಬಂದಿದೆ. ಮೈಸೂರು ಜಿಲ್ಲೆಯಲ್ಲಿ 443.37 ಎಕರೆ ಅಲ್ಲ, 869.37 ಎಕರೆ ವಕ್ಫ್ ಬೋರ್ಡ್‌ಗೆ ಸೇರಿದೆ. 1965ರಲ್ಲೇ ಗೆಜೆಟ್ ನೋಟಿಫಿಕೇಷನ್ ಆಗಿದೆ. ಪ್ರತಾಪ ಸಿಂಹನಿಗೆ ಸುಳ್ಳು ಹೇಳುವುದೂ ಬರುವುದಿಲ್ಲ ಎಂದು ವ್ಯಂಗ್ಯವಾಡಿದರು.

ಸರ್ಕಾರಿ ಆಸ್ತಿಯನ್ನು ಕಾಂಗ್ರೆಸ್ ಸರ್ಕಾರ ವಕ್ಫ್ ಬೋರ್ಡ್‌ಗೆ ಹಸ್ತಾಂತರಿಸುತ್ತಿಲ್ಲ, ಬಿಜೆಪಿ ಸರ್ಕಾರ ಸರ್ಕಾರಿ ಆಸ್ತಿಯನ್ನು ಅದಾನಿ, ಅಂಬಾನಿಗೆ ಮಾರಾಟ ಮಾಡುತ್ತಿದೆ. ಪ್ರತಾಪ ಸಿಂಹ ಈ ಬಗ್ಗೆ ಚರ್ಚೆಗೆ ಬರಲಿ. ಸಂಸದರಾಗಿದ್ದಾಗ ಚರ್ಚೆಗೆ ಬರಲಿಲ್ಲ, ಈಗ ಆಚೆ ತಳ್ಳಿದ್ದಾರೆ. ಈಗಲಾದರೂ ಬನ್ನಿ ನಾವು ಫ್ರೆಂಡ್ಲಿ ಫೈಟ್ ಮಾಡೋಣ. ಬ್ರಿಟಿಷರ ಕಾಲದಲ್ಲಿ ವಕ್ಫ್ ಕಾಯ್ದೆ ಬಂದಿರುವುದು. ಅದು ಕಾಲ ಕಾಲಕ್ಕೆ ತಿದ್ದುಪಡಿಯಾಗಿದೆ ಎಂದು ಹೇಳಿ 2010ರ ಸುತ್ತೋಲೆ ಬಿಡುಗಡೆ ಮಾಡಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್ ಮಾತನಾಡಿ, ರಾಜ್ಯದಲ್ಲಿ ಬಿಪಿಎಲ್ ಕಾರ್ಡ್ ರದ್ದು, ವಕ್ಫ್ ಆಸ್ತಿ ಬಗ್ಗೆ ಜನರಲ್ಲಿ ಗೊಂದಲ ಉಂಟು ಮಾಡಿ ಸುಳ್ಳು ಹೇಳುತ್ತಿರುವ ಬಿಜೆಪಿ ಅವರಿಗೆ ಸತ್ಯ ತಿಳಿಸಲು ಡಿ.1 ರಂದು ಮೈಸೂರು ಜಿಲ್ಲಾ ಕಾಂಗ್ರೆಸ್ ವತಿಯಿಂದ ಬೆಂಗಳೂರಿನ ಬಿಜೆಪಿ ಕಚೇರಿಗೆ 12 ಗಂಟೆಗೆ ಹೋಗುತ್ತೇವೆ ಈ ಬಗ್ಗೆ ದಾಖಲೆಗಳ ಸಮೇತ ಬಿಜೆಪಿ ನಾಯಕರುಗಳು ಚರ್ಚೆಗೆ ಬರಲಿ ಎಂದು ಸವಾಲು ಹಾಕಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಕಾಂಗ್ರೆಸ್ ಮುಖಂಡರುಗಳಾದ ಶಿವಣ್ಣ, ಬಿ.ಎಂ.ರಾಮು, ಗಿರೀಶ್ ಉಪಸ್ಥಿತರಿದ್ದರು.

ದೇಶ – ವಿದೇಶ

ಐಸ್‌ಲ್ಯಾಂಡ್‌ನಲ್ಲಿ ಮತ್ತೆ ಜ್ವಾಲಾಮುಖಿ ಸ್ಫೋಟ



ಐಸ್‌ಲ್ಯಾಂಡ್: ಜಗತ್ತಿನಾದ್ಯಂತ ಪ್ರವಾಸಿಗರ ಅಚ್ಚುಮೆಚ್ಚಿನ ತಾಣವಾಗಿದ್ದ ಐಸ್‌ಲ್ಯಾಂಡ್‌ನಲ್ಲಿ ಇದೀಗ ಜ್ವಾಲಾಮುಖಿ ಸ್ಫೋಟಗೊಂಡಿದ್ದು, ಕಳೆದ ಡಿಸೆಂಬರ್‌ನಿಂದ ಈವರೆಗೂ ಸತತ 7 ಬಾರಿ ಜ್ವಾಲಾಮುಖಿ ಸ್ಫೋಟವಾಗಿ ಲಾವಾರಸ ಹರಿಯುತ್ತಿದೆ. ಐಸ್‌ಲ್ಯಾಂಡ್‌ನ ರಿಕ್‌ಜೇನ್ಸ್ ಪ್ರಾಂತ್ಯದ ಗ್ರಿಂಡ್‌ವಿಕ್ ಗ್ರಾಮದಲ್ಲಿರುವ ಸುಂಧ್ನುಕಗಿಗರ್ ಜ್ವಾಲಾಮುಖಿ ಬುಧವಾರ ರಾತ್ರಿ ಸ್ಫೋಟಿಸಿದ್ದು, ಮೀನುಗಾರಿಕೆಯನ್ನೇ ನಂಬಿರುವ ಗ್ರಾಮದಲ್ಲಿ ಲಾವಾರಸ ಹರಿಯುತ್ತಿದೆ.

2024ರಲ್ಲಿ ಏಳನೇ ಬಾರಿ ಇಲ್ಲಿ ಜ್ವಾಲಾಮುಖಿ ಸ್ಫೋಟಗೊಂಡಿದ್ದು, ಈವರೆಗೂ ಯಾವುದೇ ಜೀವಹಾನಿಯಾಗಿಲ್ಲ ಎಂದು ಅಧಿಕಾರಿಗಳು ಹೇಳಿದ್ದು, ಆಸ್ತಿ–ಪಾಸ್ತಿ ನಷ್ಟದ ಕುರಿತು ಈಗಷ್ಟೇ ಮಾಹಿತಿ ಕಲೆ ಹಾಕಬೇಕಿದೆ ಎಂದು ಐಸ್‌ಲ್ಯಾಂಡ್‌ನ ಹವಾಮಾನ ಇಲಾಖೆ ವರದಿ ಮಾಡಿದೆ. ಬುಧವಾರ ಸಂಭವಿಸಿದ ಜ್ವಾಲಾಮುಖಿಯಿಂದಾಗಿ ಕೆಂಪು ಹಾಗೂ ಕಿತ್ತಳೆ ಬಣ್ಣದ ಲಾವಾರಸವು ದಟ್ಟ ಹೊಗೆಯೊಂದಿಗೆ ಹರಿಯುತ್ತಿರುವುದು ಕಂಡುಬಂದಿದೆ. ಕಳೆದ ಆಗಸ್ಟ್‌ನಲ್ಲಿ ಸಂಭವಿಸಿದ ಜ್ವಾಲಾಮುಖಿಗೆ ಹೋಲಿಸಿದಲ್ಲಿ ಇದರ ಪ್ರಮಾಣ ಚಿಕ್ಕದು.

ಜಾರ್ಖಂಡ್‌ನಲ್ಲಿ ಮಗುಚಿ ಬಿದ್ದ ಬಸ್: 7 ಮಂದಿ ಸಾವು

ಅಲಿಗಢದಲ್ಲಿ ಬಸ್–ಟ್ರಕ್ ಡಿಕ್ಕಿ: ಐವರು ಸಾವು

ಹಜಾರಿಬಾಗ್ (ಜಾರ್ಖಂಡ್), ನ.21– ಜಾರ್ಖಂಡ್‌ನ ಹಜಾರಿಬಾಗ್ ಜಿಲ್ಲೆಯಲ್ಲಿ ಪ್ರಯಾಣಿಕರೊಂದಿಗೆ ಪಾಟ್ನಾಗೆ ತೆರಳುತ್ತಿದ್ದ ಬಸ್ ಪಲ್ಟಿಯಾದ ಪರಿಣಾಮ ಕನಿಷ್ಠ ಏಳು ಜನರು ಮೃತಪಟ್ಟು ಹಲವರು ಗಾಯಗೊಂಡಿದ್ದಾರೆ.

ಜಿಲ್ಲಾ ಕೇಂದ್ರದಿಂದ ಸುಮಾರು 50 ಕಿಮೀ ದೂರದಲ್ಲಿರುವ ಗೋರ್ಹರ್ ಪೊಲೀಸ್ ಠಾಣೆಯ ಬಳಿ ಈ ಘಟನೆ ಸಂಭವಿಸಿದ್ದು, ತಿರುವು ತೆಗೆದುಕೊಳ್ಳುವಾಗ ಬಸ್ ಪಲ್ಟಿಯಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಇದುವರೆಗೆ ಏಳು ಜನರು ಮೃತಪಟ್ಟಿದ್ದಾರೆ. ಇನ್ನೂ ಕೆಲವರು ಬಸ್ಸಿನಲ್ಲಿ ಸಿಲುಕಿರುವ ಸಾಧ್ಯತೆಯಿದೆ ಎಂದು ಹಜಾರಿಬಾಗ್ ಎಸ್ಪಿ ಅರವಿಂದ್ ಕುಮಾರ್ ಸಿಂಗ್ ಪಿಟಿಐ ಸುದ್ದಿ ಸಂಸ್ಥೆಗೆ ತಿಳಿಸಿದ್ದಾರೆ. ಕೋಲ್ಕತ್ತಾದಿಂದ ಪಾಟ್ನಾಗೆ ತೆರಳುತ್ತಿದ್ದ ಈ ಬಸ್‌ನಲ್ಲಿ ಸುಮಾರು 50 ಮಂದಿ ಪ್ರಯಾಣಿಕರಿದ್ದರು.

ಅಲಿಗಢ (ಉತ್ತರ ಪ್ರದೇಶ): ಇಲ್ಲಿನ ಯಮುನಾ ಎಕ್ಸ್‌ಪ್ರೆಸ್ ವೇಯಲ್ಲಿ ಟ್ರಕ್‌ಗೆ ಬಸ್ ಡಿಕ್ಕಿ ಹೊಡೆದು ಐವರು ಮೃತಪಟ್ಟು ಹಲವರು ಗಾಯಗೊಂಡಿದ್ದಾರೆ. ಜಿಲ್ಲೆಯ ತಪ್ಪಲ್ ಪ್ರದೇಶದಲ್ಲಿ ವಾಹನಗಳು ಹಾದು ಹೋಗುತ್ತಿದ್ದಾಗ ಈ ಘಟನೆ ನಡೆದಿದೆ. ಖಾಸಗಿ ಬಸ್ ದೆಹಲಿಯ ಕಾಶ್ಮೀರ್ ಗೇಟ್‌ನಿಂದ ಪೂರ್ವ ಉತ್ತರ ಪ್ರದೇಶದ ಅಜಂಗಢಕ್ಕೆ ತೆರಳುತ್ತಿತ್ತು ಎಂದು ಗಾಯಗೊಂಡ ಪ್ರಯಾಣಿಕರೊಬ್ಬರು ಸುದ್ದಿಗಾರರಿಗೆ ತಿಳಿಸಿದರು.

ದೆಹಲಿ ಚುನಾವಣೆಗೆ ಆಪ್ ಈಗಲೇ ಅಭ್ಯರ್ಥಿಗಳ ಘೋಷಣೆ

ನವದೆಹಲಿ: ಮುಂದಿನ ವರ್ಷ ನಡೆಯಲಿರುವ ದೆಹಲಿ ವಿಧಾನಸಭೆ ಚುನಾವಣೆಗೆ ಆಡಳಿತರೂಢ ಆಮ್ ಆದ್ಮಿ ಪಾರ್ಟಿ ಈಗಾಗಲೇ ತಯಾರಿ ಮಾಡಿಕೊಳ್ಳುತ್ತಿದೆ. ಚುನಾವಣೆ ಗೆಲ್ಲಲು ಈಗಿನಿಂದಲೇ ಕಸರತ್ತು ಆರಂಭಿಸಿದೆ. ಇದೀಗ ದೆಹಲಿ ವಿಧಾನಸಭೆ ಚುನಾವಣೆಯ 11 ಕ್ಷೇತ್ರಗಳಿಗೆ ಆಮ್ ಆದ್ಮಿ ಪಾರ್ಟಿ ಅಭ್ಯರ್ಥಿಗಳ ಘೋಷಿಸಿದೆ.

ಬಿಜೆಪಿ ಮಾಜಿ ನಾಯಕ ಬ್ರಹ್ಮ್ ಸಿಂಗ್ ತನ್ವಾರ್, ಬಿಬಿಟಿ ತ್ಯಾಗಿ, ಅನಿಲ್ ಜಾ, ಕಾಂಗ್ರೆಸ್ ತೊರೆದು ಆಪ್ ಸೇರಿದ ಚೌಧರಿ ಜುಬೇರ್ ಅಹಮ್ಮದ್, ವೀರ್ ದಿಂಗಾನ್ ಹಾಗೂ ಸುಮೇಶ್ ಶೋಕೀನ್‌ಗೆ ಆಪ್ ಟಿಕೆಟ್ ನೀಡಿದೆ.

ಬ್ರಹ್ಮ್ ಸಿಂಗ್ ತನ್ವಾರ್: ಚತ್ತಾರ್‌ಪುರ್, ರಾಮ್ ಸಿಂಗ್ ನೇತಾಜಿ: ಬದರಪುರ್, ಬಿಬಿ ತ್ಯಾಗಿ : ಲಕ್ಷ್ಮಿ ನಗರ್, ಚೌಧರಿ ಜುಬೇರ್ ಅಹಮ್ಮದ್ : ಸೀಲಂಪುರ್, ವೀರ್ ಸಿಂಗ್ ದಿಂಗಾನ್: ಸೀಮಾಪುರಿ, ಸರಿತಾ ಸಿಂಗ್: ರೋಹ್ತಾಸ್ ನಗರ್, ಗೌರವ್ ಶರ್ಮಾ:ಘೊಂಡಾ, ದೀಪಕ್ ಸಿಂಘ್ಲಾ: ವಿಶ್ವಾಸ್ ನಗರ್, ಮನೋಜ್ ತ್ಯಾಜಿ: ಕರವಾಲ್ ನಗರ್, ಅನಿಲ್ ಜಾ: ಕಿರಾರಿ, ಸುಮೇಶ್ ಶೋಕೀನ್: ಮತಿಯಾಲ ಅವರನ್ನು ಅಭ್ಯರ್ಥಿಗಳಾಗಿ ಘೋಷಿಸಲಾಗಿದೆ.

ಮಂಬರುವ ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಆಮ್ ಆದ್ಮಿ ಪಾರ್ಟಿ ಸೋಲಿಸಲು ಅಮು(ಬಿಜೆಪಿ ಸೇರಿದಂತೆ ಎನ್‌ಡಿಎ ಮಿತ್ರ ಪಕ್ಷಗಳು) ಶತಾಯಗತಾಯ ಪ್ರಯತ್ನಿಸುತ್ತಿದ್ದಾರೆ.

ಸಾವಿರ ಉದ್ಯೋಗಿಗಳಿಗೆ ವಿದೇಶ ಪ್ರವಾಸ ಭಾಗ್ಯ ಕಲ್ಪಿಸಿದ ರಿಯಲ್ ಎಸ್ಟೇಟ್ ಕಂಪನಿ

ಚೆನ್ನೈ: ಚೆನ್ನೈ ಮೂಲದ ರಿಯಲ್ ಎಸ್ಟೇಟ್ ಕಂಪನಿ ತನ್ನ 1,000 ಉದ್ಯೋಗಿಗಳನ್ನು ಒಂದು ವಾರದ ಅವಧಿಗೆ ವಿದೇಶ ಪ್ರವಾಸಕ್ಕೆ ಕಳುಹಿಸಿದೆ. ಉದ್ಯೋಗಿಗಳ ಎಲ್ಲಾ ವೆಚ್ಚಗಳನ್ನು ಕಂಪನಿಯೇ ನೋಡಿಕೊಂಡಿರುವುದು ವಿಶೇಷ.

ಈ ವಿದೇಶ ಪ್ರವಾಸವನ್ನು 'ಪ್ರಾಫಿಟ್–ಷೇರ್ ಬೋನಸ್' ಅಡಿಯಲ್ಲಿ ನೀಡಲಾಗಿದೆ. ಹಿಂದಿನ ವರ್ಷ ಇದೇ ಕಂಪನಿ ತನ್ನ ಉದ್ಯೋಗಿಗಳಿಗೆ ಆಸ್ಟ್ರೇಲಿಯಾ ಪ್ರವಾಸದ ಭಾಗ್ಯವನ್ನು ಕಲ್ಪಿಸಿತ್ತು ಕಂಪನಿಯ ಯಶಸ್ಸಿಗೆ ಕಾರಣವಾದ ಉದ್ಯೋಗಿಗಳನ್ನು ಗುರುತಿಸಿ ಬಹುಮಾನದ ರೂಪದಲ್ಲಿ ವಿದೇಶ ಪ್ರವಾಸಕ್ಕೆ ಕಳುಹಿಸಲಾಗುತ್ತದೆ. ಕಠಿಣ ಪರಿಶ್ರಮ ಮತ್ತು ಶ್ರದ್ಧೆಯ ಪ್ರತಿಫಲವಾಗಿ ಉದ್ಯೋಗಿಗಳು ವಿದೇಶ ಪ್ರವಾಸಕ್ಕೆ ತೆರಳಿದ್ದಾರೆ ಎಂದು ಕಂಪನಿ ತನ್ನ ಅಧಿಕೃತ ಹೇಳಿಕೆಯಲ್ಲಿ ತಿಳಿಸಿದೆ.

ಕಳೆದ ಆರ್ಥಿಕ ವರ್ಷದಲ್ಲಿ ಕಂಪನಿಯ ಮಾರಾಟದ ಟಾರ್ಗೆಟ್ ತಲುಪುವಲ್ಲಿ ಉದ್ಯೋಗಿಗಳ ಪಾತ್ರ ಪ್ರಮುಖವಾಗಿದೆ. ಉದ್ಯೋಗಿಗಳ ಸಮರ್ಪಣೆ, ಬದ್ಧತೆ ಮತ್ತು ಸಹಕಾರಕ್ಕೆ ಪ್ರತಿಯಾಗಿ ಪ್ರವಾಸ ಆಯೋಜನೆ ನೀಡಲಾಗಿದೆ. ಇಂತಹ ಪ್ರಶಂಸೆ ಉದ್ಯೋಗಿಗಳಿಗೆ ತಮ್ಮ ಕೆಲಸದ ಮೇಲಿನ ಪ್ರೀತಿ ಹೆಚ್ಚಾಗುತ್ತದೆ ಇದರೊಂದಿಗೆ ಕಂಪನಿ ಮೇಲಿನ ನಂಬಿಕೆ ಹೆಚ್ಚಾಗುತ್ತದೆ ಎಂದು ಅಧಿಕೃತ ಹೇಳಿಕೆಯಲ್ಲಿ ಮಾಹಿತಿ ನೀಡಿದೆ.

ಮಹಾರಾಷ್ಟ್ರ ಮತ ಲಂಚ: ಪ್ರಮುಖ ಆರೋಪಿ ಶಫಿ ಬಂಧನ

ಮುಂಬೈ: ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ವೇಳೆ ನಡೆದಿದೆ ಎನ್ನಲಾದ ಮತಕ್ಕಾಗಿ ಲಂಚ ಹಗರಣದ ಹಣವನ್ನು ಅಮಾಯಕರ ಬ್ಯಾಂಕ್ ಖಾತೆಗಳ ಮೂಲಕ ಅಕ್ರಮವಾಗಿ ವರ್ಗಾವಣೆ ಮಾಡಿದ್ದ ಪ್ರಕರಣದ ಪ್ರಮುಖ ಆರೋಪಿ ಮೊಹಮ್ಮದ್ ಶಫಿ ಎಂಬಾತನನ್ನು ಗುಜರಾತ್‌ನ ಅಹಮದಾಬಾದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂಧಿಸಲಾಗಿದೆ.

ಶಫಿ ವಿರುದ್ಧ ಜಾರಿ ನಿರ್ದೇಶನಾಲಯ ಲುಕೌಟ್ ನೋಟಿಸ್ ಹೊರಡಿಸಿದ್ದ ಹಿನ್ನೆಲೆಯಲ್ಲಿ ಆತ, ಅಹಮದಾಬಾದ್‌ನಿಂದ ದುಬೈಗೆ ವಿಮಾನದ ಮೂಲಕ ಪರಾರಿಯಾಗಲು ಯತ್ನಿಸಿದ ವೇಳೆ ವಲಸೆ ಅಧಿಕಾರಿಗಳು ಬಂಧಿಸಿದ್ದಾರೆ.

ವ್ಯಕ್ತಿಯೊಬ್ಬರು ತಮ್ಮ ಬ್ಯಾಂಕ್ ಖಾತೆಯಲ್ಲಿ ಅಕ್ರಮವಾಗಿ ಹಣ ಚಲಾವಣೆ ನಡೆದಿದೆ ಎಂದು ಆರೋಪಿಸಿ ನೀಡಿದ್ದ ದೂರನ್ನು ಆಧರಿಸಿ ತನಿಖೆ ನಡೆಸಿದ್ದ ಇಡಿ ಅಧಿಕಾರಿಗಳು, ಕಳೆದ ವಾರ ಮಹಾರಾಷ್ಟ್ರ ಮತ್ತು ಗುಜರಾತ್‌ನಲ್ಲಿ ದಾಳಿ ನಡೆಸಿದ್ದರು. ಬಳಿಕ ಮಾಲೆಗಾಂವ್ ಮೂಲದ ಸಿರಾಜ್ ಅಹಮದ್ ಹರೂನ್ ಮೆಮನ್ ಎಂಬಾತನ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು.

ಈ ಮೆಮನ್, ಶಫಿ ಸೂಚನೆ ಅನ್ವಯ ಹಲವು ಅಮಾಯಕರ ಬ್ಯಾಂಕ್ ಖಾತೆಗಳ ಮೂಲಕ 100 ಕೋಟಿ ರೂ.ಗೂ ಹೆಚ್ಚಿನ ಹಣದ ವಹಿವಾಟು ನಡೆಸಿದ್ದ. ಜೊತೆಗೆ ಹವಾಲಾ ಜಾಲದ ಮೂಲಕವೂ 14 ಕೋಟಿ ರೂ. ಪಾವತಿಸಿದ್ದ ಎನ್ನಲಾಗಿದೆ.

ಇಂದಿನಿಂದ ಕಾಫಿ ನಾಡಿನಲ್ಲಿ ಕಾರುಗಳ ರ್‍ಯಾಲಿ

● ಅಮ್ಮತಿಯಲ್ಲಿ ರೋಬಸ್ಟಾ-2024 ಚಾಂಪಿಯನ್‌ಶಿಪ್‌ಗೆ ಚಾಲನೆ ● ಕೊಡಗಿನ ಕಾಫಿ ತೋಟಗಳ ಕಡಿದಾದ ಮಣ್ಣಿನ ರಸ್ತೆಯಲ್ಲಿ ಸಂಚಾರ

ಸಿದ್ದಾಪುರ, ನ.21-ಪ್ರಕೃತಿ ಸೌಂದರ್ಯದ ಹಚ್ಚ ಹಸಿರಿನ ಕಾಫಿ ನಾಡು ಎಂದು ಪ್ರಸಿದ್ಧವಾಗಿರುವ ಕೊಡಗು ಜಿಲ್ಲೆಯಲ್ಲಿ ಬ್ಲೂ ಬ್ಯಾಂಡ್, ಎಫ್‌ಎಂಎಸ್‌ಸಿಐ, ಇಂಡಿಯನ್ ನ್ಯಾಷನಲ್ ರ್‍ಯಾಲಿ ಚಾಂಪಿಯನ್‌ಶಿಪ್ ನೇತೃತ್ವದಲ್ಲಿ ರೋಬಸ್ಟಾ ಸ್ಪೋರ್ಟ್ಸ್ ಅಂಡ್ ಅಡ್ವೆಂಚರ್ ಅಕಾಡೆಮಿ ಸಹಕಾರದೊಂದಿಗೆ ರೋಬಸ್ಟಾ-2024 ಕಾರುಗಳ ರ್‍ಯಾಲಿ ಚಾಂಪಿಯನ್‌ಶಿಪ್ ಅಮ್ಮತಿಯಲ್ಲಿ ನ.22 ರಿಂದ 24ರವರೆಗೆ ನಡೆಯಲಿದೆ.

ಶುಕ್ರವಾರ ಸಂಜೆ ಅಮ್ಮತ್ತಿ ಪ್ರೌಢಶಾಲೆ ಮೈದಾನದಲ್ಲಿ ಕೊಡಗಿನ ಸಂಪ್ರದಾಯ ಬೊಳಕಾಟ್ ಪ್ರದರ್ಶನದೊಂದಿಗೆ ಗಾಳಿಯಲ್ಲಿ ಗುಂಡು ಹಾರಿಸುವ ಮೂಲಕ ಜಿಲ್ಲಾಧಿಕಾರಿ ವೆಂಕಟ್‌ರಾಜ್ ಹಾಗೂ ವಿವಿಧ ಗಣ್ಯರು ಕಾರು ರ್‍ಯಾಲಿಗೆ ಚಾಲನೆ ನೀಡಲಿದ್ದಾರೆ. ರ್‍ಯಾಲಿಯಲ್ಲಿ ಕರ್ನಾಟಕ, ತಮಿಳುನಾಡು, ಆಂಧ್ರ, ಕೇರಳ, ಮಹಾರಾಷ್ಟ್ರ, ಪಾಂಡಿ, ಗೋವಾ, ಪೂನಾ, ಚಂಡಿಗಡ್, ಕಲ್ಕತ್ತಾ, ದೆಹಲಿ ಸೇರಿದಂತೆ ವಿವಿಧ ರಾಜ್ಯಗಳ ಸುಮಾರು 60ಕ್ಕೂ ಹೆಚ್ಚು ಸ್ಪರ್ಧಾಳುಗಳು ಪಾಲ್ಗೊಳ್ಳಲಿದ್ದಾರೆ.



ಅಮ್ಮತಿಯಲ್ಲಿ ನಡೆಯುವ ರೋಬಸ್ಟಾ-2024 ಚಾಂಪಿಯನ್‌ಶಿಪ್ ರ್‍ಯಾಲಿಯಲ್ಲಿ ಭಾಗವಹಿಸಲು ವಿವಿಧ ರಾಜ್ಯಗಳಿಂದ ಆಗಮಿಸಿರುವ ಕಾರುಗಳು.

ಬಣ್ಣ ಬಣ್ಣದ, ಶಕ್ತಿಶಾಲಿ ಕಾರುಗಳು ಮತ್ತು ಚಾಂಪಿಯನ್ ಚಾಲಕರು ಆನಂದಪುರ, ಪಾಲಿಬೆಟ್ಟ, ಎಮ್ಮೆಗುಂಡಿ, ಹೊಸಳ್ಳಿ, ಮಾರ್ಗೊಳ್ಳಿ, ಸುತ್ತಮುತ್ತಲ ಟಾಟಾ ಸಂಸ್ಥೆಯ ಕಾಫಿ ತೋಟಗಳ ಕಡಿದಾದ ಕಿರಿದಾದ ರಸ್ತೆಯಲ್ಲಿ ರ್‍ಯಾಲಿ ನಡೆಸಲಿದ್ದಾರೆ.

ಭಾನುವಾರ ಸಂಜೆ ಅಮ್ಮತ್ತಿ ಪ್ರೌಢಶಾಲೆ ಮೈದಾನದಲ್ಲಿ ಸಮಾರೋಪ ನಡೆಯಲಿದೆ.

ಶನಿವಾರ ಬೆಳಗ್ಗೆ 8 ಗಂಟೆಯಿಂದಲೇ ಆನಂದಪುರ ಹಾಗೂ ಪಾಲಿಬೆಟ್ಟ ಎಮ್ಮೆಗುಂಡಿ, ತೋಟದ ರಸ್ತೆಯಲ್ಲಿ ರ್‍ಯಾಲಿ ಪ್ರಾರಂಭವಾಗಲಿದೆ. ಭಾನುವಾರ ಬೆಳಗ್ಗೆ 6 ಗಂಟೆಯಿಂದ ಹೊಸಳ್ಳಿ, ಮಾರ್ಗೊಳ್ಳಿ, ಟಾಟಾ ಸಂಸ್ಥೆಯ ಕಾಫಿ ತೋಟದ ಸುತ್ತಮುತ್ತ ರ್‍ಯಾಲಿ ನಡೆಯಲಿದ್ದು, ಒಟ್ಟು 111 ಕಿ.ಮೀ. ದೂರ ರ್‍ಯಾಲಿ ಪಟುಗಳು ಕ್ರಮಿಸಲಿದ್ದಾರೆ.

> ರ್‍ಯಾಲಿಯಲ್ಲಿ ಒಟ್ಟು 61 ಸ್ಪರ್ಧಿಗಳು ಭಾಗವಹಿಸಲಿದ್ದು, ರ್‍ಯಾಲಿಗೆ ಎಲ್ಲಾ ಸಿದ್ಧತೆ ಕೈಗೊಳ್ಳಲಾಗಿದೆ. ರಾಷ್ಟ್ರೀಯ ರ್‍ಯಾಲಿಪಟುಗಳು ತಮ್ಮ ನೈಪುಣ್ಯತೆ ಪ್ರದರ್ಶಿಸಲಿದ್ದಾರೆ.
>
> -ತಿಮ್ಮಣ್ಣ ಉದ್ದಪಂಡ, ಅಧ್ಯಕ್ಷ, ರೋಬಸ್ಟಾ ಸ್ಪೋರ್ಟ್ಸ್ ಅಂಡ್ ಅಡ್ವೆಂಚರ್ ಅಕಾಡೆಮಿ.

> ವಿವಿಧ ರಾಜ್ಯದಲ್ಲಿ ನಡೆಯುವ ಕಾರು ರ್‍ಯಾಲಿಯಲ್ಲಿ ನಾನು ಭಾಗವಹಿಸಿದ್ದು, ಕೊಡಗಿನಲ್ಲಿ ರ್‍ಯಾಲಿಗೆ ಹೆಚ್ಚು ಪ್ರೇಕ್ಷಕರು ಬರುತ್ತಾರೆ. ಕೊಡಗಿನ ಕಾಫಿ ತೋಟದ ಕಿರಿದಾದ ಕಡಿದಾದ ರಸ್ತೆಯಲ್ಲಿ ಕಾರು ಚಾಲನೆ ಮಾಡುವುದು ಅದ್ಭುತ.
>
> -ಅಭಿನ್ ರೈ, ರ್‍ಯಾಲಿಪಟು ಕೊಡಗು



ಮಹಿಳಾ ಸ್ಪರ್ಧಿಗಳು ಹಾಗೂ ಪುರುಷ ಸ್ಪರ್ಧಿಗಳು ಪಾಲ್ಗೊಳ್ಳಲಿದ್ದಾರೆ.

ನಾ ಮುಂದು ತಾ ಮುಂದು ಎಂಬಂತೆ ರ್‍ಯಾಲಿಪಟ್ಟುಗಳು ತಮ್ಮ ವಾಹನಗಳನ್ನು ಭಾರಿ ಸದ್ದು ಮಾಡುವ ಮೂಲಕ ಹರ ಸಾಹಸದಿಂದ ಚಾಲನೆ ಮಾಡಲಿದ್ದಾರೆ. ಇಂಡಿಯನ್ ನ್ಯಾಷನಲ್ ರ್‍ಯಾಲಿ ಚಾಂಪಿಯನ್‌ಶಿಪ್‌ನ 5ನೇ ಸುತ್ತು ಕೊಡಗಿನಲ್ಲಿ ನಡೆಯುತ್ತಿದ್ದು, ಕೊಡಗಿನಲ್ಲಿ 2ನೇ ವರ್ಷದ ಕಾರು ರ್‍ಯಾಲಿ ನಡೆಯುತ್ತಿದೆ. ಕಳೆದ 20 ದಿನದಿಂದಲೂ ಕಾಫಿ ತೋಟದ ಕಡಿದಾದ ಮಣ್ಣಿನ ರಸ್ತೆಯನ್ನು ಮೂರು ಜೆಸಿಬಿಗಳಿಂದ ಯಾವುದೇ ತೊಂದರೆ ಹಾಗೂ ಅಪಘಾತ ಉಂಟಾಗದಂತೆ ಉತ್ತಮ ಸ್ಟೇಜ್ ನಿರ್ಮಿಸಲಾಗಿದೆ.

ದೆಹಲಿಯ ಗೌರವ್ ಗೀಲ್ ಭಾಗಿ: 4 ಆವೃತ್ತಿಗಳು ಚೆನ್ನೈ, ಅರುಣಾಚಲಪ್ರದೇಶ, ಮಹಾರಾಷ್ಟ್ರ ಹೈದರಾಬಾದ್‌ನಲ್ಲಿ ನಡೆದಿದ್ದು, 5ನೇ ಆವೃತ್ತಿ ಕೊಡಗಿನಲ್ಲಿ ನಡೆಯುತ್ತಿದೆ. ಕೊನೆಯ 6ನೇ ಆವೃತ್ತಿ ತುಮಕೂರಿನಲ್ಲಿ ನಡೆಯಲಿದೆ. ಇಂಡಿಯನ್ ಚಾಂಪಿಯನ್ ಪಟ್ಟದೊಂದಿಗೆ ಏಷ್ಯಾ ಪೆಸಿಫಿಕ್ಸ್ ರ್‍ಯಾಲಿ ಚಾಂಪಿಯನ್ ಶಿಪ್, ವರ್ಲ್ಡ್ ರ್‍ಯಾಲಿ ಚಾಂಪಿಯನ್‌ಶಿಪ್ ಸೇರಿದಂತೆ ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಅತ್ಯುತ್ತಮ ರ್‍ಯಾಲಿಪಟು ಎಂದೇ ಹೆಸರುವಾಸಿಯಾಗಿರುವ ದೆಹಲಿಯ ಗೌರವ್ ಗೀಲ್ ಪ್ರಥಮ ಬಾರಿಗೆ ಕೊಡಗಿಗೆ ಆಗಮಿಸುತ್ತಿದ್ದು, ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ.

ಹರ್ಷಿತಗೌಡ, ಶ್ರೀವತ್ಸ ದಂಪತಿ ಭಾಗಿ



ಹರ್ಷಿತಾ ಗೌಡ, ಶ್ರೀವತ್ಸ.

ಕಾರು ರ್‍ಯಾಲಿಯಲ್ಲಿ ಮಹಿಳಾ ಸ್ಪರ್ಧಿಗಳಾದ ಕರ್ನಾಟಕದ ಹರ್ಷಿತಾ ಗೌಡ, ಪವಿತ್ರ ಗೌಡ, ಪುಣೆಯ ನಿಖಿತಾ ಟಕಾಲೆ, ಅನುಷಿ ಭಾಗವಹಿಸಲಿದ್ದಾರೆ. ಹರ್ಷಿತಗೌಡ ಹಾಗೂ ಶ್ರೀವತ್ಸ ದಂಪತಿ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದು, ಹರ್ಷಿತಾ ಗೌಡ ಇಂಡಿಯನ್ ನ್ಯಾಷನಲ್ ಚಾಂಪಿಯನ್‌ಶಿಪ್ ರ್‍ಯಾಲಿಯಲ್ಲಿ ಭಾಗವಹಿಸಿ ನಾಸಿಕ್, ಪುಣೆ, ಕೊಯಂಬತ್ತೂರ್, ಚೆನ್ನೈ, ಹೈದರಾಬಾದ್‌ನಲ್ಲಿ ನಡೆದ ಸ್ಪರ್ಧೆಯಲ್ಲಿ ಪ್ರಥಮ ಅಂಕ ಗಳಿಸುವ ಮೂಲಕ ಐದನೇ ಸುತ್ತಿನಲ್ಲಿ ಭಾಗವಹಿಸಲಿದ್ದಾರೆ.

ಕೆಲ ಸಮಸ್ಯೆಗಳಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರಿಗೆ ಆತಂಕ

ವಿರಾಜಪೇಟೆ, ನ.21-ಕೆಲ ಸಮಸ್ಯೆಗಳಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರಿಗೆ ಆತಂಕ ಉಂಟಾಗಿದೆ ಎಂದು ವಿರಾಜಪೇಟೆ ತಾಲೂಕು ಮುಖ್ಯೋಪಾಧ್ಯಾಯರ ಸಂಘದ ಮಾಜಿ ಅಧ್ಯಕ್ಷ ಬಿ.ಎಸ್.ಲಾಲ್ ಕುಮಾರ್ ತಿಳಿಸಿದ್ದಾರೆ.



ಲಾಲ್‌ಕುಮಾರ್

ಕೊಡಗಿನಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಬಹಳಷ್ಟು ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. ಆದರೆ, ಅನೇಕ ಕಡೆಗಳಲ್ಲಿ ಸರ್ಕಾರ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ನೀಡಿ ಸರ್ಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗಲು ಕಾರಣವಾಗಿದೆ. ಇದರಿಂದ ಇತ್ತೀಚಿನ ದಿನಗಳಲ್ಲಿ ಕೊಡಗಿನಲ್ಲಿ ಹಲವಾರು ಅನುದಾನಿತ ಶಿಕ್ಷಣ ಸಂಸ್ಥೆಗಳು ಮುಚ್ಚುತ್ತಿವೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಅನುದಾನಿತ ಶಿಕ್ಷಣ ಸಂಸ್ಥೆಗಳ ನಂಬಿ ಜೀವನ ಸಾಗಿಸುತ್ತಿರುವ ಶಿಕ್ಷಕರು ಹಾಗೂ ಸಿಬ್ಬಂದಿಗೆ ಆತಂಕ ಉಂಟಾಗಿದೆ. ಅನುದಾನಿತ ಶಾಲೆಗಳಿಗೆ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿದೆ ಎಂದು ಆ ಶಿಕ್ಷಣ ಸಂಸ್ಥೆಯನ್ನು ಮುಚ್ಚುವುದೊಂದೆ ಮಾರ್ಗವಲ್ಲ. ಯಾವ ವಿದ್ಯಾಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇದೆಯೋ, ಅಂತಹ ಶಾಲೆಗಳಿಗೆ ಕನಿಷ್ಠ ಮೂರು ವರ್ಷ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸಲು ಅವಕಾಶ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಅನುದಾನಿತ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳು ಮುಖ್ಯ ಶಿಕ್ಷಕರು, ಸಹಶಿಕ್ಷಕರು, ಶಿಕ್ಷಕರ ಸಂಘಗಳು ಸ್ಥಳೀಯ ಶಾಸಕರಲ್ಲಿ ಮನವಿ ಮಾಡಿ ಸಮಸ್ಯೆ ಬಗೆಹರಿಸಬಹುದು. ಸರ್ಕಾರ ಹಾಗೂ ಶಿಕ್ಷಣ ಇಲಾಖೆ ಪರಿಶೀಲಿಸಿ, ವಿದ್ಯಾರ್ಥಿಗಳ ಹಾಜರಾತಿ ಪ್ರಮಾಣವನ್ನು ಮಿತಿಗೊಳಿಸುವ ನಿಟ್ಟಿನಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳನ್ನು ಉಳಿಸಬೇಕು ಎಂದು ಆಗ್ರಹಿಸಿದ್ದಾರೆ.

ರಾಜರ ಗದ್ದುಗೆ ಜಾಗ ಒತ್ತುವರಿ ತೆರವಿಗೆ ಒತ್ತಾಯ



ಸುದ್ದಿಗೋಷ್ಠಿಯಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ಹೆಚ್.ವಿ.ಶಿವಪ್ಪ ಮಾತನಾಡಿದರು.

ಮಡಿಕೇರಿ, ನ.21-ನಗರದ ರಾಜರ ಗದ್ದುಗೆಗೆ ಸೇರಿದ 19.86 ಎಕರೆ ಪೈಕಿ ಒತ್ತುವರಿಯಾಗಿರುವ 1.18 ಎಕರೆ ಜಾಗವನ್ನು ತೆರವುಗೊಳಿಸುವಂತೆ ಸರ್ಕಾರ ಹೊರಡಿಸಿರುವ ಆದೇಶದನ್ವಯ ಜಿಲ್ಲಾಡಳಿತ ತಕ್ಷಣ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ಕೊಡಗು ಜಿಲ್ಲಾ ಘಟಕ ಒತ್ತಾಯಿಸಿದೆ.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಹಾಸಭಾದ ಜಿಲ್ಲಾಧ್ಯಕ್ಷ ಹೆಚ್.ವಿ. ಶಿವಪ್ಪ, ಒತ್ತುವರಿ ತೆರವುಗೊಳಿಸುವಂತೆ ನ್ಯಾಯಾಲಯ ಆದೇಶ ನೀಡಿ 2 ವರ್ಷವೇ ಕಳೆದಿದೆ. ಆದರೆ, ಇಲ್ಲಿಯವರೆಗೆ ಜಿಲ್ಲಾಡಳಿತ ಯಾವುದೇ ಕ್ರಮ ಕೈಗೊಂಡಿರಲಿಲ್ಲ. ಇದೀಗ ಸ್ವತಃ ಸರ್ಕಾರವೇ ಆದೇಶ ಹೊರಡಿಸಿ ಒತ್ತುವರಿಯಾಗಿರುವ 1.18 ಎಕರೆ ಜಾಗವನ್ನು ತೆರವುಗೊಳಿಸಿ ರಾಜರ ಗದ್ದುಗೆ ಜಾಗವನ್ನು ಸಂರಕ್ಷಿಸುವಂತೆ ನ.4ರಂದು ಜಿಲ್ಲಾಡಳಿತಕ್ಕೆ ಆದೇಶ ನೀಡಿದೆ. ಈ ಆದೇಶದಂತೆ ತೆರವು ಕಾರ್ಯಾಚರಣೆ ನಡೆಸದಿದ್ದರೆ ಮುಂದಿನ ದಿನಗಳಲ್ಲಿ ಕಾನೂನು ಹೋರಾಟ ನಡೆಸಲು ವೀರಶೈವ ಮಹಾಸಭಾ ಚಿಂತನೆ ನಡೆಸಲಿದೆ ಎಂದರು.

ಎಲ್ಲಾ ಒತ್ತುವರಿ ತೆರವಾಗಲಿ: ಸರ್ಕಾರದ ಆದೇಶದಲ್ಲಿ 1.18 ಎಕರೆ ಪ್ರದೇಶದ ಒತ್ತುವರಿಯನ್ನು ಮಾತ್ರ ಉಲ್ಲೇಖಿಸಲಾಗಿದೆ. ಆದರೆ, ರಾಜರ ಗದ್ದುಗೆಗೆ ಸೇರಿದ 19.86 ಎಕರೆಯಲ್ಲಿ ಇನ್ನೂ ಹೆಚ್ಚಿನ ಜಾಗ ಒತ್ತುವರಿಯಾಗಿದೆ. ಸರ್ಕಾರದ ಆದೇಶದ ಪ್ರಕಾರ 1.18 ಎಕರೆ ಮಾತ್ರವಲ್ಲದೆ, ನ್ಯಾಯಾಲಯದ ಆದೇಶದಂತೆ ಒತ್ತುವರಿ ಎಲ್ಲಾ ಜಾಗವನ್ನು ತೆರವುಗೊಳಿಸಬೇಕು. ರಾಜರ ಗದ್ದುಗೆಗೆ ಸೇರಿದ ಜಾಗವನ್ನು ಸಂರಕ್ಷಿಸುವ ಮೂಲಕ ಪ್ರವಾಸೋದ್ಯಮದ ಅಭಿವೃದ್ಧಿಗೆ ಕ್ರಮ ಕೈಗೊಳ್ಳಬೇಕೆಂದು ತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಟಿ.ಎಸ್.ಶಾಂಭ ಶಿವಯ್ಯ, ಉಪಾಧ್ಯಕ್ಷರಾದ ಹೆಚ್.ಜೆ. ಪ್ರವೀಣ್, ಎಸ್.ಎಸ್.ಸುರೇಶ್, ನಿರ್ದೇಶಕ ಟಿ.ಮಹದೇವಪ್ಪ ಹಾಗೂ ಸೋಮವಾರಪೇಟೆ ತಾಲೂಕು ಅಧ್ಯಕ್ಷ ಕೆ.ಬಿ.ಆದರ್ಶ್ ಉಪಸ್ಥಿತರಿದ್ದರು.

ಇಂದು ವಿಶೇಷಚೇತನರಿಗೆ ಆಟೋಟ ಸ್ಪರ್ಧೆ

ಮಡಿಕೇರಿ, ನ.21- ಶಿಶು ಅಭಿವೃದ್ಧಿ ಯೋಜನೆ ಇಲಾಖೆ ವತಿಯಿಂದ ವಿಶ್ವ ವಿಶೇಷಚೇತನರ ದಿನಾಚರಣೆ ಅಂಗವಾಗಿ ಮಡಿಕೇರಿ ತಾಲೂಕಿನ ವಿಶೇಷ ಚೇತನರಿಗೆ ನಗರದ ಗಾಂಧಿ ಮೈದಾನದಲ್ಲಿ ನ.22ರಂದು ಬೆಳಗ್ಗೆ 10 ಗಂಟೆಗೆ ಆಟೋಟ ಸ್ಪರ್ಧೆ ನಡೆಯಲಿದೆ.

ಮಡಿಕೇರಿ ತಾಲೂಕಿನ ಎಲ್ಲಾ ವಿಶೇಷಚೇತನರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅವರು ಕೋರಿದ್ದಾರೆ.

ಮರ್ಕರ ಟೆಕ್ವಾಂಡೋ ಕ್ಲಬ್ ವಿದ್ಯಾರ್ಥಿಗಳಿಗೆ ಕಂಚಿನ ಪದಕ



ಮಿನಿ ಒಲಿಂಪಿಕ್‌ನಲ್ಲಿ ಕಂಚಿನ ಪದಕ ಗಳಿಸಿದ ಮಡಿಕೇರಿಯ ಮರ್ಕರ ಟೆಕ್ವಾಂಡೋ ಕ್ಲಬ್ ವಿದ್ಯಾರ್ಥಿಗಳು.

ಮಡಿಕೇರಿ, ನ.21-ಕರ್ನಾಟಕ ಒಲಿಂಪಿಕ್ ಸಂಸ್ಥೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಬೆಂಗಳೂರಿನ ಕಂಠೀರವ ಒಳಂಗಾಣ ಕ್ರೀಡಾಂಗಣದಲ್ಲಿ ನಡೆದ ಮಿನಿ ಒಲಿಂಪಿಕ್ ಕ್ರೀಡಾಕೂಟದಲ್ಲಿ ಮಡಿಕೇರಿಯ ಮರ್ಕರ ಟೆಕ್ವಾಂಡೋ ಕ್ಲಬ್‌ನ ನಾಲ್ವರು ವಿದ್ಯಾರ್ಥಿಗಳು ಕಂಚಿನ ಪದಕ ಗಳಿಸಿದ್ದಾರೆ.

ಓವರ್ 54 ಕೆಜಿ ವಿಭಾಗದಲ್ಲಿ ಕೊಡಗು ವಿದ್ಯಾಲಯ ಹರ್ಷ್ ಕರುಂಬಯ್ಯ, ಅಂಡರ್ 30 ಕೆಜಿ ವಿಭಾಗದಲ್ಲಿ ಸಂತ ಮೈಕಲರ ಶಾಲೆಯ ಆರೂಷ್ ಪರ್ವಿನ್, ಅಂಡರ್ 26 ಕೆಜಿ ವಿಭಾಗದಲ್ಲಿ ಸಂತ ಜೋಸೆಫರ ಶಾಲೆಯ ಅನಿಯ ಪರ್ವಿನ್ ಹಾಗೂ ಅಂಡರ್ 24 ಕೆಜಿ ವಿಭಾಗದಲ್ಲಿ ವಿರಾಂಜನ್ ಕೊಡಗನ್ನು ಪ್ರತಿನಿಧಿಸಿ ಕಂಚಿನ ಪದಕ ಗೆದ್ದಿದ್ದಾರೆ. ವಿಜೇತ ವಿದ್ಯಾರ್ಥಿಗಳಿಗೆ ಟೆಕ್ವಾಂಡೋ ಕ್ಲಬ್‌ನ ಮಾಸ್ಟರ್ ಕುಶಾಲ್ ಕುಮಾರ್ ಅಭಿನಂದಿಸಿದ್ದಾರೆ.

ಗುಂಡ್ಲುಪೇಟೆಯ ಸಹಕಾರ ಸಂಘಗಳಲ್ಲಿ ಉತ್ತಮ ಪ್ರಗತಿ



ಗುಂಡ್ಲುಪೇಟೆ ತಾಲೂಕಿನ ಹಾಲಹಳ್ಳಿಯಲ್ಲಿ ನಡೆದ ಸಹಕಾರ ಸಪ್ತಾಹವನ್ನು ಶಾಸಕ ಹೆಚ್.ಎಂ.ಗಣೇಶ್‌ಪ್ರಸಾದ್ ಉದ್ಘಾಟಿಸಿದರು.

ಗುಂಡ್ಲುಪೇಟೆ, ನ.21-ತಾಲೂಕಿನಲ್ಲಿ ಸಹಕಾರ ಸಂಘಗಳು ಉತ್ತಮ ಪ್ರಗತಿ ಕಾಣುತ್ತಿವೆ ಎಂದು ಶಾಸಕ ಹೆಚ್.ಎಂ.ಗಣೇಶ್‌ಪ್ರಸಾದ್ ಹೇಳಿದರು.

ತಾಲೂಕಿನ ಹಾಲಹಳ್ಳಿ ಗ್ರಾಮದಲ್ಲಿ ಹೆಚ್‌ಎನ್‌ಎಸ್ ಸಮುದಾಯ ಭವನದಲ್ಲಿ ನಡೆದ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ತಾಲೂಕಿನ ಸಹಕಾರ ಸಂಘಗಳ ಅಭಿವೃದ್ಧಿಗಾಗಿ ಹೆಚ್ಚಿನ ಸಹಕಾರ ನೀಡಲು ತೀರ್ಮಾನಿಸಲಾಗಿದೆ. ಸಹಕಾರವನ್ನೇ ಮೂಲ ತತ್ವವನ್ನಾಗಿಸಿಕೊಂಡಿರುವ ಸಹಕಾರ ಕ್ಷೇತ್ರದಲ್ಲಿ ಮತ್ತಷ್ಟು ಪ್ರಗತಿ ಕಾಣಬೇಕು ಎಂದರು.

ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಹೆಚ್.ಎಸ್. ನಂಜುಂಡಪ್ರಸಾದ್ ಮಾತನಾಡಿ, ಸಹಕಾರ ಸಂಘಗಳು ಜಿಲ್ಲೆಯಲ್ಲಿ ಹೆಚ್ಚಿನ ರೀತಿಯಲ್ಲಿ ಏಳಿಗೆ ಸಾಧಿಸುತ್ತಿವೆ. ಸಂಘಗಳ ಪದಾಧಿಕಾರಿಗಳ ಶ್ರಮ ಉತ್ತಮ ಬೆಳವಣಿಗೆಗೆ ನಾಂದಿ ಹಾಡಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಚಾಮುಲ್ ಅಧ್ಯಕ್ಷ ವೈ.ವಿ. ನಾಗೇಂದ್ರ, ನಿರ್ದೇಶಕರಾದ ಎಂ.ಪಿ.ಸುನಿಲ್, ಶೀಲಾ ಪುಟ್ಟರಂಗಶೆಟ್ಟಿ, ಟಿಎಪಿಸಿಎಂಎಸ್ ಅಧ್ಯಕ್ಷ ಜಯರಾಮು, ಜಿಲ್ಲಾ ಸಹಕಾರ ಒಕ್ಕೂಟದ ಉಪಾಧ್ಯಕ್ಷ ರಾಯಪ್ಪನ್, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಬಸವಣ್ಣ, ವಿವಿಧ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಹಾಜರಿದ್ದರು.

ಇಂದು, ನಾಳೆ ಮಹದೇಶ್ವರ ಉತ್ಸವ

ಬೇಗೂರು, ನ.21-ಗುಂಡ್ಲುಪೇಟೆ ತಾಲೂಕಿನ ಬೇಗೂರು ಸಮೀಪದ ಕೋಟೆಕೆರೆ ಗ್ರಾಮದ ಶ್ರೀ ಮಲೆಮಹದೇಶ್ವರಸ್ವಾಮಿ ದೇವಾಲಯದಲ್ಲಿ ಕಾರ್ತಿಕ ಮಾಸದ ಅಂಗವಾಗಿ ನ.22 ಮತ್ತು 23ರಂದು ಕೊಂಡೋತ್ಸವ ಮತ್ತು ದೇವರ ಉತ್ಸವ ವಿಜೃಂಭಣೆಯಿಂದ ನಡೆಯಲಿದೆ.

ಶುಕ್ರವಾರ ರಾತ್ರಿ ಗ್ರಾಮದಲ್ಲಿ ಮಹದೇಶ್ವರಸ್ವಾಮಿ ಉತ್ಸವ ನಡೆಯಲಿದ್ದು, ಶನಿವಾರ ಮುಂಜಾನೆ ದೇವಾಲಯದಲ್ಲಿ ಕೊಂಡೋತ್ಸವ ನಡೆಯಲಿದೆ ಎಂದು ದೇವಾಲಯ ಆಡಳಿತ ಮಂಡಳಿ ತಿಳಿಸಿದೆ.

ಜಿಂಕೆ ಮಾಂಸ ಸಾಗಿಸುತ್ತಿದ್ದವನ ಬಂಧನ



ಜಿಂಕೆ ಮಾಂಸ ಸಾಗಿಸುತ್ತಿದ್ದ ಮುತ್ತುನನ್ನು ಅರಣ್ಯಾಧಿಕಾರಿಗಳು ಬಂಧಿಸಿರುವುದು.

ಹನೂರು, ನ.21-ಜಿಂಕೆ ಮಾಂಸ ಸಾಗಿಸುತ್ತಿದ್ದ ವ್ಯಕ್ತಿಯನ್ನು ಕುರಟ್ಟಿಹೊಸೂರು-ಕೌದಳ್ಳಿ ಬಳಿ ಅರಣ್ಯಾಧಿಕಾರಿಗಳು ಬಂಧಿಸಿದ್ದಾರೆ.

ಶೆಟ್ಟಳ್ಳಿ ಗ್ರಾಮದ ಮುತ್ತು(56) ಬಂಧಿತ ಆರೋಪಿಯಾಗಿದ್ದು, ಮತ್ತೊಬ್ಬ ಗಿರೀಶ್ ಪರಾರಿಯಾಗಿದ್ದಾನೆ. ರಾಮಾಪುರ ವನ್ಯಜೀವಿ ವಲಯದ ಆರ್‌ಎಫ್‌ಓ ಪ್ರವೀಣ್ ನೇತೃತ್ವದ ತಂಡ ಕುರಟ್ಟಿ ಹೊಸೂರು-ಕೌದಳ್ಳಿ ಮುಖ್ಯರಸ್ತೆ ಬಳಿ ದಾಳಿ ನಡೆಸಿ ಆರೋಪಿ ಮುತ್ತುನನ್ನು ಬಂಧಿಸಿ, ನ್ಯಾಯಾಂಗ ವಶಕ್ಕೆ ಒಪ್ಪಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಗಸ್ತು ಅರಣ್ಯ ಪಾಲಕರಾದ ರಕ್ಷಿತ್, ಸಿ.ಬಿ.ಕಲೇಶ್ ತುರಮರಿ, ವೀರೇಶ, ಸಿಬ್ಬಂದಿ ಭಾಗವಹಿಸಿದ್ದರು.

ಸಂವಿಧಾನವನ್ನು ಯಥಾಸ್ಥಿತಿಯಲ್ಲಿ ಕಾಪಾಡಲಿ

● ದಲಿತ ಮುಖಂಡ ವೆಂಕಟರಮಣಸ್ವಾಮಿ ಹೇಳಿಕೆ ● ಜೆಎಸ್‌ಎಸ್ ಕಾಲೇಜಿನಲ್ಲಿ ಸಂವಿಧಾನ ಅರಿವು

ಚಾಮರಾಜನಗರ, ನ.21-ಸಂವಿಧಾನವನ್ನು ಯಥಾಸ್ಥಿತಿಯಲ್ಲಿ ಕಾಪಾಡುವ ಮಹತ್ವದ ಜವಾಬ್ದಾರಿ ದೇಶದ ಎಲ್ಲರ ಮೇಲಿದೆ ಎಂದು ಅಂಬೇಡ್ಕರ್ ಪ್ರಶಸ್ತಿ ಪುರಸ್ಕೃತರಾದ ದಲಿತ ಹಿರಿಯ ಮುಖಂಡ ವೆಂಕಟರಮಣಸ್ವಾಮಿ (ಪಾಮ) ತಿಳಿಸಿದರು.

ನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಜನಹಿತಾ ಶಕ್ತಿ ಹೋರಾಟ ವೇದಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜೆಎಸ್‌ಎಸ್ ಮಹಿಳಾ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಸಹಯೋಗದಲ್ಲಿ ಆಯೋಜಿಸಿದ್ದ ಸಂವಿಧಾನ ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶದ ಅಖಂಡತೆ ಹಾಗೂ ಸಾರ್ವಭೌಮತ್ವಕ್ಕೆ ಪೂರಕವಾದ ಲಿಖಿತ ಸಂವಿಧಾನ ಬರೆದು ಅಂಬೇಡ್ಕರ್ ಬೃಹತ್ ರಾಷ್ಟ್ರ ಭಾರತಕ್ಕೆ ಅರ್ಪಿಸಿದ್ದಾರೆ. ಆದರೆ, ಈಚೆಗೆ ಸಂವಿಧಾನ ಬದಲಾವಣೆ ಹೇಳಿಕೆಗಳು ಆತಂಕಕಾರಿ. ಭಾರತದಂತಹ ಬೃಹತ್ ರಾಷ್ಟ್ರದಲ್ಲಿ ನಾನಾ ಭಾಷೆ, ಧರ್ಮ, ವಿವಿಧ ಜಾತಿ ಜನರಿದ್ದು, ಇವರ ಅಭಿವೃದ್ಧಿಗೆ ಪೂರಕವಾದ ಸಂವಿಧಾನ ರಚನೆಯಾಗಿರುವುದು ಖುಷಿ ವಿಚಾರ ಎಂದರು.



ಚಾಮರಾಜನಗರ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಆಯೋಜಿಸಿದ್ದ ಸಂವಿಧಾನ ಅರಿವು ಕಾರ್ಯಕ್ರಮವನ್ನು ವೆಂಕಟರಮಣ ಸ್ವಾಮಿ ಉದ್ಘಾಟಿಸಿದರು.

ಚಾಮರಾಜನಗರ ಗಡಿಭಾಗದಲ್ಲಿ 60 ವರ್ಷಗಳ ಹಿಂದೆ ಸುತ್ತೂರು ಮಠಾಧೀಶರು ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ತೆರೆದು, ಸಾವಿರಾರು ಮಂದಿಗೆ ವಿದ್ಯಾದಾನ ಮಾಡಿ, ಅವರು ನೆಮ್ಮದಿಯಿಂದ ಜೀವನ ಸಾಗಿಸುವಂತಹ ವಾತಾವರಣ ನಿರ್ಮಿಸಿದ್ದಾರೆ. ಹಾಗೆಯೇ ಶಿಕ್ಷಣ ತಜ್ಞ ಕೆ.ಸಿ.ರಂಗಯ್ಯ ವಸತಿನಿಲಯ ಸ್ಥಾಪಿಸಿ, ತಳಸಮುದಾಯದ ಜನರು ಶಿಕ್ಷಣ ಪಡೆಯುವ ಮಹತ್ವದ ಅವಕಾಶ ನೀಡಿದರು ಎಂದು ಪ್ರಶಂಸಿಸಿದರು.

ಭೋಗಾಪುರ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಪಿ.ದೇವರಾಜು ಮಾತನಾಡಿ, ದೇಶದಲ್ಲಿ 7530 ಜಾತಿಗಳಿವೆ. ಅನೇಕ ವೈರುದ್ಯ, ಸಾವಿರಾರು ಭಾಷೆ ಮಾತನಾಡುವ ಜನರಿದ್ದಾರೆ. ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳೇ ಉರುಳಿದರೂ ಸಂವಿಧಾನಕ್ಕೆ ಯಾವುದೇ ಅಪಚಾರವಾಗಿಲ್ಲ. ಇಂದಿಗೂ ದೇಶದ ಮಹಿಳೆಯರು ಗೌರವದಿಂದ ಬದುಕುತ್ತಿದ್ದಾರೆ ಎಂದರೆ ಅದಕ್ಕೆ ಅಂಬೇಡ್ಕರ್ ಬರೆದ ಸಂವಿಧಾನವೇ ಕಾರಣ. ಅಂಬೇಡ್ಕರ್ ಅವರನ್ನು ಅರ್ಥ ಮಾಡಿಕೊಂಡರೆ ಸಂವಿಧಾನ ಸುಲಭವಾಗಿ ಅರ್ಥವಾಗುತ್ತದೆ. ಸಂವಿಧಾನ ಅರಿವು ಆಚರಣೆ ತೋರಿಕೆಗೆ ಸೀಮಿತವಾಗಬಾರದು. ಅದರ ಮೂಲ ಉದ್ದೇಶಗಳನ್ನು ಮಾನವೀಯ ನೆಲೆಗಟ್ಟಿನಲ್ಲಿ ಜನಪ್ರತಿನಿಧಿಗಳಾದವರು ತಮ್ಮ ಅವಧಿಯಲ್ಲಿ ಅನುಷ್ಠಾನಗೊಳಿಸುವ ಅಗತ್ಯವಿದೆ ಎಂದರು.

ಪ್ರಾಂಶುಪಾಲ ಡಾ.ಎನ್.ಮಹದೇವಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಸಿದ್ದಾರ್ಥ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಸಿ.ರಂಗಸ್ವಾಮಿ ಸಂವಿಧಾನ ಪೀಠಿಕೆ ಬೋಧಿಸಿದರು. ಕೆಆರ್‌ಐಡಿಎಲ್ ಎಇಇ ಚಿಕ್ಕಲಿಂಗಯ್ಯ, ದಸಂಸ ಜಿಲ್ಲಾ ಸಂಯೋಜಕ ಕೆ.ಎಂ.ನಾಗರಾಜು, ಜಿಲ್ಲಾ ಜನಹಿತಾ ಶಕ್ತಿ ಹೋರಾಟ ವೇದಿಕೆ ಅಧ್ಯಕ್ಷ ರಾಮಸಮುದ್ರ ಸುರೇಶ್, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ಎ.ಆರ್.ಸುಷ್ಮ, ಜೆಎಸ್‌ಎಸ್ ಶಿಕ್ಷಣಸಂಸ್ಥೆ ಸಾರ್ವಜನಿಕ ಸಂಪರ್ಕಾಧಿಕಾರಿ ಆರ್.ಎಂ.ಸ್ವಾಮಿ, ವಿದ್ಯಾರ್ಥಿನಿಯರು ಹಾಜರಿದ್ದರು.

ಬಿಪಿಎಲ್ ಕಾರ್ಡ್ ರದ್ದು ಖಂಡಿಸಿ ತಮಟೆ ಚಳವಳಿ



ಚಾಮರಾಜನಗರದಲ್ಲಿ ಬಿಪಿಎಲ್ ಕಾರ್ಡ್ ರದ್ದು ಖಂಡಿಸಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ತಮಟೆ ಚಳವಳಿ ನಡೆಸಿದರು.

ಚಾಮರಾಜನಗರ, ನ.21- ಬಡವರ ಬಿಪಿಎಲ್ ಕಾರ್ಡ್ ರದ್ದು ಖಂಡಿಸಿ ರಾಜ್ಯ ಸರ್ಕಾರ ವಿರುದ್ಧ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ನಗರದಲ್ಲಿ ಗುರುವಾರ ತಮಟೆ ಚಳವಳಿ ನಡೆಸಿದರು.

ನಗರದ ಜಿಲ್ಲಾಡಳಿತ ಭವನದ ಮುಖ್ಯಗೇಟ್ ಮುಂಭಾಗ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ರಾಜ್ಯ ಸರ್ಕಾರ, ಆಹಾರ ಸಚಿವ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರ ಬಡವರ ಬಿಪಿಎಲ್ ಕಾರ್ಡ್‌ಗಳನ್ನು ದೊಡ್ಡ ಮಟ್ಟದಲ್ಲಿ ರದ್ದು ಮಾಡುವ ಮೂಲಕ ಬಡವರ ಹೊಟ್ಟೆ ಹೊಡೆಯುತ್ತಿದೆ. ಬಡವರಿಗೆ ಕೊಟ್ಟಿರುವ ಬಿಪಿಎಲ್ ಕಾರ್ಡ್ ಕಿತ್ತುಕೊಂಡು ಅವರ ಜೀವನವನ್ನೇ ನಾಶ ಮಾಡಲು ಹೊರಟಿದೆ. ಇದು ಅತ್ಯಂತ ಖಂಡನೀಯ ಎಂದು ದೂರಿದರು.

ಯಾವುದೇ ಕಾರಣಕ್ಕೂ ಬಿಪಿಎಲ್ ಕಾರ್ಡ್ ರದ್ದು ಪಡಿಸಬಾರದು. ಒಂದು ವೇಳೆ ರದ್ದು ಪಡಿಸಿದರೆ, ಇನ್ನೂ 2 ತಿಂಗಳಲ್ಲಿ ನಿಮ್ಮ ಸರ್ಕಾರ ಸಂಪೂರ್ಣ ನಿರ್ನಾಮ ಆಗುತ್ತದೆ. ಒಂದು ಕಡೆ ಗ್ಯಾರಂಟಿ ಯೋಜನೆ ಕೊಟ್ಟು ಜನರಿಗೆ ಮಂಕು ಬೂದಿ ಎರಚುತಿದ್ದೀರಿ. ಮತ್ತೊಂದು ಕಡೆ ಬಿಪಿಎಲ್ ಕಾರ್ಡ್ ಕಿತ್ತುಕೊಳ್ಳುವ ಕೆಲಸ ಆಗುತ್ತಿದ್ದು, ಇದರಿಂದ ಬಡವರು ಕಂಗಾಲಾಗಿದ್ದಾರೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಬಿಪಿಎಲ್ ಅಕ್ಕಿ ಪಡೆಯುವುದಕ್ಕೆ ಮಾತ್ರ ಸೀಮಿತವಾಗದೆ, ಬಡಜನರ ಜೀವನಾಡಿ ಸಂಜೀವಿನಿ ಇದ್ದಂತೆ. ಆಸ್ಪತ್ರೆಯಲ್ಲಿ ಉಚಿತ ಆರೋಗ್ಯ ಸೇವೆ ಪಡೆಯಲು ಸಹಕಾರಿಯಾಗಿದೆ. ನಿಜವಾಗಲ್ಲೂ ರಾಜ್ಯ ಸರ್ಕಾರಕ್ಕೆ ನೈತಿಕತೆ ಇದ್ದರೆ ನೀವು. ಅವೈಜ್ಞಾನಿಕವಾಗಿ ರದ್ದುಪಡಿಸುತ್ತಿರುವ 11 ಲಕ್ಷ ಬಿಪಿಎಲ್ ಕಾರ್ಡ್‌ಗಳನ್ನು ವಾಪಸ್ ಪಡೆಯಬೇಕು. ಇಲ್ಲದಿದ್ದರೆ ರಾಜ್ಯದಲ್ಲಿ ಜನರು ಜನಾಂದೋಲನ ಮಾಡಲಿದ್ದಾರೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಸೇನಾಪಡೆ ಶಾ.ಮುರಳಿ, ನಿಜಧ್ವನಿ ಗೋವಿಂದರಾಜು, ನಂಜುಂಡಶೆಟ್ಟಿ, ಮಹೇಶ ಗೌಡ, ಚಾ.ವೆಂ.ರಾಜ್ ಗೋಪಾಲ್, ಡ್ಯಾನ್ಸ್ ಬಸವರಾಜು, ಲಿಂಗರಾಜು, ಚಾ.ಸಿ.ಸಿದ್ದರಾಜು, ಪ್ರಕಾಶ್, ವೀರಭದ್ರ ಇತರರು ಭಾಗವಹಿಸಿದ್ದರು.

ಶಾಲಾ ಬಸ್ ಹರಿದು ಹೆಣ್ಣು ಮಗು ಸಾವು

ಚಾಮರಾಜನಗರ, ನ.21-ಶಾಲಾ ಬಸ್ ಹರಿದು ನಾಲ್ಕು ವರ್ಷದ ಹೆಣ್ಣು ಮಗು ಸಾವನ್ನಪ್ಪಿರುವ ಘಟನೆ ತಾಲೂಕಿನ ಉಡಿಗಾಲ ಗ್ರಾಮದಲ್ಲಿ ಗುರುವಾರ ನಡೆದಿದೆ.

ಗುಂಡ್ಲುಪೇಟೆ ತಾಲೂಕಿನ ಕೊಡಸೋಗೆ ಗ್ರಾಮದ ಮಹದೇವಸ್ವಾಮಿ ಮತ್ತು ಸುಶ್ಮಿತಾ ದಂಪತಿ ಪುತ್ರಿ ಅನ್ವಿತಾ ಮೃತಪಟ್ಟ ಮಗು.

ಉಡಿಗಾಲ ಗ್ರಾಮದ ತನ್ನ ಅಜ್ಜಿ ಮನೆಯಲ್ಲಿ ಅನ್ವಿತಾ ವಾಸವಾಗಿದ್ದು, ಅದೇ ಗ್ರಾಮದ ಚಂದನ ಕಾನ್ವೆಂಟ್‌ನಲ್ಲಿ ಪ್ರಿಕೆಜಿ ವ್ಯಾಸಂಗ ಮಾಡುತ್ತಿದ್ದಳು. ಪ್ರತಿದಿನದಂತೆ ಇಂದು ಸಹ ಶಾಲೆಗೆ ಹೋಗಿದ್ದ ಅನ್ವಿತಾ, ಶಾಲೆ ಮುಗಿಸಿಕೊಂಡು ಶಾಲಾ ಬಸ್‌ನಲ್ಲಿ ಮನೆ ಬಳಿ ಬಂದಿದ್ದಾಳೆ. ಈ ವೇಳೆ ಚಾಲಕನ ಅಜಾಗರೂಕತೆಯಿಂದ ರಿವರ್ಸ್ ತೆಗೆಯುವಾಗ ಬಸ್ ಮಗುವಿಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಕೆಳಗೆ ಬಿದ್ದ ಮಗುವಿನ ಮೇಲೆ ಬಸ್‌ನ ಹಿಂಬದಿ ಚಕ್ರ ಹರಿದು ಸಾವನ್ನಪ್ಪಿದೆ.

ಚಾಮರಾಜನಗರ ಗ್ರಾಮಾಂತರ ಠಾಣೆ ಪೊಲೀಸರ ಸ್ಥಳ ಪರಿಶೀಲಿಸಿ, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.



ಕಂಗ್ರಾಜ್ಯುಲೇಶನ್ಸ್ ಬ್ರದರ್

ರೊಮ್ಯಾಂಟಿಕ್ ಕಾಮಿಡಿ

ಕಂಗ್ರಾಜ್ಯುಲೇಶನ್ಸ್ ಬ್ರದರ್ ಸೋಷಿಯಲ್ ಮೀಡಿಯಾದಲ್ಲಿ ಸಖತ್ ವೈರಲ್ ಆಗಿರೋ ಈ ಪದ ಇದೀಗ ಸಿನಿಮಾ ವೊಂದರ ಶೀರ್ಷಿಕೆಯಾಗಿದೆ. ಯುವಜನರ ಕನಸುಗಳ ಸುತ್ತ ನಡೆವ ರೊಮ್ಯಾಂಟಿಕ್ ಕಾಮಿಡಿ ಕಥಾಹಂದರ ಇರುವ ಕಂಗ್ರಾಜ್ಯುಲೇಶನ್ಸ್ ಬ್ರದರ್ ಚಿತ್ರಕ್ಕೆ ಅಲೆಮಾರಿ ಸಂತು ಕಥೆ ಬರೆದಿದ್ದು, ಪ್ರತಾಪ್ ಗಂಧರ್ವ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಪ್ರಶಾಂತ್ ಕಲ್ಲೂರು ಹಾಗೂ ಹರೀಶ್ ಚಿತ್ರದ ನಿರ್ಮಾಪಕರು.

ಕಥೆಗಾರ ಹರಿಸಂತೋಷ್ ಮಾತನಾಡುತ್ತ, ಇದೊಂದು ಯೂಥ್‌ಫುಲ್ ಸಬ್ಜೆಕ್ಟ್, ಮಾರ್ನಿಂಗ್ ಶೋ ಪ್ರೇಕ್ಷಕರನ್ನು ಗಮನದಲ್ಲಿಟ್ಟುಕೊಂಡು ಕಥೆ ಮಾಡಿದ್ದೇವೆ. ಕಂಗ್ರಾಜ್ಯುಲೇಶನ್ಸ್ ಬ್ರದರ್ ನಾವೆಲ್ಲ ಸಾಮಾನ್ಯವಾಗಿ ಪ್ರತಿನಿತ್ಯ ಬಳಸುವಂಥ ಪದ. ರಕ್ಷಿತ್ ನಾಯಕನಾಗಿದ್ದು, ಸಂಜನಾದಾಸ್ ಹಾಗೂ ಅನುಷಾ ನಾಯಕಿಯರು. ಹಾಗಂತ ಇದು ಟ್ರಯಾಂಗಲ್ ಲವ್‌ಸ್ಟೋರಿ ಅಲ್ಲ ಎಂದರು.

ನಿರ್ದೇಶಕ ಪ್ರತಾಪ್ ಗಂಧರ್ವ ಮಾತನಾಡುತ್ತ, ನಮ್ಮ ತಂಡದಲ್ಲಿರುವ ಅನೇಕರಿಗೆ ಇದು ಹೊಸ ಹೆಜ್ಜೆ. ಸಾಮಾನ್ಯವಾಗಿ ಹೊಸ ಹೆಜ್ಜೆ ಅಷ್ಟು ಸುಲಭವಾಗಿರಲ್ಲ. ಅದನ್ನು ನಮಗೆ ಹರಿಸಂತೋಷ್ ಈಜಿ ಮಾಡಿಕೊಟ್ಟಿದ್ದಾರೆ. ನಮ್ಮ ಕಥೆ ಪೇಪರ್‌ನಲ್ಲಿ ಈಗಾಗಲೇ ಗೆದ್ದಿದೆ. ಪ್ರೇಕ್ಷಕರೂ ಗೆಲ್ಲಿಸುತ್ತಾರೆಂಬ ನಂಬಿಕೆಯಿದೆ. ಬೆಂಗಳೂರು ಸುತ್ತಮುತ್ತ ಒಂದೇ ಹಂತದಲ್ಲಿ ಚಿತ್ರೀಕರಣ ಮುಗಿಸುವ ಯೋಜನೆಯಿದೆ. ಕ್ಲೈಮ್ಯಾಕ್ಸ್ ಭಾಗ ಮಾತ್ರ ಹಿಲ್‌ಸ್ಟೇಷನ್‌ನಲ್ಲಿ ಶೂಟ್ ಮಾಡುತ್ತೇವೆ ಎಂದರು. ನಾಯಕ ರಕ್ಷಿತ್‌ನಾಗ್ ಮಾತನಾಡುತ್ತ, ಐಟಿ ಬ್ಯಾಕ್‌ಡ್ರಾಪ್‌ನಲ್ಲಿ ನಡೆವ ಕಥೆಯಲ್ಲಿ ನಾನೊಬ್ಬ ಐಟಿ ಎಂಪ್ಲಾಯಿ ಆಗಿ ಕಾಣಿಸಿ ಕೊಳ್ಳುತ್ತಿದ್ದೇನೆ ಎಂದರು. ನಾಯಕಿ ಸಂಜನಾ, ನಟಿ ಅನುಷಾ ಇವರೂ ತಮ್ಮ ಪಾತ್ರಗಳ ಬಗ್ಗೆ ವಿವರಿಸಿದರು. ಛಾಯಾಗ್ರಾಹಕ ಗುರು, ನಿರ್ಮಾಪಕ ಪ್ರಶಾಂತ್ ಕಲ್ಲೂರ್, ಹರೀಶ್ ಮುಂತಾದವರು ಚಿತ್ರದ ಬಗ್ಗೆ ಮಾತನಾಡಿದರು. ಚಿತ್ರದಲ್ಲಿ 5 ಹಾಡುಗಳಿದ್ದು ಸೂರಜ್ ಜೋಯಿಸ್ ಮ್ಯೂಸಿಕ್ ಕಂಪೋಜ್ ಮಾಡುತ್ತಿದ್ದಾರೆ.

ಬೆಂಗಳೂರಲ್ಲಿ ಮತ್ತೊಂದು ಸುಸಜ್ಜಿತ ಸ್ಟುಡಿಯೋ



ಕನ್ನಡ ನಿರ್ಮಾಪಕರು ಶೂಟಿಂಗ್ ನಂತರ ಅತ್ಯುತ್ತಮ ಸೌಂಡ್ ಕ್ವಾಲಿಟಿಗಾಗಿ ವಿಎಫ್‌ಎಕ್ಸ್ ಕೆಲಸಕ್ಕೆ ಚೆನ್ನೈ, ಹೈದರಾಬಾದ್ ಅಂತ ಹೋಗಬೇಕಾಗಿಲ್ಲ, ಬೆಂಗಳೂರಿನಲ್ಲೇ ಅಂಥಾ ಮತ್ತೊಂದು ಸುಸಜ್ಜಿತ ವಿಎಫ್‌ಎಕ್ಸ್ ಸ್ಟುಡಿಯೋ ಆರಂಭವಾಗಿದೆ, ನಟ ಕಮಲ್ ಅವರು ಈ ಸ್ಟುಡಿಯೋವನ್ನು ಬನ್ನೇರುಘಟ್ಟ ರಸ್ತೆಯಲ್ಲಿ ಆರಂಭಿಸಿದ್ದಾರೆ, ಇತ್ತೀಚೆಗೆ ಹಿರಿಯ ನಿರ್ದೇಶಕ ಓಂಸಾಯಿಪ್ರಕಾಶ್ ಹಾಗೂ ಉಮೇಶ್ ಬಣಕಾರ್ ಅವರು ಈ ಸ್ಟುಡಿಯೋಗೆ ಚಾಲನೆ ನೀಡಿದರು. ಉದ್ಘಾಟಿಸಿ ಶುಭ ಕೋರಿದರು.

ಈ ಬಗ್ಗೆ ಮಾತನಾಡಿದ ಕಮಲ್, ಮೊದಲು ನಾನೊಬ್ಬ ಸಾಹಿತಿಯಾಗಿದ್ದೆ, ಆನಂತರ ನಟನಾಗುವ ಆಸೆಯಿಂದ ಚಿತ್ರರಂಗಕ್ಕೆ ಬಂದೆ. ಇತ್ತೀಚೆಗೆ ತೆರೆಕಂಡ ದಿ ಸೂಟ್ ಚಿತ್ರದಲ್ಲಿ ಅಭಿನಯಿಸಿದ್ದೇನೆ. ನಮ್ಮ ಚಿತ್ರರಂಗಕ್ಕೆ ಅನುಕೂಲವಾಗುವಂತೆ ಏನಾದರೂ ಮಾಡಬೇಕೆಂದುಕೊಂಡಾಗ ಹೊಳೆದದ್ದೇ ಈ ಸ್ಟುಡಿಯೋ. ನುರಿತ ತಂತ್ರಜ್ಞರ ಜತೆಸೇರಿ ಈ ಸ್ಟುಡಿಯೋ ಆರಂಭಿಸಿದ್ದೇವೆ. ನಿರ್ಮಾಪಕರಿಗೆ ಅನುಕೂಲವಾಗುವಂತಹ ಸ್ಟುಡಿಯೋ ಮಾಡಿದ ಖುಷಿಯಿದೆ ಎಂದು ಹೇಳಿದರು. ಇಪ್ಪತ್ತೈದು ವರ್ಷಗಳಿಂದ ಚಿತ್ರರಂಗದ ವಿವಿಧ ವಿಭಾಗಗಳಲ್ಲಿ ಕೆಲಸ ಮಾಡಿ ಅನುಭವ ಹೊಂದಿರುವ ತಂತ್ರಜ್ಞ ಲೋಕೇಶ್, ಇತ್ತೀಚೆಗೆ ನಾವು ಈ ಸ್ಟುಡಿಯೋ ಆರಂಭಿಸಿದ್ದೇವೆ. ಸುಮಾರು ನೂರಕ್ಕೂ ಅಧಿಕ ತಂತ್ರಜ್ಞರು ನಮ್ಮ ಸ್ಟುಡಿಯೋದಲ್ಲಿ ಕೆಲಸ ಮಾಡುತ್ತಿದ್ದಾರೆ ಧ್ರುವ ಸರ್ಜಾ ಅಭಿನಯದ ಮಾರ್ಟಿನ್ ಚಿತ್ರದ ವಿಎಫ್‌ಎಕ್ಸ್ ಇಲ್ಲೇ ನಡೆದಿದೆ, ಅರ್ಜುನ್ ಜನ್ಯ ಅವರ ನಿರ್ದೇಶನದ ಹಾಗೂ ಶಿವರಾಜಕುಮಾರ್, ಉಪೇಂದ್ರ ಹಾಗೂ ರಾಜ್ ಬಿ.ಶೆಟ್ಟಿ ಅಭಿನಯದ "45" ಚಿತ್ರದ ಕೆಲಸಗಳು ಸಹ ನಮ್ಮ ಸ್ಟುಡಿಯೋದಲ್ಲೇ ನಡೆಯುತ್ತಿದೆ ಎಂದು ಹೇಳಿದರು.


ಹಳ್ಳಿಯನ್ನೇ ದಿಲ್ಲಿ ಮಾಡ ಹೊರಟವನ 'ಡಿಸ್ಕೋ'



ಅಲೆಮಾರಿ, ಕಾಲೇಜ್‌ಕುಮಾರ್, ಬಿಚ್ಚುಗತ್ತಿ ಹೀಗೆ ವಿಭಿನ್ನ ಜಾನರ್ ಚಿತ್ರಗಳನ್ನು ನಿರ್ದೇಶಿಸುತ್ತ ಬಂದ ಹರಿಸಂತೋಷ್ ಇದೀಗ ಒಟ್ಟಿಗೇ ಎರಡು ಚಿತ್ರಗಳನ್ನು ಪ್ರಾರಂಭಿಸಿದ್ದಾರೆ. ಆ ಎರಡೂ ಚಿತ್ರಗಳಿಗೆ ಇತ್ತೀಚೆಗೆ ಚಾಲನೆ ದೊರೆಯಿತು. ಹಳ್ಳಿ ಬ್ಯಾಕ್‌ಡ್ರಾಪ್‌ನಲ್ಲಿ ನಡೆವ ಕಥಾಹಂದರ ಹೊಂದಿದ ಡಿಸ್ಕೋ ಚಿತ್ರಕ್ಕೆ ಹರಿಸಂತೋಷ್ ಆಕ್ಷನ್ ಕಟ್ ಹೇಳುತ್ತಿದ್ದು, ಇದರಲ್ಲಿ ನಟ ವಿಕ್ಕಿ ವರುಣ್ ಬುದ್ದಿವಂತ ಹಳ್ಳಿ ಹುಡುಗನಾಗಿ ಕಾಣಿಸಿಕೊಳ್ಳುತ್ತಿದ್ದಾರೆ, ಪೆನ್ ಎನ್ ಪೇಪರ್ ಸ್ಟುಡಿಯೋಸ್ ಹಾಗೂ ಕಲ್ಲೂರ್ ಸಿನಿಮಾಸ್ ಈ ಚಿತ್ರಗಳನ್ನು ನಿರ್ಮಿಸುತ್ತಿದೆ.

ಚಿತ್ರದ ಕುರಿತಂತೆ ಮಾತನಾಡಿದ ಹರಿಸಂತೋಷ್, ನಾನು ಈವರೆಗೆ ಲವ್‌ಸ್ಟೋರಿ, ಹಿಸ್ಟಾರಿಕಲ್ ಹೀಗೆ ಎಲ್ಲಾ ಜಾನರ್ ಟ್ರೈ ಮಾಡಿದ್ದೇನೆ, ಆದರೆ ವಿಲೇಜ್ ಸಿನಿಮಾ ಮಾಡಿದ್ದಿಲ್ಲ, ಡಿಸ್ಕೋ ನಾಯಕನಿಗಿರುವ ಅಡ್ಡ ಹೆಸರು. ಈ ಹಿಂದೆ ನಾವಿಬ್ಬರೂ ಕಾಲೇಜ್‌ಕುಮಾರ ಎಂಬ ಚಿತ್ರ ಮಾಡಿದ್ದೆವು, ಇದು ಹಳ್ಳಿ ಹಿನ್ನೆಲೆಯಲ್ಲಿ ನಡೆಯೋ ಚಿತ್ರ 25 ವರ್ಷಗಳ ಹಿಂದೆ ಈ ಜಾನರ್ ಸಿನಿಮಾ ಬಂದಿತ್ತು, ಆನಂತರ ಯಾರೂ ಇದನ್ನು ಟ್ರೈ ಮಾಡಿಲ್ಲ, ನಾವು ನೋಡಿರುವ ವಿಷಯದ ಬಗ್ಗೆ ಎಲ್ಲರೂ ಮಾತಾಡ್ತಿರ್ತೀವಿ, ಆದರೆ ನೋಡದೆ ಇರುವ ವಿಷಯದ ಬಗ್ಗೆ ಜನ ಹೇಗೆ ಮಾತಾಡ್ತಿರ್ತಾರೆ ಅನ್ನೋದನ್ನು ಈ ಚಿತ್ರದಲ್ಲಿ ಹೇಳಲಿದ್ದೇವೆ. ಈ ಚಿತ್ರಕ್ಕೆ ಧ್ರುವ್ ಸಂಗೀತ ಸಂಯೋಜನೆ ಮಾಡುತ್ತಿದ್ದಾರೆ ಎಂದು ಹೇಳಿದರು. ನಂತರ ವಿಕ್ಕಿ ವರುಣ್ ಮಾತನಾಡುತ್ತ, ನಾನು ನಾಯಕನಾಗಿ ನಟಿಸುತ್ತಿರುವ ನಾಲ್ಕನೇ ಚಿತ್ರವಿದು. ರಿಯಲ್ಲಾಗಿ ಹೇಗಿದ್ದೀನೋ ಅದೇ ಥರದ ಪಾತ್ರವನ್ನಿಲ್ಲಿ ಮಾಡುತ್ತಿದ್ದೇನೆ, ಇದು ಹಳ್ಳಿಯಿಂದ ಸಿಟಿಗೆ ಬರೋ ಹುಡುಗನ ಕಥೆ ಅಲ್ಲ, ಹಳ್ಳಿಯನ್ನೇ ಸಿಟಿಯನ್ನಾಗಿ ಮಾಡಲುಹೊರಟವನ ಕಥೆ ಎಂದರು.

ಸಿನಿಪದಬಂಧ-552



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ____________

ವಿಳಾಸ ____________

ದೂರವಾಣಿ ಸಂಖ್ಯೆ ____________

ಎಡದಿಂದ ಬಲಕ್ಕೆ

- 1.ವಿಜ್ಞಾನಿಯೊಬ್ಬನ ನೆನಪಾದರೆ ರಮೇಶ್ ಚಿತ್ರ ಸಿಗಲಿದೆ 4
- 4.ನಾನಾ ಕಾಯಿಲೆಗಳಿದ್ದರೂ ವಾಲಿ ಚಿತ್ರದಲ್ಲಿ ಮೈಕೆಲ್ ಮಧು ಹೆಸರು ಹೀಗೇಕೆ 5
- 6.ಹಣದ ಭೂತ 5
- 8.ಕಾಡಿನ ದೇವತೆಗೆ ರವಿ ನಿರ್ದೇಶಕ 5
- 10.ದೇವರಾಜ್ ನಾಟಕದ ಗೀಳು ಅಂಟಿಸಿಕೊಂಡ ಚಿತ್ರ 5
- 15.ಕಲ್ಪನಾಳ ಬಿರುದು 5
- 17.ಹೆಸರಿನ ಆರಂಭ ಕಣ್ಣು ಕೊನೆಯಲ್ಲಿ ನಕ್ಷತ್ರವುಳ್ಳ ನಟಿ 5
- 18.ಮಾತು ಬಾರದ ಶಂಕರ್ ನಾಗ್ ಹಗೆ ತೀರಿಸಿಕೊಂಡನು 5
- 20.ಆಂಗ್ಲದ ಮಧುಚಂದ್ರ 4

ಮೇಲಿನಿಂದ ಕೆಳಕ್ಕೆ

- 1.ಅಂಬರೀಷ್ ಕಷ್ಟ ಕಾಲಕ್ಕೆ ಆಗಿದ್ದಾನೆ 5
- 2.ನೀ ಬರೆದ ಕಾದಂಬರಿಯ ನಟಿ 2
- 3. ಕೆಆರ್‌ಎಸ್ ನೆನಪಿಸಿಕೊಂಡರೆ ದರ್ಶನ್ ಚಿತ್ರ ಪ್ರತ್ಯಕ್ಷ 3
- 4.ಈ ಪೋಷಕ ನಟ ನಮ್ಮೊಂದಿಗಿಲ್ಲ 5
- 5.ಪರಿಮಳ ದ್ರವ್ಯದ ನಟಿ 3
- 7.ಕೋಗಿಲೆಗೆ ಹೀಗೊಂದು ಹೆಸರು 2
- 9.ಕುಳ್ಳನೊಂದಿಗೆ ಬಂದವನು 2
- 11.ಶ್ರೀನಾಥ್, ಕೋಕಿಲಾ ಮೋಹನ್, ಗೀತಾ ಅಭಿನಯದ ಚಿತ್ರ 5
- 12.ಯಶ್ – ದೀಪಾ ಸನ್ನಿಧಿ ಅಭಿನಯದ ಚಿತ್ರ 2
- 13._ _ ನಾಯಕ 2
- 14.ಕೃಷ್ಣಭಕ್ತೆ ಮೈಸೂರಿನ ಹೂವು ಮುಡಿಯುವಾಗ ಸಿಕ್ಕ ನಟಿ 5
- 15.ಪುನೀತ್ ರಾಜಕುಮಾರ್ – ಪಾರ್ವತಿ ಮೆನನ್ ಅಭಿನಯದ ಸಂಗಮ 3
- 16.ನಟ – ನಟಿಯರ ಸಮೂಹಕ್ಕೆ ಹೀಗೇನ್ನಿ 4
- 19.ಮನಿ ಶನಿಯೊಂದಿಗೆ ಬಂದ ಸಿಹಿ 2

ಸಿನಿ ಪದಬಂಧ 551ರ ಉತ್ತರ

ಮೊ	ದ	ಲ	ತೇ	ದಿ		ನ				ನ
ದ				ಗ್ವಿ		ವ	ಸಂ	ತ	ಕಾ	ವ್ಯ
ಲ		ಪ		ಜ		ರ		ವ		ನಾ
ರಾ		ವಿ	ಜ	ಯ	ಸಾ	ಸ	ನೂ	ರು		ಯ
ತ್ರಿ	ನೇ	ತ್ರ						ಮ	ರ್ಡ	ರ್
		ಪಾ		ಹು		ಳು	ರ	ನೆ		
ನೆ	ನ	ಪಿ	ರ	ಲಿ					ಲಾ	
	ಗು			ಯಾ	ರೇ	ಕೂ	ಗಾ	ಡ	ಲಿ	
ಶಿ	ವ	ಣ್ಣ		ದ			ಳಿ		ಹಾ	
	ಹೂ		ಶಿ	ಕಾ	ರಿ		ಮಾ		ಡು	
	ವು			ಳ		ತುಂ	ತು	ರು		

ವಿಜೇತರು: ಅಂಗಣ್ಣ, ದೇವಲಾಪುರ, ಮೈಸೂರು-570311

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

'ಗುಂಮ್ಟಿ' ಕುಡುಬಿ ಜನಾಂಗದ ಸಂಸ್ಕೃತಿ ಆಚರಣೆ



ಮೂಲತಃ ಪತ್ರಕರ್ತರಾದ ಸಂದೇಶ್ ಶೆಟ್ಟಿ ಆಜ್ರಿ ಅವರ ನಿರ್ದೇಶನದ ಗುಂಮ್ಟಿ ಚಿತ್ರದ ಟ್ರೇಲರ್ ಇತ್ತೀಚೆಗೆ ಬಿಡುಗಡೆಯಾಯಿತು, ಸಂದೇಶ್‌ಶೆಟ್ಟಿ ಅವರೇ ಚಿತ್ರದ ನಾಯಕನಾಗಿದ್ದು, ವೈಷ್ಣವಿ ನಾಡಿಗ್ ನಾಯಕಿಯ ಪಾತ್ರ ನಿರ್ವಹಿಸಿದ್ದಾರೆ, ಕರಾವಳಿಯ ಉಡುಪಿ ಭಾಗದ ಕುಡುಬಿ ಜನಾಂಗದ ಕಲೆ, ಸಂಸ್ಕೃತಿಯ ಜತೆ ಅವರು ಆಚರಿಸಿಕೊಂಡು ಬಂದಿರುವ ಸಂಪ್ರದಾಯಗಳು, ಆಚಾರ-ವಿಚಾರಗಳು, ಅವರ ಬದುಕು ಮತ್ತು ಆಧುನಿಕತೆಯ ನಡುವಿನ ಸಂಘರ್ಷವನ್ನು ಈ ಚಿತ್ರದಲ್ಲಿ ನಿರ್ದೇಶಕರು ತೆರೆದಿಟ್ಟಿದ್ದಾರೆ. ಉಡುಪಿ, ಕುಂದಾಪುರ, ಶಿರಸಿ, ಬೆಳಗಾವಿ, ಮಹಾರಾಷ್ಟ್ರದ ಸೋಲಾಪುರ ಹೀಗೆ ಕರಾವಳಿ-ಮಲೆನಾಡು ಮತ್ತು ಪಶ್ಚಿಮಘಟ್ಟದ ಸುತ್ತಮುತ್ತ 25ಕ್ಕೂ ಹೆಚ್ಚು ದಿನಗಳ ಕಾಲ ಗುಂಮ್ಟಿ ಚಿತ್ರದ ಚಿತ್ರೀಕರಣ ನಡೆಸಲಾಗಿದೆ.

ನಿರ್ದೇಶಕ ಸಂದೇಶ ಶೆಟ್ಟಿ ಮಾತನಾಡುತ್ತ, ಚಿತ್ರದಲ್ಲಿ ನಾಯಕ ಕಾಶಿಯ ಪಾತ್ರ ನಾನೇ ಮಾಡಿದ್ದೇನೆ. ಇದೊಂದು ಕಲಾತ್ಮಕ ಸಿನಿಮಾ. ಕುಡುಬಿ ಜನಾಂಗದವರು ಹೋಳಿ ಸಂದರ್ಭದಲ್ಲಿ ಗುಂಮ್ಟಿ ಎಂಬ ವಿಶಿಷ್ಟ ಆಚರಣೆ ಮಾಡುತ್ತಾರೆ. ಕರಾವಳಿ ಭಾಗದಲ್ಲಿ ಈ ಆಚರಣೆ ನಡೆಯುತ್ತದೆ. ಅದನ್ನೇ ಇಟ್ಟುಕೊಂಡು ಅಳಿಸಿ ಹೋಗುತ್ತಿರುವ ಅವರ ಕಲೆ ಸಂಸ್ಕೃತಿಯನ್ನು ತೋರಿಸಿದ್ದೇನೆ ಎಂದು ಹೇಳಿದರು.

ನಾಯಕಿ ವೈಷ್ಣವಿ ನಾಡಿಗ ಮಾತನಾಡಿ, ಚಿತ್ರದಲ್ಲಿ ನಾನು ಮಲ್ಲಿ ಎಂಬ ಕುಡುಬಿ ಜನಾಂಗದ ಯುವತಿಯ ಪಾತ್ರ ಮಾಡಿದ್ದೇನೆ ಎಂದು ಹೇಳಿದರು. ಪತ್ರಕರ್ತೆ ಚಿತ್ರಕಲಾ ಮಾತನಾಡುತ್ತ, ನಾನೊಬ್ಬ ಪತ್ರಕರ್ತೆಯಾಗಿದ್ದರೂ ಕುಡುಬಿ ಜನಾಂಗದ ಬಗ್ಗೆ ಕೇಳಿರಲಿಲ್ಲ. ಇಂಥವರ ಸಂಸ್ಕೃತಿಗಳು ಅಳಿಸಿ ಹೋಗುತ್ತಿವೆ. ಈ ಥರದ ಸಿನಿಮಾಗಳು ಹೆಚ್ಚಾಗಿ ಬರಬೇಕು. ಮುಂದಿನ ಜನಾಂಗಕ್ಕೆ ಇಂಥ ಚಿತ್ರಗಳಿಂದ ಗೊತ್ತಾಗುತ್ತದೆ. ಜೊತೆಗೆ ಸರ್ಕಾರದ ಪ್ರೋತ್ಸಾಹವೂ ಬೇಕು ಎಂದು ಹೇಳಿದರು.

ನಿರ್ಮಾಪಕ ವಿಕಾಸ್ ಎಸ್. ಶೆಟ್ಟಿ ಮಾತನಾಡುತ್ತ, ಸಂದೇಶ್ ನಮ್ಮ ಗೆಳೆಯ. ಸೀಮಿತ ಬಜೆಟ್‌ನಲ್ಲಿ ನಮ್ಮ ಸಂಸ್ಕೃತಿಯನ್ನು ಬಿಂಬಿಸುವ ಚಿತ್ರ ಮಾಡೋಣ ಎಂದು ಹೇಳಿದ್ದೆ, ಆಗ ಗುಂಮ್ಟಿ ಆಚರಣೆಯ ಬಗ್ಗೆ ಹೇಳಿದಾಗ ನನಗೆ ಕಾನ್ಸೆಪ್ಟ್ ತುಂಬಾ ಇಷ್ಟವಾಯ್ತು. ನಾನೂ ಕೂಡ ಚಿಕ್ಕವನಾಗಿದ್ದಾಗಿಂದ ಕುಡುಬಿ ಜನರನ್ನು ನೋಡಿಕೊಂಡು ಬಂದವನು. ಚಿತ್ರದಲ್ಲಿ ಒಂದೊಳ್ಳೆ ಕಂಟೆಂಟ್ ಇದೆ, ಜನ ಒಪ್ಪಿಕೊಳ್ತಾರೆ ಅನ್ನೋ ನಂಬಿಕೆಯಿದೆ ಎಂದು ಹೇಳಿದರು. ವಿತರಕ ವಿಜಯ್‌ಕುಮಾರ್ ರಿಲೀಸ್ ಬಗ್ಗೆ ವಿವರಿಸಿದರು.

ರಂಜನ್ ಛತ್ರಪತಿ, ಕರಣ್ ಕುಂದರ್, ಯಶ್ ಆಚಾರ್ಯ, ಪ್ರಭಾಕರ ಕುಂದರ್, ರಘು ಪಾಂಡೇಶ್ವರ, ಚೇತನ ನೈಲಾಡಿ, ಚಿತ್ರಕಲಾ, ನೂರ್‌ಅಹ್ಮದ್, ಸ್ವರಾಜ್ ಲಕ್ಷ್ಮಿ ಇತರ ಪಾತ್ರಗಳಲ್ಲಿದ್ದಾರೆ. ಅನೀಶ್ ಡಿಸೋಜಾ ಅವರ ಕ್ಯಾಮರಾವರ್ಕ್, ಮೋಹನ್ ಅವರ ಸಂಗೀತ ಸಂಯೋಜನೆ ಈ ಚಿತ್ರಕ್ಕಿದೆ.

ಮೈಸೂರು ಮಿತ್ರ

ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆ

ಸಕಾಲಕ್ಕೆ ಗ್ಯಾರಂಟಿ ಯೋಜನೆಗಳನ್ನು ತಲುಪಿಸಿ

ಅಧಿಕಾರಿಗಳಿಗೆ ತಾಲೂಕು ಉಸ್ತುವಾರಿ ಅಧಿಕಾರಿ ಸಿ.ಆರ್.ಕಲ್ಪಶ್ರೀ ಸೂಚನೆ



ಸಭೆಯಲ್ಲಿ ತಾಲೂಕು ಉಸ್ತುವಾರಿ ಅಧಿಕಾರಿ ಸಿ.ಆರ್.ಕಲ್ಪಶ್ರೀ ಮಾತನಾಡಿದರು.

ಕೆ.ಆರ್.ನಗರ, ನ.21– ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಸಕಾಲಕ್ಕೆ ಫಲಾನುಭವಿಗಳಿಗೆ ತಲುಪಿಸಲು ತಾಲೂಕು ಮಟ್ಟದ ಅಧಿಕಾರಿಗಳು ಕಟ್ಟೆಚ್ಚರದಿಂದ ಕೆಲಸ ಮಾಡಬೇಕು ಎಂದು ತಾಲೂಕು ಉಸ್ತುವಾರಿ ಅಧಿಕಾರಿ ಸಿ.ಆರ್.ಕಲ್ಪಶ್ರೀ ತಿಳಿಸಿದರು.

ಪಟ್ಟಣದ ತಾಪಂ ಕೃಷ್ಣರಾಜೇಂದ್ರ ಸಭಾಂಗಣದಲ್ಲಿ ಗುರುವಾರ ನಡೆದ ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಯೋಜನೆ ಅನುಷ್ಠಾನ ಮಾಡುವ ವಿಚಾರದಲ್ಲಿ ಸಾರ್ವಜನಿಕರಿಂದ ಯಾವುದೇ ದೂರು ಕೇಳಿ ಬಂದರೂ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಯೋಜನೆಗಳ ಉಸ್ತುವಾರಿ ವಹಿಸಿರುವ ಅಧಿಕಾರಿಗಳು ಕಾಲ ಕಾಲಕ್ಕೆ ಪರಿಶೀಲಿಸಿ ಯಾವುದೇ ಲೋಪಗಳು ಇದ್ದರೂ ನನಗೆ ವರದಿ ನೀಡಬೇಕು. ನಾನು ಕೂಡ ದಿಢೀರ್ ಭೇಟಿ ನೀಡಿ ಪರಿಶೀಲಿಸುವುದಾಗಿ ತಿಳಿಸಿದರಲ್ಲದೆ, ಆ ಸಮಯದಲ್ಲಿ ಲೋಪಗಳು ಕಂಡು ಬಂದರೆ ಸರ್ಕಾರಕ್ಕೆ ವರದಿ ಮಾಡುವುದಾಗಿ ಎಚ್ಚರಿಸಿದರು.

ಸರ್ಕಾರದ ನಿಯಮಾನುಸಾರ ಬಿಪಿಎಲ್ ಕಾರ್ಡ್‌ಗಳು ರದ್ದಾಗಬೇಕು. ಅದನ್ನು ಹೊರತುಪಡಿಸಿ ಯಾವುದೇ ಲೋಪವಾಗಬಾರದು. ಈ ವಿಚಾರವನ್ನು ಅಧಿಕಾರಿಗಳು ಅತ್ಯಂತ ಗಂಭೀರವಾಗಿ ಪರಿಗಣಿಸಿ ಕಾರ್ಡ್‌ಗಳು ರದ್ದಾಗಿರುವ ಮಾಹಿತಿಯನ್ನು ಕಾರ್ಡ್‌ದಾರರಿಗೆ ತಿಳಿಸಿ ರದ್ದುಪಡಿಸುವಾಗ ಮನೆ ಮನೆಗಳಿಗೆ ತೆರಳಿ ಪರೀಕ್ಷಿಸಬೇಕೆಂದು ತಾಕೀತು ಮಾಡಿದರು.

ಕೆ.ಆರ್.ನಗರ ತಾಲೂಕಿನ ಕೆಲವು ನ್ಯಾಯಬೆಲೆ ಅಂಗಡಿಗಳಲ್ಲಿ ಈಗಲೂ ವಿದ್ಯುತ್ ತೂಕ ಮಾಪಕ ಬಳಸದೆ ಹಳೆಯ ಪದ್ಧತಿಯಲ್ಲಿಯೇ ಆಹಾರ ಪದಾರ್ಥಗಳನ್ನು ತೂಕ ಮಾಡುತ್ತಿರುವ ಬಗ್ಗೆ ದೂರುಗಳು ಕೇಳಿ ಬರುತ್ತಿದ್ದು, ಅಧಿಕಾರಿಗಳು ಕೂಡಲೇ ನ್ಯಾಯಬೆಲೆ ಅಂಗಡಿಗಳಿಗೆ ದಿಢೀರ್ ಭೇಟಿ ನೀಡಿ ನೈಜತೆ ಅರಿತು ಹಳೇ ತೂಕದ ಬಟ್ಟುಗಳನ್ನು ಬಳಸದಂತೆ ಆದೇಶಿಸಬೇಕೆಂದು ನುಡಿದರು.

ನೋಟಿಸ್ ನೀಡಿ

ಇಂದಿನ ಪ್ರಗತಿ ಪರಿಶೀಲನಾ ಸಭೆಗೆ ಗೈರಾಗಿರುವ ಅಧಿಕಾರಿಗಳಿಗೆ ನೋಟಿಸ್ ನೀಡಿ ಎಂದು ತಹಸೀಲ್ದಾರರಿಗೆ ತಿಳಿಸಿದ ಕಲ್ಪಶ್ರೀ ಅವರು ಇಂದಿನ ಸಭೆಯಲ್ಲಿ ಚರ್ಚೆಯಾಗಿರುವ ವಿಚಾರಗಳು ಮತ್ತು ಮಂಡಿಸಿರುವ ಸಮಸ್ಯೆಗಳು ಮುಂದಿನ ಸಭೆ ನಡೆಯುವ ವೇಳೆಗೆ ಪರಿಹಾರವಾಗಿರಬೇಕು ಎಂದು ಆದೇಶಿಸಿದರು.

ಮುಂದಿನ 3 ತಿಂಗಳೊಳಗೆ ಆಸ್ಪತ್ರೆ, ವಿದ್ಯಾರ್ಥಿ ನಿಲಯ, ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಅಲ್ಲಿನ ಸಮಸ್ಯೆಗಳನ್ನು ಆಲಿಸಿ ಪರಿಹಾರಕ್ಕೆ ಬೇಕಿರುವ ಸಹಕಾರ ಮತ್ತು ಕ್ರಮಗಳ ಬಗ್ಗೆ ನನ್ನ ಗಮನಕ್ಕೆ ತಂದರೆ ನಾನು ಜಿಲ್ಲಾಡಳಿತ ಮತ್ತು ಸರ್ಕಾರಕ್ಕೆ ಈ ಸಂಬಂಧ ಮಾಹಿತಿ ನೀಡಿ ಪರಿಹಾರಕ್ಕೆ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಪಟ್ಟಣದಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ಹತ್ತಾರು ವಸತಿ ಗೃಹಗಳು ಪಾಳು ಬಿದ್ದಿದ್ದು, ಕೂಡಲೇ ಅವುಗಳನ್ನು ದುರಸ್ತಿ ಪಡಿಸಿ ಸರ್ಕಾರಿ ನೌಕರರಿಗೆ ನೀಡಲು ಕ್ರಮ ಕೈಗೊಳ್ಳುವುದರ ಜೊತೆಗೆ ಖಾಸಗಿ ಕಟ್ಟಡಗಳಲ್ಲಿ ಬಾಡಿಗೆ ನೀಡಿ ನಡೆಸುತ್ತಿರುವ ಸರ್ಕಾರಿ ಕಚೇರಿಗಳಿಗೆ ಶಾಶ್ವತ ಕಟ್ಟಡ ನಿರ್ಮಿಸಿಕೊಳ್ಳಲು ಆ ಸ್ಥಳ ನೀಡಲು ಸಾಧ್ಯವಿದೆಯೇ ಎಂದು ತಿಳಿದು ಆ ಸಂಬಂಧ ವರದಿ ಸಲ್ಲಿಸಬೇಕೆಂದರು.

ಉಪ ನೋಂದಣಾಧಿಕಾರಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು, ಅದರ ಜೊತೆಗೆ ಮೇಲಂತಸ್ತಿನಲ್ಲಿ ನಡೆಯುತ್ತಿರುವುದರಿಂದ ಅಲ್ಲಿಗೆ ಬರುವ ಸಾರ್ವಜನಿಕರು, ವೃದ್ಧರು ಮತ್ತು ವಿಕಲಚೇತನರಿಗೆ ತೊಂದರೆಯಾಗುತ್ತಿದೆ. ಅಲ್ಲಿ ಯಾವುದೇ ಮೂಲ ಸೌಲಭ್ಯಗಳಿಲ್ಲ ಎಂದು ಪತ್ರಕರ್ತರು ಅವರ ಗಮನಕ್ಕೆ ತಂದಾಗ ಕೂಡಲೇ ಈ ಬಗ್ಗೆ ಗಮನಹರಿಸಿ ಎಪಿಎಂಸಿ ಕಟ್ಟಡಕ್ಕೆ ಸ್ಥಳಾಂತರಿಸಲು ಕ್ರಮ ವಹಿಸಬೇಕೆಂದು ತಹಸೀಲ್ದಾರ್‌ಗೆ ಸೂಚಿಸಿದರು.

ತಹಸೀಲ್ದಾರ್ ಜಿ.ಸುರೇಂದ್ರಮೂರ್ತಿ, ತಾಪಂ ಇಓ ವಿ.ಪಿ.ಕುಲದೀಪ್, ಪುರಸಭೆ ಮುಖ್ಯಾಧಿಕಾರಿ ಬಿ.ವಿ.ವೆಂಕಟೇಶ್, ಸಿಡಿಪಿಓ ಸಿ.ಎಂ.ಅಣ್ಣಯ್ಯ, ಸಹಾಯಕ ಕೃಷಿ ನಿರ್ದೇಶಕ ಮಲ್ಲಿಕಾರ್ಜುನ್, ಅಬಕಾರಿ ನಿರೀಕ್ಷಕ ಲೋಕೇಶ್, ಸಹಾಯಕ ಕಾರ್ಯಪಾಲಕ ಅಭಿಯಂತರ ಅರ್ಕೇಶ್ವರಮೂರ್ತಿ, ಸುಮಿತ, ವಿನುತ, ಸಹಾಯಕ ಅಭಿವೃದ್ಧಿ ಅಧಿಕಾರಿ ಎಸ್.ರವಿ, ಬಿಇಓ ಆರ್.ಕೃಷ್ಣಪ್ಪ, ವಿವಿಧ ಇಲಾಖೆ ತಾಲೂಕು ಮಟ್ಟದ ಅಧಿಕಾರಿಗಳಾದ ಮೇಘನಾ, ಶಂಕರ್‌ಮೂರ್ತಿ, ಡಾ.ಮಂಜುನಾಥ್, ಶಿರಸ್ತೇದಾರ್ ಅಸ್ಲಾಂಬಾಷ ಸೇರಿದಂತೆ ಮತ್ತಿತರರಿದ್ದರು.

ನಮ್ಮ ಶೌಚಾಲಯ ನಮ್ಮ ಗೌರವ ಅಭಿಯಾನಕ್ಕೆ ಚಾಲನೆ



ಮೇಣಸಿಕ್ಯಾತನಹಳ್ಳಿಯಲ್ಲಿ ನಮ್ಮ ಶೌಚಾಲಯ ನಮ್ಮ ಗೌರವ ಅಭಿಯಾನ ನಡೆಯಿತು.

ತಿ.ನರಸೀಪುರ, ನ.21– ತಾಲೂಕಿನ ಅಂಕನಹಳ್ಳಿ ಗ್ರಾಪಂ ವ್ಯಾಪ್ತಿಯ ಮೇಣಸಿಕ್ಯಾತನಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲೆಯಲ್ಲಿ ಗುರುವಾರ ತಾಪಂ ಇಓ ಅನಂತರಾಜು ಗಿಡಕ್ಕೆ ನೀರೆರೆಯುವ ಮೂಲಕ ವಿಶ್ವ ಶೌಚಾಲಯ ದಿನದ ಅಂಗವಾಗಿ ಸ್ವಚ್ಛ ಭಾರತ್ ಮಿಷನ್ ಅಡಿ ನಮ್ಮ ಶೌಚಾಲಯ ನಮ್ಮ ಗೌರವ ಅಭಿಯಾನಕ್ಕೆ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಪ್ರತಿ ವರ್ಷ ನ.19 ರಂದು ವಿಶ್ವ ಶೌಚಾಲಯ ದಿನ ಆಚರಿಸುತ್ತಿದ್ದು, ಈ ವರ್ಷ ನ.19 ರಿಂದ ಡಿ.10ರವರೆಗೆ ನಮ್ಮ ಶೌಚಾಲಯ ನಮ್ಮ ಗೌರವ ಎಂಬ ಅಭಿಯಾನದ ಮೂಲಕ ತಾಲೂಕಿನಾದ್ಯಂತ ಗ್ರಾಪಂ ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜಿಸಿ ಶೌಚಾಲಯ ರಹಿತ ಅರ್ಹ ಫಲಾನುಭವಿಗಳನ್ನು ಗುರುತಿಸಿ ಗ್ರಾಪಂನಿಂದ ಶೌಚಾಲಯ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು ಎಂದರು.

ಗ್ರಾಮೀಣ ಭಾಗದಲ್ಲಿ ನೈರ್ಮಲ್ಯ ಹಾಗೂ ಶುಚಿತ್ವ ಕಾಪಾಡುವ ಸಲುವಾಗಿ ಪ್ರತಿಯೊಬ್ಬರೂ ಬಹಿರ್ದೆಸೆಗೆ ತೆರಳದೆ ತಮ್ಮ ಮನೆಯ ಶೌಚಾಲಯಗಳನ್ನು ಬಳಸಬೇಕು ಎಂದರು.

ಮಕ್ಕಳು ಎಲ್ಲೆಂದರಲ್ಲಿ ಕಸ ಬಿಸಾಡದೆ ಹಸಿ ಮತ್ತು ಒಣ ಕಸವನ್ನು ವಿಂಗಡಿಸಿ ಗ್ರಾಪಂನಿಂದ ನೀಡಿರುವ ಕಸದ ಬುಟ್ಟಿಗಳಲ್ಲಿ ಹಾಕಬೇಕು. ತಮ್ಮ ಸುತ್ತಲೂ ಇರುವ ಜಾಗವನ್ನು ಶುಚಿಯಾಗಿ ಇಟ್ಟುಕೊಳ್ಳಬೇಕು ಹಾಗೂ ಶುಚಿತ್ವದ ಕುರಿತು ತಮ್ಮ ಮತ್ತು ಅಕ್ಕಪಕ್ಕದ ಮನೆಯವರಿಗೆ ತಿಳಿಸಬೇಕು ಎಂದು ತಿಳಿಸಿದರು. ನಂತರ ಶುಚಿತ್ವ ಕುರಿತು ಪ್ರತಿಜ್ಞಾವಿಧಿ ಭೋದಿಸಲಾಯಿತು.

ಕಾರ್ಯಕ್ರಮದಲ್ಲಿ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ರಂಗಸ್ವಾಮಿ, ಕಾಲೇಜಿನ ಪ್ರಾಂಶುಪಾಲರು, ಮುಖ್ಯೋಪಾಧ್ಯಾಯರು, ಶಿಕ್ಷಕರು, ಪಿಡಿಓ ಸಂತೋಷ್ ಕುಮಾರ್, ಗ್ರಾಪಂ ಅಧ್ಯಕ್ಷರು, ಸದಸ್ಯರು, ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ಹಾಗೂ ಗ್ರಾಪಂ ಸಿಬ್ಬಂದಿ ಹಾಜರಿದ್ದರು.

ಬನ್ನಿಕುಪ್ಪೆ ಗ್ರಾಪಂ ವ್ಯಾಪ್ತಿ ವಿಶ್ವ ಶೌಚಾಲಯ ದಿನಾಚರಣೆ

ಹುಣಸೂರು, ನ21– ತಾಲೂಕಿನ ಬನ್ನಿಕುಪ್ಪೆ ಗ್ರಾಪಂ ವ್ಯಾಪ್ತಿಯ ಕಾಲೇಜು, ಪ್ರೌಢಶಾಲೆ, ಹಿರಿಯ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ವಿಶ್ವ ಶೌಚಾಲಯ ದಿನ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಪಿಡಿಓ ರಾಘವೇಂದ್ರ ಪ್ರಸನ್ನ ಮಾತನಾಡಿ, ಬಯಲಲ್ಲಿ ಮಲ, ಮೂತ್ರ ಮಾಡಬೇಡಿ. ಶೌಚಾಲಯ ನಿರ್ಮಿಸಿಕೊಳ್ಳಿ. ಹಸಿ ಮತ್ತು ಒಣ ಕಸವನ್ನು ವಿಂಗಡಿಸುವುದು. ನೀರನ್ನು ವ್ಯರ್ಥ ಮಾಡದೆ ಶುಚಿತ್ವ ಕಾಪಾಡುವುದು. ನೀರನ್ನು ಸಂರಕ್ಷಿಸಿ ಗಿಡಗಳನ್ನು ಬೆಳೆಸುವುದು. ಗ್ರಾಮವನ್ನು ಸ್ವಚ್ಛ, ಸುಂದರ, ಆರೋಗ್ಯವಾಗಿ ಸುವುದು ನಮ್ಮೆಲ್ಲರ ಕರ್ತವ್ಯ ಎಂದು ಪ್ರತಿಜ್ಞಾವಿಧಿ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕೆ.ಆರ್.ನಗರದಲ್ಲಿ ಅಕ್ರಮ ಮದ್ಯ ನಾಶ



ಕೆ.ಆರ್.ನಗರದಲ್ಲಿ ಅಕ್ರಮ ಮದ್ಯವನ್ನು ನಾಶಪಡಿಸಲಾಯಿತು.

ಕೆ.ಆರ್.ನಗರ, ನ.21– ಸಾಲಿಗ್ರಾಮ ಮತ್ತು ಕೆ.ಆರ್.ನಗರ ತಾಲೂಕುಗಳಲ್ಲಿ ಅಕ್ರಮ ಮದ್ಯ ಮಾರಾಟ ಸಂಬಂಧ 13 ಮೊಕದ್ದಮೆಗಳನ್ನು ದಾಖಲಿಸಿಕೊಂಡು ವಶಪಡಿಸಿಕೊಂಡ ಮದ್ಯವನ್ನು ತಹಸೀಲ್ದಾರ್ ಜಿ.ಸುರೇಂದ್ರಮೂರ್ತಿ ಸಮ್ಮುಖದಲ್ಲಿ ನಾಶಪಡಿಸಲಾಯಿತು.

ಅಬಕಾರಿ ಉಪ ಅಧೀಕ್ಷಕ ಎಂ.ಡಿ. ಮೋಹನ್‌ಕುಮಾರ್ ಮಾತನಾಡಿ, ಕಾರ್ಯಾಚರಣೆಯಲ್ಲಿ 433.82 ಲೀಟರ್ ಮದ್ಯ, 91.140 ಲೀಟರ್ ಬಿಯರ್ ಅನ್ನು ಮುಟ್ಟುಗೋಲು ಹಾಕಿಕೊಂಡು ನಾಶಪಡಿಸಲಾಗಿದೆ ಎಂದರು. 2 ತಾಲೂಕುಗಳ ವ್ಯಾಪ್ತಿಯಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಹಿತಿಯನ್ನು ಸಾರ್ವಜನಿಕರು ಇಲಾಖೆಗೆ ತಿಳಿಸಬೇಕೆಂದು ಮನವಿ ಮಾಡಿದ ಅಬಕಾರಿ ನಿರೀಕ್ಷಕರು ಮಾಹಿತಿ ಕೊಡುವವರ ಹೆಸರನ್ನು ಗೌಪ್ಯವಾಗಿಡಲಾಗುತ್ತದೆ ಎಂದರು.

ಈ ವೇಳೆ ಅಬಕಾರಿ ನಿರೀಕ್ಷಕ ವೈ.ಎಸ್. ಲೋಕೇಶ್, ಮುಖ್ಯ ಪೇದೆಗಳಾದ ಸಂತೋಷ್, ಶಿವಕುಮಾರ, ಮಲ್ಲೇಶ್, ಪೇದೆಗಳಾದ ಶಿವಪ್ಪಬಾನು.ಸಿ, ಸಂದೀಪ್, ವಾಹನ ಚಾಲಕ ಮಹದೇವ್ ಇದ್ದರು.

ತಗಡೂರಲ್ಲಿ ವಾತ್ಸಲ್ಯ ಮನೆ ಹಸ್ತಾಂತರ



ತಗಡೂರು ಗ್ರಾಮದಲ್ಲಿ ಗೌರಮ್ಮನವರಿಗೆ ವಾತ್ಸಲ್ಯ ಮನೆ ಹಸ್ತಾಂತರಿಸಲಾಯಿತು.

ನಂಜನಗೂಡು, ನ.21– ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಾತ್ಸಲ್ಯ ಕಾರ್ಯಕ್ರಮದ ಅಡಿ ನಿರ್ಗತಿಕರಿಗೆ ವಾತ್ಸಲ್ಯ ಮನೆ ನಿರ್ಮಿಸಿ ಕೊಡಲಾಗುತ್ತಿದೆ ಎಂದು ಯೋಜನೆ ಪ್ರಾದೇಶಿಕ ನಿರ್ದೇಶಕ ಜಯರಾವ್ ನೆಲ್ಲಿತಾಯ ತಿಳಿಸಿದರು.

ತಾಲೂಕಿನ ತಗಡೂರು ಗ್ರಾಮದಲ್ಲಿ ಗುರುವಾರ ಫಲಾನುಭವಿ ಗೌರಮ್ಮನವರಿಗೆ ವಾತ್ಸಲ್ಯ ಮನೆ ಹಸ್ತಾಂತರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವೀರೇಂದ್ರ ಹೆಗ್ಗಡೆ ಅವರ ಆಶಯಯಂತೆ ಆಸರೆ ಇಲ್ಲದ ವೃದ್ಧೆಗೆ ಸೂರು ಮಾಡಿ ಅವರ ಕೊನೆ ಜೀವನವು ನೆಮ್ಮದಿಯಾಗಿ ಇರಲೆಂದು ಸಂಸ್ಥೆ ಬಯಸುತ್ತದೆ. ಗ್ರಾಮೀಣ ಜನರಿಗೆ ಗುಡಿ ಕೈಗಾರಿಕೆ ಹಾಗೂ ಆರ್ಥಿಕ ಸ್ವಾವಲಂಬನೆಗಾಗಿ ಸಂಸ್ಥೆ ಹಲವು ಕಾರ್ಯಕ್ರಮ ರೂಪಿಸಿ ಸಾಲ ಸೌಲಭ್ಯ ಒದಗಿಸುವ ಮೂಲಕ ನೆರವಾಗುತ್ತಿದೆ. ಜೊತೆಗೆ ಕೆರೆ ಅಭಿವೃದ್ಧಿಯಂತಹ ಸಾಮಾಜಿಕ ಕಳಕಳಿ ರೂಢಿಸಿಕೊಂಡು ರೈತರು, ಗ್ರಾಮಸ್ಥರಿಗೆ ನೆರವಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ನಿರ್ದೇಶಕ ವಿಜಯ ಕುಮಾರ್ ನಾಗನಾಳ, ಯೋಜನಾಧಿಕಾರಿ ಧರ್ಮರಾಜ್, ಗ್ರಾಪಂ ಸದಸ್ಯ ಮುದ್ದು ಮಾದಶೆಟ್ಟಿ, ಸಂಗೀತ, ಉದಯ್, ಸುಮ, ಸುಬ್ಬಮ್ಮ ಉಪಸ್ಥಿತರಿದ್ದರು.

ಶಿಸ್ತು, ಪ್ರಾಮಾಣಿಕತೆಯೊಂದಿಗೆ ಎತ್ತರಕ್ಕೆ ಬೆಳೆಯಿರಿ

ವಿದ್ಯಾರ್ಥಿಗಳಿಗೆ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ಸಲಹೆ



ಕಾರ್ಯಕ್ರಮವನ್ನು ಶಾಸಕ ಜಿ.ಡಿ. ಹರೀಶ್‌ಗೌಡ ಉದ್ಘಾಟಿಸಿದರು.

ಹುಣಸೂರು, ನ.21– ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆ ಜೊತೆಗೆ ಕ್ರೀಡೆ, ಕಲೆ, ಸಾಹಿತ್ಯ, ಓದು, ಬರಹ, ಹಾಡು, ಕುಣಿತದಂತಹ ಹವ್ಯಾಸ ಜೀವನದಲ್ಲಿ ಅಳವಡಿಸಿಕೊಂಡರೆ ವ್ಯಕ್ತಿತ್ವ ವಿಕಸನಗೊಳ್ಳಲಿದೆ ಎಂದು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ತಿಳಿಸಿದರು.

ನಗರದ ಡಿ.ದೇವರಾಜ ಅರಸು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ 2024–25ನೇ ಸಾಲಿನ ಸಾಂಸ್ಕೃತಿಕ ಕ್ರೀಡೆ, ಎನ್‌ಎಸ್‌ಎಸ್ ಸ್ಕೌಟ್ ಮತ್ತು ಗೈಡ್ಸ್, ರೆಡ್‌ಕ್ರಾಸ್ ಚಟುವಟಿಕೆಗಳ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ತಮ್ಮ ಜ್ಞಾನ ವೃದ್ಧಿಸಿಕೊಳ್ಳಲು ನಿಮಗೆ ಓದಿನ ದಾಹವಿದ್ದರೆ ಸಾಲದು. ಗುರು ಮತ್ತು ಗುರಿ ಹಾಗೆ ಹಿರಿಯರಿಗೆ ಗೌರವ ಇದ್ದರೆ ಮಾತ್ರ ಯಶಸ್ಸಿನ ಹಾದಿ ತುಳಿಯಲು ಸಾಧ್ಯ ಎಂದರು.

ಕಾಲೇಜು ದಿನಗಳಲ್ಲೇ ಸಾಂಸ್ಕೃತಿಕ ಚಟುವಟಿಕೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು. ವಿಶ್ವದ ಯಾವುದೇ ರೀತಿಯ ವಿಷಯವಿರಲಿ. ಮೊದಲಿಗೆ ಸಾಧಿಸುವ ಛಲವಿರಬೇಕು. ಸ್ಪರ್ಧೆಗಳಲ್ಲಿ ಭಾಗವಹಿಸಿ ಗೆಲ್ಲುವ ಹುಮ್ಮಸ್ಸು ಇರಬೇಕು. ಜೊತೆಗೆ ಶಿಸ್ತು, ಪ್ರಾಮಾಣಿಕತೆ ಇದ್ದಲ್ಲಿ ನೀವು ಎಷ್ಟು ಎತ್ತರಕ್ಕೆ ಬೇಕಾದರೂ ಬೆಳೆಯಬಹುದು ಎಂದರು.

ವಿದ್ಯಾರ್ಥಿಗಳಿಗೆ ಆರಂಭದಲ್ಲೇ ಅಧ್ಯಯನದ ಅಗತ್ಯವಿದ್ದು, ವಿದ್ಯೆ ಎನ್ನುವುದು ಬರಿ ಉದ್ಯೋಗಕ್ಕಲ್ಲ ಅದು ನಿಮ್ಮ ಜ್ಞಾನದ ಸಂಕೇತವಾಗಿದೆ. ಕಲಿಕೆ ಮುಗಿಯದ ಸಾಧನವಾಗಿದ್ದು, ಪ್ರತಿನಿತ್ಯ ಕಥೆ, ಕವನ, ಕಾದಂಬರಿ, ಪತ್ರಿಕೆಗಳನ್ನು ಓದುವುದರಿಂದ ನಿಮ್ಮ ಜ್ಞಾನ ಸರೋವರವಾಗಲಿದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಜಿ.ಡಿ.ಹರೀಶ್‌ಗೌಡ, ವಿದ್ಯಾರ್ಥಿಗಳು ಸಾಧನೆ ಗುರಿ ಮುಟ್ಟಬೇಕಾದರೆ ಅಧಿಕಾರ, ಹಣ, ಮೋಜಿನ ಹಿಂದೆ ಹೋಗಬೇಡಿ. ಸ್ಪರ್ಧಾತ್ಮಕ ಯುಗವಾಗಿರುವುದರಿಂದ ಪ್ರತಿಯೊಂದಕ್ಕೂ ಸ್ಪರ್ಧೆ ಇದೆ. ಅದನ್ನು ಭೇದಿಸಿ ಮುನ್ನುಗ್ಗುವ ಅನಿವಾರ್ಯತೆ ಇದೆ ಎಂದರು.

ಕಾಲೇಜಿನ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ನಾರಾಯಣ್ ಮಾತನಾಡಿದರು. ಪ್ರಾಂಶುಪಾಲ ಡಾ.ಸುರೇಶ್, ಸಾಂಸ್ಕೃತಿಕ ಸಮಿತಿ ಸಂಚಾಲಕ ಡಾ. ಉಮಾಕಾಂತ್, ಐಕ್ಯೂಎಸಿ ಸಂಚಾಲಕ ಡಾ.ಬಸವರಾಜ್, ಎನ್.ಎಸ್.ಎಸ್. ಸಂಚಾಲಕ ಜಗದೀಶ್, ರೆಡ್‌ಕ್ರಾಸ್ ಸಂಚಾಲಕ ಸಂತೋಷ್ ಉಪಸ್ಥಿತರಿದ್ದರು.

ಗುರುವಂದನಾ ಕಾರ್ಯಕ್ರಮ



ಅರಕಲಗೂಡಿನ ಪಿಎಂಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಬಿಎಸ್‌ಎಸ್ ಸರ್ಕಾರಿ ಪ್ರೌಢಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳ ವೇದಿಕೆ ವತಿಯಿಂದ ನಡೆದ ಶತಮಾನೋತ್ಸವ, ವಜ್ರ ಮಹೋತ್ಸವ ಮತ್ತು ಗುರುವಂದನಾ ಕಾರ್ಯಕ್ರಮದಲ್ಲಿ ಹಳೆಯ ವಿದ್ಯಾರ್ಥಿಗಳಾದ ಶಾಸಕ ಎ.ಮಂಜು, ಸಮಾಜ ಸೇವಕ ಎಸ್.ಶ್ರೀಕಾಂತ್, ಕೆ.ಬಿ.ಶಿವಕುಮಾರ್, ಕೆ.ಬಿ.ಶಶಿಕುಮಾರ್, ರತನ್ ಕುಮಾರ್, ಕೆ.ಟಿ.ಲೋಕೇಶ್, ಕೆ.ಎನ್.ರವಿಕುಮಾರ್ ಭಾಗವಹಿಸಿದ್ದರು.

ಪತ್ನಿಯೊಂದಿಗೆ ಸಂಬಂಧ ಹೊಂದಿದ್ದವನ ಕೊಂದ ಪತಿ

ತಿ.ನರಸೀಪುರ, ನ.21– ಪತಿಯೋರ್ವ ತನ್ನ ಪತ್ನಿಯೊಂದಿಗೆ ಸಂಬಂಧ ಹೊಂದಿದ್ದ ವ್ಯಕ್ತಿ ಮೇಲೆ ಹಲ್ಲೆ ನಡೆಸಿ ನದಿಗೆ ತಳ್ಳಿ ಕೊಲೆ ಮಾಡಿರುವ ಘಟನೆ ಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯ ತಿರುಮಕೂಡಲು ಗ್ರಾಮದ ಚೌಡೇಶ್ವರಿ ದೇವಸ್ಥಾನದ ಬಳಿ ಸಂಭವಿಸಿದೆ.

ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲೂಕಿನ ದೊಡ್ಡಿಂದವಾಡಿ ಗ್ರಾಮದ ಚಂದ್ರು(35) ಕೊಲೆಯಾದವರು. ಈತ ಯಳಂದೂರು ತಾಲೂಕಿನ ದುಗ್ಗಟ್ಟಿ ಗ್ರಾಮದ ಕೊಟ್ಟೂರಪ್ಪ ಎಂಬುವರ ಪತ್ನಿಯೊಂದಿಗೆ ಸಂಬಂಧ ಹೊಂದಿದ್ದು, ಕಳೆದ 5 ದಿನಗಳ ಹಿಂದೆ ಚಂದ್ರು ಜೊತೆ ಆಕೆ ಊರು ಬಿಟ್ಟು ಬಂದಿದ್ದರೆನ್ನಲಾಗಿದೆ. ದುಗ್ಗಟ್ಟಿ ಗ್ರಾಮದ ಪರಿಚಯಸ್ಥರೊಬ್ಬರು ಕೊಟ್ಟೂರಪ್ಪರಿಗೆ ನಿನ್ನ ಪತ್ನಿ ಬೇರೊಬ್ಬನೊಂದಿಗೆ ತಿರುಮಕೂಡಲಿನ ಚೌಡೇಶ್ವರಿ ದೇವಸ್ಥಾನದ ಬಳಿ ಇರುವುದಾಗಿ ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ತನ್ನ ಮಗನೊಂದಿಗೆ ತಿರುಮಕೂಡಲಿನ ಚೌಡೇಶ್ವರಿ ದೇವಸ್ಥಾನಕ್ಕೆ ಬಂದ ಕೊಟ್ಟೂರಪ್ಪ ತನ್ನ ಹೆಂಡತಿ ಬೇರೊಬ್ಬನ ಜೊತೆ ಇರುವುದನ್ನು ಕಂಡು ಕೋಪೋದ್ರಿಕ್ತನಾಗಿದ್ದಾನೆ. ಹೆಂಡತಿಯನ್ನು ತನ್ನೊಂದಿಗೆ ಬರುವಂತೆ ಕರೆದಿದ್ದಾನೆ. ಆದರೆ ಆಕೆ ಚಂದ್ರುವನ್ನು ಬಿಟ್ಟು ಬರುವುದಿಲ್ಲ ಎಂದು ಹೇಳಿದ ಹಿನ್ನಲೆಯಲ್ಲಿ ಚಂದ್ರು ಮತ್ತು ಕೊಟ್ಟೂರಪ್ಪ ನಡುವೆ ಮಾತಿನ ಚಕಮಕಿ ನಡೆದಿದೆ. ಚೌಡೇಶ್ವರಿ ದೇವಸ್ಥಾನದ ಮುಂಭಾಗ ಕಾವೇರಿ ನದಿಗೆ ಇಳಿಯುವ ಮೆಟ್ಟಿಲುಗಳ ಮೇಲೆ ನಿಂತು ಇಬ್ಬರೂ ಜಗಳವಾಡಿದ್ದಾರೆ. ಕೋಪಗೊಂಡ ಕೊಟ್ಟೂರಪ್ಪ, ಚಂದ್ರು ಮೇಲೆ ಹಲ್ಲೆ ನಡೆಸಿ ಕಾಲಿನಿಂದ ತುಳಿದು ನದಿಗೆ ತಳ್ಳಿದ್ದಾನೆ. ಪರಿಣಾಮ ಚಂದ್ರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾನೆ ಎಂದು ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತಿಳಿಸಿದ್ದಾರೆ. ಆರೋಪಿ ಕೊಟ್ಟೂರಪ್ಪನನ್ನು ಪೊಲೀಸರು ಬಂಧಿಸಿ ಮುಂದಿನ ಕ್ರಮ ಜರುಗಿಸಿದ್ದಾರೆ. ಈ ವೇಳೆ ಸಿಪಿಐ ಧನಂಜಯ್, ಎಸ್ಐ ಅಶೋಕ್, ಎಎಸ್ಐ ಚೆಲುವರಾಜು, ಸಿಬ್ಬಂದಿ ವರ್ಗದ ಮಾಲೇಗೌಡ, ಶಿವಸ್ವಾಮಿ, ಕೆಂಪಿ, ರವಿ, ಗೋವಿಂದರಾಜು, ರಶ್ಮಿ, ರತ್ನಮ್ಮ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಕ್ಯಾತನಹಳ್ಳಿಯಲ್ಲಿ ಕನಕದಾಸ ಜಯಂತಿ




ಕ್ಯಾತನಹಳ್ಳಿ ಗ್ರಾಮದಲ್ಲಿ ಕನಕದಾಸರ ಜಯಂತಿ ಆಚರಣೆ ಮಾಡಲಾಯಿತು.

ಹೆಚ್.ಡಿ.ಕೋಟೆ, ನ.21– ತಾಲೂಕಿನ ಕ್ಯಾತನಹಳ್ಳಿ ಗ್ರಾಮದಲ್ಲಿ ಭಕ್ತ ಕನಕದಾಸರ 537ನೇ ಜಯಂತಿ ಆಚರಿಸಲಾಯಿತು.

ಕಾಂಗ್ರೆಸ್ ಮುಖಂಡ ಶಿವಶಂಕರೇಗೌಡ ಮಾತನಾಡಿ, ಭಕ್ತ ಕನಕದಾಸರು ಮೇಲು–ಕೀಳು ಎಂಬ ತಾರತಮ್ಯ ಹೋಗಲಾಡಿಸಲು ತಂಬೂರಿ ಹಿಡಿದು ಕೀರ್ತನೆಗಳ ಮೂಲಕ ಸಮಾಜ ತಿದ್ದುವ ಕೆಲಸ ಮಾಡಿದರು. ಜನಸಾಮಾನ್ಯರಿಗೆ ಅರ್ಥವಾಗುವ ಕನ್ನಡ ಭಾಷೆಯಲ್ಲಿ ಕೀರ್ತನೆಗಳನ್ನು ಬರೆದು ಕನಕದಾಸರು ಮತ್ತು ಪುರಂದರದಾಸರು ಕನ್ನಡ ಸಾಹಿತ್ಯದ ಅಶ್ವಿನಿ ದೇವತೆಗಳೆಂದು ಬಿರುದು ಪಡೆದರು. ಅವರ ಆದರ್ಶಗಳನ್ನು ನಾವು ಮೈಗೂಡಿಸಿಕೊಳ್ಳಬೇಕೆಂದು ತಿಳಿಸಿದರು. ಈ ಸಂದರ್ಭ ಗ್ಯಾರಂಟಿ ಯೋಜನಾ ಸಮಿತಿ ಸದಸ್ಯ ನರ್ಸರಿ ಚೆಲುವರಾಜು, ಗ್ರಾಪಂ ಮಾಜಿ ಸದಸ್ಯ ಕೃಷ್ಣೇಗೌಡ, ವಕೀಲ ಶಿವರಾಜ್, ಕೆ.ಸಿ.ಬಸವರಾಜು, ಕೆ.ಎನ್.ಕುಮಾರ್, ಪಟೇಲ್, ಸೋಮು, ದಾಸೇಗೌಡ, ರಾಮಸ್ವಾಮಿ, ಪುನೀತ್‌ಗೌಡ, ಜೀವನ್, ಅಭಿಷೇಕ್, ಸೋಮೇಗೌಡ, ಮಡಿವಾಳ ಬಿರೇಶ್ ಇತರರಿದ್ದರು.

ಇಂದು ಪ್ರಭುತ್ವ ಚಲನಚಿತ್ರ ಬಿಡುಗಡೆ



ಪ್ರಭುತ್ವ ಚಲನಚಿತ್ರದ ಪ್ರಚಾರ ಕಾರ್ಯಕ್ಕೆ ಚಾಲನೆ ನೀಡಲಾಯಿತು.

ತಿ.ನರಸೀಪುರ, ನ.21– ರವಿರಾಜ್ ಹಾಗೂ ಎಸ್.ಕುಮಾರ್ ನಿರ್ಮಿಸಿರುವ ಪ್ರಭುತ್ವ ಚಲನಚಿತ್ರ ರಾಜ್ಯಾದ್ಯಂತ ಶುಕ್ರವಾರ ಬಿಡುಗಡೆಯಾಗುತ್ತಿದ್ದು, ಪ್ರೇಕ್ಷಕರು ಚಿತ್ರಮಂದಿರಕ್ಕೆ ಬಂದು ಚಲನಚಿತ್ರ ವೀಕ್ಷಿಸುವ ಮೂಲಕ ಸ್ಥಳೀಯರ ಪ್ರಯತ್ನಕ್ಕೆ ಬೆಂಬಲ ನೀಡುವಂತೆ ಗ್ರಾಪಂ ಸದಸ್ಯ ಸಿದ್ದು ಮನವಿ ಮಾಡಿದರು.

ನಟ ಚೇತನ್ ಚಂದ್ರ ನಟನೆ ಹಾಗೂ ವಿನಯಮೂರ್ತಿ ನಿರ್ದೇಶನದ ಪ್ರಭುತ್ವ ಚಿತ್ರದ ಪ್ರಚಾರ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿ, ಪ್ರಭುತ್ವ ಚಲನಚಿತ್ರವನ್ನು ಬಹುಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಚಿತ್ರದಲ್ಲಿ ನಾಯಕ ನಟಿಯಾಗಿ ಪಾವನ ಗೌಡ ನಟಿಸುತ್ತಿದ್ದು, ಖ್ಯಾತ ನಟ ಶಶಿಕುಮಾರ್, ಬಾಹುಬಲಿ ಖ್ಯಾತಿಯ ನಾಝರ್, ಆದಿಲೋಕೇಶ್, ಅಭಿರಾಮಿ, ಹರೀಶ್ ರೈ, ಶರತ್ ಲೋಹಿತಾಶ್ವ, ಅವಿನಾಶ್, ಅಂಬಿಕಾ, ರೂಪಾದೇವಿ, ಹಾಸ್ಯ ಕಲಾವಿದ ಗೋಪಿ ಸೇರಿದಂತೆ ಅನೇಕ ಜನಪ್ರಿಯ ನಟರ ತಾರಾಗಣವಿದೆ.

ಚಿತ್ರವು ಉತ್ತಮ ಸಂದೇಶದೊಂದಿಗೆ ನಿರ್ಮಾಣವಾಗಿದೆ. ಚಿತ್ರವು ದಂತಕತೆಯಲ್ಲ, ಬದಲಿಗೆ ಸತ್ಯಕತೆಯನ್ನು ಹೊಂದಿದೆ. ಸಿನಿಮಾದ ಟ್ರೈಲರ್ ನೋಡಿದ ಖ್ಯಾತ ನಟ ಡಾ.ಶಿವರಾಜ್ ಕುಮಾರ್ ಚಿತ್ರದ ಮೇಕಿಂಗ್ ಬಗ್ಗೆ ತೀವ್ರವಾದ ಮೆಚ್ಚುಗೆ ವ್ಯಕ್ತಪಡಿಸಿ ತಾವೂ ಕೂಡ ಚಿತ್ರಮಂದಿರದಲ್ಲಿ ಚಿತ್ರ ವೀಕ್ಷಿಸುವುದಾಗಿ ತಿಳಿಸಿದ್ದಾರೆ. ಚಿತ್ರದ ಚಿತ್ರೀಕರಣ ತಾಲೂಕಿನ ಸುತ್ತಮುತ್ತಲ ಹಳ್ಳಿಗಾಡಿನ ಸುಂದರವಾದ ಪರಿಸರದಲ್ಲಿ ನಡೆದಿದ್ದು, ಯಾವುದೇ ಮುಜುಗರವಿಲ್ಲದೇ ಕುಟುಂಬ ಸಮೇತರಾಗಿ ಚಿತ್ರ ವೀಕ್ಷಿಸಬಹುದಾಗಿದೆ ಎಂದರು.

ಶುಕ್ರವಾರ ಚಿತ್ರ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದ್ದು, ಬೆಂಗಳೂರಿನ ಅನುಪಮ ಚಿತ್ರಮಂದಿರ ಹಾಗೂ ಮೈಸೂರಿನ ಮಲ್ಟಿಪ್ಲೆಕ್ಸ್ ಚಿತ್ರಮಂದಿರದಲ್ಲಿ ರಿಲೀಸ್ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸ್ಥಳೀಯ ಪ್ರತಿಭೆ ಡಾ.ಶಿವಕುಮಾರ್ ಮಾತನಾಡಿದರು. ಮುಖಂಡರಾದ ನಾಗೇಶ್, ನಿಲಸೋಗೆ ಪ್ರದೀಪ್, ಬನ್ನೂರು ಶ್ರೀನಿವಾಸ್, ಭೈರಾಪುರ ಅಭಿ, ಗಿರಿ, ಚಂದ್ರಶೇಖರ್, ಸುಭಾಷ್, ಪ್ರವೀಣ್ ಕುಮಾರ್, ಮನೋಜ್ ಕುಮಾರ್, ಸಿದ್ದರಾಜು ಇದ್ದರು.

ಜಾತಿ ಪ್ರಮಾಣ ಪತ್ರ ನೀಡದ ಅಧಿಕಾರಿಗಳ ವಿರುದ್ಧ ಪ್ರತಿಭಟನೆ



ತಲಕಾಡಿನ ನಾಡಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಲಾಯಿತು.

ತಲಕಾಡು, ನ.21– ನಾಯಕ ಮತ್ತು ಉಪ ಜಾತಿಗಳಿಗೆ ಪರಿಶಿಷ್ಟ ಪಂಗಡ (ಎಸ್ಟಿ) ಜಾತಿ ಪ್ರಮಾಣ ಪತ್ರ ನೀಡಲು ಮೀನಾಮೇಷ ಎಣಿಸುತ್ತಿರುವ ಅಧಿಕಾರಿಗಳ ವಿರುದ್ಧ ತಿ.ನರಸೀಪುರ ತಾಲೂಕು ಯುವ ವೇದಿಕೆ ಹಾಗೂ ವಾಲ್ಮೀಕಿ ಯುವ ಬಳಗದ ಕಾರ್ಯಕರ್ತರು ತಲಕಾಡಿನಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

ಹೋಬಳಿ ಕೇಂದ್ರವಾದ ತಲಕಾಡು ಗ್ರಾಮದ ನಾಡಕಚೇರಿಯ ಮುಂಭಾಗ ಜಮಾಯಿಸಿದ ಯುವ ವೇದಿಕೆ ಮತ್ತು ವಾಲ್ಮೀಕಿ ಯುವ ಬಳಗದ ಕಾರ್ಯಕರ್ತರು ಹಾಗೂ ಮುಖಂಡರು ನಾಯಕ ಮತ್ತು ಉಪ ಜಾತಿ ಸಮುದಾಯಗಳಿಗೆ ಎಸ್‌ಟಿ ಸರ್ಟಿಫಿಕೇಟ್ ನೀಡಲು ಇಲ್ಲಸಲ್ಲದ ದಾಖಲಾತಿಗಳನ್ನು ಕೇಳುತ್ತಿರುವ ಕಂದಾಯ ಇಲಾಖೆ ಅಧಿಕಾರಿಗಳು ಮತ್ತು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಪ್ರತಿಭಟನೆ ನಡೆಸಿದರು.

ಯುವ ವೇದಿಕೆ ಅಧ್ಯಕ್ಷ ಆನಂದ ಮಾತನಾಡಿ, ರಾಜಕೀಯ ಪಕ್ಷಗಳು ಅಧಿಕಾರಕ್ಕೆ ಬರುವ ಮೊದಲು ಮತಕ್ಕಾಗಿ ಸಮುದಾಯದ ಬೆಂಬಲ ಪಡೆದು ಅಧಿಕಾರಕ್ಕೇರುತ್ತಿದ್ದಂತೆ ಮರೆತು ಬಿಡುತ್ತಾರೆ. ಬೇರೆ ಯಾವುದೇ ಸಮುದಾಯದ ಜಾತಿ ಪ್ರಮಾಣ ಪತ್ರಕ್ಕೆ ಇಲ್ಲದ ನಿಬಂಧನೆಗಳನ್ನು ನಾಯಕ ಜಾತಿ ಸರ್ಟಿಫಿಕೇಟ್ ಪಡೆಯಲು ಹೇರಲಾಗುತ್ತಿದೆ. ಪ್ರತಿಯೊಂದಕ್ಕೂ ನಿಬಂಧನೆಗಳನ್ನು ಹಾಕುವ ಕಂದಾಯ ಇಲಾಖೆ ಅಧಿಕಾರಿಗಳು ಮತ್ತು ಸರ್ಕಾರದ ಧೋರಣೆ ನಮ್ಮ ತಾಳ್ಮೆಯನ್ನು ಪರೀಕ್ಷಿಸುವಂತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.


ಈಗಿನ ಆಡಳಿತರೂಢ ಸರ್ಕಾರ ನಾಯಕ ಮತ್ತು ಉಪ ಜಾತಿ ಸಮುದಾಯಗಳಿಗೆ ಎಸ್‌ಟಿ ಸರ್ಟಿಫಿಕೇಟ್ ನೀಡಲು ಇರುವ ನಿಬಂಧನೆಗಳನ್ನು ಸರಿಪಡಿಸಿ, ಗೊಂದಲವನ್ನು ಸರಿಪಡಿಸಲು ಆಗ್ರಹಿಸಿ ತಲಕಾಡಿನಲ್ಲಿ ಸಾಂಕೇತಿಕವಾಗಿ ಪ್ರತಿಭಟನೆ ನಡೆಸಿದ್ದೇವೆ. ಅಧಿಕಾರಿಗಳು ಎಸ್‌ಟಿ ಸರ್ಟಿಫಿಕೇಟ್ ನೀಡಲು ವಿಳಂಬ ಧೋರಣೆ ಮುಂದುವರೆಸಿದರೆ ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಉಗ್ರ ಪ್ರತಿಭಟನೆ ಧರಣಿ ನಡೆಸುತ್ತೇವೆ. ಮುಂದಿನ ದಿನಗಳಲ್ಲಿ ಬೆಂಗಳೂರು ವಿಧಾನಸೌಧ ಚಲೋ ಕಾರ್ಯಕ್ರಮ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಇದೇ ವೇಳೆ ಪ್ರತಿಭಟನಾಕಾರರು ಉಪ ತಹಸೀಲ್ದಾರ್ ಈ.ಕುಮಾರ್ ಅವರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಯುವ ವೇದಿಕೆ ಕಾರ್ಯದರ್ಶಿ ಮನುವಜ್ರ, ನಾಯಕ ಸಮುದಾಯದ ಮುಖಂಡರಾದ ಹೂವಯ್ಯ, ವಸಂತ್, ಮಧುಸೂದನ್, ರವಿ ಹೆಮ್ಮಿಗೆ, ಹೊನ್ನಯ್ಯ, ಸಾಗರ್, ಕುಕ್ಕೂರು ಅಭಿ, ಮಧು ಇತರರಿದ್ದರು.

ಕಂತೆ ಮಹದೇಶ್ವರ ಬೆಟ್ಟದಲ್ಲಿ ಕಳವು

ಮಲ್ಕುಂಡಿ, ನ.21– ತರಗನಹಳ್ಳಿ ಬಳಿಯ ಶ್ರೀಕಂತೆ ಮಹದೇಶ್ವರ ದೇವಾಲಯದಲ್ಲಿ ಬುಧವಾರ ರಾತ್ರಿ ದುಷ್ಕರ್ಮಿಗಳು ದೇವಾಲಯದ ಬೀಗ ಹೊಡೆದು 2 ಹುಂಡಿ ದೋಚಿ ಪರಾರಿಯಾಗಿದ್ದಾರೆ. ದೀಪಾವಳಿ ಹಬ್ಬದ ಪ್ರಯುಕ್ತ ಹುಂಡಿಯಲ್ಲಿ ಹೆಚ್ಚು ಹಣ ಇರಬಹುದು ಎಂದು ಕಳ್ಳರು ಹುಂಡಿ ಹೊಡೆದು ಹಣ ದೋಚಿ ಪರಾರಿಯಾಗಿದ್ದಾರೆ. ಪ್ರಕರಣ ಸಂಬಂಧ ಹುಲ್ಲಹಳ್ಳಿ ಪೊಲೀಸ್ ಠಾಣೆ ಎಸ್ಐ ಚೇತನ್ ಕುಮಾರ್ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.


ನಿಧನ



ಚಿಕ್ಕತಾಯಮ್ಮ ನಿಧನ

ಮಲ್ಕುಂಡಿ, ನ.21– ಸಮೀಪದ ಎಂ.ಕೊಂಗಳ್ಳಿ ಗ್ರಾಮದ ನಿವಾಸಿ ಚಿಕ್ಕತಾಯಮ್ಮ(70) ಬುಧವಾರ ನಿಧನರಾದರು. ಮೃತರು ಗ್ರಾಪಂ ಸದಸ್ಯ ಶಂಕರ್ ಸೇರಿದಂತೆ ಐವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮದಲ್ಲಿ ಗುರುವಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕುಮಾರಸ್ವಾಮಿ



ಹನಗೋಡು, ನ.21– ಸಮೀಪದ ಹರೀನಹಳ್ಳಿ ಗ್ರಾಮದ ಯಜಮಾನ್ ಹೆಚ್.ಬಿ.ಕುಮಾರಸ್ವಾಮಿ(85) ಗುರುವಾರ ಬೆಳಗ್ಗೆ ನಿಧನರಾದರು. ಮೃತರು ಕೆ.ಆರ್.ನಗರದ ಚೆಸ್ಕಾಂ ಇಲಾಖೆ ಶಿಲ್ಪಾ ಸೇರಿದಂತೆ ಇಬ್ಬರು ಪುತ್ರಿಯರು ಮತ್ತು ಓರ್ವ ಪುತ್ರ ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸಂಜೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ತಾಲೂಕಲ್ಲಿ ಕಾಡಾನೆ ಹಾವಳಿ: ರೈತರ ಬೆಳೆ ನಷ್ಟ

●10 ದಿನಗಳಿಂದ ಹಲವು ಗ್ರಾಮದಲ್ಲಿ ಸಂಚರಿಸುತ್ತಿರುವ ಎರಡು ಗಂಡಾನೆ ●ಕಾಡಿಗಟ್ಟಲು ಅರಣ್ಯ ಸಿಬ್ಬಂದಿಗಳ ಹರಸಾಹಸ ●ಸಾಕಾನೆ ಭೀಮ, ಮಹೇಂದ್ರ ಆನೆ ಬಳಸಿ ಕಾರ್ಯಾಚರಣೆ




ಆನೆ ದಾಳಿಗೆ ತುತ್ತಾಗಿರುವ ಕುಂಬಳಕಾಯಿ ಬೆಳೆ ಹಾಗೂ ಛಿದ್ರಗೊಂಡಿರುವ ನೀರಿನ ಟ್ಯಾಂಕ್

ಮೈಸೂರು, ನ.21(ಎಂಟಿವೈ)– ಕಾಡಾನೆಗಳೆರಡು ಕಳೆದ 10 ದಿನದಿಂದ ಮೈಸೂರು ತಾಲೂಕಿನ ಹಲವು ಗ್ರಾಮಗಳ ಜಮೀನುಗಳಿಗೆ ಲಗ್ಗೆ ಇಟ್ಟಿದ್ದು, ಅಪಾರ ಪ್ರಮಾಣದ ಬೆಳೆ ನಷ್ಟ ಸಂಭವಿಸಿದೆ. ಕಾಡಾನೆಗಳನ್ನು ಕಾಡಿಗೆ ಓಡಿಸಲು ಅರಣ್ಯ ಸಿಬ್ಬಂದಿ ಹರಸಾಹಸ ಮಾಡುತ್ತಿದ್ದಾರೆ.

ಮೈಸೂರು ತಾಲೂಕಿನ ಜಯಪುರ ಹೋಬಳಿ ಹಾಗೂ ಸರಗೂರು ತಾಲೂಕು ವ್ಯಾಪ್ತಿಯ ಹಲವು ಗ್ರಾಮಗಳಲ್ಲಿ ಕಳೆದ 10 ದಿನಗಳಿಂದ ಎರಡು ಕಾಡಾನೆಗಳು ಸಂಚರಿಸುತ್ತಿದ್ದು, ರೈತರು ಹೊಲ ಮತ್ತು ತೋಟದಲ್ಲಿ ಬೆಳೆದಿರುವ ಬೆಳೆಗಳಿಗೆ ಹಾನಿ ಮಾಡಿವೆ. ಕಾಡಾನೆಗಳ ಉಪಟಳ ತಡೆಗೆ ಅರಣ್ಯ ಇಲಾಖೆ ಮಾಡುತ್ತಿರುವ ಪ್ರಯತ್ನ ವಿಫಲವಾಗಿದ್ದು, ಆನೆಗಳು ರಾಜಾ ರೋಷವಾಗಿ ಹೊಲಗಳಲ್ಲಿ ತಿರುಗಾಡುತ್ತಿವೆ.

ಇದರಿಂದ ರೈತರು ಬೆಳೆದಿರುವ ಕುಂಬಳಕಾಯಿ, ಸೌತೆಕಾಯಿ, ತೊಗರಿ, ಬಾಳೆ ಸೇರಿದಂತೆ ಇನ್ನಿತರ ಬೆಳೆ ಆನೆಗಳಿಗೆ ಆಹಾರವಾದರೆ, ಮತ್ತಷ್ಟು ಬೆಳೆಗಳು ಆನೆಗಳ ಕಾಲಿಗೆ ಸಿಕ್ಕಿ ನೆಲಕಚ್ಚಿವೆ. ಕಾಡಾನೆಗಳನ್ನು ಮರಳಿ ಕಾಡಿಗೆ ಓಡಿಸಲು ಅರಣ್ಯ ಇಲಾಖೆ ಮಾಡುತ್ತಿರುವ ಪ್ರಯತ್ನವೆಲ್ಲ ವಿಫಲವಾಗಿದ್ದು, 10 ದಿನದಿಂದಲೂ ಅರಣ್ಯ ಇಲಾಖೆ ಸಿಬ್ಬಂದಿಗಳಿಗೆ ಕಾಡಾನೆಗಳು ತಲೆನೋವು ತಂದಿತ್ತಿವೆ.

ಸರಗೂರು ಅರಣ್ಯ ಪ್ರದೇಶದಿಂದ ಮೈಸೂರು ತಾಲೂಕಿನ ವಿವಿಧ ಗ್ರಾಮಗಳತ್ತ ಬಂದಿರುವ ಕಾಡಾನೆಗಳನ್ನು ಮರಳಿ ಕಾಡಿಗೆ ಕಳುಹಿಸುವ ಕಾರ್ಯಾಚರಣೆ ನಡೆಸುತ್ತಿದ್ದರೂ, ಆನೆಗಳು ಮಾತ್ರ ದಿಕ್ಕು ಬದಲಿಸುತ್ತಾ ಅರಣ್ಯ ಸಿಬ್ಬಂದಿಗಳನ್ನು ಹೈರಾಣಾಗಿಸುತ್ತಿವೆ. ಇದರಿಂದ ಕಳೆದ ಮೂರು ದಿನದ ಹಿಂದಷ್ಟೇ ದಸರಾ ಆನೆಗಳಾದ ಮಹೇಂದ್ರ ಮತ್ತು ಭೀಮ ಆನೆಯನ್ನು ಕರೆಸಿಕೊಂಡು ಕಾರ್ಯಾಚರಣೆ ಮುಂದುವರೆಸಲಾಗಿದೆ. ಆದರೂ, ಮೈಸೂರು–ಹೆಚ್.ಡಿ.ಕೋಟೆ ಮುಖ್ಯ ರಸ್ತೆಯನ್ನು ದಾಟಲು ಹಿಂದೇಟು ಹಾಕಿ ಮತ್ತೆ ವಾಪಸ್ ಚಿಕ್ಕನಹಳ್ಳಿ ಮೀಸಲು ಅರಣ್ಯ ಪ್ರದೇಶದತ್ತ ಕಾಡಾನೆಗಳು ನುಸುಳಿದೆ. ಹಾಗಾಗಿ ಮತ್ತೆ ಅರಣ್ಯ ಇಲಾಖೆಗೆ ತಲೆ ನೋವಾಗಿ ಪರಿಣಮಿಸಿತ್ತು. ಚಿಕ್ಕನಹಳ್ಳಿ ಅರಣ್ಯ ಪ್ರದೇಶದಲ್ಲಿ ಬೀಡು ಬಿಟ್ಟಿರುವ ಕಾಡಾನೆಗಳನ್ನು ಓಡಿಸಲು ಮಾಡುತ್ತಿರುವ ಪ್ರಯತ್ನವನ್ನೆಲ್ಲಾ ಕಾಡಾನೆಗಳು ವಿಫಲಗೊಳಿಸುತ್ತಿರುವುದರಿಂದ ಇದೀಗ ಥರ್ಮಲ್ ಡ್ರೋನ್ ಬಳಸಲು ಅರಣ್ಯ ಇಲಾಖೆ ನಿರ್ಧರಿಸಿದೆ.

ಬೆಳೆ ಪರಿಹಾರಕ್ಕೆ ರೈತರ ಮೊರೆ: ಜಯಪುರ ಹೋಬಳಿಯ ಮಂಡನಹಳ್ಳಿ– ಗುಜ್ಜೇಗೌಡನಪುರ ಗ್ರಾಮಗಳ ವ್ಯಾಪ್ತಿಯಲ್ಲಿ ಆನೆಗಳ ಸಂಚಾರದಿಂದಾಗಿ ಹಲವು ರೈತರ ಬೆಳೆ ನಷ್ಟ ಸಂಭವಿಸಿದೆ. ಎಂ.ಡಿ.ಸಿದ್ಧಲಿಂಗಸ್ವಾಮಿ ಎಂಬುವವರ ಜಮೀನಿನಲ್ಲಿ ಬೆಳೆದಿದ್ದ ತೊಗರಿ, ಕುಂಬಳಕಾಯಿ ಬೆಳೆಯನ್ನು ನಾಶಗೊಳಿಸಿದೆ. ಅಲ್ಲದೇ ನೀರಿನ ಟ್ಯಾಂಕ್ ತುಳಿದು, ಛಿದ್ರಗೊಳಿಸಿದೆ. ಈ ಹಿನ್ನೆಲೆಯಲ್ಲಿ ಬೆಳೆನಷ್ಟವುಂಟಾಗಿರುವ ರೈತರಿಗೆ ತ್ವರಿತಗತಿಯಲ್ಲಿ ಪರಿಹಾರ ನೀಡಬೇಕು. ಕಾಡಾನೆ ಹಾವಳಿ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ರೈತರು ಮನವಿ ಮಾಡಿದ್ದಾರೆ.

ಕಾಡಿಗೆ ಓಡಿಸಲು ಕಾರ್ಯಾಚರಣೆ ಮುಂದುವರೆಸಲಾಗಿದೆ

ಮೈಸೂರು ತಾಲೂಕಿನ ಕೆಲ ಗ್ರಾಮಗಳಲ್ಲಿ ಕಳೆದ 10 ದಿನದಿಂದ ಎರಡು ಕಾಡಾನೆಗಳು ಓಡಾಡುತ್ತಿದ್ದು, ಅವುಗಳನ್ನು ಕಾಡಿಗೆ ಓಡಿಸಲು ನಿರಂತರವಾಗಿ ಕಾರ್ಯಾಚರಣೆ ನಡೆಸಲಾಗುತ್ತಿದೆ. ಕಾರ್ಯಾಚರಣೆ ವೇಳೆ ಮೈಸೂರು–ಹೆಚ್.ಡಿ.ಕೋಟೆ ಮುಖ್ಯ ರಸ್ತೆ ದಾಟಲು ಹಿಂದೇಟು ಹಾಕುತ್ತಿರುವ ಆನೆಗಳು, ಮತ್ತೆ ಚಿಕ್ಕನಹಳ್ಳಿ ಅರಣ್ಯ ಪ್ರದೇಶದತ್ತ ಸಾಗಿದೆ. ಈ ಹಿನ್ನೆಲೆಯಲ್ಲಿ ಕಾರ್ಯಾಚರಣೆ ಸಂದರ್ಭದಲ್ಲಿ ಮುಖ್ಯ ರಸ್ತೆಯಲ್ಲಿ ವಾಹನ ಸಂಚಾರ ಬಂದ್ ಮಾಡಿ ಆನೆ ಓಡಿಸುವ ಪ್ರಯತ್ನ ಮಾಡಲಾಗಿತ್ತು. ಆದರೂ ಆನೆಗಳು ರಸ್ತೆ ದಾಟಲಿಲ್ಲ. ಈ ಹಿನ್ನೆಲೆಯಲ್ಲಿ ದಸರಾ ಆನೆಗಳಾದ ಮಹೇಂದ್ರ ಮತ್ತು ಭೀಮ ಆನೆಯನ್ನು ಕರೆಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಅಲ್ಲದೆ ಥರ್ಮಲ್ ಡ್ರೋನ್ ಬಳಸಿ ಆನೆಗಳ ಚಲನವಲನಗಳನ್ನು ಗಮನಿಸಲಾಗುತ್ತಿದೆ.

- ಡಾ.ಕೆ.ಎನ್.ಬಸವರಾಜು, ಡಿಸಿಎಫ್

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಪ್ರಭುತ್ವ (ಕ) + ಮರ್ಯಾದೆ ಪ್ರಶ್ನೆ (ಕ)	2+2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಜೀಬ್ರಾ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಂಗುವಾ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಅಮರನ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಅಮರನ್ (ತ)	4 ಪ್ರದರ್ಶನಗಳು
ಸಂಗಂ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಲಿಡೋ	
ಸಂಗೊಳ್ಳಿ ರಾಯಣ್ಣ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಅಮರನ್ (ತ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕಂಗುವಾ (3ಡಿ) (ತ): ಬೆ.10ಕ್ಕೆ, ಮ.1ಕ್ಕೆ, ರಾ.7.15ಕ್ಕೆ, ಅಮರನ್ (ತ): ಸಂ.4ಕ್ಕೆ, ಆನಂದ್ ಶ್ರೀಬಾಲ (ಮ): ರಾ.10.20ಕ್ಕೆ
ಸ್ಕ್ರೀನ್ 2	ಅಮರನ್ (ತ): ಬೆ.9.40ಕ್ಕೆ, ಮ.1ಕ್ಕೆ, ಬಘೀರ (ಕ): ಸಂ.4.15ಕ್ಕೆ, ಗ್ಲಾಡಿಯೇಟರ್ 2 (ಇಂ): ರಾ.7.20ಕ್ಕೆ, ರಾ.10.20ಕ್ಕೆ
ಸ್ಕ್ರೀನ್ 3	ದಿ ಸಬರ್‌ಮತಿ ರಿಪೋರ್ಟ್ (ಹಿಂ): ಬೆ.10.35ಕ್ಕೆ, ರಾ.7.15ಕ್ಕೆ, ಬಘೀರ (ಕ): ಮ.1.10ಕ್ಕೆ, ಲಕ್ಕಿ ಭಾಸ್ಕರ್ (ಮ): ಸಂ.4.15ಕ್ಕೆ, ಮಟ್ಕಾ (ತೆ): ರಾ.9.55ಕ್ಕೆ
ಸ್ಕ್ರೀನ್ 4	ಭೈರತಿ ರಣಗಲ್ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಬಘೀರ (ಕ): ಬೆ.10ಕ್ಕೆ, ಮ.3.55ಕ್ಕೆ, ಕಂಗುವಾ (ಕ): ಮ.1ಕ್ಕೆ, ಕಂಗುವಾ (ತ): ಸಂ.6.55ಕ್ಕೆ, ಅಮರನ್ (ತ): ರಾ.9.50ಕ್ಕೆ.
ಸ್ಕ್ರೀನ್ 2	ಅಮರನ್ (ಕ): ಬೆ.10.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಭೈರತಿ ರಣಗಲ್ (ಕ): ಬೆ.10ಕ್ಕೆ, ಸಂ.6.30ಕ್ಕೆ, ಅಮರನ್ (ಕ): ಮ.12.40ಕ್ಕೆ, ಕಂಗುವಾ (3ಡಿ)(ತ): ಮ.3.55ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಕಂಗುವಾ (ತ): ಬೆ.10.30ಕ್ಕೆ, ಸಂ.5.20ಕ್ಕೆ, ಅಮರನ್ (ತ): ಮ.2.10ಕ್ಕೆ, ಅಮರನ್ (ಕ): ರಾ.8.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಭಾರತ ಜಾಗತಿಕ ಮಟ್ಟದಲ್ಲಿ 5ನೇ ಶಕ್ತಿಯಾಗಲು ಉಕ್ಕು ಉದ್ಯಮದ ಮಹತ್ತರ ಪಾತ್ರವಿದೆ

●ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ಅಭಿಮತ
●ಸ್ಪೆಷಾಲಿಟಿ, ಗ್ರೀನ್ ಸ್ಟೀಲ್ ಉತ್ಪಾದನೆಯಲ್ಲಿ ಗಣನೀಯ ಸಾಧನೆ ವಿಶ್ವಾಸ



ಬೆಂಗಳೂರು, ನ.21(ಕೆಎಂಶಿ)–ಜಾಗತಿಕ ಮಟ್ಟದಲ್ಲಿ 5ನೇ ಆರ್ಥಿಕ ಶಕ್ತಿಯಾಗುವ ನಿಟ್ಟಿನಲ್ಲಿ ದಾಪುಗಾಲು ಇಟ್ಟಿರುವ ಭಾರತದ ಪ್ರಗತಿಯಲ್ಲಿ ಉಕ್ಕು ಉದ್ಯಮ ಮಹತ್ತರ ಪಾತ್ರ ನಿರ್ವಹಿಸುತ್ತಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಇಂದಿಲ್ಲಿ ತಿಳಿಸಿದ್ದಾರೆ.

ಭಾರತೀಯ ಲೋಹ ಸಂಸ್ಥೆಯ ಲೋಹ ಶಾಸ್ತ್ರಜ್ಞ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನಾಯಕತ್ವದಲ್ಲಿ ಭಾರತ ಜಗತ್ತಿನ 6ನೇ ದೈತ್ಯ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದೆ, 5ನೇ ಸ್ಥಾನಕ್ಕೇರುವ ಪ್ರಯತ್ನಕ್ಕೆ ಉಕ್ಕು ಉದ್ಯಮ ಬಹುದೊಡ್ಡ ಕೊಡುಗೆ ನೀಡುತ್ತಿದೆ ಎಂದರು.

ಭಾರತ 5 ಟ್ರಿಲಿಯನ್ ಆರ್ಥಿಕ ಶಕ್ತಿಯಾಗುವಲ್ಲಿಯೂ ಉಕ್ಕು ಕ್ಷೇತ್ರ ನಿರ್ಣಾಯಕ ಪಾತ್ರ ವಹಿಸುತ್ತಿದೆ. ರಾಷ್ಟ್ರೀಯ ಉಕ್ಕು ನೀತಿ ಉದ್ಯಮಕ್ಕೆ ಬಲ ನೀಡುತ್ತಿದೆ. ಸ್ಪೆಷಾಲಿಟಿ ಸ್ಟೀಲ್ ಉತ್ಪಾದನೆ, ಗ್ರೀನ್ ಸ್ಟೀಲ್ ತಯಾರಿಕೆಯಲ್ಲಿ ಮುಂಚೂಣಿಗೆ ಬರುವಲ್ಲಿ ಎಲ್ಲ ಅಗತ್ಯ ಉಪ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಉತ್ಪಾದನಾ ಸಂಪರ್ಕ ಉಪಕ್ರಮ ಸೇರಿದಂತೆ ಹಲವು ಪರಿಣಾಮಕಾರಿ ಕಾರ್ಯಕ್ರಮ ಜಾರಿ ಮಾಡಲಾಗಿದೆ. ಭಾರತದ ಉಕ್ಕು ಉದ್ಯಮ ಸಶಕ್ತವಾಗಿ ಹೊರಹೊಮ್ಮುತ್ತಿದೆ. ಇದು ಪ್ರಧಾನಿ ನರೇಂದ್ರ ಮೋದಿ ಅವರ ಕನಸಾಗಿದೆ. ಉಕ್ಕು ಕ್ಷೇತ್ರದ ಸುಸ್ಥಿರ ಹಾಗೂ ಚಲನಶೀಲ ಅಭಿವೃದ್ಧಿಗೆ ಕೇಂದ್ರ ಬದ್ಧವಾಗಿದ್ದು, ನಿರ್ದಿಷ್ಟ ಪೂರಕ ಕಾರ್ಯಸೂಚಿ ಮೇರೆಗೆ ಕೆಲಸ ಮಾಡುತ್ತಿದೆ. ಸಂಶೋಧನೆ ಮತ್ತು ಅಭಿವೃದ್ಧಿಗೆ ಹೆಚ್ಚು ಪ್ರಾಮುಖ್ಯತೆ ಕೊಡುವ ಜೊತೆಗೆ ಉಕ್ಕು ಉತ್ಪಾದನೆ ಪ್ರಕ್ರಿಯೆಯಲ್ಲಿನ ವಾಯುಮಾಲಿನ್ಯವನ್ನು ಶೂನ್ಯ ಮಟ್ಟಕ್ಕೆ ತರುವ ಗುರಿ ಹೊಂದಿದ್ದು, ಗುರಿ ಸಾಧನೆ ಖಚಿತ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಜಾಗತಿಕ ಪರಿಸರ ಸಮತೋಲನ ಹಿನ್ನೆಲೆಯಲ್ಲಿ ಸುಸ್ಥಿರ ಉಕ್ಕು ಉತ್ಪಾದನೆಗೆ ಹೈಡ್ರೋಜನ್ ಆಧಾರಿತ ತಂತ್ರಾರಿಕೆ ಮತ್ತು ಮರುಬಳಕೆ ಉತ್ತೇಜಿಸಲಾಗುತ್ತಿದೆ ಎಂದರು.

ಮೈಸೂರು ಜಿಲ್ಲೆಯಲ್ಲಿ 4221 ಬಿಪಿಎಲ್ ಕಾರ್ಡ್ ಎಪಿಎಲ್‌ಗೆ ವರ್ಗಾವಣೆ

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ. ಪುಷ್ಪಾ ಅಮರನಾಥ್



ಮೈಸೂರಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಪಡಿತರ ಕಾರ್ಡ್ ಪರಿಷ್ಕರಣೆ ಮಾಡಲಾದ ತಾಲೂಕುವಾರು ವಿವರ

ಹೆಚ್.ಡಿ.ಕೋಟೆ	145
ಹುಣಸೂರು	260
ಕೆ.ಆರ್.ನಗರ	145
ಮೈಸೂರು	2526
ನಂಜನಗೂಡು	317
ಪಿರಿಯಾಪಟ್ಟಣ	261
ಸಾಲಿಗ್ರಾಮ	131
ಸರಗೂರು	40
ತಿ. ನರಸೀಪುರ	396

ಮೈಸೂರು, ನ.21(ಎಂಟಿವೈ)– ಕೇಂದ್ರ ಸರ್ಕಾರದ ಸೂಚನೆಯಂತೆ ಮೈಸೂರು ಜಿಲ್ಲೆಯಲ್ಲಿ ಬಿಪಿಎಲ್ ಕಾರ್ಡ್ ಪರಿಷ್ಕಣೆ ಮಾಡಲಾಗಿದ್ದು, 4221 ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್ ಆಗಿ ಮಾರ್ಪಡಿಸಲಾಗಿದೆ. ಆದರೆ ಯಾವುದೇ ಕಾರ್ಡ್ ರದ್ದು ಮಾಡಿಲ್ಲ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ. ಪುಷ್ಪಾ ಅಮರನಾಥ್ ಸ್ಪಷ್ಟಪಡಿಸಿದ್ದಾರೆ.

ಮೈಸೂರಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ 6,91,370 ಬಿಪಿಎಲ್ ಕಾರ್ಡ್‌ದಾರರಿದ್ದು, ಅವರಲ್ಲಿ ತೆರಿಗೆದಾರರು ಮತ್ತು ಸರ್ಕಾರಿ ಅಧಿಕಾರಿಗಳ ಕುಟುಂಬದವರ ಪರಿಷ್ಕರಣೆ ಮಾಡಿದಾಗ 4221 ಬಿಪಿಎಲ್ ಕಾರ್ಡ್‌ದಾರರನ್ನು ಎಪಿಎಲ್‌ಗೆ ವರ್ಗಾವಣೆ ಮಾಡಲಾಗಿದೆ. ವಿರೋಧ ಪಕ್ಷಗಳು ಜನರಿಗೆ ತಪ್ಪು ಮಾಹಿತಿ ನೀಡುತ್ತಿದ್ದು, ಸರ್ಕಾರದ ಮೇಲೆ ಗೂಬೆ ಕೂರಿಸುವ ಯತ್ನ ಮಾಡುತ್ತಿವೆ. ಬಿಜೆಪಿ ನಾಯಕರು ಮಾಡುತ್ತಿರುವ ಆರೋಪದಲ್ಲಿ ಯಾವುದೇ ಹುರುಳಿಲ್ಲ ಎಂದು ಕಿಡಿಕಾರಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವ ರಾಜ್ಯ ಸರ್ಕಾರ ಬಡವರ ಹಿತಕಾಯಲು ಬದ್ಧವಾಗಿ ಕಾರ್ಯಕ್ರಮ ರೂಪಿಸುತ್ತಿದೆ. ಅದರಲ್ಲೂ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಬಡ ಹಾಗೂ ಮಧ್ಯಮ ವರ್ಗದ ಹಿತ ಕಾಯುವ ಮಹತ್ತರ ಜವಾಬ್ದಾರಿ ನಿಭಾಯಿಸುತ್ತಿದೆ. ಈ ಗ್ಯಾರಂಟಿ ಯೋಜನೆಗಳಿಗೆ 52 ಸಾವಿರ ಕೋಟಿ ರೂ. ಖರ್ಚು ಮಾಡುತ್ತಿರುವ ಕಾಂಗ್ರೆಸ್ ಸರ್ಕಾರ ಬಡವರ ಹೊಟ್ಟೆ ತುಂಬಿಸುವ ಅನ್ನ ಭಾಗ್ಯ ಯೋಜನೆಗೆ ಕತ್ತರಿ ಹಾಕುವ ಕೆಟ್ಟ ಆಲೋಚನೆ ಮಾಡುವುದಿಲ್ಲ. ಆದರೆ, ಬಿಜೆಪಿ, ಜೆಡಿಎಸ್ ನಾಯಕರು ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಾ ಬಂದಿದ್ದಾರೆ. ಅವರಿಗೆ ಬಡವರ ಹಿತ ಮುಖ್ಯವಲ್ಲ. ಆ ಕಾರಣದಿಂದ ಜನರಿಗೆ ತಪ್ಪು ಮಾಹಿತಿ ನೀಡಿ, ರಾಜಕೀಯ ಲಾಭ ಮಾಡಿಕೊಳ್ಳುವ ಹುನ್ನಾರ ನಡೆಸುತ್ತಿದ್ದಾರೆ ಎಂದು ಅಸಮಾದಾನ ವ್ಯಕ್ತಪಡಿಸಿದರು.

ಅಭಿಯಾನ: ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ 'ನಮ್ಮ ನಡಿಗೆ ಗ್ಯಾರಂಟಿ ಅನುಷ್ಠಾನದ ಕಡೆಗೆ' ಎಂಬ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಆರಂಭದಲ್ಲಿಯೇ ಮೈಸೂರು ನಗರದ ಸ್ಲಂ ಮತ್ತು ಕೊಳಚೆ ಪ್ರದೇಶಗಳಲ್ಲಿ ಪಾದಯಾತ್ರೆ ಕೈಗೊಂಡು ಅರ್ಹ ಫಲಾನುಭವಿಗಳಿಗೆ ಯೋಜನೆ ತಲುಪಿಸಲಿದ್ದೇವೆ ಎಂದರು.

ಗ್ಯಾರಂಟಿ ಅದಾಲತ್: ಜಿಲ್ಲಾ ಮಟ್ಟದಲ್ಲಿ ಗ್ಯಾರಂಟಿ ಅದಾಲತ್ ನಡೆಸಲು ಚಿಂತನೆ ನಡೆಸಿದ್ದೇನೆ. ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಸ್ಯೆಯನ್ನು ಸ್ಥಳದಲ್ಲಿಯೇ ಪರಿಹರಿಸುವ ನಿಟ್ಟಿನಲ್ಲಿ ಕ್ರಮವಹಿಸುತ್ತೇವೆ. ಸ್ಥಳದಲ್ಲಿಯೇ ನ್ಯಾಯ ಕೊಡಿಸುವ ಕೆಲಸವನ್ನು ಪ್ರಾಧಿಕಾರ ಮಾಡಲಿದೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾಗಿ ಅರುಣ್‌ಕುಮಾರ್ ನೇಮಕ ಮಾಡಲಾಗಿದೆ. ತಾಲೂಕು ಅಧ್ಯಕ್ಷರನ್ನು ನೇಮಕ ಮಾಡಲಾಗಿದೆ. ಪಂಚಾಯಿತಿ ಮತ್ತು ವಾರ್ಡ್ ಮಟ್ಟದಲ್ಲಿ ಸದಸ್ಯರನ್ನು ನೇಮಿಸಲಾಗುವುದು. ಶೀಘ್ರದಲ್ಲಿಯೇ ಜಿಲ್ಲಾ ಪಂಚಾಯಿತಿಯಲ್ಲಿ ಕಚೇರಿಯನ್ನು ಆರಂಭಿಸಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಅರುಣ್‌ಕುಮಾರ್ ಇದ್ದರು.

ಮುಡಾ ನಿವೇಶನ ಹಂಚಿಕೆ ಹಗರಣ

ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ಭೇಟಿ ಮಾಡಿದ ಸಿಎಂ ಸಿದ್ದರಾಮಯ್ಯ



ನವದೆಹಲಿ, ನ.21(ಬಿಎಲ್‌ಯು)– ಮುಡಾ ನಿವೇಶನ ಹಂಚಿಕೆ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಹಿರಿಯ ವಕೀಲರೂ ಆದ ಕಾಂಗ್ರೆಸ್ ನಾಯಕ ಅಭಿಷೇಕ್ ಮನು ಸಿಂಘ್ವಿ ಅವರನ್ನು ಭೇಟಿ ಮಾಡಿ, ಚರ್ಚೆ ನಡೆಸಿದರು.

ಕರ್ನಾಟಕದ ನಂದಿನಿ ಉತ್ಪನ್ನಗಳ ಬಿಡುಗಡೆ ಸಮಾರಂಭದಲ್ಲಿ ಪಾಲ್ಗೊಳ್ಳಲು ದೆಹಲಿಗೆ ಆಗಮಿಸಿರುವ ಸಿದ್ದರಾಮಯ್ಯ ಇಂದು ಬೆಳಿಗ್ಗೆ ಅಭಿಷೇಕ್ ಮನು ಸಿಂಘ್ವಿ ಮನೆಯಲ್ಲಿ ಉಪಹಾರ ಸಭೆಯಲ್ಲಿ ಭಾಗವಹಿಸಿದ್ದರು.

ಈ ವೇಳೆ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ವಿಧಾನ ಪರಿಷತ್ ಸದಸ್ಯ ಗೋವಿಂದ ರಾಜು ಹಾಗೂ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ ಹಾಜರಿದ್ದರು.

ಮುಡಾ ಹಗರಣವನ್ನು ಸಿಬಿಐಗೆ ವಹಿಸುವ ಬಗ್ಗೆ ನವೆಂಬರ್ 26ರಂದು ಹೈಕೋರ್ಟ್‌ನಲ್ಲಿ ವಿಚಾರಣೆ ನಡೆಯುತ್ತಿರುವುದು ಹಾಗೂ ಮುಡಾ ಹಗರಣದ ಬಗ್ಗೆ ಜಾರಿ ನಿರ್ದೇಶನಾಲಯ ವಿಚಾರಣೆ ನಡೆಸುತ್ತಿರುವ ಕುರಿತಂತೆ ಸಿದ್ದರಾಮಯ್ಯ ಅವರು ಅಭಿಷೇಕ್ ಮನು ಸಿಂಘ್ವಿ ಜೊತೆ ಮಾತುಕತೆ ನಡೆಸಿದ್ದಾರೆ ಎನ್ನಲಾಗಿದೆ.

ಎಲ್‌ಡಿಎಐ ರಾಜ್ಯಾಧ್ಯಕ್ಷರಾಗಿ ಮೇಹುಲ್ ಜೆ.ಪಟೇಲ್ ನೇಮಕ



ಮೈಸೂರು, ನ.21–ಎಲ್‌ಪಿಜಿ ಡಿಸ್ಟಿಬ್ಯೂಟರ್ ಅಸೋಸಿಯೇಷನ್ (ಎಲ್‌ಡಿಎಐ)ನ ರಾಜ್ಯ ಘಟಕದ ಅಧ್ಯಕ್ಷರಾಗಿ ಮೈಸೂರಿನ ಅಮರ್ ದೀಪ್ ಗ್ಯಾಸ್ ಡಿಸ್ಟ್ರಿಬ್ಯೂಟರ್ಸ್‌ನ ಮಾಲಿಕರಾದ ಮೇಹುಲ್ ಜೆ.ಪಟೇಲ್ ಅವರನ್ನು ನೇಮಕ ಮಾಡಿ ಎಂದು ಅಸೋಸಿಯೇಷನ್‌ನ ರಾಷ್ಟ್ರೀಯ ಅಧ್ಯಕ್ಷ ಬಿ.ಎಸ್.ಶರ್ಮ ಆದೇಶ ಹೊರಡಿಸಿದ್ದು, ರಾಜ್ಯ ಕಾರ್ಯಕಾರಿಣಿಯನ್ನು ಮೆಹುಲ್ ಜೆ.ಪಟೇಲ್ ರಚಿಸುತ್ತಾರೆ ಎಂದು ಅವರು ತಮ್ಮ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಧಾನಿ ಮೋದಿಗೆ ಗಯಾನಾದ ಅತ್ಯುನ್ನತ ನಾಗರಿಕ ಗೌರವ



ಜಾರ್ಜ್‌ಟೌನ್, ನ.21– ಗಯಾನಾ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಗಯಾನಾ ಸರ್ಕಾರ ಅತ್ಯುನ್ನತ ಗೌರವವಾದ 'ದಿ ಆರ್ಡರ್ ಆಫ್ ಎಕ್ಸಲೆನ್ಸ್' ಪ್ರಶಸ್ತಿ ನೀಡಿ ಗೌರವಿಸಿದೆ.

ಇಂದು ಜಾರ್ಜ್‌ಟೌನ್‌ನ ಸ್ಟೇಟ್ ಹೌಸ್‌ನಲ್ಲಿ ನಡೆಯುತ್ತಿ ರುವ ಭಾರತ–ಕೆರಕಮ್ (ಕೆರಿಬಿಯನ್ ಸಮುದಾಯ) ಶೃಂಗಸಭೆಯಲ್ಲಿ ಗಯಾನಾದ ಅಧ್ಯಕ್ಷ ಮೊಹಮದ್ ಇರ್ಫಾನ್ ಅಲಿ ಅವರು ಪ್ರಧಾನಿ ಮೋದಿಗೆ ಅತ್ಯುನ್ನತ ನಾಗರಿಕ ಪ್ರಶಸ್ತಿಯನ್ನು ನೀಡಿ, ಗೌರವಿಸಿದರು.

ಗಯಾನಾದ ಅತ್ಯುನ್ನತ ರಾಷ್ಟ್ರೀಯ ಪ್ರಶಸ್ತಿಯನ್ನು ಪಡೆದವರ ಪೈಕಿ ಪ್ರಧಾನಿ ಮೋದಿ ನಾಲ್ಕನೇ ವಿದೇಶಿ ನಾಯಕರಾಗಿದ್ದಾರೆ. ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಮೋದಿ, ಗಯಾನಾಕ್ಕೆ ನೀಡಿದ ಈ ಭೇಟಿಯು ಭಾರತದ ಜೊತೆಗಿನ ಸಂಬಂಧವನ್ನು ಬಲಪಡಿಸುತ್ತದೆ. ಅಧ್ಯಕ್ಷ ಇರ್ಫಾನ್ ಅಲಿ ಅವರಿಗೆ ಧನ್ಯವಾದಗಳನ್ನು ಅರ್ಪಿಸಿದ್ದು, ಈ ಪ್ರಶಸ್ತಿ 140 ಕೋಟಿ ಭಾರತೀಯರಿಗೆ ಸಲ್ಲುವ ಗೌರವವಾಗಿದೆ ಎಂದು ತಿಳಿಸಿದರು.

ಅಧ್ಯಕ್ಷ ಇರ್ಫಾನ್ ಅಲಿ ಅವರೊಂದಿಗಿನ ಈ ಸಂಬಂಧ ಭಾರತ ಹಾಗೂ ಗಯಾನಾ ದೇಶವನ್ನು ಎತ್ತರಕ್ಕೆ ಕೊಂಡೊಯ್ಯಲು ಸಹಕಾರಿಯಾಗುತ್ತದೆ. ಭಾರತವು ಗಯಾನಾದೊಂದಿಗೆ ಹೆಗಲಿಗೆ ಹೆಗಲು ಕೊಟ್ಟು ಕೆಲಸ ಮಾಡಲು ಸಿದ್ಧವಾಗಿದೆ. ಅಸಂಖ್ಯಾತ ಜಲಪಾತಗಳು ಮತ್ತು ಸರೋವರ ಗಳಿಂದ ಕೂಡಿರುವ ಗಯಾನಾವನ್ನು 'ದಿ ಲ್ಯಾಂಡ್ ಆಫ್ ಮೆನಿ ವಾಟರ್ಸ್' ಎಂದು ಕರೆಯಲಾಗುತ್ತದೆ. ಗಯಾನಾ ನದಿಗಳು ಇಲ್ಲಿನ ಜನರ ಸಂಸ್ಕೃತಿಯ ಪ್ರತಿಬಿಂಬವಾಗಿದೆ. ಹಾಗೆಯೇ ಭಾರತದ ಗಂಗಾ, ಯಮುನಾ ಮತ್ತು ಬ್ರಹ್ಮಪುತ್ರ ನದಿಗಳು ನಮ್ಮ ಪ್ರಾಚೀನ ನಾಗರಿಕತೆಯ ಜನ್ಮಸ್ಥಳವಾಗಿದೆ. ಇದು ಭಾರತ ಮತ್ತು ಗಯಾನಾ ನಡುವೆ ಸಾಮ್ಯತೆಗಳ ಅನೇಕ ಉದಾಹರಣೆಗಳಿವೆ ಎಂದು ತಿಳಿಸಿದರು.

ಇತ್ತೀಚೆಗಷ್ಟೇ ಪ್ರಧಾನಿ ಮೋದಿಗೆ ನೈಜೀರಿಯಾ ದೇಶ ತನ್ನ ಅತ್ಯುನ್ನತ 'ದಿ ಗ್ರ್ಯಾಂಡ್ ಕಮಾಂಡರ್ ಆಫ್ ದಿ ಆರ್ಡರ್ ಆಫ್ ದಿ ನೈಜರ್' ಪ್ರಶಸ್ತಿಯನ್ನು ನೀಡಿ ಗೌರವಿಸಿತ್ತು. ಇದೀಗ ಗಯಾನಾ ಸರ್ಕಾರ ಪ್ರಶಸ್ತಿಯನ್ನು ನೀಡಿದ್ದು, ದೇಶವೊಂದು ನೀಡುತ್ತಿರುವ 18ನೇ ಅಂತಾರಾಷ್ಟ್ರೀಯ ಪ್ರಶಸ್ತಿ ಇದಾಗಿದೆ.

ರಾಜ್ಯದಲ್ಲಿನ ಇತ್ತೀಚಿನ ವಕ್ಫ್ ನೀತಿ ಖಂಡಿಸಿ ಮೈಸೂರಲ್ಲಿ ಇಂದು ಬಿಜೆಪಿ ಪ್ರತಿಭಟನೆ

ಟ್ರಸ್ಟ್ ಹೆಸರಿನಲ್ಲಿ ಶಾಸಕ ತನ್ವೀರ್ ಸೇಠ್ ರಿಂದ ವಕ್ಫ್ ಆಸ್ತಿ ಕೈವಶದ ಆರೋಪ



ಮೈಸೂರಿನ ಖಾಸಗಿ ಹೋಟೆಲ್ ನಲ್ಲಿ ಗುರುವಾರ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ನಮ್ಮ ಭೂಮಿ, ನಮ್ಮ ಹಕ್ಕು ಸಹಾಯವಾಣಿ ಆರಂಭ

ವಕ್ಫ್ ಬೋರ್ಡ್‌ನಿಂದ ಯಾರಿಗಾದರೂ ತೊಂದರೆ ಉಂಟಾದರೆ ವಿವರ ನೀಡಲು ಮೈಸೂರು ಬಿಜೆಪಿ ನಮ್ಮ ಭೂಮಿ, ನಮ್ಮ ಹಕ್ಕು ಸಹಾಯ ವಾಣಿ (ಹೆಲ್ಪ್ ಲೈನ್) ಆರಂಭಿಸಿದೆ ಎಂದು ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ ತಿಳಿಸಿದರು.

ತಮ್ಮ ಆಸ್ತಿಯ ಪಹಣಿ ಇಲ್ಲವೇ ಇತರೆ ದಾಖಲಾತಿಯಲ್ಲಿ ವಕ್ಫ್ ಎಂದು ತಿದ್ದುಪಡಿಯಾಗಿದ್ದರೆ, ನಮೂದಾಗಿದ್ದರೆ ಕೂಡಲೇ ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬಹುದು. ಇದನ್ನು ವಕ್ಫ್ ವಿರುದ್ಧ ಹೋರಾಟ ಮಾಡುತ್ತಿರುವ ಬಿಜೆಪಿಯ ಮೂರು ತಂಡಗಳಿಗೆ ಮಾಹಿತಿ ನೀಡುತ್ತೇವೆ. ಅವರು ಎಲ್ಲಾ ವಿವರ ಕಲೆ ಹಾಕಿ ದಾಖಲಾತಿ ಮುಂದಿಟ್ಟು ಹೋರಾಟ ರೂಪಿಸಲಿದ್ದಾರೆ ಎಂದು ಹೇಳಿದರು.

ಸಹಾಯವಾಣಿಯ ದೂರವಾಣಿ ವಿವರ– ಎಲ್.ನಾಗೇಂದ್ರ– 77605 89999, ರುದ್ರಮೂರ್ತಿ– 99168 21631, ಮಹೇಶ್– 93421 16598, ಗಿರೀಶ್– 94486 14297 ಸಂಪರ್ಕಿಸಬಹುದು ಎಂದು ನಾಗೇಂದ್ರ ತಿಳಿಸಿದರು.

ಮೈಸೂರು, ನ.21(ಬಿಎಲ್‌ಯು)– ರಾಜ್ಯ ಸರ್ಕಾರದ ಇತ್ತೀಚಿನ ವಕ್ಫ್ ನೀತಿ ವಿರುದ್ಧ ನಾಳೆ (ನವೆಂಬರ್ 22) ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ ತಿಳಿಸಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಳೆ ಬೆಳಿಗ್ಗೆಯಿಂದ ಸಂಜೆ ತನಕ ಪ್ರತಿಭಟನೆ ನಡೆಯಲಿದ್ದು, ನೂರಾರು ಬಿಜೆಪಿ ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ರೈತರು, ದೇವಸ್ಥಾನಗಳು, ಮಠಗಳು, ಶಾಲೆಗಳ ಹಾಗೂ ಸರ್ಕಾರಿ ಭೂಮಿ ಕಬಳಿಸುವತ್ತ ನಡೆದಿದೆ. ಇದರಿಂದ ತಮ್ಮ ಭೂಮಿ ಯಾವಾಗ ತಮ್ಮಿಂದ ಕೈಬಿಟ್ಟು ಹೋಗುವುದೋ ಎಂಬ ಆತಂಕದಲ್ಲಿ ರೈತರಿದ್ದಾರೆ.

ಮೈಸೂರಿನ ಇಲವಾಲದ ಸರ್ವೆ ನಂಬರ್ 54 ರ ಶಾಲೆ ಜಾಗವನ್ನು ವಕ್ಫ್ ಆಸ್ತಿ ಎಂದು ಘೋಷಿಸಲಾಗಿದೆ. ಗುಂಡೂರಾವ್ ನಗರ ಹಾಗೂ ತಿ.ನರಸೀಪುರ ತಾಲೂಕು ರಂಗಸಮುದ್ರದ ಸ್ಮಶಾನ ಜಾಗವನ್ನು ವಕ್ಫ್ ಆಸ್ತಿ ಎಂದು ನಮೂದಿಸಲಾಗಿದೆ. ಮೈಸೂರು ಜಿಲ್ಲೆಯಲ್ಲಿ ಹೀಗೆ ನೂರಾರು ಎಕರೆಯನ್ನು ವಕ್ಫ್ ಆಸ್ತಿಯಾಗಿ ಪರಿವರ್ತಿಸಿದ್ದಾರೆ ಎಂದು ನಾಗೇಂದ್ರ ಆಪಾದಿಸಿದರು.

ಇಡೀ ವಿಶ್ವದಲ್ಲೇ ವಕ್ಫ್ ಮಂಡಳಿ ಎಂಬುದಿಲ್ಲ. ಆದರೆ ಭಾರತದಲ್ಲಿ ಮಾತ್ರ ವಕ್ಫ್ ಮಂಡಳಿ ಸ್ಥಾಪಿಸಿ, ಸ್ಥಳೀಯರ ಭೂಮಿ ಕಬಳಿಸಲು ಮುಂದಾಗಿದ್ದಾರೆ. ಅಲ್ಪ ಸಂಖ್ಯಾತರ ತುಷ್ಟೀಕರಣ ಹಾಗೂ ಮತ ಬ್ಯಾಂಕ್‌ಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ಇಂತಹ ಕ್ರಮಕ್ಕೆ ಮುಂದಾಗಿದೆ ಎಂದು ದೂರಿದರು.

ವಕ್ಫ್ ಆಸ್ತಿ ಎಂದರೆ ದೇವರ ಆಸ್ತಿ ಎಂದು ಹೇಳುತ್ತಾರೆ. ಆದರೆ ದೇವರ ಹೆಸರಿನಲ್ಲಿರುವ ವಕ್ಫ್ ಆಸ್ತಿಯನ್ನು ಕಾಂಗ್ರೆಸ್‌ನ ಬಹಳಷ್ಟು ನಾಯಕರು ಕಬಳಿಸಿದ್ದಾರೆ. ಈ ಸಂಬಂಧ ಅನ್ವರ್ ಮಾಣಿಪಾಡಿ ವರದಿಯಲ್ಲಿ ಸ್ಪಷ್ಟ ವಿವರ ನೀಡಲಾಗಿದೆ ಎಂದು ನಾಗೇಂದ್ರ ತಿಳಿಸಿದರು.

ಈ ವೇಳೆ ಮಾತನಾಡಿದ ಬಿಜೆಪಿ ಅಲ್ಪ ಸಂಖ್ಯಾತ ಮೋರ್ಚಾ ರಾಜ್ಯಾಧ್ಯಕ್ಷ ಡಾ.ಅನಿಲ್ ಥಾಮಸ್, ಮೈಸೂರಿನ ಎನ್.ಆರ್.ಕ್ಷೇತ್ರದ ಶಾಸಕ ತನ್ವೀರ್ ಸೇಠ್ ತಮ್ಮದೆ ಆದ ಟ್ರಸ್ಟ್ ಸ್ಥಾಪಿಸಿಕೊಂಡು ಸಿದ್ಧಿಕನಗರದಲ್ಲಿನ ವಕ್ಫ್ ಆಸ್ತಿಯನ್ನು ತಮ್ಮ ಕೈ ವಶ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

ವಕ್ಫ್ ಆಸ್ತಿಯಲ್ಲಿ ಕೋಟ್ಯಾಂತರ ರೂಪಾಯಿ ಬಾಡಿಗೆ ಬರುತ್ತಿದೆ. ಆ ಹಣ ಬಡ ಮುಸ್ಲಿಂ ಸಮುದಾಯಕ್ಕೆ ಬಳಕೆಯಾಗುತ್ತಿಲ್ಲ. ಒಂದು ವೇಳೆ ನಿಜವಾಗಿಯೂ ಆ ಹಣ ಸದ್ಬಳಕೆಯಾದರೆ ಒಬ್ಬ ಮುಸ್ಲಿಂ ಕೂಡ ಬಡವನಾಗಿರುವುದಿಲ್ಲ. ಆದರೆ ಕೆಲವರು ಇದರಲ್ಲಿ ಭಾರೀ ಅವ್ಯವಹಾರ ನಡೆಸುತ್ತಿದ್ದಾರೆ ಎಂದು ಆಪಾದಿಸಿದರು.

ಶಾಸಕ ಟಿ.ಎಸ್.ಶ್ರೀವತ್ಸ ಮಾಜಿ ಮೇಯರ್ ಸಂದೇಶ್ ಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವ ಸ್ವಾಮಿ, ಬಿಜೆಪಿ ಪ್ರಧಾನ ಕಾರ್ಯದರ್ಶಿ ಗಿರಿಧರ್, ಫಣೀಶ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

10ನೇ ವರ್ಷದ ಪುಣ್ಯಸ್ಮರಣೆ



ಜನನ: 10-02-1939

ಮರಣ: 22-11-2014


ಎಸ್. ಬಸವಯ್ಯನವರು

ನಿವೃತ್ತ ಶಿಕ್ಷಕರು, ಭೋಗಾದಿ 2ನೇ ಹಂತ (ಚೀರಿಹುಂಡಿ)

ನೀವು ನಮ್ಮನ್ನಗಲಿ ಇಂದಿಗೆ 10 ವರ್ಷ ಕಳೆದರೂ ನಿಮ್ಮ ನೆನಪು ಸದಾ ನಮ್ಮ ಮನಸ್ಸಲ್ಲಿ ನೆಲೆಯೂರಿದೆ. ನಿಮ್ಮ ಆತ್ಮಕ್ಕೆ ಸದಾ ಚಿರಶಾಂತಿ ಕೋರುತ್ತೇವೆ.

ಪತ್ನಿ: ತಾಯಮ್ಮ, ಮಕ್ಕಳಾದ: ಬಿ.ಚಂದ್ರ, ಬಿ.ಕುಮಾರ, ಬಿ.ವಸಂತ, ಸೊಸೆ: ಎ.ಎನ್.ಭವಾನಿ, ಅಳಿಯ: ಸಿ.ಶಿವಶಂಕರ್, ಮೊಮ್ಮಕ್ಕಳಾದ: ಮೋಹಿತ್ ಚಂದ್ರ, ಚರಿತ್ ಚಂದ್ರ, ರಾಕೇಶ್ ಎಸ್, ಜಸ್ವಂತ್ ಎಸ್ ಹಾಗೂ ಬಂಧುಮಿತ್ರರು

43ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ 43 ವರ್ಷಗಳು ಕಳೆದರೂ ನಿಮ್ಮ ನೆನಪು ಸದಾ ನಮ್ಮ ಮನ ಮನೆಯಲ್ಲಿ ಸ್ಥಿರ ಸ್ಥಾಯಿಯಾಗಿದೆ. ಇಂತಿ ನಿಮ್ಮ ಕುಟುಂಬ ವರ್ಗದವರು, ಕಠಾರಿ ಶ್ರೀನಿವಾಸ್ ಮತ್ತು ಮಕ್ಕಳು ಕಠಾರಿ ದಿ॥ ಟಿ ವಿಜಯ್ ಕುಮಾರ್ ರವರ ಮಕ್ಕಳು ಕಠಾರಿ ಟಿ.ಪ್ರಕಾಶ್ ಮತ್ತು ಮಕ್ಕಳು, ಸೊಸೆಯಂದಿರು, ಮೊಮ್ಮಕ್ಕಳು ಮತ್ತು ಅಳಿಯಂದಿರು.

ಕಠಾರಿ ಕೆ.ತಿಮ್ಮಯ್ಯ

ಶಾಂತಿ ಕಾಫಿ ಸಪ್ಲೈಸ್ ಮಾಲೀಕರು, ಕೆ.ಟಿ.ಸ್ಟ್ರೀಟ್, ಮೈಸೂರು

ಉತ್ತರ ಕ್ರಿಯಾದಿ ಆಹ್ವಾನ ಪತ್ರಿಕೆ



ಶ್ರೀ ಆರ್. ಬಸವರಾಜ್‌ರವರು

ಇವರು ದಿ: 11-11-2024ನೇ ಸೋಮವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧವಾಗಿ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು ದಿ: 22-11-2024 ಶುಕ್ರವಾರ ಮಧ್ಯಾಹ್ನ 1-30 ಗಂಟೆಗೆ ನಮ್ಮ ಸ್ವಗೃಹ ಮೈಸೂರು ಸಿಟಿ, ನಾರ್ತ್ ಈಸ್ಟ್ ಆಫ್ ಎನ್.ಆರ್.ಮೊಹಲ್ಲಾ ಇಲ್ಲಿ ಏರ್ಪಡಿಸಲಾಗಿದೆ. ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

ದುಃಖತಪ್ತರು : ಶ್ರೀಮತಿ ಜಯಮ್ಮ ಮತ್ತು ಮಕ್ಕಳು, ಮೊಮ್ಮಕ್ಕಳು ಮತ್ತು ಕುಟುಂಬವರ್ಗದವರು ಹಾಗೂ ಬಂಧು-ಮಿತ್ರರು

ಮೈಸೂರು ಮಿತ್ರ 45

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು